ಸಂಪುಟ: 05 ಸಂಚಿಕೆ: 155 ಪುಟಗಳು: 08 ಸೋಮವಾರ 18 ಆಗಸ್ಟ್ 2025
www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**
ಪ್ರತಿ ದಿನವನ್ನು ಹೊಸ ದಿನವಾಗಿ ಕಳೆಯಿರಿ. ನಿಮ್ಮೆಡೆಗೆ ಬರುತ್ತಿರುವ ಎಲ್ಲ ಅವಕಾಶಗಳನ್ನು ಎರಡು ತೋಳುಗಳನ್ನು ಚಾಚಿ ಬಾಚಿ ಅಪ್ಪಿಕೊಳ್ಳಿ. ಏಕೆಂದರೆ ಕೆಲವೊಂದಿಷ್ಟು ಅವಕಾಶಗಳು ಕೇವಲ ಒಂದೇ ಸಲ ಬರುತ್ತವೆ, ಪದೇಪದೇ ಬರುವುದಿಲ್ಲ.

# 'ಧರ್ಮ' ಯುದ್ಧ ಕೈ, ಕಮಲ ವಾಗ್ಯುದ್ಧ



• ಉದಯವಾಹಿನಿ, ಬೆಂಗಳೂರು

ಧರ್ಮಸ್ಥಳದಲ್ಲಿ ನಡೆದ ಸಾಮೂಹಿಕ ಅಂತ್ಯಕ್ರಿಯೆಗಳ ಬಗ್ಗೆ ವಿಶೇಷ ತನಿಖಾ (ಎಸ್‌ಐಟಿ) ದಳ ತನ್ನ ತನಿಖೆ ಮುಂದುವರೆಸಿದ್ದು, ಈ ನಡುವಲ್ಲೇ ಪ್ರಕರಣ ಸಂಬಂಧ ಆಡಳಿತಾರೂಢ ಕಾಂಗ್ರೆಸ್ ಹಾಗೂ ಬಿಜೆಪಿ ನಡುವೆ ಜಟಾಪಟಿ ಶುರುವಾಗಿದೆ. ಬಿಜೆಪಿ ಸಿಎಂ ರಾಜೀನಾಮೆಗೆ ಆಗ್ರಹಿಸುತ್ತಿದ್ದು, ಪ್ರಕರಣವನ್ನು ರಾಜಕೀಯಗೊಳಿಸಲು ಬಿಜೆಪಿ ಯತ್ನಿಸುತ್ತಿದೆ ಎಂದು ಆಡಳಿತಾರೂಢ ಕಾಂಗ್ರೆಸ್ ತಿರುಗೇಟು ನೀಡಿದೆ. ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜ್ಯ ಜನರಲ್ಲಿ ಕ್ಷಮೆಯಾಚಿಸಿ ರಾಜೀನಾಮೆ ನೀಡಬೇಕೆಂದು ಆಗ್ರಹಿಸಿದ್ದಾರೆ. ತನಿಖೆಯ ಸಮಯದಲ್ಲಿ ಎಸ್‌ಐಟಿಗೆ ಏನೂ ಸಿಕ್ಕಿಲ್ಲ. ಸರ್ಕಾರ ತನ್ನ ತಪ್ಪನ್ನು ಅರಿತುಕೊಂಡಿದ್ದು, ಧರ್ಮಸ್ಥಳದ ವಿರುದ್ಧ ಪಿತೂರಿ ನಡೆದಿದೆ ಎಂದು ಡಿಕೆ ಶಿವಕುಮಾರ್ ಈಗ ಹೇಳುತ್ತಿದ್ದಾರೆ. ಶಬರಿಮಲೆ ಅಪಪ್ರಚಾರದಲ್ಲಿ ಭಾಗಿಯಾಗಿರುವವರೇ ಇದೀಗ ಧರ್ಮಸ್ಥಳದ ವಿರುದ್ಧ ಕೆಲಸ ಮಾಡುತ್ತಿದ್ದಾರೆ. ಕಾಂಗ್ರೆಸ್ ಕಮ್ಯುನಿಸ್ಟ್ ಪಕ್ಷದಂತೆ ಕೆಲಸ ಮಾಡುತ್ತಿದೆ. ಏತನ್ಮಧ್ಯೆ, ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್ ಅವರು ಗೃಹ ಸಚಿವ ಡಾ.ಜಿ.ಪರಮೇಶ್ವರ ಅವರನ್ನು ವಿಧಾನಮಂಡಲದ ಉಭಯ ಸದನಗಳ ಮುಂದೆ ಎಸ್‌ಐಟಿ ತನಿಖೆಯ ಮಧ್ಯಂತರ ವರದಿ ಮಂಡಿಸುವಂತೆ ಮತ್ತು ಜನರ ಮನಸ್ಸಿನಲ್ಲಿ ಮೂಡಿರುವ ಅನುಮಾನಗಳನ್ನು ಹೋಗಲಾಡಿಸುವಂತೆ ಒತ್ತಾಯಿಸಿದ್ದಾರೆ.

ಧರ್ಮಸ್ಥಳ ಕ್ಷೇತ್ರದ ಕುರಿತು ನಿರಂತರವಾಗಿ ಅಪಪ್ರಚಾರ ನಡೆಯುತ್ತಿದೆ ಎಂದು ಖಂಡಿಸಿ ರಾಜ್ಯ ಬಿಜೆಪಿ ನಾಯಕರು ಧರ್ಮಸ್ಥಳಕ್ಕೆ ಭೇಟಿ ನೀಡಿದ್ದಾರೆ. ಶ್ರೀಮಂಜುನಾಥನ ಸನ್ನಿಧಿಗೆ ತೆರಳಿ ದೇವರ ದರ್ಶನ ಪಡೆದಿದ್ದಾರೆ. ಬಳಿಕ ಹಿನ್ನೆಲೆ ಧರ್ಮಸ್ಥಳದ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆ ಅವರನ್ನು ಭೇಟಿ ಮಾಡಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಸೇರಿದಂತೆ ಪಕ್ಷದ ಪ್ರಮುಖ ನಾಯಕರ ಗುಂಪು ಧರ್ಮಸ್ಥಳದಲ್ಲಿ ಬೀಡುಬಿಟ್ಟಿದೆ. ಧರ್ಮಸ್ಥಳ ಪ್ರಕರಣಕ್ಕೆ ಸಂಬಂಧಿಸಿದಂತೆ ಪಾರದರ್ಶಕ ತನಿಖೆ ನಾವು ಸ್ವಾಗತಿಸಿದ್ದೆವು. ಆದರೆ ತನಿಖೆಯ ಭರದಲ್ಲಿ ಧರ್ಮಸ್ಥಳದ ಕುರಿತು ಅಪಪ್ರಚಾರ, ಅವಹೇಳನಗಳು ಮಿತಿಮೀರಿ ನಡೆಯುತ್ತಿವೆ. ಇದರ ಹಿಂದೆ ಷಡ್ಯಂತ್ರವಿದೆ ಎಂದು ಸ್ವತಃ ಡಿಸಿಎಂ ಡಿಕೆ ಶಿವಕುಮಾರ್ ಅವರೇ ಹೇಳಿದ್ದಾರೆ. ಶ್ರೀಕ್ಷೇತ್ರ ಧರ್ಮಸ್ಥಳದ ಕುರಿತಾದ ಅಪಪ್ರಚಾರಕ್ಕೆ ಕಡಿವಾಣ ಹಾಕದೇ ಇರುವುದು ಕಾಂಗ್ರೆಸ್ ಸರ್ಕಾರದ ಅಪರಾಧ. ಇದಕ್ಕಾಗಿ ಮುಖ್ಯಮಂತ್ರಿಗಳು ರಾಜ್ಯದ ಜನತೆಯ ಕ್ಷಮೆಯಾಚಿಸಬೇಕು ಎಂದು ಬಿ.ವೈ.ವಿಜಯೇಂದ್ರ ಆಗ್ರಹಿಸಿದ್ದಾರೆ. ನಾಡಿನ ಕೋಟ್ಯಂತರ ಭಕ್ತರ ಧಾರ್ಮಿಕ ಶ್ರದ್ಧಾ ಕೇಂದ್ರದ ವಿರುದ್ಧ ಧರ್ಮಸ್ಥಳದ ಶ್ರೇಷ್ಠತೆಯನ್ನು ಎತ್ತಿ ಹಿಡಿಯಲು ಬಿಜೆಪಿ ಕಟ್ಟಿಬದ್ಧವಾಗಿ ಧರ್ಮಸ್ಥಳದ ಭಕ್ತರ ದನಿಯಾಗಿ ನಿಲ್ಲಲಿದೆ. ತನಿಖೆಯನ್ನು ಯಾರೂ ವಿರೋಧಿಸಿಲ್ಲ, ಸತ್ಯದ ಬಾಗಿಲು ತೆರೆಯಲಿದೆ, ಧರ್ಮಸ್ಥಳದ ಧರ್ಮದ ಬೆಳಕು ಬೆಳಗಲಿದೆ. ಹಿಂದೂ ಧಾರ್ಮಿಕ ಶ್ರದ್ಧಾ ಕೇಂದ್ರಗಳ ವಿರುದ್ಧ ನಡೆಯುವ ಷಡ್ಯಂತ್ರಗಳಿಗೆ ಇನ್ನು ಮುಂದೆ ತಕ್ಕ ಉತ್ತರ ಸಿಗಲಿದೆ. ರಾಜ್ಯ ಸರ್ಕಾರ ಧರ್ಮಸ್ಥಳದ ಹೆಸರಿನಲ್ಲಿ ಆಸಕ್ತ ಹಿತಾಸಕ್ತಿಗಳು ಸೃಷ್ಟಿಸಿರುವ ಗೊಂದಲಕ್ಕೆ ಅಂತಿಮ ತೆರೆ ಎಳೆಯುವ ನಿಟ್ಟಿನಲ್ಲಿ ಈವರೆಗಿನ ಎಸ್‌ಐಟಿ ತನಿಖೆಯ ವರದಿ ಬಿಡುಗಡೆ ಮಾಡಲಿ ಎಂದು ಸವಾಲ್ ಹಾಕಿದ್ದಾರೆ.

**1** ತನಿಖೆಯ ಭರದಲ್ಲಿ ನಡೆಯುತ್ತಿರುವ ಅಪಪ್ರಚಾರಕ್ಕೆ ಸರಕಾರ ತಕ್ಷಣ ಕಡಿವಾಣ ಹಾಕಬೇಕಾದ ಅಗತ್ಯ ಇದೆ

**2** ಶ್ರೀಮಂಜುನಾಥ ಸ್ವಾಮಿಯ ದರ್ಶನ ಪಡೆದು ವಿಶೇಷ ಸೇವೆ ಸಲ್ಲಿಸಿದ ಬಿಜೆಪಿ ಮುಖಂಡರು

**3** ಶವಗಳನ್ನು ಹೂತು ಹಾಕಿದ ಪ್ರಕರಣ ಕಪೋಲ ಕಲ್ಪಿತ ವಿಚಾರವಾಗಿದ್ದು ಇಷ್ಟೊಂದು ಕಡೆ ತೋಡಿದರು ಏನು ಸಿಕ್ಕಿಲ್ಲ ಎಂದ ಸಿಟಿ ರವಿ

## ಕ್ಷಮೆಗೆ ಆಗ್ರಹ

ಧರ್ಮಸ್ಥಳಕ್ಕೆ ಬಿಜೆಪಿಯ ಶಾಸಕರು ಹಾಗೂ ಮುಖಂಡರ ಜತೆ ಭೇಟಿ ನೀಡಿ ಮಂಜುನಾಥಸ್ವಾಮಿಯ ದರ್ಶನ ಪಡೆದು ಧರ್ಮಸ್ಥಳದ ಧರ್ಮಾಧಿಕಾರಿ ವೀರೇಂದ್ರ ಹೆಗಡೆಯನ್ನು ಭೇಟಿ ಮಾಡಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಅವರು, ಧರ್ಮಸ್ಥಳದ ವಿಚಾರದಲ್ಲಿ ನಿರಂತರ ಅಪಪ್ರಚಾರ ನಡೆಯುತ್ತಿದೆ.ಅವುಗಳಿಗೆ ಕಡಿವಾಣ ಹಾಕಲು ಸರ್ಕಾರ ಮುಂದಾಗಿಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜ್ಯದ ಜನತೆಯ ಕ್ಷಮೆ ಕೇಳಬೇಕೆಂದು ಒತ್ತಾಯಿಸಿದರು. ಬಿಜೆಪಿ ಧರ್ಮಸ್ಥಳದ ವಿಚಾರದಲ್ಲಿ ರಾಜಕಾರಣ ಮಾಡುತ್ತಿದೆ ಎಂದು ಕಾಂಗ್ರೆಸ್ ನಾಯಕರ ಹೇಳಿಕೆಗೆ ತಿರುಗೇಟು ನೀಡಿದ ಅವರು, ಶ್ರೀ ಕ್ಷೇತ್ರ ಧರ್ಮಸ್ಥಳ ದೇವರು ಅಣ್ಣಪ್ಪಸ್ವಾಮಿಯ ಬಗ್ಗೆ ಅಪಪ್ರಚಾರ ಮಾಡಿ ಅಸಂಖ್ಯಾತ ಭಕ್ತರಲ್ಲಿ ಗೊಂದಲ ಸೃಷ್ಟಿಸುವ ಷಡ್ಯಂತ್ರವೂ ನಡೆದಿದೆ ಎಂದರು. ಎಡಪಂಥೀಯ ಗುಂಪುಗಳ ಒತ್ತಡಕ್ಕೆ ಮಣಿದು ಎಸ್‌ಐಟಿ ರಚಿಸಲಾಗಿದೆ ಎಂಬುದನ್ನು ಸಚಿವ ದಿನೇಶ್ ಗುಂಡೂರಾವ್ ಅವರೇ ಬಹಿರಂಗಗೊಳಿಸಿದ್ದಾರೆ. ಧರ್ಮಸ್ಥಳದ ಅಪಪ್ರಚಾರದ ಹಿಂದಿರುವ ಶಕ್ತಿಗಳ ಬಗ್ಗೆಯೂ ಸರ್ಕಾರ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು.



ಧರ್ಮಸ್ಥಳ ಪ್ರಕರಣವನ್ನು ಬಿಜೆಪಿ ನಾಯಕರು ರಾಜಕಾರಣಕ್ಕಾಗಿ ಬಳಸಿಕೊಳ್ಳುತ್ತಿದ್ದಾರೆ. ಹಿಂದುತ್ವ ತಮ್ಮ ಮನೆ ಆಸ್ತಿ ಎಂದು ಭಾವಿಸಿದ್ದಾರೆ. ದೂರು ಕೊಟ್ಟಾಗ, ಎಸ್‌ಐಟಿ ರಚನೆ ಆದಾಗ ಏಕೆ ಮೌನವಾಗಿದ್ದರು. ಮುಸುಕುಧಾರಿ ವ್ಯಕ್ತಿ ದೂರು ಸಲ್ಲಿಸಿದಾಗ, ಎಸ್‌ಐಟಿ ರಚಿಸಿದಾಗ ಬಿಜೆಪಿ ನಾಯಕರು ಮಾತೇ ಆಡಲಿಲ್ಲ. ಈಗ ರಾಜಕೀಯ ಮಾಡುತ್ತಿದ್ದಾರೆ. ಅವರಿಗೆ ಧರ್ಮಸ್ಥಳದ ಮೇಲೆ ಪ್ರೀತಿ ಇಲ್ಲ, ರಾಜಕೀಯಕ್ಕಾಗಿ ಧರ್ಮಸ್ಥಳ ಬೇಕಿದೆ ಅಷ್ಟೆ. ದೂರು ನೀಡಿದ ನಂತರವೂ ಸರ್ಕಾರ ತನಿಖೆ ಮಾಡದಿದ್ದರೆ ಏನು ಹೇಳುತ್ತಿದ್ದರು? ಟೀಕೆ ಮಾಡುತ್ತಿರಲಿಲ್ಲವೇ? ರಾಜಕೀಯಕ್ಕಿಂತ ಧರ್ಮಸ್ಥಳದ ಗೌರವ ಕಾಪಾಡುವುದು ನಮ್ಮ ಚಿಂತನೆ. -ಡಿ.ಕೆ. ಶಿವಕುಮಾರ್. ಉಪಮುಖ್ಯಮಂತ್ರಿ



ರಾಜ್ಯದಲ್ಲಿ ಪದೇ ಪದೇ ಹಿಂದೂ ಧರ್ಮಕ್ಕೆ ಅವಮಾನ ಮಾಡೋ ಕೆಲಸ ಆಗುತ್ತಿದೆ. ಕಾಂಗ್ರೆಸ್‌ನಲ್ಲಿ ಹಿಂದೂ ವಿರೋಧಿ ಹಿಂದೂ ಪರ ಎಂಬ ಎರಡು ಗ್ಯಾಂಗ್ ಇದೆ. ಜೆಸಿಬಿಯನ್ನು ಧರ್ಮಸ್ಥಳ ಹೆಬ್ಬಾಗಿಲಿಗೆ ನುಗ್ಗಿಸ್ತೇನೆ ಅಂತಿದ್ದಾರೆ. ಧರ್ಮಸ್ಥಳ ವಿಚಾರದಲ್ಲಿ ನಾವು ರಾಜಕಾರಣ ಮಾಡಿಲ್ಲ. ಈ ಪ್ರಕರಣದಲ್ಲಿ ರಾಜಕಾರಣ ಮಾಡಿದ್ದು ಕಾಂಗ್ರೆಸ್. ಇದರ ಹಿಂದೆ ದಂಡುಪಾಳ್ಯ ರೀತಿಯ ನಗರ ನಕ್ಸಲರ ಗ್ಯಾಂಗ್ ಇದರ ಹಿಂದಿದೆ. ಸಮೀರ್, ಪಿ.ಎಫ್.ಐ , ಎಸ್.ಡಿ.ಪಿ.ಐ. ಕಾರ್ಯಕರ್ತ ಎಂದ ಅವರು, ಯ್ಯೂಟ್ಯೂಬ್ ಚಾನಲ್ ಮಾಡಲು ಎಲ್ಲಿಂದ ದುಡ್ಡು ಬಂದಿದೆ. ಈ ಬಗ್ಗೆ ತನಿಖೆಯಾಗಬೇಕು.
-ಆರ್ ಅಶೋಕ್, ವಿರೋಧ ಪಕ್ಷದ ನಾಯಕ



**ಸಿ.ಟಿ ರವಿ ಹೇಳಿಕೆ**
ಧರ್ಮಸ್ಥಳ ಕ್ಷೇತ್ರದ ಅಪಪ್ರಚಾರದ ಹಿಂದೆ ಮತಾಂತರ ಮಾಫಿಯಾ ಇದೆ ಎಂದು ಬಿಜೆಪಿಯ ವಿಧಾನ ಪರಿಷತ್ ಸದಸ್ಯ ಸಿ.ಟಿ ರವಿ ದೂರಿದರು. ನ್ಯಾಯ ಕೊಡಿಸುವ ಹೆಸರಿನಲ್ಲಿ ಧರ್ಮಸ್ಥಳವನ್ನು ಗುರಿ ಮಾಡುತ್ತಿದ್ದಾರೆ. ತನಿಖೆಗೆ ಮುಂಚೆಯೇ ಅಪರಾಧಿ ಸ್ಥಾನ ಕೊಟ್ಟಿದ್ದಾರೆ. ಈ ಷಡ್ಯಂತ್ರದ ಹಿಂದೆ ಮತಾಂಧತೆ ಇದೆ. ಮತಾಂತರ ಮಾಫಿಯಾ ಇದೆ ಎಂದು ದೂರಿದರು.



ಧರ್ಮಸ್ಥಳದ ಅಸಹಜ ಸಾವು ಪ್ರಕರಣಕ್ಕೆ ರಾಜ್ಯದಲ್ಲಿ ಭಾರೀ ಸದ್ದು ಮಾಡ್ತಿದೆ. ಪ್ರಕರಣ ತನಿಖೆಗೆ ಸಂಬಂಧಿಸಿದಂತೆ ಎಡಿಜಿಪಿ ಪ್ರಣವ್ ಮೊಹಂತಿ ನೇತೃತ್ವದಲ್ಲಿ ಎಸ್ ಐಟಿ ತಂಡ ಕಳೆದ 15 ದಿನಗಳಿಂದ ತನಿಖೆ ನಡೆಯುತ್ತಿದೆ. ಎಸ್‌ಐಟಿ ತನಿಖೆ ವೇಳೆ ಲಭ್ಯವಾದ ಮಾಹಿತಿ ಆಧರಿಸಿ ಮಧ್ಯಂತರ ವರದಿ ಪಡೆಯುವಂತೆ ವಿಪಕ್ಷಗಳು ಸರ್ಕಾರಕ್ಕೆ ಆಗ್ರಹಿಸಿವೆ. ಧರ್ಮಸ್ಥಳದ ಕುರಿತು ಅಪಪ್ರಚಾರಕ್ಕೆ ತಡೆಯಾಕಬೇಕೆಂದು ಬಿಜೆಪಿ ನಾಯಕರು ಧರ್ಮಸ್ಥಳಕ್ಕೆ ಕಾರ್ ರ್‍ಯಾಲಿ ನಡೆಸಿದ್ದಾರೆ.
-ಜಿ ಪರಮೇಶ್ವರ್, ಗೃಹ ಸಚಿವ



**ಧರ್ಮಸ್ಥಳದ ವಿರುದ್ಧ ಪಿತೂರಿ**

## ವೀರೇಂದ್ರ, ಹೆಗಡೆ ಭೇಟಿ, ಚರ್ಚೆ

ಇದಕ್ಕೂ ಮೊದಲು ಬಿಜೆಪಿ ಮುಖಂಡರ ನಿಯೋಗ ರಾಜ್ಯಾಧ್ಯಕ್ಷ ವಿಜಯೇಂದ್ರ, ನೇತೃತ್ವದಲ್ಲಿ ಮಂಜುನಾಥನ ದರ್ಶನ ಪಡೆದು ಧರ್ಮಾಧಿಕಾರಿ ಡಾ. ವಿರೇಂದ್ರ ಹೆಗಡೆಯವರನ್ನು ಭೇಟಿ ಮಾಡಿ ಚರ್ಚೆ ನಡೆಸಿದರು.

- **ಧರ್ಮಸ್ಥಳ ಕ್ಷೇತ್ರದ ಅಪಪ್ರಚಾರಕ್ಕೆ ತಕ್ಷಣ ಕಡಿವಾಣ ಹಾಕಬೇಕು: ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಆಗ್ರಹ**
- **ರಾಜಕೀಯಕ್ಕೆ ಧರ್ಮಸ್ಥಳ ಬಳಕೆ: ಡಿಕೆಶಿ**
- **ಧರ್ಮಸ್ಥಳ ಪ್ರಕರಣದಲ್ಲಿ ರಾಜಕಾರಣ ಮಾಡಿದ್ದ್ ಕಾಂಗ್ರೆಸ್ : ಆರ್. ಅಶೋಕ್ ಆರೋಪ**
- **ಧರ್ಮಸ್ಥಳ SIT ತನಿಖೆ : ಪರಮೇಶ್ವರ್ ಉತ್ತರ!?**
- **ಬಯಲಾಗುತ್ತಾ 'ಮುಸುಕಧಾರಿ'ಮುಖವಾಡ..?**

## ನಗರ್ತಪೇಟೆ ಅಗ್ನಿ ಅವಘಡ, ಇಬ್ಬರ ಬಂಧನ

• ಉದಯವಾಹಿನಿ, ಬೆಂಗಳೂರು

ನಗರ್ತಪೇಟೆಯಲ್ಲಿನ ಕಟ್ಟಡವೊಂದರಲ್ಲಿ ನಿನ್ನೆ ಸಂಭವಿಸಿದ ಬೆಂಕಿ ದುರಂತದಲ್ಲಿ ಒಂದೇ ಕುಟುಂಬದ ಐವರು ಮೃತಪಟ್ಟ ಘಟನೆಗೆ ಸಂಬಂಧಿಸಿದಂತೆ ಹಲಸೂರು ಗೇಟ್ ಠಾಣೆ ಪೊಲೀಸರು ಇಬ್ಬರನ್ನು ಬಂಧಿಸಿದ್ದಾರೆ. ಬಾಲಕೃಷ್ಣ ಶೆಟ್ಟಿ ಮತ್ತು ಸಂದೀಪ್ ಶೆಟ್ಟಿ ಬಂಧಿತ ಕಟ್ಟಡದ ಮಾಲೀಕರು. ಕಟ್ಟಡದಲ್ಲಿ ಅಗ್ನಿ ಅವಘಡ ತಪ್ಪಿಸಲು ಸಾಮಾನ್ಯ ಸುರಕ್ಷತೆಯ ವ್ಯವಸ್ಥೆಯನ್ನು ಸಹ ಕಲ್ಪಿಸದ ಹಿನ್ನೆಲೆಯಲ್ಲಿ ಈ ಇಬ್ಬರನ್ನು ಬಂಧಿಸಲಾಗಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ. ನಿನ್ನೆ ಮುಂಜಾನೆ ನಗರ್ತಪೇಟೆಯಲ್ಲಿನ ನಾಲ್ಕು ಅಂತಸ್ತಿನ ಕಟ್ಟಡದಲ್ಲಿ ಬೆಂಕಿ ಕಾಣಿಸಿಕೊಂಡು ಒಂದೇ ಕುಟುಂಬದ ನಾಲ್ವರು ಸೇರಿದಂತೆ ಐವರು ಸಜೀವದಹನವಾಗಿದ್ದಾರೆ.

## ಧಾರ್ಮಿಕ ಕ್ಷೇತ್ರಗಳ ವಿಚಾರದಲ್ಲಿ ಕಾಂಗ್ರೆಸ್ ರಾಜಕೀಯ ಮಾಡುತ್ತಾ ಬಂದಿದೆ: ಬೆಲ್ಲದ

• ಉದಯವಾಹಿನಿ, ಹುಬ್ಬಳ್ಳಿ

ಮೊದಲಿನಿಂದಲೂ ಧಾರ್ಮಿಕ ಕ್ಷೇತ್ರಗಳ ವಿಚಾರದಲ್ಲಿ ಕಾಂಗ್ರೆಸ್‌ನವರು ರಾಜಕೀಯ ಯಾತ್ರೆ ಮಾಡುತ್ತಲೇ ಬಂದಿದ್ದಾರೆ ಎಂದು ವಿಧಾನಸಭಾ ವಿರೋಧ ಪಕ್ಷದ ಉಪನಾಯಕ ಅರವಿಂದ ಬೆಲ್ಲದ ಆರೋಪಿಸಿದ್ದಾರೆ. ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಧರ್ಮಸ್ಥಳ ಯಾತ್ರೆ ಬಿಜೆಪಿ ರಾಜಕಾರಣ ಯಾತ್ರೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೀಡಿದ್ದ ಹೇಳಿಕೆಗೆ ಪ್ರತಿಕ್ರಿಯಿಸಿದರು. ಹಿಂದು ಧಾರ್ಮಿಕ ಸಂಸ್ಥೆಗಳ ಮೇಲೆ ಷಡ್ಯಂತ್ರ ನಡೆದಿದೆ. ಇದನ್ನು ಕಾಂಗ್ರೆಸ್‌ನವರೇ ಸ್ವತಃ ಒಪ್ಪಿದ್ದಾರೆ. ಷಡ್ಯಂತ್ರ ನಡೆದಿದೆ ಎಂದು ಉಪಮುಖ್ಯಮಂತ್ರಿಗಳೇ ಹೇಳಿಕೆ ನೀಡಿದ್ದಾರೆ ಎಂದು ತಿರುಗೇಟು ನೀಡಿದರು.

ಷಡ್ಯಂತ್ರ ನೋಡಿಕೊಂಡು ನಾವು ಸುಮನೆ ಕುಳಿತುಕೊಳ್ಳಲು ಆಗುವುದಿಲ್ಲ. ಷಡ್ಯಂತ್ರ ಬಹಿರಂಗವಾಗಬೇಕು ಇದೊಂದು ಧಾರ್ಮಿಕ ಕೇಂದ್ರ ಮೇಲೆ ನಡೆದ ಗದಪ್ರಹಾರ ಆದ್ದರಿಂದೆ. ನಾವು ಮಾಡುವ ಹೋರಾಟ ಯಾವುದೇ ರೀತಿಯ ರಾಜಕೀಯ ಅಲ್ಲ ಎಂದರು. ಬಿಜೆಪಿ ಅವರು ಹಿಂದುತ್ವ ತಮ ಮನೆ ಆಸ್ತಿಯೆಂದು ಭಾವಿಸಿದ್ದಾರೆ ಎಂಬ ಬಿ.ಕೆ. ಹರಿಪ್ರಸಾದ್ ಹೇಳಿಕೆಗೆ ಪ್ರತಿಕ್ರಿಯಿಸಿದ ಬೆಲ್ಲದ್, ಕಾಂಗ್ರೆಸ್‌ನವರು ಅಲ್ಪಸಂಖ್ಯಾತರ ಹಿಂದೆ ಹೋದರೆ ಏನು ಅರ್ಥ? ಹೌದು ಹಿಂದುತ್ವ ನಮ ಆಸ್ತಿ ಇದರಲ್ಲಿ ಏನು ತಪ್ಪು ಎಂದು ಸಮರ್ಥಿಸಿಕೊಂಡರು. ಆರ್‌ಎಸ್‌ಎಸ್ ಭಾರತೀಯ ತಾಲಿಬಾನ್‌ಗಳು ಹೇಳಿಕೆ ವಿಚಾರವಾಗಿ ಸಹ ಖಾರವಾಗಿ ಮಾತನಾಡಿದ ಅವರು, ಬಿ ಕೆ ಹರಿಪ್ರಸಾದ್ ಬಗ್ಗೆ ಹೆಚ್ಚು ಮಾತನಾಡುವ ಅಗತ್ಯ ಇಲ್ಲ. ಹರಿಪ್ರಸಾದ್ ಏನು ಎಂದು ಗೊತ್ತು. ಅವರ ಹೇಳಿಕೆಗೆ ಮಹತ್ವ ಕೊಡುವುದು ಬೇಡ ಎಂದರು.

## 24 ಗಂಟೆಗಳಲ್ಲಿ ಜನರ ದೂರು ಪರಿಹರಿಸಲು ಬಂತು ಮ್ಯಾಜಿಕ್ ಬಟನ್'



• ಉದಯವಾಹಿನಿ, ಗದಗ

ಗದಗ ಪಟ್ಟಣದಲ್ಲಿ ಇದೇ ಮೊದಲ ಬಾರಿಗೆ ಮ್ಯಾಜಿಕ್ ಬಟನ್ ಅಳವಡಿಸಲಾಗಿದ್ದು, ಜನರು ತಮ್ಮ ದೂರುಗಳನ್ನು 24 ಗಂಟೆಗಳ ಒಳಗೆ ಪರಿಹರಿಸುವ ಭರವಸೆ ನೀಡಲಾಗಿದೆ. ಮ್ಯಾಜಿಕ್ ಬಟನ್ ಒತ್ತಿದ ನಂತರ, ದೂರನ್ನು ನೋಂದಾಯಿಸಿ ವೆಬ್ ಸೈಟ್‌ನಲ್ಲಿ ದಾಖಲಿಸಲಾಗುತ್ತದೆ. ಕಮಾಂಡ್ ಸೆಂಟರ್ ಅಧಿಕಾರಿಗಳು ದೂರುದಾರರ ದೂರಿನ ವಿವರಗಳನ್ನು ಪಡೆಯುತ್ತಾರೆ, ಅದನ್ನು ತಕ್ಷಣವೇ ಉಪ ಆಯುಕ್ತರು, ಪೊಲೀಸ್ ವರಿಷ್ಠಾಧಿಕಾರಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮತ್ತು ಇತರರಂತಹ ಸಂಬಂಧಿತ ಇಲಾಖೆ ಮುಖ್ಯಸ್ಥರಿಗೆ ಕಳುಹಿಸಲಾಗುತ್ತದೆ.

ಸ್ವಾತಂತ್ರ್ಯ ದಿನದಂದು ಉದ್ಘಾಟನೆಗೊಂಡ ಈ ಮ್ಯಾಜಿಕ್ ಬಟನ್ ಕೇಂದ್ರಗಳನ್ನು ವಿವಿಧ ಸ್ಥಳಗಳಲ್ಲಿ ಸ್ಥಾಪಿಸಲಾಗುವುದು. ಮಹಿಳೆಯರು ಮತ್ತು ಮಕ್ಕಳ ಸುರಕ್ಷತೆ, ಹಿರಿಯ ನಾಗರಿಕರ ರಕ್ಷಣೆ, ಅಕ್ರಮ ಮಧ್ಯವರ್ತಿಗಳು, ರಸ್ತೆ ಸುರಕ್ಷತಾ ಕ್ರಮಗಳು, ಸಮಾಜ ವಿರೋಧಿ ಚಟುವಟಿಕೆಗಳು, ಅನುಮಾನಾಸ್ಪದ ವಸ್ತುಗಳು, ಭೂ ಹಕ್ಕು ಪ್ರಕರಣಗಳು, ಪಿಂಚಣಿ ಸಂಬಂಧಿತ ಸಮಸ್ಯೆಗಳು, ಭ್ರಷ್ಟಾಚಾರ, ಪಂಚಾಯತ್ ಸೇವೆಗಳು ಮತ್ತು ಇತರ ವಿಷಯಗಳ ಬಗ್ಗೆ ಜನರು ತಮ್ಮ ದೂರುಗಳನ್ನು ನೋಂದಾಯಿಸಬಹುದು. ನಿವಾಸಿಗಳು ತಮ್ಮ ಹೆಬ್ಬೆರಳಿನ ಗುರುತುಗಳನ್ನು ನೀಡಬೇಕು ಮತ್ತು ಯಂತ್ರವು ಸ್ವಯಂಚಾಲಿತವಾಗಿ ಅವರ ಫೋಟೋವನ್ನು ತೆಗೆದುಕೊಳ್ಳುತ್ತದೆ. ಅವರು ಗುಂಡಿಯನ್ನು ಒತ್ತಿದಾಗ, 24×7 ಕಾರ್ಯನಿರ್ವಹಿಸುವ ಕಮಾಂಡ್ ಸೆಂಟರ್, ದೂರಿನ ವಿವರಗಳನ್ನು ಕೇಳುತ್ತದೆ ಮತ್ತು ಅದನ್ನು ಸಂಬಂಧಪಟ್ಟ ಇಲಾಖೆಗಳಿಗೆ ರವಾನಿಸುತ್ತದೆ. ಈ ಎಲೆಕ್ಟ್ರಾನಿಕ್ ದೂರು ವ್ಯವಸ್ಥೆಯ ಕಲ್ಪನೆಯನ್ನು ಮೊದಲು ಕಾನೂನು ಮತ್ತು ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ್ ಪ್ರಸ್ತಾಪಿಸಿದರು.

# ಮಣ್ಣಿನ ಗಣಪನ ಪೂಜಿಸಲು ಸಚಿವ ಈಶ್ವರ್ ಖಂಡ್ರೆ ಮನವಿ

• ಉದಯವಾಹಿನಿ, ಬೆಂಗಳೂರು

**ನಾಡಿನ ಜನತೆಗೆ ಮನವಿ**

ಭಾದ್ರಪದ ಶುಕ್ಲ ಚತುರ್ಥಿಯಂದು ಮನೆ ಮನೆಯಲ್ಲೂ ಪೂಜೆಗೊಳ್ಳುವ ಗಣೇಶ ಪರಿಸರದಿಂದಲೇ (ಮಣ್ಣಿನಿಂದ) ಹುಟ್ಟಿದ ದೇವರಾಗಿದ್ದು, ಪರಿಸರ ಸ್ನೇಹಿಯಾದ ಬಣ್ಣರಹಿತ ಮಣ್ಣಿನ ಮೂರ್ತಿಗಳನ್ನೇ ಪೂಜಿಸುವಂತೆ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವ ಈಶ್ವರ್ ಖಂಡ್ರೆ, ನಾಡಿನ ಜನತೆಗೆ ಮನವಿ ಮಾಡಿದ್ದಾರೆ.

ಗೌರಿ ಗಣೇಶ ಹಬ್ಬದ ಸಂದರ್ಭದಲ್ಲಿ ಚಿನ್ನದಿಂದ, ಬೆಳ್ಳಿಯಿಂದ ಅಥವಾ ಮಣ್ಣಿನಿಂದ ಮಾಡಿದ ಮೂರ್ತಿಗಳನ್ನು ಪೂಜಿಸುವುದು ಅನೂಚಾನವಾಗಿ ನಡೆದುಬಂದಿರುವ ಸಂಪ್ರದಾಯ. ಆದರೆ ಇತ್ತೀಚಿನ ವರ್ಷಗಳಲ್ಲಿ ನೀರಲ್ಲಿ ಕರಗದ ಪ್ಲಾಸ್ಟರ್ ಆಫ್ ಪ್ಯಾರೀಸ್ ಮತ್ತು ವಿಷಕಾರಿಯಾದ ಭಾರಲೋಹಯುಕ್ತ ರಾಸಾಯನಿಕ ಬಣ್ಣ ಲೇಪಿತ ಪಿಓಪಿ ಮೂರ್ತಿಗಳ ಸಂಖ್ಯೆ ಹೆಚ್ಚಾಗಿದ್ದು, ಇದರ ವಿಸರ್ಜನೆಯಿಂದ ಜಲಚರಗಳು, ಪಶುಪಕ್ಷಿಗಳ ಸಾವಿಗೆ ಕಾರಣವಾಗುತ್ತಿದೆ ಎಂದೂ ತಿಳಿಸಿದ್ದಾರೆ.

ಜಲ ಮಾಲಿನ್ಯ (ತಡೆ ಮತ್ತು ನಿಯಂತ್ರಣ) ಕಾಯಿದೆ 1974ರ ಕಲಂ 33(ಎ) ಅಡಿಯಲ್ಲಿ ರಾಜ್ಯದ ನದಿ, ಸರೋವರ, ಕೆರೆ, ಕಟ್ಟೆ, ಬಾವಿ ಸೇರಿದಂತೆ ಯಾವುದೇ ಜಲ ಮೂಲದಲ್ಲಿ ಪಿಓಪಿ ಮೂರ್ತಿಗಳ ವಿಸರ್ಜನೆ ನಿಷೇಧಿಸಲಾಗಿದೆ. ಪ್ರಜ್ಞಾವಂತ, ಜವಾಬ್ದಾರಿಯುತ ನಾಗರಿಕರು, ಧಾರ್ಮಿಕರು ಪರಿಸರ ಸ್ನೇಹಿ ಮಣ್ಣಿನ ಗಣಪತಿ ಮೂರ್ತಿಗಳನ್ನು ಮಾತ್ರವೇ ಪೂಜಿಸಿ ಪರಿಸರ ಉಳಿಸುವಂತೆ ಮನವಿ ಮಾಡಿದ್ದಾರೆ. ಪಿಓಪಿ ಗಣೇಶ ವಿಗ್ರಹಗಳನ್ನು ಕ್ಯಾಲ್ಸಿಯಂ, ಸಲ್ಫೇಟ್, ಹೆಮಿಹೈಡ್ರೇಟ್ ಯುಕ್ತ ಪುಡಿಯಿಂದ ತಯಾರಿಸಲಾಗುತ್ತದೆ. ಇದರಲ್ಲಿ ಗಂಧಕ, ರಂಜಕ, ಜಿಪ್ಸಮ್ ಮತ್ತು ಮ್ಯಾಗ್ನೀಷಿಯಂ ಸೇರಿದಂತೆ ಅನೇಕ ಅಪಾಯಕಾರಿ ಅಂಶಗಳಿರುತ್ತವೆ. ಇಂತಹ ಮೂರ್ತಿಗಳಿಗೆ ಪಾದರಸ, ಕ್ಯಾಡ್ಮಿಯಂ, ಸೀಸ ಮತ್ತು ಇಂಗಾಲ ಒಳಗೊಂಡ ರಾಸಾಯನಿಕ ಬಣ್ಣ ಲೇಪಿಸಲಾಗುತ್ತದೆ. ಇದನ್ನು ಕೆರೆ, ಬಾವಿ, ನದಿಯಲ್ಲಿ ವಿಸರ್ಜಿಸಿದಾಗ ಭಾರ ಲೋಹ ಕರಗಿ ಜನ ಜಾನುವಾರುಗಳ ಆರೋಗ್ಯದ ಮೇಲೆ ಪರಿಣಾಮ ಬೀರುತ್ತದೆ. ಜಲಚರಗಳ ಸಾವಿಗೆ ಕಾರಣವಾಗುತ್ತದೆ ಎಂದು ಹೇಳಿದ್ದಾರೆ. ಹಬ್ಬದ ಸಂಭ್ರಮದಲ್ಲಿ ಯಾವುದೇ ಸಮುದಾಯದ ಧಾರ್ಮಿಕ ಭಾವನೆಗಳಿಗೆ ನೋವು ಉಂಟು ಮಾಡುವ ಉದ್ದೇಶ ಸರ್ಕಾರಕ್ಕೆ ಇಲ್ಲ. ಆದರೆ ಪರಿಸರಕ್ಕೆ ಮಾರಕವಾದ ಪಿಓಪಿ ಮೂರ್ತಿಗಳ ತಯಾರಿಕೆ, ಸಾಗಾಟ, ಮಾರಾಟ ಮತ್ತು ವಿಸರ್ಜನೆ ನಿಷೇಧಿಸಿ 2023ರ ಸೆ.15ರಂದು ಸರ್ಕಾರಿ ಆದೇಶ ಹೊರಡಿಸಲಾಗಿದೆ. ಇತ್ತೀಚೆಗೆ ರಾಜ್ಯ ಹೈಕೋರ್ಟ್ ಈ ಆದೇಶವನ್ನು ಕಟ್ಟುನಿಟ್ಟಾಗಿ ಜಾರಿಗೆ ತರುವಂತೆ ನಿರ್ದೇಶನ ನೀಡಿದೆ. ಈ ಹಿನ್ನೆಲೆಯಲ್ಲಿ ಸಾರ್ವಜನಿಕರು ಪರಿಸರ ಸ್ನೇಹಿಯಾದ ಮಣ್ಣಿನ ಮೂರ್ತಿಗಳನ್ನು ಪೂಜಿಸಿ ಪರಿಸರ ಉಳಿಸುವಂತೆ ಕೋರಿದ್ದಾರೆ.



# ರಾಜ್ಯದಲ್ಲಿ ದರೋಡೆಕೋರರು, ಕಳ್ಳರ ಹಾವಳಿ

## • ಮಾರಕಾಸ್ತ್ರಗಳೊಂದಿಗೆ ಬೀದಿಯಲ್ಲಿ ಓಡಾಟ, ಪೊಲೀಸ್ ಇಲಾಖೆ ಕ್ರಮ ಏನು?

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ದರೋಡೆಕೋರರು, ಕಳ್ಳರ ಹಾವಳಿ ಜಾಸ್ತಿಯಾಗುತ್ತಿದೆ. ಪೊಲೀಸರ ಭಯ ಇಲ್ಲದೆ ರಸ್ತೆಯಲ್ಲಿ ಮಾರಕಾಸ್ತ್ರಗಳೊಂದಿಗೆ ತಿರುಗಾಡುತ್ತಿದ್ದಾರೆ. ರಾತ್ರೋ ರಾತ್ರಿ ಮನೆಗಳಿಗೆ ನುಗ್ಗಿ ದರೋಡೆ, ಕಳ್ಳತನ ಮಾಡಲಾಗುತ್ತಿದೆ. ಈ ಬಗ್ಗೆ ವಿಧಾನಸಭೆಯಲ್ಲಿ ತರೀಕೆರೆ ಶಾಸಕ ಶ್ರೀನಿವಾಸ ಜಿ ಎಚ್ ಪ್ರಸ್ತಾಪ ಮಾಡಿದ್ದಾರೆ. ಚುಕ್ಕೆ ಗುರುತ್ತಿಲ್ಲದ ಪ್ರಶ್ನೆಯನ್ನು ಕೇಳಿರುವ ಅವರು, ಘಟನಾವಳಿಗಳ ಬಗ್ಗೆ ಆತಂಕ ವ್ಯಕ್ತಪಡಿಸಿದ್ದಾರೆ. ರಾಜ್ಯಾದ್ಯಂತ ದರೋಡೆ, ಕಳ್ಳತನದ ಪ್ರಸಂಗಗಳು ನಡೆಯುತ್ತಿದ್ದು, ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು? ಎಂದು ಪ್ರಶ್ನಿಸಿದ್ದಾರೆ. ಅಲ್ಲದೆ ರಾತ್ರಿ ವೇಳೆ ಪೊಲೀಸ್ ಸಿಬ್ಬಂದಿ ಗಸ್ತು ಮಾಡುತ್ತಿಲ್ಲ ಎಂಬ ಆರೋಪದ ಬಗ್ಗೆಯೂ ಅವರು ಪ್ರಸ್ತಾಪಿಸಿದ್ದು, ಗಸ್ತು ಹೆಚ್ಚಳ ಮಾಡುವ ನಿಟ್ಟಿನಲ್ಲಿ ಕೈಗೊಂಡಿರುವ ಕ್ರಮಗಳ ಬಗ್ಗೆ ಗೃಹ ಇಲಾಖೆಗೆ ಪ್ರಶ್ನೆ ಮಾಡಿದ್ದಾರೆ.

**ಪೊಲೀಸ್ ಇಲಾಖೆಯ ಕ್ರಮಗಳೇನು?**: ರಾಜ್ಯಾದ್ಯಂತ ಈ ಬೀಟ್ ಸಿಸ್ಟಮ್ ಅನ್ನು ಅಳವಡಿಸಲಾಗಿದೆ.2. 30 ಹೆಚ್ಚುವರಿ ಪೊಲೀಸ್




ಅಧೀಕ್ಷಕರು, ಅಪರಾಧ ಹುದ್ದೆಗಳನ್ನು ಸೃಜಿಸಲಾಗಿದೆ. ರಾತ್ರಿ ಗಸ್ತಿನಲ್ಲಿ ಅಪರಿಚಿತ/ಸಂಶಯಾಸ್ಪದ ವ್ಯಕ್ತಿಗಳ ಬೆರಳು ಮುದ್ರೆಗಳನನ್ನು ಸಂಗ್ರಹಿಸಲು ಒಟ್ಟು 2500 Single Finger Scanner ಗಳನ್ನು ನೀಡಲಾಗಿದೆ. ಕಳೆದ 3 ವರ್ಷಗಳಲ್ಲಿ 12,032 ಅಪರಿಚಿತ/ಸಂಶಯಾಸ್ಪದ ವ್ಯಕ್ತಿಗಳ ಬೆರಳು ಮುದ್ರೆಗಳನ್ನು ಸಂಗ್ರಹಿಸಲಾಗಿದೆ. ಇದರಿಂದ ಅವರು ಅಪರಾಧಗಳಲ್ಲಿ ಭಾಗಿಯಾಗಿದ್ದಲ್ಲಿ ಮಾಹಿತಿ ಸ್ಥಳದಲ್ಲಿಯೇ ಪಡೆಯಲು ಸಹಕಾರಿಯಾಗಿದೆ.

- ಕರ್ನಾಟಕದಲ್ಲಿ ಅಪರಾಧ ಪ್ರಕರಣಗಳ ಸಂಖ್ಯೆ ಹೆಚ್ಚಳ
- ರಾತ್ರಿ ಗಸ್ತು ಹೆಚ್ಚಳ ಮಾಡುವ ನಿಟ್ಟಿನಲ್ಲಿ ಕ್ರಮಗಳೇನು
- ಕಾನೂನು ಸುವ್ಯವಸ್ಥೆ ಕುರಿತಾಗಿ ವಿಪಕ್ಷಗಳ ಆರೋಪಗಳೇನು

- ರಾಜ್ಯದಲ್ಲಿ ಮಹಿಳೆಯರ, ಮಕ್ಕಳ ಮತ್ತು ಹಿರಿಯ ನಾಗರೀಕರ ಸುರಕ್ಷತೆ ಸಂಬಂಧವಾಗಿ, ಮಹಿಳಾ ಸಹಾಯವಾಣಿ (1091), ಮಕ್ಕಳ ಸಹಾಯವಾಣಿ (1098), ಮತ್ತು ಹಿರಿಯ ನಾಗರೀಕರ ಸಹಾಯವಾಣಿ (1090) ನಿರಂತರವಾಗಿ ಕರ್ತವ್ಯ ನಿರ್ವಹಿಸುತ್ತಿವೆ.
- ರಾಜ್ಯದಲ್ಲಿ ಎಲ್ಲಾ ಪ್ರಮುಖ ನಗರಗಳು ಮತ್ತು ಉಪನಗರಗಳಲ್ಲಿ ಸಾರ್ವಜನಿಕ ಸುರಕ್ಷತೆ ಮತ್ತು ಅಪರಾಧಗಳನ್ನು ನಿಯಂತ್ರಿಸುವ ಸಂಬಂಧವಾಗಿ ಸಿಸಿಟಿವಿ ಕ್ಯಾಮರಾಗಳನ್ನು ಅಳವಡಿಸಲಾಗಿದೆ. ದತ್ತಾಂಶದಲ್ಲಿ ಇರುವ ಆರೋಪಿಗಳ, ರೌಡಿ ಆಸಾಮಿಗಳ, ಚಲನವಲನಗಳನ್ನು ನಿಗಾವಹಿಸಿ ಅಗತ್ಯ ನಿಯಂತ್ರಣ ಜರುಗಿಸಲಾಗುತ್ತಿದೆ.
- ರಾಜ್ಯದಲ್ಲಿ ಅಪರಾಧ ತಡೆಗಟ್ಟಲು ಮತ್ತು ಕಾನೂನು ಸುವ್ಯವಸ್ಥೆ ನಿಯಂತ್ರಿಸಲು ಚರಿತ್ರೆಹಾಳೆ ಅಸಾಮಿ, ರೌಡಿ ಪಟ್ಟಿ ಅಸಾಮಿ, ರೂಢಿಗತ ಅಪರಾಧಿ, ಪೂರ್ವಸಜೆ ಅಸಾಮಿ, ಕಮ್ಯುನಲ್ ಗೂಂಡಾಗಳ ವಿರುದ್ಧ ಬಿಎನ್ ಎಸ್ ಹಾಗೂ ಸಿಆರ್ ಪಿ ಸಿ 107,108,110 ಅಡಿಯಲ್ಲಿ ಪ್ರಕರಣ ನೋಂದಾಯಿಸಿ ಸಮಾಜದಲ್ಲಿ ಸುವ್ಯವಸ್ಥೆಯನ್ನು ಕಾಪಾಡುವ ಸಲುವಾಗಿ ಸದರಿಯವರುಗಳಿಂದ ಜಾಮೀನು ಮುಚ್ಚಳಿಕೆಯನ್ನು ಪಡೆದು ನಿಗಾವಹಿಸಿ ನಿಯಂತ್ರಣದಲ್ಲಿ ಇಡಲಾಗಿದೆ. ಪ್ರತಿ ವರ್ಷ ಈ ಸಂಬಂಧ ಸುಮಾರು 50,000 ಪ್ರಕರಣಗಳನ್ನು ದಾಖಲಿಸಿಕೊಳ್ಳಲಾಗುತ್ತಿದೆ.
- 1,58,146 ಮಂದಿ ವಿರುದ್ಧ ದಾಖಲಾತಿಗಳನ್ನು ನಿರ್ವಹಣೆ ಮಾಡಿ ಅವರು ಅಪರಾಧ ಚಟುವಟಿಕೆಗಳಲ್ಲಿ ಭಾಗಿಯಾಗದಂತೆ ನಿಗಾವಹಿಸಲಾಗುತ್ತಿದೆ. ಕರ್ನಾಟಕ ರಾಜ್ಯದಲ್ಲಿ ಒಟ್ಟು 250 ಹೆದ್ದಾರಿ ಗಸ್ತು ವಾಹನ ಕರ್ತವ್ಯ ನಿರ್ವಹಿಸುತ್ತಿದ್ದು, ಹೆದ್ದಾರಿಗಳಲ್ಲಿ ರಾಜ್ಯದ ಸಾರ್ವಜನಿಕ ಸುರಕ್ಷತೆಗೆ ಶ್ರಮಿಸಲಾಗುತ್ತಿದೆ.
- ಗಡಿಭಾಗಗಳಲ್ಲಿ ಹಾಗೂ ಆಯಕಟ್ಟಿನ ಸ್ಥಳಗಳಲ್ಲಿ ಚೆಕ್‌ಪೋಸ್ಟ್ ನಿರ್ಮಿಸಿ ರಾತ್ರಿವೇಳೆ ಸಂಚರಿಸುವ ವಾಹನಗಳು ಹಾಗೂ ವ್ಯಕ್ತಿಗಳನ್ನು ಅನುಮಾನಾಸ್ಪದ ತಪಾಸಣೆ ನಡೆಸಲಾಗುತ್ತಿದೆ. ಸಿಬ್ಬಂದಿಯವರನ್ನು ಪ್ರತಿದಿನ ರಾತ್ರಿ ಗಸ್ತು ಕರ್ತವ್ಯಕ್ಕೆ ನೇಮಕ ಮಾಡಲಾಗುತ್ತಿದೆ, ಪ್ರತಿದಿನ ರಾತ್ರಿ ಗಸ್ತಿನ ವೇಳೆ ಒಂಟಿ ಮನೆಗಳು, ಬೀಗ ಹಾಕಿರುವ ಮನೆಗಳು, ವಿದ್ಯಾರ್ಥಿ ನಿಲಯಗಳು, ತೋಟದ ಮನೆಗಳು, ವಾಸದ ಮನೆಗಳು, ಅಂಗಡಿ ಮಳಿಗೆಗಳು, ಶಾಲಾ ಕಾಲೇಜು, ಸರ್ಕಾರಿ ಕಚೇರಿಗಳು ಹೀಗೆ ಎಲ್ಲಾ ಕಡೆಗಳಲ್ಲಿಯೂ ರಾತ್ರಿ ಗಸ್ತು ಪೊಲೀಸ್ ಸಿಬ್ಬಂದಿಯವರು ಭೇಟಿ ರಾತ್ರಿಗಸ್ತು ಕರ್ತವ್ಯವನ್ನು ಸಮರ್ಪಕವಾಗಿ ನಿರ್ವಹಿಸಲಾಗುತ್ತಿದೆ.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹10,118/Gram(24ct) ₹9,275/Gram(22ct) | ಬೆಳ್ಳಿ: ₹116.20/Gram

# 6 ವರ್ಷಗಳಿಂದ ಸ್ಥಗಿತಗೊಂಡಿದ್ದ ಉದಯರಾಗ- ಸಂಧ್ಯಾರಾಗ ಮತ್ತೆ ಆರಂಭ..!

• ಉದಯವಾಹಿನಿ ಬೆಂಗಳೂರು

ಕಬ್ಬನ್‌ಪಾರ್ಕ್ ವಾಯುವಿಹಾರಿಗಳು, ಪರಿಸರ ಪ್ರೇಮಿಗಳು, ಪ್ರವಾಸಿಗರು ಮತ್ತು ಸಂಗೀತ ಪ್ರಿಯರಿಗೆ ಸಂತಸ ಸುದ್ದಿ. ಕಳೆದ 6 ವರ್ಷಗಳಿಂದ ಸ್ಥಗಿತಗೊಂಡಿದ್ದ ಉದಯರಾಗ ಮತ್ತು ಸಂಧ್ಯಾರಾಗ ಎಂಬ ಸಂಗೀತ ಕಾರ್ಯಕ್ರಮಗಳು ಪುನರಾರಂಭಗೊಳ್ಳಲಿವೆ.

ತೋಟಗಾರಿಕೆ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಆಸಕ್ತಿಯಿಂದಾಗಿ ಈ ಕಾರ್ಯಕ್ರಮಗಳು ಪ್ರತಿ ಭಾನುವಾರ ಬ್ಯಾಂಡ್‌ಸ್ಟ್ಯಾಂಡ್‌ನಲ್ಲಿ ನಡೆಯಲಿವೆ.

ಇದರಂತೆ ಪ್ರತಿ ಭಾನುವಾರವೂ ಕರ್ನಾಟಕ ಸಂಗೀತ ಕಚೇರಿ, ಭರತನಾಟ್ಯ, ವಾದನ ಮತ್ತು ಗಾಯನ ಸೇರಿದಂತೆ ಹಲವು ಸಾಂಸ್ಕೃತಿಕ ಕಾರ್ಯಕ್ರಮಗಳು ಪ್ರದರ್ಶನಗೊಳ್ಳಲಿವೆ. ಇದು ಉದ್ಯಾನವನಕ್ಕೆ ಬರುವ ವಾಯುವಿಹಾರಿಗಳಿಗೆ ಸಾಂಸ್ಕೃತಿಕ ರಸದೌತಣವನ್ನು ನೀಡಲಿದೆ. ವರ್ಷಪೂರ್ತಿ ಪ್ರತಿ ಮುಂಜಾನೆ ಕಬ್ಬನ್‌ಪಾರ್ಕ್‌ನಲ್ಲಿ 'ಉದಯರಾಗ' ಆಯೋಜಿಸಲು 15 ಲಕ್ಷ ರು. ಅನುದಾನ ಮತ್ತು 'ಸಂಧ್ಯಾರಾಗ'ಕ್ಕೆ ಪ್ರತ್ಯೇಕ ವಿಭಾಗದಲ್ಲಿ


ಉದಯವಾಹಿನಿ ಚಿತ್ರ

ಅನುದಾನವನ್ನು ಸರ್ಕಾರ ಒದಗಿಸಿದೆ ಎಂದು ತಿಳಿದುಬಂದಿದೆ. ಪ್ರಸ್ತುತ ಶಾಸ್ತ್ರೀಯ ಸಂಗೀತ ಮತ್ತು ನೃತ್ಯದ ಮೇಲೆ ಗಮನ ಹರಿಸಲಾಗಿದ್ದು, ಕ್ರಮೇಣ ಭಾವಗೀತೆ, ಸುಗಮ ಸಂಗೀತ ಸೇರಿದಂತೆ ಇತರ ಕಾರ್ಯಕ್ರಮಗಳ ಪರಿಚಯಿಸಲು ಮತ್ತು ಉದಯೋನ್ಮುಖ ಕಲಾವಿದರಿಗೆ ವೇದಿಕೆಯನ್ನು ಒದಗಿಸಲು ಯೋಜನೆಗಳನ್ನು ರೂಪಿಸಲಾಗುತ್ತಿದೆ ಎಂದು ತಿಳಿದುಬಂದಿದೆ. ಕಬ್ಬನ್ ಪಾರ್ಕ್‌ನ ತೋಟಗಾರಿಕೆ ಇಲಾಖೆಯ ಉಪ ನಿರ್ದೇಶಕಿ ಕುಸುಮಾ ಜಿ, ಅವರು ಮಾತನಾಡಿ, ಸೆಪ್ಟೆಂಬರ್ ಅಂತ್ಯದವರೆಗೆ ಕಾರ್ಯಕ್ರಮಗಳ ವೇಳಾಪಟ್ಟಿಯನ್ನು ಈಗಾಗಲೇ ರೂಪಿಸಲಾಗಿದೆ. ಎಲ್ಲಾ ಕಾರ್ಯಕ್ರಮಗಳು ಸಾರ್ವಜನಿಕರಿಗೆ ಉಚಿತವಾಗಿರಲಿದೆ ಎಂದು ಹೇಳಿದ್ದಾರೆ. ಸಂಧ್ಯಾರಾಗವನ್ನು ಮತ್ತೆ ಪ್ರಾರಂಭಿಸಲು ಇಲಾಖೆ ಚಿಂತನೆ ನಡೆಸಿದ್ದು, ಅದಕ್ಕಾಗಿ ಪ್ರತ್ಯೇಕವಾಗಿ ಅನುದಾನ ಬಿಡುಗಡೆ ಮಾಡಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಕಬ್ಬನ್ ಪಾರ್ಕ್ ನಂತೆಯೇ ಇಲ್ಲಿರುವ ಬ್ಯಾಂಡ್‌ಸ್ಟ್ಯಾಂಡ್ ಕೂಡ ಇತಿಹಾಸವನ್ನು ಹೊಂದಿದೆ. ಬ್ಯಾಂಡ್ ಸ್ಟ್ಯಾಂಡ್ ಕಬ್ಬನ್ ಪಾರ್ಕ್ ನಲ್ಲಿ ಪ್ರಮುಖ ಸ್ಥಳವಾಗಿದ್ದು, ಇದು ಉದ್ಯಾನವನದ ಮಧ್ಯಭಾಗದಲ್ಲಿದೆ. ಈ ಹಿಂದೆ ಇಲ್ಲಿ ಬ್ರಿಟಿಷರು, ಮೈಸೂರು ಮಿಲಿಟರಿ ಮತ್ತು ಪೊಲೀಸರು ಬ್ಯಾಂಡ್‌ಗಳ ಪ್ರದರ್ಶನ ನೀಡುತ್ತಿದ್ದರು. ಇದು ಸ್ಥಳಕ್ಕೆ ಬರುತ್ತಿದ್ದವರನ್ನು ಆಕರ್ಷಿಸುತ್ತಿತ್ತು. ಈಗ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಪ್ರತಿ ವಾರಾಂತ್ಯದಲ್ಲಿ ಸಂಗೀತ ಕಾರ್ಯಕ್ರಮಗಳನ್ನು ಏರ್ಪಡಿಸಲಾಗುತ್ತಿದೆ.

## ಲಂಚ ಪಡೆಯುತ್ತಿದ್ದಾಗ ಲೋಕಾಯುಕ್ತ ಬಲೆಗೆ ಬಿದ್ದ ಇಬ್ಬರು ಪೊಲೀಸ್ ಅಧಿಕಾರಿಗಳು!

• ಉದಯವಾಹಿನಿ ಕೆ.ಆರ್.ಪುರ

ರಾಮಮೂರ್ತಿ ನಗರ ಪೊಲೀಸ್ ಠಾಣೆಯ ಇಬ್ಬರು ಪೊಲೀಸ್ ಅಧಿಕಾರಿಗಳು ಮತ್ತು ಒಬ್ಬ ಖಾಸಗಿ ವ್ಯಕ್ತಿ 1 ಲಕ್ಷ ರೂ. ಲಂಚ ಪಡೆಯುತ್ತಿದ್ದಾಗ ರೆಡ್ ಹ್ಯಾಂಡ್ ಆಗಿ ಸಿಕ್ಕಿಬಿದ್ದಿದ್ದಾರೆ ಎಂದು ಲೋಕಾಯುಕ್ತ ಅಧಿಕಾರಿಗಳು ತಿಳಿಸಿದ್ದಾರೆ.

ಆರೋಪಿಗಳನ್ನು ಪೊಲೀಸ್ ಇನ್ಸ್‌ಪೆಕ್ಟರ್ ರಾಜಶೇಖರ್ (48), ಸಬ್ ಇನ್ಸ್‌ಪೆಕ್ಟರ್ ರುಮಾನ್ ಪಾಷಾ (32) ಮತ್ತು ದೇವರ ಜೀವನಹಳ್ಳಿಯ ಇಮ್ರಾನ್ ಬಾಬು (32) ಎಂದು ಗುರುತಿಸಲಾಗಿದೆ. ಕೇಳಿದ್ದ ಹಣದಲ್ಲಿ 1 ಲಕ್ಷ ರೂ. ಪಡೆಯುತ್ತಿದ್ದಾಗ ಸಿಕ್ಕಿಬಿದ್ದಿದ್ದು, ಹಣವನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಲೋಕಾಯುಕ್ತ ಅಧಿಕಾರಿಗಳು ತಿಳಿಸಿದ್ದಾರೆ. ಕೆಆರ್ ಪುರಂ ನಿವಾಸಿ ಮಂಜುನಾಥ್ (47) ಎಂಬುವವರು ಲೋಕಾಯುಕ್ತ ಅಧಿಕಾರಿಗಳನ್ನು ಸಂಪರ್ಕಿಸಿ, ಆಭರಣ ಮತ್ತು ನಗದು ಕಾಣೆಯಾದ ಬಗ್ಗೆ ಮನೆ ವಿವಾದಕ್ಕೆ ಸಂಬಂಧಿಸಿದ ದೂರಿನ ತನಿಖೆಗಾಗಿ ಆರೋಪಿಗಳು 2 ಲಕ್ಷ ರೂ. ಬೇಡಿಕೆ ಇಟ್ಟಿದ್ದಾರೆ ಎಂದು ಆರೋಪಿಸಿದ್ದಾರೆ. ರೆಡ್ ಹ್ಯಾಂಡ್ ಆಗಿ ಸಿಕ್ಕಿಬಿದ್ದಿದ್ದಾರೆ ಎಂದು ಲೋಕಾಯುಕ್ತ ಅಧಿಕಾರಿಗಳು ತಿಳಿಸಿದ್ದಾರೆ. ಆರೋಪಿಗಳನ್ನು ಪೊಲೀಸ್ ಇನ್ಸ್‌ಪೆಕ್ಟರ್ ರಾಜಶೇಖರ್ (48), ಸಬ್ ಇನ್ಸ್‌ಪೆಕ್ಟರ್ ರುಮಾನ್ ಪಾಷಾ (32) ಮತ್ತು ದೇವರ ಜೀವನಹಳ್ಳಿಯ ಇಮ್ರಾನ್ ಬಾಬು (32) ಎಂದು ಗುರುತಿಸಲಾಗಿದೆ. ಕೇಳಿದ್ದ ಹಣದಲ್ಲಿ 1 ಲಕ್ಷ ರೂ. ಪಡೆಯುತ್ತಿದ್ದಾಗ ಅವರನ್ನು ಸಿಕ್ಕಿಬಿದ್ದಿದ್ದು, ಹಣವನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಲೋಕಾಯುಕ್ತ ಅಧಿಕಾರಿಗಳು ತಿಳಿಸಿದ್ದಾರೆ. ಅಧಿಕಾರಿಗಳನ್ನು ಸಂಪರ್ಕಿಸಿ, ಆಭರಣ ಮತ್ತು ನಗದು ಕಾಣೆಯಾದ ಬಗ್ಗೆ ಮನೆ ವಿವಾದಕ್ಕೆ ಸಂಬಂಧಿಸಿದ ದೂರಿನ ತನಿಖೆಗಾಗಿ ಆರೋಪಿಗಳು 2 ಲಕ್ಷ ರೂ. ಬೇಡಿಕೆ ಇಟ್ಟಿದ್ದಾರೆ ಎಂದು ಆರೋಪಿಸಿದ್ದಾರೆ.

## ಮದುವೆಗೆ 1 ದಿನ ಮೊದಲು 25 ವರ್ಷದ ಯುವಕನ ಅಪಹರಣ, ದರೋಡೆ

• ಉದಯವಾಹಿನಿ ಬೆಂಗಳೂರು

ಆಗಸ್ಟ್ 17 ರಂದು ನಡೆಯಲಿರುವ ತನ್ನ ಮದುವೆಗೆ ಸ್ನೇಹಿತರು, ಸಂಬಂಧಿಕರನ್ನು ಆಹ್ವಾನಿಸಲು ನಗರಕ್ಕೆ ಬಂದಿದ್ದ ಮಂಡ್ಯದ 25 ವರ್ಷದ ಯುವಕನನ್ನು ಮಧ್ಯಾಹ್ನ 2 ಗಂಟೆ ಸುಮಾರಿಗೆ ಕಾರಿನಲ್ಲಿ ಬಂದ ನಾಲ್ವರು ದುಷ್ಕರ್ಮಿಗಳು ಅಪಹರಿಸಿ ದರೋಡೆ ಮಾಡಿದ್ದಾರೆ. ಜಿಗಣಿ ಕೈಗಾರಿಕಾ ಪ್ರದೇಶದ ಬಳಿಯ ಶಿಕಾರಿಪಾಳ್ಯ ರಸ್ತೆಯಲ್ಲಿ ಈ ಘಟನೆ ನಡೆದಿದೆ. ತನ್ನ ಬಳಿಯಿದ್ದ ಸುಮಾರು 2.5 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಮತ್ತು ನಗದು ದೋಚಿದ್ದಾರೆ ಎಂದು ಆತ ಹೆಬ್ಬಗೋಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ. ಕುಮಾರ್ (ಹೆಸರು ಬದಲಾಯಿಸಲಾಗಿದೆ) ಮಂಡ್ಯದ ಮಳವಳ್ಳಿ ತಾಲ್ಲೂಕಿನವನು. ಮೂಲತಃ ಕೃಷಿಕರಾಗಿರುವ ಕುಮಾರ್ ತನ್ನ ಸ್ನೇಹಿತನೊಂದಿಗೆ ಬನಶಂಕರಿಯಲ್ಲಿದ್ದ ತನ್ನ ಸಹೋದರಿ ಮನೆಗೆ ಬೈಕ್‌ನಲ್ಲಿ ಹೋಗುತ್ತಿದ್ದಾಗ, ಆರೋಪಿ ಕಾರಿನಿಂದ ಬೈಕ್‌ಗೆ ಡಿಕ್ಕಿ ಹೊಡೆದು ಜಗಳವಾಡಿದ್ದಾನೆ. ಆರೋಪಿಗಳು ಇಬ್ಬರನ್ನು ಥಳಿಸಲು ಪ್ರಾರಂಭಿಸಿದರು. ನಾಲ್ವರು ಆರೋಪಿಗಳಲ್ಲಿ ಇಬ್ಬರು ಕುಮಾರ್ ಅವರನ್ನು ಬೆದರಿಸಿ ಆರಂಭದಲ್ಲಿ ಅವರನ್ನು ಬೈಕ್‌ನಲ್ಲಿ ಕರೆದೊಯ್ದರು. ನಂತರ ಕುಮಾರ್ ಸ್ನೇಹಿತನನ್ನು ಥಳಿಸಿ, ಒಂಟಿಯಾಗಿ ಬಿಟ್ಟು ಹೋದರು. ಮೊದಲು ಕುಮಾರ್ ಅವರನ್ನು ಮಧ್ಯಾಹ್ನ 2 ಗಂಟೆ ಸುಮಾರಿಗೆ ಬೈಕ್‌ನಲ್ಲಿ ಕರೆದೊಯ್ದ ಆರೋಪಿಗಳು, ನಂತರ ಕಾರಿನೊಳಗೆ ಎಳೆದುಕೊಂಡು ಹೋಗಿ ಅವರ ಬಳಿ ಇದ್ದ ಚಿನ್ನಾಭರಣಗಳು ಮತ್ತು 40,000 ರೂ.ಗಳನ್ನು ದೋಚಿದರು. ಅವರ ಫೋನ್ ಸಂಖ್ಯೆಯನ್ನು ಸಹ ತೆಗೆದುಕೊಂಡು ಯುಪಿಐ ಮೂಲಕ 10,700 ರೂ.ಗಳನ್ನು ವರ್ಗಾಯಿಸಿಕೊಂಡಿದ್ದಾರೆ.

## ಸುದೀರ್ಘ ಆಡಳಿತಕ್ಕೆ ವಾಜಪೇಯಿ ಬುನಾದಿ; ಬಿ.ಎಲ್.ಸಂತೋಷ್

• ಉದಯವಾಹಿನಿ ಬೆಂಗಳೂರು

ಸ್ವಾತಂತ್ರ್ಯೋತ್ಸವ ಭಾಷಣದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಆರ್‌ಎಸ್ ಎಸ್ ಬಗ್ಗೆ ಉಲ್ಲೇಖಿಸಿದ್ದನ್ನು ಟೀಕಿಸಿದ್ದಕ್ಕಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ (ಸಂಘಟನೆ) ಬಿ.ಎಲ್. ಸಂತೋಷ್ ಟೀಕಿಸಿದ್ದಾರೆ. ನಾನು ಸಿದ್ದರಾಮಯ್ಯ ಅವರಿಗೆ ಹೇಳಲು ಬಯಸುತ್ತೇನೆ ಆರ್‌ಎಸ್‌ಎಸ್ ಯಾವಾಗಲೂ ಬಿಜೆಪಿಗೆ ಸೈದ್ಧಾಂತಿಕ, ಬೌದ್ಧಿಕ ಅಡಿಪಾಯವಾಗಿರುತ್ತದೆ. ಅದು ರಾಷ್ಟ್ರೀಯ ಜೀವನದ ಮುಖ್ಯವಾಹಿನಿಗೆ ಪ್ರವೇಶಿಸಿದೆ. ಹೆಚ್ಚಿನ ಜನರು ಸಿದ್ಧಾಂತವನ್ನು ಒಪ್ಪಿಕೊಂಡಿದ್ದಾರೆ. ಆದ್ದರಿಂದ, ನಿಮ್ಮ ಟ್ವೀಟ್ ಜನರ ಮನಸ್ಸನ್ನು ಕದಲಿಸಲು ಸಾಧ್ಯವಿಲ್ಲ ಎಂದು ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ಪುಣ್ಯತಿಥಿಯಂದು ನಡೆದ ಕಾರ್ಯಕ್ರಮದಲ್ಲಿ ಸಂತೋಷ್ ಹೇಳಿದರು.

ವಾಜಪೇಯಿ ಅವರು ಒಂದು ಜೀವನ, ಒಂದು ಧ್ಯೇಯ, ಒಂದು ನಂಬಿಕೆ ಮತ್ತು ಒಂದು ಸಿದ್ಧಾಂತದಲ್ಲಿ ನಂಬಿಕೆ ಇಡುವ ಸಂಘಟನೆಯಲ್ಲಿ 67 ವರ್ಷಗಳ ಕಾಲ ಜೀವಿಸಿದ್ದಾರೆ. ಅದಕ್ಕಾಗಿಯೇ ಅಟಲ್ ಅಥವಾ ಮೋದಿ ಅಧಿಕಾರಕ್ಕಾಗಿ ಪಕ್ಷಾಂತರ ಮಾಡಿಲ್ಲ ಎಂದು ಸಂತೋಷ್ ತಿಳಿಸಿದ್ದಾರೆ. ಗಾಂಧಿ ಹತ್ಯೆ ಆರ್‌ಎಸ್‌ಎಸ್ ಮಾಡಿತ್ತು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳುತ್ತಲೇ ಇದ್ದಾರೆ. ರಾಷ್ಟ್ರೀಯ ಸ್ವಯಂ ಸೇವಾ ಸಂಘ ಬಿಜೆಪಿಗೆ ವೈಚಾರಿಕ ಸೈದ್ಧಾಂತಿಕ ಮತ್ತು ಕಾರ್ಯಬದ್ಧತೆಯ ಬುನಾದಿಯಾಗಿ ಇದ್ದೇ ಇರುತ್ತದೆ. ನಿಮ್ಮ ಸಂಗಾತಿಗಳು (ಸ್ಟಾಲಿನ್ ಪಿಣರಾಯಿ ವಿಜಯನ್ ಮಮತಾ ಬ್ಯಾನರ್ಜಿ) ಮಾಡುವ ಟ್ವೀಟ್‌ಗಳು ದೇಶದ ಜನರ ಮನಸ್ಸುಗಳನ್ನು ವಿಚಲಿತಗೊಳಿಸಲು ಆಗುವುದಿಲ್ಲ ಎಂಬುದನ್ನು ಸಿದ್ದರಾಮಯ್ಯ ಅವರ ಗಮನಕ್ಕೆ ತರುತ್ತೇನೆ ' ಎಂದು ಬಿ.ಎಲ್ ಸಂತೋಷ್ ಹೇಳಿದರು.

## ಪ್ರೇಯಸಿಯ ಹೊಸ ಲವ್ವರ್‌ಗೆ ಚಾಕು ಇರಿದ ಮಾಜಿ ಬಾಯ್‌ಫ್ರೆಂಡ್

• ಉದಯವಾಹಿನಿ ಬೆಂಗಳೂರು

ಮಾಜಿ ಬಾಯ್‌ಫ್ರೆಂಡ್ ಪ್ರೇಯಸಿಯ ಹೊಸ ಲವ್ವರ್‌ಗೆ ಚಾಕು ಇರಿದ ಘಟನೆ ಬೆಂಗಳೂರಿನ ವೈಯಾಲಿ ಕಾವಲ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಚಂದನ್, ಹಳೆ ಬಾಯ್ ಫ್ರೆಂಡ್‌ನಿಂದ ಚಾಕು ಇರಿತಕ್ಕೆ ಒಳಗಾದ ಯುವಕ. ಯತೀಶ್ ಎಂಬಾತ ಚಂದನ್‌ಗೆ ಚಾಕು ಇರಿದಿದ್ದಾನೆ. ವೈಯಾಲಿ ಕಾವಲ್ ಪೊಲೀಸ್ ಠಾಣಾ ವ್ಯಾಪ್ತಿಯ ಜಟಕಾ ಸ್ಟ್ಯಾಂಡ್ ಬಳಿ ರಾತ್ರಿ ಘಟನೆ ನಡೆದಿದೆ. ಚಂದನ್ ಅದೇ ಏರಿಯಾದ ಯುವತಿ ಯೊಬ್ಬಳನ್ನ ಪ್ರೀತಿಸುತ್ತಿದ್ದ. ಯುವತಿ ಕೂಡ ಚಂದನ್‌ನನ್ನು ಪ್ರೀತಿಸುತ್ತಿದ್ದಳು. ಈ ಹಿಂದೆ ಯುವತಿ ಯತೀಶ್ ಎಂಬಾತನ್ನ ಪ್ರೀತಿಸುತ್ತಿದ್ದಳಂತೆ. ಯುವತಿ ಮತ್ತೊಬ್ಬ ಯುವಕನನ್ನ ಪ್ರೀತಿಸುತ್ತಿದ್ದ ವಿಚಾರ ಯತೀಶ್‌ಗೆ ತಿಳಿದು ಚಂದನ್‌ನನ್ನು ಮಾತುಕತೆಗೆ ಅಂತಾ ಕರೆಸಿ ಯತೀಶ್ ಅಂಡ್ ಗ್ಯಾಂಗ್ ಚಾಕು ಇರಿದಿದ್ದಾರೆ. ಘಟನೆ ಬಳಿಕ ರಕ್ತ ಸಿಕ್ತ ಮೈಯಲ್ಲೇ ನಿತ್ರಾಣನಾಗಿದ್ದ ಚಂದನ್, ಸ್ನೇಹಿತರಿಗೆ ಕರೆ ಮಾಡಿ ವಿಚಾರ ತಿಳಿಸಿದ್ದಾನೆ. ಘಟನಾ ಸ್ಥಳಕ್ಕೆ ತೆರಳಿದ ಚಂದನ್ ಸ್ನೇಹಿತರು ರಕ್ಷಣೆ ಮಾಡಿ ಖಾಸಗಿ ಆಸ್ಪತ್ರೆಗೆ ದಾಖಲಿಸಿದ್ದಾರೆ. ಐಸಿಯುನಲ್ಲಿ ಚಂದನ್ ಚಿಕಿತ್ಸೆ ಪಡೆಯುತ್ತಿದ್ದು ಗಂಭೀರ ಸ್ಥಿತಿಯಲ್ಲಿದ್ದಾನೆ. ಘಟನೆ ಸಂಬಂಧ ವೈಯಾಲಿ ಕಾವಲ್ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದ್ದು, ಆರೋಪಿಗಳಿಗಾಗಿ ಪೊಲೀಸರು ಬಲೆ ಬೀಸಿದ್ದಾರೆ.

# ಅವೈಜ್ಞಾನಿಕ ಕಟ್ಟಡ ನಿರ್ಮಿಸಿದವರಿಗೆ ಗಢಗಢ

## ಸರ್ಕಾರದಿಂದ 4 ಲಕ್ಷ ಕಟ್ಟಡಗಳಿಗೆ ನೀರು, ವಿದ್ಯುತ್ ಸಂಪರ್ಕಕ್ಕೆ ತಡೆ!

• ಉದಯವಾಹಿನಿ ಬೆಂಗಳೂರು

ಅವೈಜ್ಞಾನಿಕವಾಗಿ ನಿರ್ಮಾಣ ಮಾಡಿರುವ, ದುರ್ಬಲಗೊಂಡಿರುವ ಕಟ್ಟಡಗಳನ್ನು ಮೊದಲು ಭದ್ರಗೊಳಿಸುವ ಕೆಲಸವಾಗಬೇಕು. ಇಂತಹ ಕಟ್ಟಡಗಳನ್ನು ಗುರುತಿಸಿ ನೋಟಿಸ್ ನೀಡುವಂತೆ ಪಾಲಿಕೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದರು. ಧರ್ಮರಾಯಸ್ವಾಮಿ ದೇವಾಲಯದ ಬಳಿಯ ನಗರ್ತಪೇಟೆಯಲ್ಲಿ ಬೆಂಕಿ ಅವಘಡದಿಂದ ಹಾನಿಗೊಳಗಾದ ಸ್ಥಳಕ್ಕೆ ಡಿಸಿಎಂ ಶಿವಕುಮಾರ್ ಅವರು ಭಾನುವಾರ ಭೇಟಿ ನೀಡಿ ಪರಿಸ್ಥಿತಿ ಅವಲೋಕಿಸಿದರು. ನಂತರ ಘಟನಾ ಸ್ಥಳ ಹಾಗೂ ಸದಾಶಿವನಗರದ ನಿವಾಸದ ಬಳಿ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದರು.

ಎರಡು, ಮೂರು ಮಹಡಿಗಳನ್ನು ಕಟ್ಟುವ ಕಡೆಗಳಲ್ಲಿ ಎಂಟತ್ತು ಮಹಡಿಗಳನ್ನು ನಿರ್ಮಾಣ ಮಾಡಲಾಗಿದೆ. ಹಲವಾರು ಕಟ್ಟಡಗಳು ವಾಸಕ್ಕೆ ಯೋಗ್ಯವಿಲ್ಲದಂತಾಗಿವೆ. ಇಂತಹ ಕಟ್ಟಡಗಳನ್ನು ಹೊಡೆದು ಹಾಕುವುದು ನಂತರದ ವಿಚಾರ. ಇದರ ಬಗ್ಗೆ ಮೊದಲು ಸಮೀಕ್ಷೆ ನಡೆಸಲಾಗುವುದು. ಇದು ಒಂದೇ ದಿನಕ್ಕೆ ಮುಗಿಯುವ ಕೆಲಸವಲ್ಲ. ವರ್ಷಗಟ್ಟಲೆ ಹಿಡಿಯುತ್ತದೆ. ದೆಹಲಿ, ಮುಂಬೈನಲ್ಲೂ ಇದೇ ಪರಿಸ್ಥಿತಿ ಎದುರಾಗಿದೆ. ಒಳಗೆ ಬಂದು ನೋಡಿದಾಗ ನನಗೆ ಗಾಬರಿಯಾಯಿತು. ಇಂತಹ ಇಕ್ಕಟ್ಟಿನ ಜಾಗದಲ್ಲಿ ಬೆಂಕಿ ಅವಘಡ ನಡೆದರೆ ಜನ ಓಡಿ ಹೋಗುತ್ತಾರೆ, ಆಗ ಕಾಲ್ತುಳಿತ ಉಂಟಾಗಿಯೇ ಜನ ಸಾಯುತ್ತಾರೆ ಎಂದರು. ಕೂಡಲೇ ದುರ್ಬಲ ಕಟ್ಟಡಗಳನ್ನು ಕೆಡವಲು ಹೋಗುವುದಿಲ್ಲ. ಮಾಲೀಕರು ಕೂಡಲೇ ದುರಸ್ಥಿಗೆ ಒಳಪಡಿಸಬೇಕು. ಇಲ್ಲದಿದ್ದರೆ ಕ್ರಮ ತೆಗೆದುಕೊಳ್ಳುತ್ತೇವೆ. ಏಕೆಂದರೆ ದುರ್ಬಲಗೊಂಡಿರುವ ಕಟ್ಟಡಗಳು ಕುಸಿತವಾಗಿ ದೊಡ್ಡ ಸಮಸ್ಯೆ ಎದುರಾಗುವುದು ಬೇಡ. ಭವಿಷ್ಯದಲ್ಲಿ ಈ ರೀತಿಯಾಗಿ ಕಟ್ಟಡಗಳ ನಿರ್ಮಾಣಕ್ಕೆ ಯಾವುದೇ ಕಾರಣಕ್ಕೂ ಅನುಮತಿ ನೀಡುವುದಿಲ್ಲ ಎಂದು ಹೇಳಿದರು.

**ಶೇ.70 ರಷ್ಟು ಕಟ್ಟಡಗಳು ಅಕ್ರಮ:** ಅಕ್ರಮ ಕಟ್ಟಡ ನಿರ್ಮಾಣದ ಬಗ್ಗೆ ಕೇಳಿದಾಗ, ನಗರದಲ್ಲಿ ಶೇ.70 ರಷ್ಟು ಕಟ್ಟಡ ನಿರ್ಮಾಣ ಅಕ್ರಮವಾಗಿದೆ. ನೂತನ ಬಿಡಿಎ ಲೇಔಟ್ ಗಳಲ್ಲಿ ಸಾಮರ್ಥ್ಯಕ್ಕಿಂತ ಹೆಚ್ಚು ಮಹಡಿ ನಿರ್ಮಾಣ ಮಾಡುತ್ತಿದ್ದಾರೆ. ಅದಕ್ಕೆ ಈಗ ಸುಪ್ರೀಂ ಕೋರ್ಟ್ ತೀರ್ಪು ವಾಸಯೋಗ್ಯ ಪ್ರಮಾಪತ್ರವಿಲ್ಲದೇ ನೀರು, ವಿದ್ಯುತ್ ಸಂಪರ್ಕ ನೀಡಬಾರದು ಎಂದು ಮಾರ್ಗದರ್ಶನ ನೀಡಿದೆ. ಈ ಕಾರಣಕ್ಕೆ 4 ಲಕ್ಷ ಸಂಪರ್ಕಗಳನ್ನು ನಿಲ್ಲಿಸಲಾಗಿದೆ. 30/40 ಅಳತೆಯ ಎರಡು ಮಹಡಿಯ ಕಟ್ಟಡಗಳಿಗೆ ವಿನಾಯಿತಿ ನೀಡಬೇಕು ಎನ್ನುವ ವಿಚಾರವನ್ನು ಕ್ಯಾಬಿನೆಟ್ ಮುಂದೆ ತರಲಾಗುವುದು. ಸಂಪುಟ ಸಹೋದ್ಯೋಗಿಗಳು ಏನು ಹೇಳುತ್ತಾರೊ ನೋಡೋಣ ಎಂದರು.

ಚಿಕ್ಕಪೇಟೆ, ನಗರ್ತಪೇಟೆ ಇವುಗಳು ಹೆಸರಿಗೆ ವಾಸಸ್ಥಳಗಳು, ಆದರೆ ವ್ಯಾಪಾರಿ ಕೇಂದ್ರಗಳಾಗಿ ಬದಲಾಗಿವೆ ಎಂದು ಕೇಳಿದಾಗ, ಜನರ ಬಡತನದ ಬದುಕು. ಅಗ್ನಿಶಾಮಕ ನಿಯಮದ ಪ್ರಕಾರ ಹೋದರೆ ಎಲ್ಲಾ ಕಟ್ಟಡಗಳನ್ನು ಒಡೆದು ಹಾಕಬೇಕಾಗುತ್ತದೆ ಎಂದರು. ಅನೇಕ ಕಟ್ಟಡಗಳ ಮೇಲ್ಭಾಗಕ್ಕೆ ಹತ್ತಲು ಸಹ ಆಗುತ್ತಿಲ್ಲ. ಶಾರ್ಟ್ ಸರ್ಕೀಟ್ ಆದ ಕಾರಣಕ್ಕೆ ಬೆಂಕಿ ಹೊತ್ತುಕೊಂಡು ಸಾವನ್ನಪ್ಪಿದ್ದಾರೆ. ಮೃತರೆಲ್ಲಾ ರಾಜಸ್ಥಾನ ಮೂಲದವರು. ಎಲ್ಲಿಯವರು ಆದರೇನು ಬದುಕು ಕಟ್ಟಿಕೊಳ್ಳಲು ಇಲ್ಲಿಗೆ ಬಂದಿದ್ದರು ಎಂದರು. ಎರಡು ದಿನಗಳ ಹಿಂದೆ ಸಿಲಿಂಡರ್ ಸ್ಫೋಟಗೊಂಡು ಮನೆ ಹಾನಿಯಾಗಿದೆ, ಜನರ ಗಾಯಗೊಂಡಿದ್ದಾರೆ. ಬೆಂಕಿಗೆ ಸಿಲುಕಿ ಐದು ಮಂದಿ ಸತ್ತಿದ್ದಾರೆ. ಬಾಡಿಗೆಗಾಗಿ ಹೀಗೆ ಕಟ್ಟಡಗಳನ್ನು ನಿರ್ಮಾಣ ಮಾಡಿರುವುದೇ ಇದೆಲ್ಲದಕ್ಕೂ ಕಾರಣ. ಇದು ಸರಿಯಲ್ಲ ಎಂದರು.

**ಮೃತರಿಗೆ ತಲಾ 5 ಲಕ್ಷ ಪರಿಹಾರ**

**ನಿರ್ಲಕ್ಷ್ಯ ವಹಿಸಿರುವ ಕಟ್ಟಡ ಮಾಲೀಕರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗಿದೆ. ಅವಘಡ ನಡೆದ ಕಟ್ಟಡದ ಮಾಲೀಕರನ್ನೂ ಸಹ ಬಂಧಿಸಲಾಗಿದೆ. ಸೂಕ್ತ ಕಾನೂನು ಕ್ರಮ ಜರುಗಿಸಲು ಪೊಲೀಸರಿಗೆ ಮುಕ್ತ ಅವಕಾಶ ನೀಡಲಾಗಿದೆ. ಅವಘಡದಲ್ಲಿ ಮೃತಪಟ್ಟ ಪ್ರತಿ ವ್ಯಕ್ತಿಗಳ ಕುಟುಂಬಸ್ಥರಿಗೆ ರೂ. 5 ಲಕ್ಷ ಪರಿಹಾರ ನೀಡಲು ಸರ್ಕಾರ ತೀರ್ಮಾನಿಸಿದೆ ಎಂದು ತಿಳಿಸಿದರು.**



## ಸುರಂಗ ರಸ್ತೆ ವಿರೋಧಿಸಿ ಪ್ರತಿಭಟನೆ

• ಉದಯವಾಹಿನಿ ಬೆಂಗಳೂರು

ಸುರಂಗ ರಸ್ತೆ, ಗ್ರೇಟರ್ ಬೆಂಗಳೂರು ಆಡಳಿತ ಕಾಯ್ದೆ ಮತ್ತು ಕರೆಗಳ ಬಫರ್ ವಲಯ ತಿದ್ದುಪಡಿ ಮಸೂದೆ ವಿರೋಧಿಸಿ ಬೆಂಗಳೂರು ಟೌನ್ ಹಾಲ್ ಸಂಘಟನೆ ವತಿಯಿಂದ ಪ್ರತಿಭಟನೆ ನಡೆಸಲಾಯಿತು. ನಗರದ ಸ್ವಾತಂತ್ರ್ಯ ಉದ್ಯಾನದಲ್ಲಿ ನಮ್ಮ ನಗರ, ನಮ್ಮ ಹಕ್ಕು, ನಮ್ಮ ಆಯ್ಕೆ' ಎಂಬ ಘೋಷ ವಾಕ್ಯದೊಂದಿಗೆ ಸಂಘಟನೆಯ ನೂರಾರು ಸದಸ್ಯರು ಪ್ರತಿಭಟನೆ ನಡೆಸಿದರು. ನಗರಕ್ಕೆ ಸುರಂಗ ರಸ್ತೆ ಬೇಡ, ಸಾರ್ವಜನಿಕ ಸಾರಿಗೆ ಬೇಕು, ಬಫರ್ ವಲಯ ತಿದ್ದುಪಡಿ ಬೇಡ, 74ನೇ ತಿದ್ದುಪಡಿ ಅನುಷ್ಠಾನ ಬೇಕು ಹಾಗೂ ಕೆರೆ, ಕಾಲುವೆಗಳು ಬೇಕು' ಎಂದು ಪ್ರತಿಭಟನಕಾರರು ಆಗ್ರಹಿಸಿದರು.

ಸುರಂಗ ರಸ್ತೆಯ ಪ್ರಯಾಣ ಶುಲ್ಕ ಪೆಟ್ರೋಲ್, ಡೀಸೆಲ್ ಬೆಲೆಗಿಂತ ದುಬಾರಿಯಾಗುತ್ತದೆ. ಹಾಗಾಗಿ ಹಲವು ವರ್ಷಗಳಿಂದ ನನೆಗುದಿಗೆ ಬಿದ್ದಿರುವ ಮೂಲಸೌಕರ್ಯ ಯೋಜನೆಗಳನ್ನು ಮೊದಲು ಪೂರ್ಣಗೊಳಿಸಬೇಕು. ಸುರಂಗ ರಸ್ತೆಯಿಂದ ಲಾಲ್‌ಬಾಗ್ ಒಳಗೊಂಡಂತೆ ಹಲವಾರು ಸ್ಥಳಗಳಿಗೆ ಧಕ್ಕೆ ಉಂಟಾಗುತ್ತದೆ. ಮರಗಳನ್ನು ಕಡಿಯುವುದರಿಂದ ಶುದ್ಧ ಗಾಳಿ, ನೀರು ಸಿಗುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು. ಮರಗಳನ್ನು ಉಳಿಸುವುದು, ಸೈಕಲ್ ಪಥಗಳ ಪ್ರಚಾರ ಮತ್ತು ಸೈಕ್ಲಿಂಗ್ ಪ್ರಯೋಜನಗಳ ಬಗ್ಗೆ ಜಾಗೃತಿ ಮೂಡಿಸಬೇಕು. ಸಾರ್ವಜನಿಕರಿಗೆ ಸಾರಿಗೆ ಸೌಲಭ್ಯ, ಕಚೇರಿ, ಕಂಪನಿಗಳಿಗೆ ಬಸ್ ಮತ್ತು ಕ್ಯಾಬ್ ಸೌಲಭ್ಯ ಒದಗಿಸಬೇಕು. ಅಪಾರ್ಟ್‌ಮೆಂಟ್‌ಗಳಲ್ಲಿ ಮಳೆ ನೀರು ಸಂಗ್ರಹ ವ್ಯವಸ್ಥೆ ಜಾರಿಗೊಳಿಸಬೇಕು. ಪ್ರತಿ ಫ್ಲ್ಯಾಟ್‌ಗೆ ಒಂದು ಮರ, ವಿಲ್ಲಾಗೆ ಐದು ಮರಗಳನ್ನು ಬೆಳೆಸಬೇಕು ಎಂದು ಸಲಹೆ ನೀಡಿದರು. ಪ್ರತಿಭಟನೆಯಲ್ಲಿ ನಟ ಪ್ರಕಾಶ್ ಬೆಳವಾಡಿ, ಸಾರ್ವಜನಿಕ ಸಾರಿಗೆಯ ಪ್ರಚಾರಕ ರಾಜ್ ಕುಮಾರ್ ದುಗರ್, ಬೆಂಗಳೂರಿನ ನಾಗರಿಕರ ಕಾರ್ಯಸೂಚಿಯ ಸಂದೀಪ್ ಅನಿರುದ್ಧನ್, ಸಿವಿಕ್ ಬೆಂಗಳೂರಿನ ಕಾತ್ಯಾಯಿನಿ ಚಾಮರಾಜ್, ಪ್ರಿಯಾ ಚೆಟ್ಟಿ ರಾಜಗೋಪಾಲ್ ಪಾಲ್ಗೊಂಡಿದ್ದರು.


ಉದಯವಾಹಿನಿ ಚಿತ್ರ

**ಮರಗಳನ್ನು ಉಳಿಸುವುದು, ಸೈಕಲ್ ಪಥಗಳ ಪ್ರಚಾರ, ಸೈಕ್ಲಿಂಗ್ ಪ್ರಯೋಜನಗಳ ಬಗ್ಗೆ ಜಾಗೃತಿ ಮೂಡಿಸಬೇಕು. ಸಾರ್ವಜನಿಕರಿಗೆ ಸಾರಿಗೆ ಸೌಲಭ್ಯ, ಕಚೇರಿ, ಕಂಪನಿಗಳಿಗೆ ಬಸ್, ಕ್ಯಾಬ್ ಸೌಲಭ್ಯ ಒದಗಿಸಬೇಕು. ಅಪಾರ್ಟ್ ಮೆಂಟ್‌ಗಳಲ್ಲಿ ಮಳೆ ನೀರು ಸಂಗ್ರಹ ವ್ಯವಸ್ಥೆ ಜಾರಿಗೊಳಿಸಬೇಕು. ಪ್ರತಿ ಫ್ಲ್ಯಾಟ್‌ಗೆ ಒಂದು ಮರ, ವಿಲ್ಲಾಗೆ ಐದು ಮರಗಳನ್ನು ಬೆಳೆಸಬೇಕು' ಎಂದು ಸಲಹೆ ನೀಡಿದರು.**

## ದಕ್ಷಿಣ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ನೂತನ ಕಚೇರಿ ಉದ್ಘಾಟನೆ

• ಉದಯವಾಹಿನಿ ಬೆಂಗಳೂರು

ಬೆಂಗಳೂರು ನಗರ ಜಿಲ್ಲೆಯ ಪ್ರಾದೇಶಿಕ ಸಾರಿಗೆ ಪ್ರಾಧಿಕಾರ ಹಾಗೂ ಬೆಂಗಳೂರು (ದಕ್ಷಿಣ) ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ನೂತನ ಕಚೇರಿಯನ್ನು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರು ಉದ್ಘಾಟಿಸಿದರು.

ಉದ್ಘಾಟನೆ ಬಳಿಕ ಮಾತನಾಡಿದ ಸಚಿವ ರಾಮಲಿಂಗಾರೆಡ್ಡಿ, ಈ ಭಾಗದ ಜನರಿಗೆ ಸುಲಭ, ವೇಗವಾಗಿ ಹಾಗೂ ಪಾರದರ್ಶಕ ಸೇವೆಗಳನ್ನು ಒದಗಿಸುವ ಉದ್ದೇಶದಿಂದ ಮೂರು ಅಂತಸ್ತಿನ ನೂತನ ಕಟ್ಟಡ ನಿರ್ಮಿಸಲಾಗಿದೆ. ಈ ನೂತನ ಕಚೇರಿಯು ಉತ್ತಮ ಸೇವೆಗಳನ್ನು ಒದಗಿಸಲು ತಂತ್ರಜ್ಞಾನ ಹಾಗೂ ಮೂಲಸೌಕರ್ಯಗಳನ್ನು ಒಳಗೊಂಡಿದೆ,'' ಎಂದು ಹೇಳಿದರು.

**ಜಯನಗರ ಆರ್‌ಟಿಓ ಸ್ಥಳಾಂತರ :** ಬೆಂಗಳೂರು (ದಕ್ಷಿಣ) ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿಯನ್ನು 1981ರಲ್ಲಿ ಪ್ರಾರಂಭಿಸಿದ್ದು, ಇದು ನಗರದ ವಿಭಾಗದ ಪ್ರಮುಖ ಕಚೇರಿಯಾಗಿದೆ.

ಇದು 2011ರಿಂದ ಜಯನಗರದ ಬಾಡಿಗೆ ಕಟ್ಟಡವೊಂದರಲ್ಲಿ ಕಾರ್ಯ ನಿರ್ವಹಿಸುತ್ತಿದೆ. ಈಗ ಅಂಜನಾಪುರದಲ್ಲಿ 38,793 ಚ.ಅಡಿ ವಿಸ್ತೀರ್ಣದಲ್ಲಿ 11.25 ಕೋಟಿ ರೂ. ವೆಚ್ಚದಲ್ಲಿ ಕಟ್ಟಡ ನಿರ್ಮಾಣಗೊಂಡಿದೆ. ಶೀಘ್ರ ಜಯನಗರ ಆರ್‌ಟಿಓ ಕಚೇರಿ ಸ್ಥಳಾಂತರಗೊಳ್ಳಲಿದೆ ಎಂದು ತಿಳಿಸಿದರು.

ಸಾರಿಗೆ ಇಲಾಖೆ ಕಾರ್ಯದರ್ಶಿ ಡಾ. ಎನ್.ವಿ. ಪ್ರಸಾದ್, ಸಾರಿಗೆ ಆಯುಕ್ತ ಎ.ಎಂ. ಯೋಗೀಶ್, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಪ್ರಾಧಿಕಾರದ ಹೆಚ್ಚುವರಿ ಆಯುಕ್ತ ಉಮಾಶಂಕರ್ ಬಿ.ಪಿ. ರಸ್ತೆ ಸುರಕ್ಷತಾ ಪ್ರಾಧಿಕಾರದ ನಿರ್ದೇಶಕ ಜೆ. ಪುರುಷೋತ್ತಮ್, ಬೆಂಗಳೂರು ನಗರ ಜಿಲ್ಲಾಧಿಕಾರಿ ಜಿ. ಜಗದೀಶ್, ಪರಿಸರ ಮತ್ತು ಇ – ಆಡಳಿತದ ಅಪರ ಆಯುಕ್ತ ಜೆ. ಜ್ಞಾನೇಂದ್ರ ಕುಮಾರ್, ಹೆಚ್ಚುವರಿ ಆಯುಕ್ತ ಸಿ. ಮಲ್ಲಿಕಾರ್ಜುನ, ಪ್ರಾದೇಶಿಕ ಸಾರಿಗೆ ಪ್ರಾಧಿಕಾರದ ಕಾರ್ಯದರ್ಶಿ ವಿ.ಪಿ. ರಮೇಶ್ ಈ ವೇಳೆ ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

**ಆ.15ರಿಂದಲೇ ದೇಗುಲಗಳಲ್ಲಿ ಪ್ಲಾಸ್ಟಿಕ್ ನಿಷೇಧ**

**ರಾಜ್ಯದ ಧಾರ್ಮಿಕ ದತ್ತಿ ಇಲಾಖೆಯ ದೇವಸ್ಥಾನಗಳಲ್ಲಿ ನೀರಿನ ಬಾಟಲ್ ಸೇರಿದಂತೆ ಎಲ್ಲಾ ರೀತಿಯ ಪ್ಲಾಸ್ಟಿಕ್ ಬಳಕೆಯನ್ನು ಆ. 15ರಿಂದ ಸಂಪೂರ್ಣವಾಗಿ ನಿಷೇಧಿಸಿ ಆದೇಶಿಸಲಾಗಿದೆ ಎಂದು ಸಚಿವ ರಾಮಲಿಂಗಾರೆಡ್ಡಿ ಹೇಳಿದ್ದಾರೆ.**

ಸ್ವಚ್ಛ ಮಂದಿರ ಯೋಜನೆಯನ್ನು 'ಎ', 'ಬಿ' 'ಸಿ' ಪ್ರವರ್ಗದ ದೇವಾಲಯಗಳು ಹಾಗೂ ಅಧಿಸೂಚಿತ ಸಂಸ್ಥೆಗಳಲ್ಲಿ ಅನುಷ್ಠಾನಗೊಳಿಸಲು ಸುತ್ತೋಲೆ ಹೊರಡಿಸಲಾಗಿದೆ.

ಇಲಾಖೆಯ ಅಧೀನದಲ್ಲಿರುವ ದೇವಾಲಯಗಳು, ಕಲ್ಯಾಣ ಮಂಟಪಗಳಿಂದ ಉತ್ಪತ್ತಿಯಾಗುವ ಕಸವನ್ನು ವೈಜ್ಞಾನಿಕವಾಗಿ ನಿರ್ವಹಣೆ ಮಾಡಲು ಧಾರ್ಮಿಕ ದತ್ತಿ ಆಯುಕ್ತರ ಕಚೇರಿಯಲ್ಲಿ ಯೋಜನಾ ಮೇಲ್ವಿಚಾರಣಾ ಘಟಕವನ್ನು ಸ್ಥಾಪಿಸಿ, ತಜ್ಞರನ್ನೊಳಗೊಂಡ ತಂಡದಿಂದ ಪ್ರಥಮ ಹಂತದಲ್ಲಿ 25 ದೇವಸ್ಥಾನಗಳನ್ನು ಆಯ್ಕೆ ಮಾಡಿಕೊಂಡು ಘನ ಮತ್ತು ದ್ರವ ತ್ಯಾಜ್ಯ ಘಟಕಗಳ ಸ್ಥಾಪನೆಗೆ ಸ್ಥಳ ಗುರುತಿಸಲು ಕ್ರಮ ವಹಿಸಲಾಗಿದೆ,'' ಎಂದು ಅವರು ವಿಧಾನಸಭೆ ಕಲಾಪದಲ್ಲಿ ಮಾಹಿತಿ ನೀಡಿದ್ದಾರೆ.

## 38,717 ಕೋಟಿ ರೂ ವೆಚ್ಚ, ಶೇ.97ರಷ್ಟು ಪ್ರಗತಿ: ಸಿಎಂ ಸಿದ್ದರಾಮಯ್ಯ

• ಉದಯವಾಹಿನಿ ಬೆಂಗಳೂರು

ಕಳೆದ ವರ್ಷ ಎಸ್‌ಸಿಎಸ್‌ಪಿ/ಟಿಎಸ್‌ಪಿ ಕಲ್ಯಾಣ ಕಾರ್ಯಕ್ರಮಗಳಿಗಾಗಿ ರೂ. 38,793 ಕೋಟಿ ಬಿಡುಗಡೆಯಾಗಿದ್ದು, ರೂ. 38,717ಕೋಟಿ ವೆಚ್ಚ ಮಾಡಿ ಶೇ.97ರಷ್ಟು ಪ್ರಗತಿ ಸಾಧಿಸಲಾಗಿದೆ. ಕೇಂದ್ರ ಸರ್ಕಾರದಿಂದ ಬರಬೇಕಾಗಿದ್ದ ರೂ. 880 ಕೋಟಿ ಅನುದಾನ ಬಿಡುಗಡೆಯಾಗಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ವಿಧಾನಸೌಧದಲ್ಲಿ ನಡೆದ ರಾಜ್ಯ ಅನುಸೂಚಿತ ಜಾತಿಗಳು/ಅನುಸೂಚಿತ ಪಂಗಡಗಳ ಅಭಿವೃದ್ಧಿ ಪರಿಷತ್ತಿನ ಸಭೆಯಲ್ಲಿ ಮಾತನಾಡಿದ ಮುಖ್ಯಮಂತ್ರಿ, ಎಸ್‌ಸಿಎಸ್‌ಪಿ/ ಟಿಎಸ್‌ಪಿ ಕಾಯ್ದೆ ಜಾರಿಗೊಂಡು 10 ವರ್ಷವಾದ ಹಿನ್ನೆಲೆಯಲ್ಲಿ ಇದರ ಅನುಷ್ಠಾನದ ಪ್ರಗತಿ ಬಗ್ಗೆ ಐಸೆಕ್ ವತಿಯಿಂದ ಮೌಲ್ಯಮಾಪನ ನಡೆಸಿದ್ದೇವೆ. ಪರಿಶಿಷ್ಟ ಜಾತಿ ಮತ್ತು ಪಂಗಡದ ಜನಸಂಖ್ಯೆ ಹೆಚ್ಚಿರುವ 39 ತಾಲ್ಲೂಕುಗಳನ್ನು ಗುರುತಿಸಿ ಅಧ್ಯಯನ ಕೈಗೊಳ್ಳಲಾಗಿದೆ. ಶಿಕ್ಷಣ, ಆರೋಗ್ಯ, ಜೀವನಮಟ್ಟ ಸುಧಾರಣೆ ಮತ್ತು ಬಡತನ ನಿರ್ಮೂಲನೆ ಮಾನದಂಡಗಳನ್ನು ಪರಿಗಣಿಸಿ ಸಮೀಕ್ಷೆ ನಡೆಸಲಾಗಿದೆ ಎಂದರು. ಅಭಿವೃದ್ಧಿ ಅನುದಾನ ಬಿಡುಗಡೆಯಲ್ಲಿ ಈ ಅವಧಿಯಲ್ಲಿ ಶೇ.9.6 ರಷ್ಟು ವಾರ್ಷಿಕ ಪ್ರಗತಿ ಸಾಧಿಸಲಾಗಿದೆ. ಇತರ ರಾಜ್ಯಗಳಿಗೆ ಹೋಲಿಸಿದರೆ ಕರ್ನಾಟಕ ರಾಜ್ಯ ಕಳೆದ 10 ವರ್ಷಗಳಲ್ಲಿ ವಿವಿಧ ಮಾನದಂಡಗಳಲ್ಲಿ ಮುಂಚೂಣಿಯಲ್ಲಿರುವುದು ಸ್ಪಷ್ಟವಾಗಿದೆ. ಕಾಯ್ದೆ ಪ್ರಕಾರ ಪ್ರತಿವರ್ಷ ಕನಿಷ್ಠ ಶೇ.24.1 ರಷ್ಟು ಅನುದಾನ ನೀಡಬೇಕಾಗಿದೆ. ಆದರೆ 2019-20ರ ಅವಧಿಯಲ್ಲಿ ನಿಗದಿತ ಶೇಕಡಾಕ್ಕಿಂತ ಕಡಿಮೆ ಅನುದಾನ ಬಿಡುಗಡೆ ಮಾಡಲಾಗಿದೆ. ಕಾಯ್ದೆ ಜಾರಿ ಬಳಿಕ ಒಟ್ಟು ರೂ.2.97 ಲಕ್ಷ ಕೋಟಿ ವೆಚ್ಚ ಮಾಡಲಾಗಿದೆ. ಯೋಜನೆ ಸಮರ್ಪಕವಾಗಿ ಅನುಷ್ಠಾನವಾಗುತ್ತಿದೆಯೇ ಎಂಬುವುದರ ಬಗ್ಗೆ ಪರಿಶೀಲನೆ ನಡೆಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು. ಜನಸಂಖ್ಯೆಗೆ ಅನುಗುಣವಾಗಿ ಬಜೆಟ್ ಅನುದಾನದ ವಿನಿಯೋಗ, ಸಾಮಾಜಿಕ, ಆರ್ಥಿಕ ಪರಿಸ್ಥಿತಿ ಸುಧಾರಣೆ, ಜೀವನ ಮಟ್ಟ ಮತ್ತು ವಾಸಸ್ಥಳಗಳ ಅಭಿವೃದ್ಧಿಪಡಿಸುವುದು ಕಾಯ್ದೆಯ ಉದ್ದೇಶ. ಯಾವುದೇ ಕಾರಣಕ್ಕೂ ಕಾಯ್ದೆಯ ಆಶಯಕ್ಕೆ ಭಂಗ ಬರಬಾರದು. ಆಯಾ ಇಲಾಖೆಯವರು ಸಮರ್ಪಕ ಕ್ರಿಯಾ ಯೋಜನೆ ರೂಪಿಸಿ ಪರಿಶಿಷ್ಟ ಜಾತಿ/ಪಂಗಡದ ಜನರ ಸಾಮಾಜಿಕ, ಆರ್ಥಿಕ ಶೈಕ್ಷಣಿಕ ಪರಿಸ್ಥಿತಿ ಸುಧಾರಣೆಗೆ ಯೋಜನಾಬದ್ಧವಾಗಿ ಕಾರ್ಯನಿರ್ವಹಿಸಬೇಕು. ಅನುಷ್ಠಾನ ಇಲಾಖೆಗೆ ಬದ್ಧತೆ ಬೇಕು. ಕಳೆದ 10 ವರ್ಷಗಳಲ್ಲಿ ನಿರೀಕ್ಷಿತ ಬದಲಾವಣೆ ಸಾಧ್ಯವಾಗಿಲ್ಲ ಎಂದರು.


ಉದಯವಾಹಿನಿ ಚಿತ್ರ

**ವಿವಿಧ ಕಲ್ಯಾಣ ಯೋಜನೆಗಳಡಿ ಬ್ಯಾಂಕ್‌ಗಳು ಸಕಾಲದಲ್ಲಿ ಹಣಕಾಸು ನೆರವು ಒದಗಿಸುವುದನ್ನು ಖಾತ್ರಿಪಡಿಸಬೇಕು. ಸಾಲ ಸೌಲಭ್ಯ ಒದಗಿಸಲು ವಿಳಂಬ ಧೋರಣೆ ತೋರಿಸುವ ಬ್ಯಾಂಕ್‌ಗಳ ವಿರುದ್ಧ ಕ್ರಮ ಕೈಗೊಳ್ಳಬೇಕು. ಸರ್ಕಾರದ ಯೋಜನೆಗಳು ಶೇ.100ರಷ್ಟು ಎಸ್‌ಸಿ/ ಎಸ್‌ಟಿ ಜನರಿಗೆ ತಲುಪುವಂತೆ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.**

# ಹೆಬ್ಬಾಳ ಹೊಸ ಮೇಲ್ಸೇತುವೆ ರ‍್ಯಾಂಪ್ ಉದ್ಘಾಟನೆ

## ಶೇ 30 ರಷ್ಟು ಸಂಚಾರ ಸಲೀಸು: ಆದರೆ ಮೇಖ್ರಿ ವೃತ್ತದ ರಸ್ತೆಯ ಅಗಲೀಕರಣಕ್ಕೆ ಹೆಚ್ಚಿದ ಒತ್ತಡ! ಯಾಕೆ ಗೊತ್ತಾ?

• ಉದಯವಾಹಿನಿ ಬೆಂಗಳೂರು

ಹೆಬ್ಬಾಳ ಹೊಸ ಮೇಲ್ಸೇತುವೆ ರ‍್ಯಾಂಪ್ ಉದ್ಘಾಟನೆಗೊಳ್ಳಲಿದೆ. ಈ ಮೇಲ್ಸೇತುವೆಯಿಂದ ಹೆಬ್ಬಾಳದ ಶೇಕಡಾ 30 ರಷ್ಟು ಟ್ರಾಫಿಕ್ ದಟ್ಟಣೆ ನಿವಾರಣೆಯಾಗುವ ನಿರೀಕ್ಷೆ ಇದೆ. ಆದರೆ ಮೇಖ್ರಿ ಸರ್ಕಲ್ ದಟ್ಟಣೆ ಹೆಚ್ಚಳ ಆಗುವ ಸಾಧ್ಯತೆ ಇದೆ.

ಸಿಎಂ ಸಿದ್ದರಾಮಯ್ಯ, ಈ ಮೇಲ್ಸೇತುವೆಯನ್ನು ಉದ್ಘಾಟಿಸಲಿದ್ದಾರೆ. ಈಗಾಗಲೇ 2 ದಿನಗಳ ಟ್ರಯಲ್ ರನ್ ನಡೆಸಲಾಗಿದೆ. ನಾಗವಾರದಿಂದ ಬರುವ ವಾಹನಗಳು ಸಿಗ್ನಲ್ ತಪ್ಪಿಸಿ ರ‍್ಯಾಂಪ್ ಮೂಲಕ ಸುಲಭವಾಗಿ ಹೋಗಲು ಈ ರಾಂಪ್ ಸಹಾಯ ಮಾಡುತ್ತದೆ. ಆದರೆ, ಇದರಿಂದ ಮೆಖ್ರಿ ಸರ್ಕಲ್‌ನಲ್ಲಿ ಟ್ರಾಫಿಕ್ ಜಾಮ್ ಹೆಚ್ಚಾಗಬಹುದು ಎಂದು ಟ್ರಯಲ್ ರನ್‌ನಲ್ಲಿ ತಿಳಿದುಬಂದಿದೆ.

ಹೀಗಾಗಿ ಮೇಖ್ರಿ ಸರ್ಕಲ್ ರಸ್ತೆಯನ್ನು ವಿಸ್ತರಿಸುವುದು ಮುಖ್ಯ ಎಂದು ಹೇಳಲಾಗಿದೆ. ಹೆಬ್ಬಾಳ ಜಂಕ್ಷನ್‌ನಲ್ಲಿ ರಾಂಪ್ ನಿರ್ಮಾಣದಿಂದ ಟ್ರಾಫಿಕ್ ಕಡಿಮೆಯಾಗಲಿದೆ. ಆದರೆ, ಮೆಖ್ರಿ ಸರ್ಕಲ್‌ನಲ್ಲಿ ಟ್ರಾಫಿಕ್ ಜಾಮ್ ಉಂಟಾಗುವ ಸಾಧ್ಯತೆಯಿದೆ ಎಂದು ಸಂಚಾರ ಪೊಲೀಸರು ಹೇಳಿದ್ದಾರೆ. ಮೇಖ್ರಿ ಸರ್ಕಲ್ ರಸ್ತೆಯನ್ನು ವಿಸ್ತರಿಸಲು ಬಿಬಿಎಂಪಿ ಈಗಾಗಲೇ ರಕ್ಷಣಾ ಇಲಾಖೆಗೆ ಸೇರಿದ ಜಾಗವನ್ನು ಗುರುತಿಸಿದೆ.

ರಸ್ತೆ ವಿಸ್ತರಣೆಯಾದರೆ, ಆರ್.ಟಿ.ನಗರ, ಜಯಮಹಲ್ ಮತ್ತು ವಸಂತ ನಗರದ ಕಡೆಗೆ ಹೋಗುವ ವಾಹನಗಳು ಮೇಖ್ರಿ ಸರ್ಕಲ್‌ನಲ್ಲಿ ಫ್ರೀ ಲೆಫ್ಟ್ ತೆಗೆದುಕೊಳ್ಳಬಹುದು. ಇದರಿಂದ ಟ್ರಾಫಿಕ್ ಕಡಿಮೆಯಾಗುತ್ತದೆ.

ಏರ್‌ಪೋರ್ಟ್, ನಾಗವಾರ (ಹೊಸ ರಾಂಪ್ ಮೂಲಕ) ಮತ್ತು ಭೂಪಸಂದ್ರದಿಂದ ಬರುವ ಟ್ರಾಫಿಕ್ ಬ್ಯಾಪ್ಟಿಸ್ಟ್ ಆಸ್ಪತ್ರೆ ಬಳಿ ಸೇರುವುದರಿಂದ ಅಲ್ಲಿಯೂ ಟ್ರಾಫಿಕ್ ಜಾಮ್ ಉಂಟಾಗುವ ಸಾಧ್ಯತೆಯಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ. ಆಸ್ಪತ್ರೆ ಬಳಿಯಿರುವ ಬಸ್ ನಿಲ್ದಾಣಗಳನ್ನು ಸ್ಥಳಾಂತರಿಸುವ ಸಾಧ್ಯತೆಯಿದೆ. ಆದರೆ, ಎರಡು ವಾರಗಳ ಕಾಲ ಟ್ರಾಫಿಕ್ ಗಮನಿಸಿದ ನಂತರ ಈ ಬಗ್ಗೆ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದಿದ್ದಾರೆ. ದೀರ್ಘಕಾಲೀನ ಯೋಜನೆಗಳಲ್ಲಿ ನಾಗವಾರದಿಂದ ಏರ್‌ಪೋರ್ಟ್ ರಸ್ತೆಗೆ ಫ್ಲೈಓವರ್, ನಾಗವಾರದ ಕಡೆಗೆ ಒಂದು ದಿಕ್ಕಿನ ಅಂಡರ್‌ಪಾಸ್ ಮತ್ತು ಹೆಬ್ಬಾಳದಿಂದ ವೆಟರ್ನರಿ ಕಾಲೇಜಿಗೆ ಸುರಂಗ ರಸ್ತೆ ನಿರ್ಮಾಣ ಮಾಡುವ ಯೋಜನೆಗಳಿವೆ.

ಆದರೆ, ಮೇಖ್ರಿ ಸರ್ಕಲ್ ರಸ್ತೆಯನ್ನು ವಿಸ್ತರಿಸದಿದ್ದರೆ, ಹೊಸ ರಾಂಪ್‌ನಿಂದ ಟ್ರಾಫಿಕ್ ಜಾಮ್ ಕಡಿಮೆಯಾಗುವುದಿಲ್ಲ ಎಂದು ಟ್ರಾಫಿಕ್ ಪೊಲೀಸರು ಹೇಳಿದ್ದಾರೆ. ಬದಲಾಗಿ, ಟ್ರಾಫಿಕ್ ಜಾಮ್ ಇನ್ನೊಂದು ಕಡೆಗೆ ಸ್ಥಳಾಂತರವಾಗುತ್ತದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.



ಉದಯವಾಹಿನಿ ಚಿತ್ರ

**2ನೇ ಹಂತದ ಕಾಮಗಾರಿಗೆ ಸಿದ್ಧತೆ**

**ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು, ರಾಂಪ್ ಅನ್ನು ತುಮಕೂರು ರಸ್ತೆಗೆ ಜೋಡಿಸುವ ಮುಂದಿನ ಹಂತಕ್ಕೆ ಸಿದ್ಧತೆ ನಡೆಸುತ್ತಿದೆ. ಇದಕ್ಕಾಗಿ ಈಗಿರುವ ರಸ್ತೆ ರಚನೆಯ ಎರಡು ಭಾಗಗಳನ್ನು ತೆಗೆದುಹಾಕಬೇಕಾಗುತ್ತದೆ. ಇದರಿಂದ ಬಳ್ಳಾರಿ ರಸ್ತೆ ಮತ್ತು ತುಮಕೂರು ರಸ್ತೆಯಲ್ಲಿ ಟ್ರಾಫಿಕ್ ಜಾಮ್ ಉಂಟಾಗುವ ಸಾಧ್ಯತೆಯಿದೆ.**

**ರಾಂಪ್ ತೆರೆಯುವುದರಿಂದ ವಾಹನಗಳು ಹೆಬ್ಬಾಳ ಜಂಕ್ಷನ್ ಅನ್ನು ಸುಲಭವಾಗಿ ದಾಟಲು ಸಹಾಯವಾಗುತ್ತದೆ. ಆದರೆ, ಟ್ರಯಲ್ ರನ್ ಸಮಯದಲ್ಲಿ, ಮೇಖ್ರಿ ಸರ್ಕಲ್ ಅಂಡರ್‌ಪಾಸ್ ಬಳಿ ಟ್ರಾಫಿಕ್ ಜಾಮ್ ಉಂಟಾಗುವುದನ್ನು ನಾವು ಗಮನಿಸಿದ್ದೇವೆ. ಇದು ಇತರ ರಸ್ತೆಗಳ ಮೇಲೆ ಪರಿಣಾಮ ಬೀರಿತು ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಹೀಗಾಗಿ ಮೇಖ್ರಿ ಸರ್ಕಲ್ ಬಳಿ ರಸ್ತೆ ವಿಸ್ತರಣೆ ಮಾಡುವುದು ಅಗತ್ಯವಿದೆ ಎಂದು ಅವರು ಹೇಳಿದ್ದಾರೆ.**

# ಕ್ಷೇತ್ರದ ಶಿವರಾತ್ರಿದೇಶಿಕೇಂದ್ರ ಸ್ವಾಮೀಜಿ ಅಭಿಪ್ರಾಯ

## ಜನ್ಮ ಶತಮಾನೋತ್ಸವ, ದತ್ತಿ ಉಪನ್ಯಾಸ ಕಾರ್ಯಕ್ರಮ ಉದ್ಘಾಟನೆ ಹಾಗೂ ಕೃತಿ ಬಿಡುಗಡೆ

• ಉದಯವಾಹಿನಿ ಚಾಮರಾಜನಗರ

ನೇರ ನಡೆ ನುಡಿಯು ನಿಷ್ಠಾವಂತ ರಾಜಕಾಣಿಯಾಗಿದ್ದ ಮಾಜಿ ಶಾಸಕ ದಿ.ಎಂ.ಸಿ.ಬಸಪ್ಪ ರಾಜಕಾರಣಿಗಳಿಗೆ ಆದರ್ಶ ಪ್ರಾಯರು ಎಂದು ಸುತ್ತೂರು ಕ್ಷೇತ್ರದ ಶಿವರಾತ್ರಿದೇಶಿಕೇಂದ್ರ ಸ್ವಾಮೀಜಿ ಅಭಿಪ್ರಾಯಪಟ್ಟರು.

ನಗರದ ಡಾ.ರಾಜಕುಮಾರ್ ಕಲಾಮಂದಿರದಲ್ಲಿ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು ಜಿಲ್ಲಾ ಘಟಕ ಹಾಗೂ ಕದಳಿ ಮಹಿಳಾ ವೇದಿಕೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಎಂ.ಸಿ ಬಸಪ್ಪ ಜನ್ಮ ಶತಮಾನೋತ್ಸವ ಹಾಗೂ ದತ್ತಿ ಉಪನ್ಯಾಸ ಕಾರ್ಯಕ್ರಮ ಉದ್ಘಾಟನೆ ಹಾಗೂ ಕೃತಿ ಬಿಡುಗಡೆ ಮಾಡಿ ಮಾತನಾಡಿದರು. ಬಸಪ್ಪ ಅವರ ತಂದೆ ಚಿಕ್ಕಲಿಂಗಪ್ಪ ಸ್ವಾತಂತ್ರ್ಯ ಹೋರಾಟಗಾರರಾಗಿದ್ದು ಹೋರಾಟಗಳಲ್ಲಿ ಭಾಗವಹಿಸಿ ಜೈಲು ಸೇರಿದ್ದರು. ತಂದೆಯ ಹೋರಾಟದ ಹಾದಿಯಲ್ಲಿ ಬೆಳೆದುಬಂದ ಬಸಪ್ಪ ಕೂಡ ಹಲವು ಹೋರಾಟಗಳಲ್ಲಿ ಭಾಗವಹಿಸಿ ಜೈಲು ಸೇರಿದ್ದರು. ಚಾಮರಾಜನಗರ ವಿಧಾನಸಭಾ ಕ್ಷೇತ್ರದಿಂದ ಎರಡು ಬಾರಿ ಶಾಸಕರಾಗಿ ಒಮ್ಮೆ ವಿಧಾನ ಪರಿಷತ್ ಸದಸ್ಯರಾಗಿ ಜನಪರ ಕಾರ್ಯ ಮಾಡಿದ್ದಾರೆ.

ಸರಳ ವ್ಯಕ್ತಿತ್ವದಿಂದಲೇ ಗುರುತಿಸಿಕೊಂಡಿದ್ದ ಬಸವಪ್ಪ ಬಳಿ ಸ್ವಂತ ಕಾರು ಸಹ ಇರಲಿಲ್ಲ. ಬಸ್‌ನಲ್ಲಿಯೇ ಓಡಾಡುತ್ತ ಸರಳವಾಗಿ ಬದುಕಿ ತೋರಿಸಿದ್ದರು. ನೇರವಾದ ಮಾತುಗಳಿಗೆ ಹೆಸರಾಗಿದ್ದ ಅವರು ಕ್ಷೇತ್ರದ ಅಭಿವೃದ್ಧಿ ದೃಷ್ಟಿಯಿಂದ ಅಪಾರ ಕಾಳಜಿ ಹೊಂದಿದ್ದರು ಎಂದು ಸ್ಮರಿಸಿದರು.


ಉದಯವಾಹಿನಿ ಚಿತ್ರ

ಹಿರಿಯ ಶ್ರೀ ರಾಜೇಂದ್ರ ಸ್ವಾಮೀಜಿ ಬಗ್ಗೆ ಅಪಾರ ಗೌರವ ಹೊಂದಿದ್ದ ಬಸಪ್ಪ ಶ್ರೀಮಠದ ಜೊತೆಗೆ ಉತ್ತಮ ಬಾಂಧವ್ಯ ಹೊಂದಿದ್ದರು. ಮೇರು ವ್ಯಕ್ತಿತ್ವದ ಎಂ.ಸಿ.ಬಸಪ್ಪ ಅವರ 100ನೇ ಜನ್ಮ ಶತಮಾನೋತ್ಸವ ನಡೆಯುತ್ತಿರುವುದು ಅಭಿನಂದನೀಯ ಎಂದರು.

ಸ್ಕೌಟ್ ಅಂಡ್ ಗೈಡ್ಸ್ ರಾಜ್ಯ ಆಯುಕ್ತ ಪಿ.ಜಿ.ಆರ್ ಸಿಂಧ್ಯಾ ಹಾಗೂ ಸಾಹಿತಿ ಕೆ.ವೆಂಕಟರಾಜು ಬಸಪ್ಪ ಅವರ ರಾಜಕಾರಣ ಹಾಗೂ ಸಮಾಜಸೇವೆಯ ಕುರಿತು ಮಾತನಾಡಿದರು. ಶಿವಲಿಂಗೇಂದ್ರ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ಚಿಂತಕ ಶಂಕರ ದೇವನೂರು, ಗಂಗಾಬಿಕೆ ಎಂ.ಸಿ.ಬಸಪ್ಪ, ವಿಧಾನ ಪರಿಷತ್ ಮಾಜಿ ಸದಸ್ಯ ಪ್ರೊ.ಕೆ.ಆರ್.ಮಲ್ಲಿಕಾರ್ಜುನಪ್ಪ, ಶರಣ ಸಾಹಿತ್ಯ ಪರಿಷತ್‌ನ ಜಿಲ್ಲಾಧ್ಯಕ್ಷ ದುಗ್ಗಟ್ಟಿ ಮಲ್ಲಿಕಾರ್ಜುನಸ್ವಾಮಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಿ.ಕೆ.ರವಿಕುಮಾರ್, ತಾಲ್ಲೂಕು ಅಧ್ಯಕ್ಷ ಬಿ.ಎಸ್.ವಿನಯ್, ಎಂಸಿ ಬಸಪ್ಪ ಪುತ್ರ ಎಂ.ಬಿ. ಸೋಮಶೇಖರ್ ಇದ್ದರು.

> ರಾಜಕಾರಣವನ್ನು ಸೇವಾ ಕ್ಷೇತ್ರವನ್ನಾಗಿ ಮಾಡಿಕೊಂಡಿದ್ದ ಬಸಪ್ಪನವರು ಸೋಲು, ಗೆಲುವಿನ ಬಗ್ಗೆ ಚಿಂತಿಸದೆ ಸಮಾಜಕ್ಕೆ ಅರ್ಪಿಸಿಕೊಂಡಿದ್ದರು. ಹೋರಾಟದ ಬದುಕಿನಲ್ಲಿ ಮೌಲ್ಯಗಳ ಜೊತೆಗೆ ರಾಜಿ ಮಾಡಿಕೊಳ್ಳದೆ. ಅಧಿಕಾರಕ್ಕೆ ಆಸೆ ಪಡದೆ ಬದುಕಿದರು ಎಂದರು.
>
> ಶರಣ ಸಾಹಿತ್ಯ ಪರಿಷತ್ ರಾಜ್ಯ ಘಟಕದ ಅಧ್ಯಕ್ಷ ಡಾ.ಸಿ.ಸೋಮಶೇಖರ್

> **ಚಿಕ್ಕಹೊಳೆ ಅಣೆಕಟ್ಟೆ ನಿರ್ಮಾಣ ಸಂದರ್ಭ ಗುತ್ತಿಗೆದಾರರೊಬ್ಬರು ಬಾಕಿ ಹಣ ಬಿಡುಗಡೆಯಾಗದೆ ತೊಂದರೆ ಸಿಲುಕಿದಾಗ ಹಣ ಬಿಡುಗಡೆ ಮಾಡಿಸಿದ್ದರು. ಪ್ರತಿಯಾಗಿ ಉಡುಗೊರೆ ಕೊಡಲು ಬಂದಾಗ ಕೋಪಗೊಂಡು ನಿರಾಕರಿಸಿದ್ದರು. ಅವರ ಪ್ರಾಮಾಣಿಕತೆ ಬಿಂಬಿಸುವ ಹಲವು ಪ್ರಸಂಗಗಳನ್ನು ಹಲವರು ಹೇಳುತ್ತಾರೆ. ಬಸಪ್ಪ ವ್ಯಕ್ತಿತ್ವ ಯುವಪೀಳಿಗೆಗೆ ಮಾದರಿಯಾಗಬೇಕು ಎಂದು ಸುತ್ತೂರು ಶ್ರೀಗಳು ಹೇಳಿದರು.**

# ಆ. 18ರಂದು ತಾಲ್ಲೂಕು ಕಚೇರಿ ಮುಂಭಾಗ ಧರಣಿ



• ಉದಯವಾಹಿನಿ ಶಿಡ್ಲಘಟ್ಟ

ಭೂರಹಿತ ರೈತರಿಗೆ ಸರ್ಕಾರ ತ್ವರಿತವಾಗಿ ಭೂ ಮಂಜೂರು ಮಾಡಬೇಕು ಎಂದು ಒತ್ತಾಯಿಸಿ ಆ.18ರ ಸೋಮವಾರ ತಾಲ್ಲೂಕು ಕಚೇರಿ ಮುಂಭಾಗ ಧರಣಿ ಹಮ್ಮಿಕೊಳ್ಳಲಾಗಿದೆ ಎಂದು ದಸಂಸ ತಾಲ್ಲೂಕು ಸಂಚಾಲಕ ಟಿ.ಎ.ಚಲಪತಿ ತಿಳಿಸಿದರು.

ಶಿಡ್ಲಘಟ್ಟದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ನಿವೇಶನ ರಹಿತರಿಗೆ ನಿವೇಶನ. ಮನೆ ಇಲ್ಲದವರಿಗೆ ಮನೆ, ಭೂರಹಿತರಿಗೆ ಭೂ ಮಂಜೂರು ಮಾಡಬೇಕು ಎಂದು ಅನೇಕ ವರ್ಷಗಳಿಂದ ಹೋರಾಟ ಮಾಡುತ್ತಾ ಬಂದಿರುವುದರಲ್ಲಿ ದಸಂಸ ಮುಂಚೂಣಿಯಲ್ಲಿದೆ ಎಂದರು. ನಗರದ ಹೃದಯಭಾಗದಲ್ಲಿ ಅಂಬೇಡ್ಕರ್ ಭವನ ಹಾಗೂ ಬಾಬು ಜಗಜೀವನ ರಾಂ ಭವನ ನಿರ್ಮಾಣಕ್ಕೆ ಶಂಕುಸ್ಥಾಪನೆ ಸೇರಿದಂತೆ ವಿವಿಧೆಡೆ ದಲಿತರ ಸಮಸ್ಯೆ ಪರಿಹಾರವಾಗಿವೆ. ಆದರೆ ಕ್ಷೇತ್ರದಾದ್ಯಂತ ಇರುವ ಗ್ರಾ.ಪಂ ಗಳ ವ್ಯಾಪ್ತಿಯಲ್ಲಿರುವ ನಿವೇಶನ ರಹಿತರಿಗೆ ನಿವೇಶನ ಕಲ್ಪಿಸಲು ಅರ್ಹರ ಪಟ್ಟಿ ಸಿದ್ದಪಡಿಸಲಾಗಿದೆಯಾದರೂ ಅವರಿಗೆ ನೀಡಲು ಅಗತ್ಯವಿರುವ ಭೂ ಮಂಜೂರು ಪ್ರಕ್ರಿಯೆ ಈವರೆಗೂ ಆಗಿಲ್ಲ. ತ್ವರಿತವಾಗಿ ಭೂ ಮಂಜೂರು ಮಾಡಬೇಕು ಎಂದರು.

## ಮಿನಿ ನ್ಯೂಸ್

### ಅಂಬೇಡ್ಕರ್‌ಗೆ ಅಪಮಾನ; ದಲಿತ ಸಂಘಟನೆ ಪ್ರತಿಭಟನೆ

• ಉದಯವಾಹಿನಿ ಗೌರಿಬಿದನೂರು

ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮದಲ್ಲಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್ ಅಂಬೇಡ್ಕರ್ ಭಾವಚಿತ್ರ ಇಡದೆ, ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿ ಪ್ರಾಂಶುಪಾಲ ಮಂಜುನಾಥ್ ಅಪಮಾನ ಮಾಡಿದ್ದಾರೆ ಎಂದು ಆರೋಪಿಸಿ ದಲಿತ ಸಂಘಟನೆಗಳು ಕಾಲೇಜು ಮುಂಭಾಗದಲ್ಲಿ ಪ್ರತಿಭಟನೆ ನಡೆಸಿತು. ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮದಲ್ಲಿ ಅಂಬೇಡ್ಕರ್ ಭಾವಚಿತ್ರ ಇಡದೆ ದಲಿತ ವಿರೋಧಿ ನೀತಿ ಅನುಸರಿಸುತ್ತಿದ್ದಾರೆ. ಪ್ರಾಂಶುಪಾಲ ಮಂಜುನಾಥ್ ಅವರನ್ನು ಕಾಲೇಜಿನಿಂದ ವಜಾ ಮಾಡಬೇಕು ಎಂದು ಅವರ ವಿರುದ್ಧ ಘೋಷಣೆ ಕೂಗಿದರು.

ದಲಿತ ಮುಖಂಡ ಇಡಗೂರು ಪ್ರಸನ್ನ ಕುಮಾರ್ ಮಾತನಾಡಿ, ಅಂಬೇಡ್ಕರ್ ಸಂವಿಧಾನದ ಶಿಲ್ಪಿ ಮಾತ್ರವಲ್ಲದೆ, ಸಮಾಜ ಪರಿವರ್ತನೆಯ ದಿಕ್ಕು ತೋರಿಸಿದ ಮಹನೀಯ. ಇಂತಹ ಮಹಾನ್ ನಾಯಕರಿಗೆ ಗೌರವ ನೀಡದೆ ಸ್ವಾತಂತ್ರ್ಯ ದಿನಾಚರಣೆ ಆಚರಣೆ ಮಾಡಿರುವುದು ಅವರಿಗೆ ಮಾಡಿದ ಅಪಮಾನ. ದಲಿತರ ಬಗ್ಗೆ ಅವರಿಗೆ ಇರುವ ತಾತ್ಸಾರ ಮನೋಭಾವ ತೋರಿಸುತ್ತದೆ. ತಕ್ಷಣವೇ ಆಡಳಿತ ಮಂಡಳಿ, ಪ್ರಾಂಶುಪಾಲ ಕ್ಷಮೆಯಾಚನೆ ಮಾಡಿ. ಮುಂದಿನ ದಿನಗಳಲ್ಲಿ ಇಂತಹ ಘಟನೆ ಮರುಕಳಿಸದಂತೆ ಭರವಸೆ ನೀಡಬೇಕೆಂದು ಒತ್ತಾಯಿಸಿದರು.

### ಬಿಸಿಯೂಟ ಆಹಾರ ಸರಬರಾಜು ವಾಹನ ಟೆಂಡರ್ ಮುಕ್ತಾಯ

• ಉದಯವಾಹಿನಿ ಮಾಗಡಿ

ತಾಲ್ಲೂಕಿನ ಸರ್ಕಾರಿ ಶಾಲೆಗಳಿಗೆ ಬಿಸಿಯೂಟ ಆಹಾರ ಸರಬರಾಜು ಮಾಡುವ ವಾಹನ ಟೆಂಡರ್ ಅವಧಿ ಮುಕ್ತಾಯವಾಗಿದೆ.

ಆಹಾರ ಸರಬರಾಜು ಮಾಡುತ್ತಿದ್ದ ವಾಹನ ಟೆಂಡರ್ ಪ್ರಕ್ರಿಯೆ ಮುಕ್ತಾಯವಾಗಿದೆ. ಹೊಸ ಟೆಂಡರ್ ಪ್ರಕ್ರಿಯೆ ಮುಗಿಯುವವರೆಗೂ ಆಹಾರ ಸರಬರಾಜು ಮಾಡುವಂತೆ ತಾಲ್ಲೂಕು ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ರೇಣುಕೇಶ್, ಸರಬರಾಜು ಮಾಡುವವರಿಗೆ ಮನವಿ ಮಾಡಿದರು ಕೂಡ ಹೊಸ ಆದೇಶ ಕೊಡುವವರೆಗೂ ಸರಬರಾಜು ಮಾಡಲು ಆಗುವುದಿಲ್ಲ ಎಂದು ಟೆಂಡರ್‌ದಾರರು ತಿಳಿಸಿದ್ದಾರೆ. ಈ ಬಗ್ಗೆ ಜಿಲ್ಲಾ ಪಂಚಾಯಿತಿ ಸಿಇಒ ಗಮನಕ್ಕೂ ತರಲಾಗಿದೆ. ಹೊಸ ಟೆಂಡರ್‌ಗಳು ನಿಗದಿಯಾದ ನಂತರ ಸಮಸ್ಯೆ ಆಗುವುದಿಲ್ಲ ಎಂದು ರೇಣುಕೇಶ್ ತಿಳಿಸಿದ್ದಾರೆ.

### ಮಳೆಯಲ್ಲಿಯೇ ಸರದಿಯಲ್ಲಿ ನಿಂತು ದರ್ಶನ ಪಡೆದ ಭಕ್ತರು


ಉದಯವಾಹಿನಿ ಚಿತ್ರ

• ಉದಯವಾಹಿನಿ ಪಾವಗಡ

ಪಟ್ಟಣದ ಶನೈಶ್ಚರ ದೇಗುಲದಲ್ಲಿ ನಾಲ್ಕನೇ ಶ್ರಾವಣ ಶನಿವಾರ ವಿವಿಧೆಡೆಯಿಂದ ಬಂದಿದ್ದ ಸಹಸ್ರಾರು ಭಕ್ತರು ಮುಂಜಾನೆ 3 ಗಂಟೆಯಿಂದ ಸರದಿಯಲ್ಲಿ ನಿಂತು ದರ್ಶನ ಪಡೆದರು. ಸರದಿಯಲ್ಲಿ ನಿಂತ ಭಕ್ತರು ಮಳೆಯಲ್ಲಿ ನೆನೆಯದಂತೆ ದೇಗುಲದಿಂದ ವ್ಯವಸ್ಥೆ ಮಾಡಲಾಗಿತ್ತು. ಬೆಳಗಿನ ಜಾವ 3 ಗಂಟೆಯಿಂದಲೇ ಎಸ್‌ಎಸ್‌ಕೆ ವಸತಿ ನಿಲಯ ಬಳಿ ಕೇಶ ಮುಂಡನಕ್ಕಾಗಿ ಸರದಿಯಲ್ಲಿ ನಿಂತು ಭಕ್ತರು ಟಿಕೆಟ್ ಪಡೆದರು. 14 ಸಾವಿರಕ್ಕೂ ಹೆಚ್ಚು ಭಕ್ತರು ಕೇಶಮುಂಡನಕ್ಕೆ ಟಿಕೆಟ್ ಪಡೆದರೆ, 40 ಸಾವಿರಕ್ಕೂ ಹೆಚ್ಚಿನ ಮಂದಿ ಬೆಳಿಗ್ಗೆಯಿಂದ ಸಂಜೆಯವರೆಗೆ ದರ್ಶನ ಪಡೆದರು. ರಾತ್ರಿಯಿಡೀ ಪಟ್ಟಣದ ಶನೈಶ್ಚರ ವೃತ್ತದ ಬಳಿ ಭಕ್ತರು ತುಂಬಿದ್ದರು. ಬೆಳಗಿನ ಜಾವ 4 ಗಂಟೆಯಿಂದಲೇ ಅಭಿಷೇಕ, ತೈಲಾಭಿಷೇಕ, ಕುಂಕುಮಾರ್ಚನೆ, ಸರ್ವಸೇವೆ, ತಾಳಿ ಪೂಜೆ ಇತ್ಯಾದಿ ಪೂಜೆ ನಡೆದವು. ದೇಗುಲದ ಎಸ್‌ಎಸ್‌ಕೆ ಅನ್ನದಾಸೋಹ ಭವನದಲ್ಲಿ ಶುಕ್ರವಾರದಿಂದ ಸಹಸ್ರಾರು ಸಂಖ್ಯೆ ಭಕ್ತರಿಗೆ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು. ಬಗೆ ಬಗೆಯ ಹೂವುಗಳಿಂದ ದೇಗುಲವನ್ನು ಅಲಂಕರಿಸಲಾಗಿತ್ತು. ಶುಕ್ರವಾರವೇ ವಿವಿಧೆಡೆಯಿಂದ ಭಕ್ತರು ಬಂದಿದ್ದರಿಂದ ವಾಹನದಟ್ಟಣೆ ಹೆಚ್ಚಿತ್ತು.

# ಗ್ರಾಮದ ಸರ್ಕಾರಿ ಶಾಲೆಗೆ ಶಿಕ್ಷಕರ ನಿಯೋಜನೆಗೆ ಒತ್ತಾಯಿಸಿ ಪ್ರತಿಭಟನೆ

• ಉದಯವಾಹಿನಿ ಚಿಕ್ಕಬಳ್ಳಾಪುರ

ನಗರಕ್ಕೆ ಹೊಂದಿಕೊಂಡಿರುವ ಮುನ್ನೂರು ಗ್ರಾಮದ ಸರ್ಕಾರಿ ಶಾಲೆಗೆ ಶಿಕ್ಷಕರ ನಿಯೋಜನೆ. ಮೂಲಸೌಕರ್ಯ ಒದಗಿಸಬೇಕೆಂದು ಒತ್ತಾಯಿಸಿ ಶಾಲಾ ಮಕ್ಕಳೊಂದಿಗೆ ಗ್ರಾಮಸ್ಥರು ಪ್ರತಿಭಟನೆ ನಡೆಸಿದರು. ಮುಖಂಡ ಮುನ್ನೂರು ಶ್ರೀಧರ್ ಮಾತನಾಡಿ, ಗ್ರಾಮದಲ್ಲಿನ ಸರ್ಕಾರಿ ಶಾಲೆಯಲ್ಲಿ 1 ರಿಂದ 7ನೇ ತರಗತಿಯವರೆಗೆ 84ಕ್ಕೂ ಹೆಚ್ಚು ಬಡಮಕ್ಕಳು ಕಲಿಯುತ್ತಿದ್ದಾರೆ. ಶಾಲೆಯಲ್ಲಿ 7ನೇ ತರಗತಿವರೆಗೆ ಪಾಠಮಾಡಲು ಮುಖ್ಯಶಿಕ್ಷಕರು ಇದ್ದರು. ಇದೀಗ ಮುಖ್ಯಶಿಕ್ಷಕರು ವಯೋನಿವೃತ್ತಿ ಹೊಂದಿದ್ದು, ಅವರ ಬದಲಿಗೆ ಮತ್ತೊಬ್ಬರನ್ನು ನೇಮಿಸುವ ಬದಲು, ಇರುವ 4 ಶಿಕ್ಷಕರಲ್ಲಿ ಒಬ್ಬರನ್ನು ಬೇರೆಡೆಗೆ ವರ್ಗಾಯಿಸಲಾಗಿದೆ ಎಂದರು.

ಬಡಮಕ್ಕಳು ಕಲಿಯುವ ಸರ್ಕಾರಿ ಶಾಲೆಗಳಿಗೆ ಅಗತ್ಯ ಶಿಕ್ಷಕರನ್ನು ನೇಮಿಸಿ ಮೂಲ ಸೌಕರ್ಯಗಳನ್ನು ಒದಗಿಸಬೇಕಾದ ಸರ್ಕಾರಗಳು ಸರ್ಕಾರಿ ಶಾಲೆಯನ್ನು ನಿರ್ಲಕ್ಷಿಸುತ್ತಿದೆ. ಇದರಿಂದ ಬಡ ಮಕ್ಕಳು ಗುಣಮಟ್ಟದ ಶಿಕ್ಷಣದಿಂದ ವಂಚಿತರಾಗುತ್ತಿದ್ದಾರೆ. ಕೆಲ ಪೋಷಕರು ಸರ್ಕಾರಿ ಶಾಲೆಗಳ ಅವ್ಯವಸ್ಥೆಗಳನ್ನು ಕಂಡು ಸಾಲಮಾಡಿ ಮಕ್ಕಳನ್ನು ಖಾಸಗಿ ಶಾಲೆಗಳಿಗೆ ದಾಖಲಿಸುತ್ತಿದ್ದಾರೆ ಎಂದರು. ಸರ್ಕಾರಗಳು ಸರ್ಕಾರಿ ಶಾಲೆಗಳನ್ನು ನಿರ್ಲಕ್ಷಿಸಿದೆ. ಪ್ರತಿ ತರಗತಿಗೆ ಒಬ್ಬರು ಶಿಕ್ಷಕರಂತೆ ನೇಮಿಸುವ ಜೊತೆಗೆ ಶಾಲೆಗಳ ಅಭಿವೃದ್ಧಿ ಅಗತ್ಯ ಕ್ರಮಕೈಗೊಳ್ಳಬೇಕಿದೆ. ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ನಡೆಸುವುದಾಗಿ ಎಚ್ಚರಿಸಿದರು.

ಸರ್ಕಾರಿ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ನಾರಾಯಣಸ್ವಾಮಿ ಸಮಸ್ಯೆ ಬಗೆಹರಿಸುವ ಭರವಸೆ ನೀಡಿದ ಬಳಿಕ ಪ್ರತಿಭಟನೆಯನ್ನು ಹಿಂಪಡೆಯಲಾಯಿತು. ಎಸ್‌ಡಿಎಂಸಿ ಅಧ್ಯಕ್ಷ ಮುನಿರಾಜು, ಸುಮಿತ್ರ ನಾಗರಾಜ್, ಕಲಾವತಿ, ನಾಗೇಶ್, ಮಂಜುನಾಥ್ ಹಾಜರಿದ್ದರು.


ಉದಯವಾಹಿನಿ ಚಿತ್ರ

> **ಇರುವ ಮೂವರು ಶಿಕ್ಷಕರು 1ರಿಂದ 5ನೇ ತರಗತಿಯವರೆಗಿನ ಮಕ್ಕಳು ಹಾಗೂ 6, 7ನೇ ತರಗತಿಯ ವಿದ್ಯಾರ್ಥಿಗಳನ್ನು ಒಂದೇ ಕೊಠಡಿಯಲ್ಲಿ ಸೇರಿಸಿಕೊಂಡು ಪಾಠ ಮಾಡುತ್ತಿದ್ದು, ಇದರಿಂದ ಮಕ್ಕಳ ಶೈಕ್ಷಣಿಕ ಜೀವನದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.**

# ಜಿಲ್ಲಾಡಳಿತದಿಂದ ಶ್ರೀಕೃಷ್ಣ ಜಯಂತಿ ಆಚರಣೆ

• ಉದಯವಾಹಿನಿ ಚಿಕ್ಕಬಳ್ಳಾಪುರ


ಉದಯವಾಹಿನಿ ಚಿತ್ರ

ಮನುಷ್ಯನ ಜೀವನಕ್ಕೆ ಬೇಕಾದ ಎಲ್ಲಾ ಆದರ್ಶ, ಸಲಹೆ, ಮಾರ್ಗದರ್ಶನಗಳು ಭಗವದ್ಗೀತೆಯ ತಾತ್ಪರ್ಯದಲ್ಲಿವೆ ಎಂದು ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ ಹೇಳಿದರು. ನಗರದ ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಯಾದವ ಕ್ಷೇಮಾಭಿವೃದ್ಧಿ ಸಂಘದ ಆಶ್ರಯದಲ್ಲಿ ಶನಿವಾರ ನಡೆದ ಕೃಷ್ಣನ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ಹಿಂದೂ ಧರ್ಮೀಯರು ಕೃಷ್ಣನನ್ನು ಆರಾಧಿಸುವ, ಪೂಜಿಸುವ ಸಂಪ್ರದಾಯವನ್ನು ಅನಾದಿ ಕಾಲದಿಂದಲೂ ಪಾಲಿಸುತ್ತಿದ್ದಾರೆ. ಧರ್ಮದ ರಕ್ಷಣೆ ಮಾಡಲು ಕೃಷ್ಣನು ತೆಗೆದುಕೊಂಡ ನಿರ್ಧಾರ ಸತ್ಯದ ದಾರಿಯಾಗಿದೆ. ಜಗತ್ತಿನಲ್ಲಿ ಅಧರ್ಮ ಹೆಚ್ಚಾದಾಗ ಎಲ್ಲಾ ಕಾಲಕ್ಕೂ ಸಂಭವಾಮಿ ಯುಗೇ ಯುಗೇ ಎಂದು ಹೇಳಿ ಧರ್ಮೋದ್ಧಾರಕವಾಗಿ, ಜಗದೋದ್ಧಾರಕನಾಗಿ ನಿಂತರು ಎಂದರು.

ಕುರುಕ್ಷೇತ್ರ ಯುದ್ಧದಲ್ಲಿ ಪಾಂಡವರು ಕೌರವರ ಯುದ್ಧದಲ್ಲಿ ಧರ್ಮ ರಕ್ಷಣೆ ಕರ್ತವ್ಯ ಮಾಡಿ ಪ್ರಮುಖ ಪಾತ್ರ ವಹಿಸುತ್ತಾರೆ. ಅವರು ಸಲಹೆಗಾರ. ಯೋಧ, ರಾಜತಾಂತ್ರಿಕ ಮತ್ತು ಮಾರ್ಗದರ್ಶಕ ಸೇರಿದಂತೆ ಬಹು ಪಾತ್ರಗಳಲ್ಲಿ ಯಶಸ್ವಿಯಾಗಿ ಕಾಣಿಸಿಕೊಳ್ಳುತ್ತಾರೆ. ಒಬ್ಬ ಮಗನಾಗಿ, ಅಣ್ಣನಾಗಿ, ಪತಿಯಾಗಿ, ತಂದೆಯಾಗಿ, ಸಹೋದರನಾಗಿ, ಮಿತ್ರನಾಗಿ ಯಾವ ರೀತಿ ನಡೆದುಕೊಳ್ಳಬೇಕು ಎಂಬುದನ್ನು ಕೃಷ್ಣನ ಜೀವನ ಚರಿತ್ರೆಯನ್ನು ಅರಿಯುವ ಮೂಲಕ ತಿಳಿದುಕೊಳ್ಳಬಹುದಾಗಿದೆ ಎಂದರು. ಕೃಷ್ಣ ಎಂದರೆ ಒಂದು ರೀತಿಯ ಚೇತನ, ಜೀವಂತಿಕೆ, ಕಳೆ. ಇಂದಿಗೂ ಅನೇಕ ತಾಯಂದಿರು ಮನೆಯಲ್ಲಿ ಚಿಕ್ಕ ಮಕ್ಕಳಿಗೆ ಕೃಷ್ಣನ ವೇಷವನ್ನ ಹಾಕಿ ಆನಂದಪಡುತ್ತಾರೆ.

ಸೂರ್ಯ, ಚಂದ್ರ, ಭೂಮಿ ಇರುವವರೆಗೂ ಕೃಷ್ಣನ ಜೀವನ ಚರಿತ್ರೆ, ಆದರ್ಶ ಪ್ರಸ್ತುತವಾಗಿರಲಿವೆ ಎಂದರು. ಹೆಚ್ಚುವರಿ ಜಿಲ್ಲಾಧಿಕಾರಿ ಡಾ.ಎನ್ ಭಾಸ್ಕರ್, ಹೆಚ್ಚುವರಿ ಪೊಲೀಸ್ ಅಧೀಕ್ಷಕ ಜಗನ್ನಾಥ್ ರೈ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಿ.ಎಂ ರವಿಕುಮಾರ್, ತಹಶೀಲ್ದಾರ್ ರಶ್ಮಿ, ಕೆ.ಎಂ ಮುನೇಗೌಡ, ಆರ್.ವೆಂಕಟೇಶ್, ವಿ.ಮನಿಕೃಷ್ಣಪ್ಪ, ವೆಂಕಟೇಶ್, ಶ್ರೀನಿವಾಸ್, ನರಸಪ್ಪ, ಗೋಪಾಲಪ್ಪ ಹಾಜರಿದ್ದರು.

> **ಪೆರೇಸಂದ್ರದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಪಿ.ಎನ್. ನರಸಿಂಹರೆಡ್ಡಿ ಮಾತನಾಡಿ, ಕೃಷ್ಣ ಜಯಂತಿಯನ್ನು ವಿಶ್ವದಾದ್ಯಂತ ಆಚರಿಸಲ್ಪಡುತ್ತಿದೆ. ಅನ್ಯ ಜನಾಂಗಕ್ಕೆ ಸೇರಿದ ಜಾಂಬವತಿಯನ್ನು ಮದುವೆಯಾಗುವ ಮೂಲಕ ಅಂತರ್ಜಾತಿ ವಿವಾಹಕ್ಕೆ ನಾಂದಿಯಾಗಿರುವ ದೈವ ಸ್ವರೂಪಿ ಕೃಷ್ಣ ಜೂಜಿನಲ್ಲಿ ಪಾಂಡವರು ಸೋತ ನಂತರ ದ್ರೌಪದಿ ವಸ್ತ್ರಾಭರಣ ಮಾಡುವ ಸಂದರ್ಭದಲ್ಲಿ ಹೆಣ್ಣಿನ ಮಾನ. ಗೌರವ ಕಾಪಾಡುತ್ತಾರೆ. ಕೃಷ್ಣ ಪಾಂಡವರ ಜೊತೆ ಸೇರಿ ಧರ್ಮವೆಂಬ ಯುದ್ಧವನ್ನು ಗೆಲ್ಲುತ್ತಾರೆ ಎಂದು ಅವರ ಜೀವನ ಚರಿತ್ರೆ ತಿಳಿಸಿಕೊಟ್ಟರು.**

# ಸಕಾಲಕ್ಕೆ ಸಾಲ ಮರು ಪಾವತಿಸಲು ಸಲಹೆ

• ಉದಯವಾಹಿನಿ ಹಾರೋಹಳ್ಳಿ

ಬಿಡಿಸಿಸಿ ಬ್ಯಾಂಕ್‌ನಿಂದ ರೈತರಿಗೆ ಆರ್ಥಿಕ ಶಕ್ತಿ ತುಂಬಲು ಸಾಲ ಕೊಡಲಾಗುತ್ತಿದೆ. ಸಾಲ ಸರಿಯಾದ ಸಮಯಕ್ಕೆ ಪಾವತಿ ಮಾಡಿದರೆ ಇನ್ನೂ ಹೆಚ್ಚಿನ ಸಾಲ ನೀಡಲಾಗುವುದು ಎಂದು ಬಮೂಲ್ ಅಧ್ಯಕ್ಷ ಡಿ.ಕೆ ಸುರೇಶ್ ಹೇಳಿದರು.

ಹಾರೋಹಳ್ಳಿ ಆರ್.ಎಚ್.ಎಸ್ ವಿದ್ಯಾಸಂಸ್ಥೆ ಆವರಣದಲ್ಲಿ ಬೆಂಗಳೂರು ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ವತಿಯಿಂದ ಕೆಸಿಸಿ ಬೆಳೆಸಾಲ ಮತ್ತು ಸ್ತ್ರೀಶಕ್ತಿ ಸ್ವ-ಸಹಾಯ ಸಂಘಗಳ ಸಾಲ ಹಾಗೂ ಹಸು ಸಾಕಾಣಿಕೆ ಸಾಲ ವಿತರಣೆ ಸಮಾರಂಭದಲ್ಲಿ ಮಾತನಾಡಿದರು.

ತಾಲ್ಲೂಕಿನಲ್ಲಿ 90 ಲಕ್ಷ ಲೀಟರ್ ಹಾಲು ಉತ್ಪಾದನೆಯಾಗುತ್ತಿದ್ದು ಮುಂದಿನ ದಿನಗಳಲ್ಲಿ 2ಲಕ್ಷ ಲೀಟರ್ ಹಾಲು ಉತ್ಪಾದನೆ ಗುರಿಯಿದೆ. ಹಾಲಿನಿಂದ ಆದಾಯ ಬಂದರೆ ಆರ್ಥಿಕ ಪರಿಸ್ಥಿತಿ ಸುಧಾರಣೆಯಾಗಲಿದೆ. ಬೆಂಗಳೂರು ದಕ್ಷಿಣ ಜಿಲ್ಲೆ ಎಂದು ನಾಮಕರಣ ಮಾಡಿದ ನಂತರ ಆಸ್ತಿಗೆ ಹೆಚ್ಚು ಬೆಲೆ ಬಂದಿದೆ ಎಂದರು. ಶಾಸಕ ಇಟ್ಬಾಲ್ ಹುಸೇನ್ ಮಾತನಾಡಿ, ಆರ್ಥಿಕವಾಗಿ ಮುಂದುವರಿಯಲು ಸಾಲ ನೀಡುತ್ತಿದ್ದು ಅಂದಾಜು ಶೇ.98ರಷ್ಟು ಮರುಪಾವತಿ ಮಾಡಲಾಗುತ್ತಿದೆ. ಮೆಟ್ರೊ ಪ್ರಸ್ತಾವ, ಇಎಸ್‌ಐ ಆಸ್ಪತ್ರೆ, ಅಗ್ನಿಶಾಮಕ ಠಾಣೆ, ಮೊರಾರ್ಜಿ ದೇಸಾಯಿ ಶಾಲೆ ಹಾಗೂ ನಾಲ್ಕು ಕೆಪಿಎಸ್ ಶಾಲೆಗಳಿಗೆ ಚಾಲನೆ ನೀಡಲಾಗುವುದು ಎಂದರು.



> **5 ಲಕ್ಷದವರೆಗೆ ಶೂನ್ಯ ಬಡ್ಡಿಯಲ್ಲಿ ಸಾಲ ಕೊಡಲಾಗುವುದು. ಎರಡು ಹಸು ಖರೀದಿ ಮಾಡಲು 1.80ಲಕ್ಷ ಸಾಲ ನೀಡಲಾಗುವುದು. ಬ್ಯಾಂಕ್‌ನಿಂದ ಗ್ರಾಹಕರಿಗೆ ಅನುಕೂಲ ಕಲ್ಪಿಸುವ ಗೂಗಲ್ ಪೇ, ಫೋನ್ ಪೇ ಸೌಲಭ್ಯಕ್ಕೆ ಚಾಲನೆ ನೀಡಲಾಗುತ್ತಿದೆ ಎಂದರುವಿಧಾನ ಪರಿಷತ್ ಸದಸ್ಯ ಎಸ್. ರವಿ ಮಾತನಾಡಿ, 5 ಲಕ್ಷದವರೆಗೆ ಶೂನ್ಯ ಬಡ್ಡಿಯಲ್ಲಿ ಸಾಲ ಕೊಡಲಾಗುವುದು. ಎರಡು ಹಸು ಖರೀದಿ ಮಾಡಲು 1.80ಲಕ್ಷ ಸಾಲ ನೀಡಲಾಗುವುದು. ಬ್ಯಾಂಕ್‌ನಿಂದ ಗ್ರಾಹಕರಿಗೆ ಅನುಕೂಲ ಕಲ್ಪಿಸುವ ಗೂಗಲ್ ಪೇ. ಫೋನ್ ಪೇ ಸೌಲಭ್ಯಕ್ಕೆ ಚಾಲನೆ ನೀಡಲಾಗುತ್ತಿದೆ ಎಂದರು**
>
> **ವಿಧಾನ ಪರಿಷತ್ ಸದಸ್ಯ ಎಸ್.ರವಿ**

# ಧರ್ಮಸ್ಥಳದ ವಿರುದ್ಧ ಷಡ್ಯಂತ್ರ ಖಂಡಿಸಿ ಪ್ರತಿಭಟನೆ

• ಉದಯವಾಹಿನಿ ಮೈಸೂರು.

ಶ್ರೀಕ್ಷೇತ್ರ ಧರ್ಮಸ್ಥಳ, ಧರ್ಮಾಧಿಕಾರಿ ಡಾ.ಡಿ.ವೀರೇಂದ್ರ ಹೆಗ್ಗಡೆ ವಿರುದ್ಧ ಅಪಪ್ರಚಾರ, ಜೈನರ ಬಗ್ಗೆ ನಡೆಯುತ್ತಿರುವ ಷಡ್ಯಂತ್ರ ಖಂಡಿಸಿ ಶ್ರೀದಿಗಂಬರ ಜೈನ ಸಮಾಜದ ವತಿಯಿಂದ ಗಾಂಧಿವೃತ್ತದಲ್ಲಿ ಮೌನ ಪ್ರತಿಭಟನೆ ನಡೆಸಲಾಯಿತು. ಗಾಂಧಿಪ್ರತಿಮೆ ಎದುರು 108 ಆಚಾರ್ಯ ಶ್ರೀ ಪುಣ್ಯಸಾಗರ ಮುನಿ ಮಹಾರಾಜ ಪಾವನ ಸಾನ್ನಿಧ್ಯದಲ್ಲಿ ಜಮಾಯಿಸಿದ ಪ್ರತಿಭಟನಾಕಾರರು ಅಹಿಂಸಾ ಪರಮೋಧರ್ಮ, ಸಾಮಾಜಿಕ ಜಾಲತಾಣಗಳಿಗೆ ಕಡಿವಾಣ ಹಾಕಿ, ಶ್ರೀ ಕ್ಷೇತ್ರಕ್ಕಾಗಿ ಬದ್ಧ, ತ್ಯಾಗಕ್ಕೂ ಸಿದ್ಧ, ಡಾ.ವೀರೇಂದ್ರ ಹೆಗ್ಗಡೆ ಅವರೊಂದಿಗೆ ನಾವಿದ್ದೇವೆ, ಜೈನಧರ್ಮದ ಬಗ್ಗೆ ಅಪಪ್ರಚಾರ ನಿಲ್ಲಿಸಿ ನಿಲ್ಲಿಸಿ ಮೊದಲಾದ ಭಿತ್ತಿಫಲಕಗಳನ್ನು ಹಿಡಿದು ಗಮನ ಸೆಳೆದರು.

ಈ ಸಂದರ್ಭದಲ್ಲಿ ಮಾತನಾಡಿದ ಹಿರಿಯ ವಕೀಲ ಎಂ.ಡಿ.ಹರೀಶ್ ಕುಮಾರ್ ಹೆಗ್ಗಡೆ, ಧರ್ಮಸ್ಥಳದ ಮತ್ತು ಜೈನ ಸಮಾಜದ ಬಗ್ಗೆ ಅಪಪ್ರಚಾರ ಮಾಡುವುದಕ್ಕಾಗಿ ಒಂದು ತಂಡ ಷಡ್ಯಂತ್ರ ರೂಪಿಸಿ ಕೆಲಸ ಮಾಡುತ್ತಿದೆ. ಧರ್ಮಸ್ಥಳದಲ್ಲಿ ನಡೆದಿರುವ ಯಾವುದೇ ಪ್ರಕರಣದ ಬಗ್ಗೆ ತನಿಖೆ ನಡೆಸಲು ನಮ್ಮದೇನೂ ಅಭ್ಯಂತರವಿಲ್ಲ. ತಪ್ಪು ಯಾರೇ ಮಾಡಿದ್ದರೂ ಶಿಕ್ಷೆಗೆ ಒಳಪಡಿಸಲಿ. ವಿನಾಕಾರಣ ಧರ್ಮಸ್ಥಳದ ಮತ್ತು ಧರ್ಮಾಧಿಕಾರಿಗಳ ಬಗ್ಗೆ ಇಲ್ಲಸಲ್ಲದ ಮಾತುಗಳನ್ನಾಡುತ್ತಿರುವುದು ಸರಿಯಲ್ಲ ಎಂದು ಕಿಡಿ ಕಾರಿದರು.

ಸಾಮಾಜಿಕ ಜಾಲತಾಣಗಳಲ್ಲಿ ಧರ್ಮಾಧಿಕಾರಿಗಳ, ಜೈನ ಸಮುದಾಯದ ಮೇಲೆ ಆಕ್ಷೇಪಾರ್ಹ, ನಿಂದನೆಯ ಮಾತುಗಳನ್ನಾಡುವುದನ್ನು ತಡೆಯಬೇಕು. ಜೈನರು ಶಾಂತಿಪ್ರಿಯರು. ಬುದ್ಧನ ಅಹಿಂಸಾ ಮಾರ್ಗದಲ್ಲಿ ನಡೆಯುವವರಾಗಿದ್ದಾರೆ. ಕೆಲವರು ಧರ್ಮದ ಮೇಲೆ ಅಪನಂಬಿಕೆ ಮೂಡಿಸುವ ರೀತಿಯಲ್ಲಿ ಸುಳ್ಳು ಸುಳ್ಳು ವಿಚಾರ ಹರಡುತ್ತಿದ್ದಾರೆ ಎಂದು ಹೇಳಿದರು.


ಉದಯವಾಹಿನಿ ಚಿತ್ರ

# ಆ.18 ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಬಲಗೈ ಸಮುದಾಯದಿಂದ ಪ್ರತಿಭಟನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ ಚಾಮರಾಜನಗರ,

ನ್ಯಾ.ನಾಗಮೋಹನದಾಸ್ ಆಯೋಗ ಸಲ್ಲಿಸಿರುವ ವರದಿ ಅವೈಜ್ಞಾನಿಕವಾಗಿದ್ದು, ಈ ವರದಿಯನ್ನು ಸರ್ಕಾರ ಯಥವತ್ ಜಾರಿಗೊಳಿಸದಂತೆ ಆಗ್ರಹಿಸಿ ಆ.18 ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಬಲಗೈ ಸಮುದಾಯದಿಂದ ಬೃಹತ್ ಪ್ರತಿಭಟನೆ ನಡೆಸಲಾಗುತ್ತದೆ ಎಂದು ರಾಜ್ಯ ಛಲವಾದಿ ಮಹಾಸಭಾದ ರಾಜ್ಯ ಉಪಾಧ್ಯಕ್ಷ ಅಣಗಳ್ಳಿ ಬಸವರಾಜು ತಿಳಿಸಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಗ್ಗೆ 10 ಗಂಟೆಗೆ ಪ್ರತಿಭಟನೆ ಬಲಗೈ ಸಮಾಜದ ಮುಖಂಡರುಗಳ ನೇತೃತ್ವದಲ್ಲಿ ಪ್ರತಿಭಟನಾ ಧರಣಿ ನಡೆಯಲಿದ್ದು ಜಿಲ್ಲೆಯಿಂದ ಒಂದು ಸಾವಿರಕ್ಕೂ ಹೆಚ್ಚಿನ ಸಂಖ್ಯೆಯಲ್ಲಿ ಜನಾಂಗದವರು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು. ಅಲ್ಲದೇ ಜಾತಿಯಲ್ಲದ ಆದಿಕರ್ನಾಟಕ, ಛಲವಾದಿ, ಆದಿದ್ರಾವಿಡ ಜನಾಂಗಗಳಿಗೆ ಶೇ.1 ರಷ್ಟು ಮೀಸಲಾತಿ ನೀಡಲಾಗಿದೆ. ಅಲ್ಲದೇ ಬಲಗೈ ಸಮುದಾಯಕ್ಕೆ ಸೇರಬೇಕಾದ ಅನೇಕ ಜಾತಿಗಳನ್ನು ಎಡಗೈ ಸಮುದಾಯಕ್ಕೆ ಸೇರಿಸಿ ಅನ್ಯಾಯ ಮಾಡಲಾಗಿದೆ ಎಂದು ಬಸವರಾಜು ಆರೋಪಿಸಿದರು. ಅಲ್ಲದೇ ಮಾದಿಗ ಹೋರಾಟ ಸಮಿತಿಯ ಭಾಸ್ಕರ್‌ಪ್ರಸಾದ್ ಅವರು ಹೋರಾಟದ ನೆಪದಲ್ಲಿ ನಮ್ಮ ಸಮಾಜದ ಸಚಿವರು, ಸ್ವಾಮೀಜಿಗಳನ್ನು ನಿಂದಿಸುವುದು ಅವಮಾನಕಾರಿ ಹೇಳಿಕೆ ನೀಡುಮದನ್ನು ಛಲವಾದಿ ಮಹಾಸಭಾ ತೀವ್ರವಾಗಿ ಖಂಡಿಸುತ್ತದೆ. ಜನಸಂಖ್ಯೆ ಆಧಾರಿತ ಮೀಸಲಾತಿ ವರ್ಗೀಕರಣ ಮಾಡಲಿ ಎಂದು ಸರ್ಕಾರವನ್ನು ಒತ್ತಾಯಿಸಲಿ. ಆದರೆ ಸಮುದಾಯ ಮುಖಂಡರ ವಿರುದ್ಧ ಮಾತನಾಡುವುದನ್ನು ನಿಲ್ಲಿಸಬೇಕು ಎಂದು ಅಣಗಳ್ಳಿ ಬಸವರಾಜು ಎಚ್ಚರಿಸಿದರು.

> **ನ್ಯಾ. ನಾಗಮೋಹನದಾಸ್ ವರದಿ ಕುರಿತು ಆ.19ಕ್ಕೆ ಸಚಿವ ಸಂಪುಟದ ಸಭೆಯಲ್ಲಿ ಚರ್ಚೆಯಾಗಲಿದ್ದು, ಸಂಪುಟದ ಸಚಿವರು ಸಭೆಯಲ್ಲಿ ಯಾವುದೇ ಕಾರಣಕ್ಕೂ ವರದಿಯನ್ನು ಅಂಗೀಕರಿಸಬಾರದು. ರಾಜ್ಯದಲ್ಲಿ ಪರಿಶಿಷ್ಟ ಸಮುದಾಯ 1.47 ಕೋಟಿ ಜನಸಂಖ್ಯೆ ಹೊಂದಿದ್ದು ಸಮೀಕ್ಷೆಯಲ್ಲಿ 1.05 ಕೋಟಿ ತೋರಿಸಲಾಗಿದೆ. ಹಾಗಾದರೆ ಉಳಿದ 40 ಲಕ್ಷ ಜನಸಂಖ್ಯೆ ಎಲ್ಲಿ ಹೋಯಿತು ಎಂದು ಪ್ರಶ್ನಿಸಿದ ಬಸವರಾಜು ಅವರು, ನ್ಯಾ. ನಾಗಮೋಹನದಾಸ್ ಆಯೋಗ ನಡೆಸಿದ ಸಮೀಕ್ಷೆಯಲ್ಲಿ ಬಲಗೈ ಜನಾಂಗದ 4,74,954 ಜನಸಂಖ್ಯೆಯನ್ನು ಎಡಗೈ ಜನಾಂಗಕ್ಕೆ ಸೇರಿಸಲಾಗಿದೆ ಎಂದು ತಿಳಿಸಿದರು.**

# ಗುಡುಮಾದನಹಳ್ಳಿ ಬಳಿ 20 ಎಕರೆ ನಿಮ್ಹಾನ್ಸ್‌ಗೆ ಮೀಸಲು

## ಮೆಡಿಕಲ್ ಕಾಲೇಜಿಗೆ ಶೀಘ್ರದಲ್ಲಿ ಡಿಸಿಯಿಂದ ಹಸ್ತಾಂತರ ; ಬಳಿಕ ಟೆಂಡರ್ ಪ್ರಕ್ರಿಯೆ

• ಉದಯವಾಹಿನಿ ಮೈಸೂರು

ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆ (ನಿಮ್ಹಾನ್ಸ್) ಸ್ಥಾಪನೆ ಮಾಡಲು ಮೈಸೂರು ತಾಲ್ಲೂಕಿನ ಗುಡುಮಾದನಹಳ್ಳಿ ಬಳಿ ಜಿಲ್ಲಾಡಳಿತ 20 ಎಕರೆ ಜಾಗ ಗುರುತಿಸಿದ್ದು, ಮೆಡಿಕಲ್ ಕಾಲೇಜಿಗೆ ಶೀಘ್ರವೇ ಡಿಸಿ ಹಸ್ತಾಂತರ ಮಾಡುವ ನಿರೀಕ್ಷೆ ಇದೆ. ಬಳಿಕ ಬೆಂಗಳೂರಿನಲ್ಲಿ ಟೆಂಡರ್ ಪ್ರಕ್ರಿಯೆ ಶುರುವಾಗಲಿದೆ.

ರಾಜಧಾನಿ ಬೆಂಗಳೂರಿನಲ್ಲಿ ಕರ್ನಾಟಕದ ಏಕೈಕ ಸರಕಾರಿ ಸ್ವಾಮ್ಯದ ನಿಮ್ಹಾನ್ಸ್ ಸಂಸ್ಥೆ ಇದೆ. ಇಲ್ಲಿಗೆ ಕೇವಲ ರಾಜ್ಯವಷ್ಟೇ ಅಲ್ಲದೆ ಹೊರರಾಜ್ಯಗಳಿಂದಲೂ ರೋಗಿಗಳು ಚಿಕಿತ್ಸೆಗೆ ಬರುತ್ತಾರೆ. ಹೀಗಾಗಿ ಸದಾ ರೋಗಿಗಳಿಂದಲೇ ತುಂಬಿ ತುಳುಕುವ ನಿಮ್ಹಾನ್ಸ್ ಮೇಲೆ ಹೆಚ್ಚಿನ ಒತ್ತಡವಿದೆ. ಹೊರ ಜಿಲ್ಲೆಯವರು ಆಪ್ತ ಸಮಾಲೋಚನೆಗೂ ತಿಂಗಳುಗಟ್ಟಲೆ ಕಾಯಬೇಕು. ತುರ್ತು ಚಿಕಿತ್ಸೆ ಬಿಟ್ಟರೆ ಸಾಮಾನ್ಯ ತಪಾಸಣೆಗೂ ವಾರಗಟ್ಟಲೆ ಅಲೆಯಬೇಕು.

ಹೀಗಾಗಿ ಮೈಸೂರಿಗೆ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆ ಬೇಕೆಂಬ ಕೂಗು ದಶಕಗಳಿಂದಲೂ ಕೇಳಿಬರುತ್ತಲೇ ಇತ್ತು. ಹಾಗಾಗಿ ಮಾರ್ಚ್ ಬಜೆಟ್‌ನಲ್ಲಿ ಸರಕಾರ 100 ಕೋಟಿ ರೂ. ವೆಚ್ಚದಲ್ಲಿ ಮೈಸೂರು ವೈದ್ಯಕೀಯ ಕಾಲೇಜು ವ್ಯಾಪ್ತಿಯಲ್ಲಿ ನಿಮ್ಹಾನ್ಸ್ ಸ್ಥಾಪನೆಗೆ ಅಸ್ತು ಎಂದಿತ್ತು.

ಇದೀಗ ಬಜೆಟ್‌ನಲ್ಲಿ ಘೋಷಣೆಯಾದ ಐದು ತಿಂಗಳ ಬಳಿಕ ನಿಮ್ಹಾನ್ಸ್ ಸ್ಥಾಪನೆಗೆ ಜಿಲ್ಲಾಡಳಿತ ಸ್ಥಳ ನಿಗದಿ ಮಾಡಿದೆ.

**ಎಲ್ಲಿ ಜಾಗ ಗುರುತು?:** ಮೈಸೂರು ತಾಲ್ಲೂಕಿನ, ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿನಿಧಿಸುವ ಗುಡುಮಾದನಹಳ್ಳಿ ಬಳಿ 20 ಎಕರೆ ಜಾಗವನ್ನು ನಿಮ್ಹಾನ್ಸ್ ನಿರ್ಮಾಣಕ್ಕೆ ಗುರುತಿಸಲಾಗಿದೆ. ಈಗಾಗಲೇ ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತರೆಡ್ಡಿ, ಮೈಸೂರು ಮೆಡಿಕಲ್ ಕಾಲೇಜಿನ ಡೀನ್ ಡಾ.ಕೆ.ಆರ್.ದ್ರಾಕ್ಷಾಯಿಣಿ ಹಾಗೂ ಇಂಜಿನಿಯರ್‌ಗಳು ಸ್ಥಳ ಪರಿಶೀಲನೆ ನಡೆಸಿದ್ದಾರೆ. ಜಾಗದ ಮಣ್ಣಿನ ಪರೀಕ್ಷೆಯೂ ಆಗಿದೆ. ಸ್ಥಳಕ್ಕೆ ಸಂಬಂಧಿಸಿದಂತೆ ಯಾವುದೇ ಕಾನೂನು ತೊಡಕುಗಳಿಲ್ಲದ ಕಾರಣ ಜಿಲ್ಲಾಡಳಿತ ಸರಕಾರದ ಒಪ್ಪಿಗೆಗೆ ಕಳುಹಿಸಿಕೊಟ್ಟಿದೆ. ಅಲ್ಲಿಂದ ಅನುಮೋದನೆ ಸಿಕ್ಕ ಕೂಡಲೇ ಮೈಸೂರು ಮೆಡಿಕಲ್ ಕಾಲೇಜಿಗೆ ಡಿಸಿ ಜಾಗವನ್ನು ಹಸ್ತಾಂತರಿಸಲಿದ್ದಾರೆ. ಬಳಿಕ ಟೆಂಡರ್ ಪ್ರಕ್ರಿಯೆ ನಡೆಯಲಿದ್ದು, ಕಾಮಗಾರಿ ಈ ವರ್ಷದೊಳಗೆ ಆರಂಭಗೊಳ್ಳುವ ನಿರೀಕ್ಷೆ ಇದೆ.

ಮೈಸೂರಿನ ಗುಡುಮಾದನಹಳ್ಳಿ ಬಳಿ 20 ಎಕರೆ ಜಾಗದಲ್ಲಿ ನಿಮ್ಹಾನ್ಸ್ ನಿರ್ಮಾಣ ಮಾಡಲು ಉದ್ದೇಶಿಸಲಾಗಿದೆ. ಸರಕಾರ ಅನುಮತಿ ನೀಡಿದ ಕೂಡಲೇ ಡಿಸಿ ಜಾಗವನ್ನು ಹಸ್ತಾಂತರ ಮಾಡಲಿದ್ದಾರೆ. ಬಳಿಕ ಟೆಂಡರ್ ಪ್ರಕ್ರಿಯೆ ಶುರುವಾಗಲಿದೆ




**ನಿಮ್ಹಾನ್ಸ್ ಸ್ಥಾಪನೆಗೆ ಜಾಗ ಗುರುತು**

### ಏನೆಲ್ಲಾ ಪ್ರಯೋಜನ?

- ದಿನದ 24 ಗಂಟೆಯೂ ಕಾರ್ಯ ನಿರ್ವಹಿಸುವ ತುರ್ತು ಚಿಕಿತ್ಸಾ ಘಟಕ
- ಆಧುನಿಕ ಪ್ರಯೋಗಾಲಯಗಳಿಂದ ಹೊಸ ಸಂಶೋಧನೆ
- ಮಾನಸಿಕ ಮತ್ತು ನರವಿಜ್ಞಾನ ಸಮಸ್ಯೆಗಳಿಗೆ ಪರಿಹಾರ
- ಬೆಂಗಳೂರಿಗೆ ಹೋಗುವುದು ತಪ್ಪುತ್ತದೆ.
- ವೈದ್ಯಕೀಯ ವಿದ್ಯಾರ್ಥಿಗಳ ಕಲಿಕೆಗೆ ನೆರವು

### ಏನಿದು ನಿಮ್ಹಾನ್ಸ್

ತಲೆಗೆ ಸಂಬಂಧಪಟ್ಟ ಸಮಗ್ರ ಚಿಕಿತ್ಸಾ ವಿಧಾನವನ್ನು ಇಲ್ಲಿ ಕಾಣಬಹುದು. ನಿಮ್ಹಾನ್ಸ್‌ನಲ್ಲಿ ನರರೋಗಶಾಸ್ತ್ರ ನರವಿಜ್ಞಾನ, ನರಶಸ್ತ್ರಚಿಕಿತ್ರ, ನ್ಯುರೋವೈರಾಲಜಿ, ಎಪಿಡೆಮಿಯಾಲಜಿ ಹಾಗೂ ಇತರೆ ಪ್ರಮುಖ ಶಸ್ತ್ರಚಿಕಿತ್ಸೆಗಳು ಸಿಗುತ್ತದೆ. ಅತ್ಯುತ್ತಮ ಔಷಧೋಪಚಾರ, ಸಂಶೋಧನೆ ಹಾಗೂ ತರಬೇತಿ ನೀಡಲು ಸಹಕಾರಿಯಾಗುತ್ತದೆ. ಆಧುನಿಕ, ಪಾರಂಪರಿಕ ಪದ್ಧತಿಯಲ್ಲಿ ಚಿಕಿತ್ಸೆ ನೀಡಲಾಗುತ್ತದೆ. ಮಕ್ಕಳು ಮತ್ತು ಹರಿಹರೆಯದವರಿಗೆ ಮನೋ ವೈದ್ಯಕೀಯ ಸೇವೆಯೂ ಇಲ್ಲಿ ಲಭಿಸಲಿದೆ.

## ಅಂತರಾಳದಿಂದ.. EDITORIAL

# ಸುವರ್ಣ ಯುಗದಿಂದ ವರ್ಣ ಯುಗದೆಡೆಗೆ


ಕೆಂಪು ಕೋಟೆಯಿಂದ ಪ್ರಧಾನಿ ಮೋದಿಯವರು ಮತ್ತೊಮ್ಮೆ 'ಸಮೃದ್ಧ ಸ್ವಾವಲಂಬಿ ಭಾರತದ ಸಂಕಲ್ಪವನ್ನು ತೊಟ್ಟಿದ್ದಾರೆ. ಸತತ 12ನೇ ಬಾರಿಗೆ ಸ್ವಾತಂತ್ರ್ಯೋತ್ಸವ ಭಾಷಣ ಮಾಡುವ ಮೂಲಕ ಮೋದಿಯವರು ಇಂದಿರಾಗಾಂಧಿಯವರ ದಾಖಲೆಯನ್ನು ಮುರಿದಿದ್ದಾರೆ. ಇದೇ ಸಂದರ್ಭದಲ್ಲಿ ಭಾಷಣಗಳಿಂದ ದೇಶವನ್ನು ಕಟ್ಟಲು ಸಾಧ್ಯವಿಲ್ಲ ಎನ್ನುವುದನ್ನು ಕೂಡ ಅವರು ಈ ಮೂಲಕ ದೇಶಕ್ಕೆ ಮನವರಿಕೆ ಮಾಡಿಸಿದ್ದಾರೆ. 2014ರಲ್ಲಿ ಮೊದಲ ಬಾರಿಗೆ ಅವರು ಕೆಂಪು ಕೋಟೆಯಿಂದ ಮಾತನಾಡಿದಾಗ ಈ ದೇಶ ಅವರ ಭಾಷಣದ ಮೇಲೆ ಭರವಸೆಯಿಟ್ಟಿತ್ತು. ಮುಂದಿನ 10 ವರ್ಷಗಳಲ್ಲಿ ಭಾರತದ ಗತಿ ಬದಲಾಗುತ್ತದೆ ಎಂದೇ ಭಾವಿಸಿದ್ದರು. ಆದರೆ ಅಂದಿನ ಮತ್ತು ಇಂದಿನ ಭಾಷಣಗಳಲ್ಲಿ ಭಾರೀ ವ್ಯತ್ಯಾಸಗಳೇನೂ ಇಲ್ಲ. 2014ಕ್ಕೆ ಹೋಲಿಸಿದರೆ ಭಾರತ ಈ ಅವಧಿಯಲ್ಲಿ ಸಾಧಿಸಿದ್ದೇನು? ಎನ್ನುವ ಪ್ರಶ್ನೆ ಉತ್ತರವಿಲ್ಲದೆ ಉಳಿದೇ ಬಿಟ್ಟಿದೆ. ಭಾರತ ಆರ್ಥಿಕವಾಗಿ ಹಿಂದಕ್ಕೆ ಜಗ್ಗಲ್ಪಟ್ಟಿದೆ. ಅಮೆರಿಕದಂತಹ ಶ್ರೀಮಂತ ದೇಶಗಳು ಬಹಿರಂಗವಾಗಿಯೇ ಭಾರತಕ್ಕೆ ಬೆದರಿಕೆಗಳನ್ನು ಹಾಕುತ್ತಿವೆ. ಆಪರೇಷನ್ ಸಿಂಧೂರವನ್ನು ತನ್ನ ಸಾಧನೆಯಾಗಿ ಬಿಂಬಿಸಲು ಯತ್ನಿಸುತ್ತಿರುವ ಮೋದಿಯವರು, ಪಹಲ್ಗಾಮ್ ದಾಳಿಯ ಹಿಂದಿರುವ ಭದ್ರತಾ ವೈಫಲ್ಯವನ್ನು ಮುಚ್ಚಿಡಲು ಪ್ರಯತ್ನಿಸುತ್ತಿದ್ದಾರೆ. ದೇಶದ ಆರ್ಥಿಕತೆಯ ಕಾಲುಗಳನ್ನು ಜಿಎಸ್‌ಟಿಯಿಂದ ಬಂಧಿಸಿಟ್ಟಿರುವ ಪ್ರಧಾನಿ ಮೋದಿಯವರು, ಇದೀಗ ಅದರ ಸುಧಾರಣೆಯನ್ನೇ ದೇಶದ ಜನರಿಗೆ ನೀಡುವ ಉಡುಗೊರೆಯೆಂದು ಕೆಂಪುಕೋಟೆಯಲ್ಲಿ ನಿಂತು ನಂಬಿಸುತ್ತಿದ್ದಾರೆ. ಇದೇ ಸಂದರ್ಭದಲ್ಲಿ ವಿಕಸಿತ ಭಾರತವಾಗಲು ಈಗ ಇರುವ 6.5 ಜಿಡಿಪಿ ಬೆಳವಣಿಗೆಯಿಂದ ಸಾಧ್ಯವಿಲ್ಲ ಎನ್ನುವುದನ್ನು ಸ್ವತಃ ನೀತಿ ಆಯೋಗದ ಸಿಇಒ ಅವರೇ ಹೇಳುತ್ತಿದ್ದಾರೆ.ಇವೆಲ್ಲದರ ನಡುವೆ ದಲಿತರ ಮೇಲಿನ ದೌರ್ಜನ್ಯಗಳು ಹೆಚ್ಚುತ್ತಿವೆ. ಹಸಿವಿನ ಸೂಚ್ಯಂಕದಲ್ಲಿ ಹೆಚ್ಚಳವಾಗಿದೆ. ನಿರುದ್ಯೋಗಗಳು ಹೆಚ್ಚುತ್ತಿವೆ. ಸರಕಾರಕ್ಕೆ ತನ್ನ ವೈಫಲ್ಯಗಳನ್ನು ಮುಚ್ಚಿಹಾಕಲು ಧರ್ಮಗಳ ಹೆಸರಿನಲ್ಲಿ ರಾಜಕೀಯ ನಡೆಸುವುದು ಅನಿವಾರ್ಯವಾಗಿದೆ. ದೇಶ ಹಿಂಸೆಯ ಕಡೆಗೆ ಹೊರಳಿದೆ. ಗೋವಿನ ಹೆಸರಿನಲ್ಲಿ ಮನುಷ್ಯರನ್ನು ಗುಂಪುಗಳು ಥಳಿಸಿ ಕೊಂದು ಹಾಕುತ್ತಿವೆ. ಸ್ವಾತಂತ್ರ್ಯದ ದಿನ ದೇಶದ ಹಲವೆಡೆ ಮಾಂಸಾಹಾರ ನಿಷೇಧಿಸುವ ಪ್ರಯತ್ನ ನಡೆಯಿತು.

**ವಿಪರ್ಯಾಸವೆಂದರೆ, ಕೆಂಪು ಕೋಟೆಯಲ್ಲಿ ನಿಂತು ಸ್ವಾತಂತ್ರ್ಯೋತ್ಸವ ದಿನದಂದು ಪ್ರಧಾನಿ ಮೋದಿಯವರು ಯಾವ ಸಂಘಟನೆಯ ಹೆಸರನ್ನು ನೆನೆಯಲೂ ಬಾರದಿತ್ತೋ ಅದರ ಹೆಸರನ್ನು ಪ್ರಸ್ತಾಪಿಸಿ ಅದನ್ನು ದೇಶದ ಹೆಗ್ಗಳಿಕೆಯಾಗಿ ಘೋಷಿಸಿದ್ದು ಆರ್‌ಎಸ್‌ಎಸ್ ರಾಷ್ಟ್ರ ನಿರ್ಮಾಣದಲ್ಲಿ ತೊಡಗಿಕೊಂಡ ಬಹುದೊಡ್ಡ ಸರಕಾರೇತರ ಸಂಘಟನೆ ಎಂದು ತಮ್ಮ ಭಾಷಣದಲ್ಲಿ ಬಣ್ಣಿಸಿದ ಪ್ರಧಾನಿ ಮೋದಿ, ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಇತಿಹಾಸದ ಬಗ್ಗೆ ನನಗೆ ಹೆಮ್ಮೆಯಿದೆ ಎಂದು ಹೇಳಿದರು.**

ಯಾವ ದೇಶ ಹಸಿವಿಗಾಗಿ, ಅಪೌಷ್ಟಿಕತೆಗಾಗಿ ವಿಶ್ವದಲ್ಲೇ ಕುಖ್ಯಾತಿಯನ್ನು ಪಡೆದಿದೆಯೋ ಆ ದೇಶದಲ್ಲಿ ಆಹಾರದ ಹೆಸರಿನಲ್ಲಿ ನಿಷೇಧಗಳನ್ನು ಹೇರುವುದು 79ನೇ ಸ್ವಾತಂತ್ರ್ಯ ದಿನಾಚರಣೆಯ ಅತಿ ದೊಡ್ಡ ವಿಡಂಬನೆಯಾಗಿದೆ. ಒಂದೆಡೆ ಗೋಮಾಂಸ ರಫ್ತಿನಲ್ಲಿ ಭಾರತ ಮುಂಚೂಣಿಯಲ್ಲಿದೆ. ಇನ್ನೊಂದೆಡೆ ಭಾರತದ ಜನರನ್ನು ಪೌಷ್ಟಿಕ ಮಾಂಸಾಹಾರದಿಂದ ವಂಚಿಸಲಾಗುತ್ತಿದೆ. ಇದು ಜನರ ಆರೋಗ್ಯ ಮತ್ತು ಆರ್ಥಿಕತೆಯ ಮೇಲೆ ಏಕಕಾಲದಲ್ಲಿ ಪ್ರಹಾರಗಳನ್ನು ನೀಡುತ್ತಿದೆ. ರೈತರು ತಾವು ಸಾಕಿದ ಜಾನುವಾರುಗಳನ್ನು ಮಾರುವ ಹಕ್ಕುಗಳನ್ನು ಕಳೆದುಕೊಂಡಿದ್ದಾರೆ. ಮಣಿಪುರದಲ್ಲಿ ಹಿಂಸಾಚಾರ ಮುಂದುವರಿದಿದೆ. ಕಾಶ್ಮೀರದಲ್ಲಿ ಉಗ್ರರನ್ನು ನಿಯಂತ್ರಿಸಲು ಸರಕಾರ ವಿಫಲವಾಗಿದೆ. ಇದೇ ಸಂದರ್ಭದಲ್ಲಿ ಪ್ರಜಾಸತ್ತೆಯನ್ನು ಅಣಕಿಸುವಂತೆ ದೇಶಾದ್ಯಂತ ಮತಗಳ್ಳತನ ಸುದ್ದಿಯಲ್ಲಿದೆ. ಚುನಾವಣಾ ಆಯೋಗವೇ ಇದರಲ್ಲಿ ಶಾಮೀಲಾಗಿರುವುದು ಬೆಳಕಿಗೆ ಬರುತ್ತಿದೆ. ಬಿಹಾರದಲ್ಲಿ ಚುನಾವಣಾ ಆಯೋಗ ಮತ ಪರಿಷ್ಕರಣೆಯ ಹೆಸರಿನಲ್ಲೇ ಎಸಗಿರುವ ಭಾರೀ ವಂಚನೆಗಳು ಒಂದೊಂದಾಗಿ ಹೊರ ಬರುತ್ತಿವೆ. ಸುಪ್ರೀಂಕೋರ್ಟ್ ಕೂಡ ಈ ಬಗ್ಗೆ ತನ್ನ ಕಳವಳವನ್ನು ವ್ಯಕ್ತಪಡಿಸಿದೆ. ಪ್ರಧಾನಿ ಮೋದಿಯವರ ಕೆಂಪು ಕೋಟೆಯ ಭಾಷಣದಲ್ಲಿ ಇವೆಲ್ಲವುಗಳ ಬಗ್ಗೆ ಗಾಢ ಮೌನವಿತ್ತು. ಪ್ರಧಾನಿ ಮೋದಿಗೆ ಆರ್‌ಎಸ್‌ಎಸ್ ಇತಿಹಾಸದ ಬಗ್ಗೆ ಹೆಮ್ಮೆಯಿದೆ ಎನ್ನುವುದು ಅವರ ವೈಯಕ್ತಿಕ ಅರಿವು, ವಿವೇಕದ ದಿವಾಳಿತನಕ್ಕೆ ಮಾನದಂಡವಾಗಿದೆಯೇ ಹೊರತು, ಆರ್‌ಎಸ್‌ಎಸ್‌ನ ಹಿರಿಮೆಯೇನೂ ಅದರಲ್ಲಿ ಇಲ್ಲ. ಸ್ವತಂತ್ರ ಭಾರತದ ರೈತರ, ಕಾರ್ಮಿಕರ, ದಲಿತರ, ಮಹಿಳೆಯರ ಪರವಾಗಿ ಹೋರಾಟ ನಡೆಸಿದ ಯಾವುದೇ ಇತಿಹಾಸ ಆರ್‌ಎಸ್‌ಎಸ್‌ಗೆ ಇಲ್ಲ. ಕನಿಷ್ಠ ಸ್ವಾತಂತ್ರ್ಯ ಪೂರ್ವದಲ್ಲಿ ಬ್ರಿಟಿಷರ ವಿರುದ್ಧವಾಗಿ ಹೋರಾಡಿದ ಇತಿಹಾಸವಾದರೂ ಆರ್‌ಎಸ್‌ಎಸ್‌ನ ಹಿರಿಯರಿಗೆ ಇದೆಯೋ ಎಂದು ನೋಡಿದರೆ ಅಲ್ಲೂ ನಿರಾಸೆಯೇ ಆರ್‌ಎಸ್‌ಎಸ್‌ಗಾಗಿ ಮಣ್ಣು ಹೊತ್ತ ಅದರ ಹಿರಿಯ ಮುಖಂಡರಿಗೆ ಸ್ವಾತಂತ್ರ್ಯ ಹೋರಾಟದಲ್ಲಿ ಭಾಗವಹಿಸಿದ ಯಾವುದೇ ಹಿನ್ನೆಲೆಯಿಲ್ಲ. ಬದಲಿಗೆ, ಸಾವರ್ಕರ್ ಕಾಲಾಪಾನಿ ಶಿಕ್ಷೆಗೆ ಹೆದರಿ ಬ್ರಿಟಿಷರಿಗೆ ಕ್ಷಮಾಪಣಾ ಪತ್ರ ಬರೆದು ಬಿಡುಗಡೆಗೊಂಡರು.ಆ ಬಳಿಕ ಸ್ವಾತಂತ್ರ್ಯ ಹೋರಾಟದಿಂದ ದೂರ ಸರಿದು, ಬ್ರಿಟಿಷರು ಮಾಸಿಕವಾಗಿ ನೀಡುತ್ತಿದ್ದ ಪಿಂಚಣಿಯಿಂದ ಜೀವನ ಸಾಗಿಸಿದರು. ನೇತಾಜಿಯವರು ತಮ್ಮಸೇನೆಗೆ ಸೇರಲು ಭಾರತದ ಯುವಕರಿಗೆ ಕರೆಕೊಟ್ಟಾಗ ಸಾವರ್ಕರ್ ಅದಕ್ಕೆ ಸೇರದಂತೆ ತಡೆದರು. ಆರ್‌ಎಸ್‌ಎಸ್ ಸಿದ್ಧಾಂತದ ತಳಹದಿಯಾಗಿದ್ದ ಗೋಳ್ವಾಲ್ಕರ್ ಅವರು ಜಾತಿ ವ್ಯವಸ್ಥೆಯನ್ನು ಕೊನೆಯವರೆಗೂ ಎತ್ತಿ ಹಿಡಿದಿದ್ದರು. ಭಾರತದ ಸಂವಿಧಾನದ ಬಗ್ಗೆ ಭಿನ್ನಾಭಿಪ್ರಾಯವನ್ನು ಹೊಂದಿದ್ದರು.

ಆರ್‌ಎಸ್‌ಎಸ್ ಕಚೇರಿಗಳಲ್ಲಿ ಇತ್ತೀಚಿನವರೆಗೂ ರಾಷ್ಟ್ರಧ್ವಜವನ್ನು ಹಾರಿಸುತ್ತಿರಲಿಲ್ಲ. 2001 ಜ.26ರಂದು ರಾಷ್ಟ್ರಪ್ರೇಮಿ ಯುವದಳದ ಮೂವರು ಕಾರ್ಯಕರ್ತರು ನಾಗಪುರದ ಆರ್‌ಎಸ್‌ಎಸ್ ಮುಖ್ಯ ಕಚೇರಿಗೆ ಭೇಟಿ ನೀಡಿ, ಕಚೇರಿಯ ಮುಂದೆ ತ್ರಿವರ್ಣ ಧ್ವಜವನ್ನು ಹಾರಿಸಿದರು. ಅದಕ್ಕಾಗಿ ಆ ಮೂವರು ಯುವಕರ ವಿರುದ್ಧ ಆರ್‌ಎಸ್‌ಎಸ್ ದೂರು ದಾಖಲಿಸಿತು.

## ರಾಮಾಯಣ



**ಶ್ರೀರಾಮನು ಅರಣ್ಯದಲ್ಲಿದ್ದ ಋಷಿಗಳನ್ನು ಸಂದರ್ಶಿಸಿದ್ದು**

• ಹಿಂದಿನ ಸಂಚಿಕೆಯಿಂದ **116 ನೆಯ ಅಧ್ಯಾಯ**

ಅದೇನು ಕಾರಣವೆಂದರೆ: ಈ ವನದಲ್ಲಿ ಮನುಷ್ಯರನ್ನು ಭಕ್ಷಣಮಾಡುವ ರಾಕ್ಷಸರಿರುವರು. ಅವರು ನಾನಾರೂಪಗಳನ್ನು ಧರಿಸಿರುವರು. ಮಾರ್ಗಗಳಲ್ಲಿ ಎಲ್ಲಿ ನೋಡಿದರೂ ಆ ರಾಕ್ಷಸರು ಕೊಂದ ಪ್ರಾಣಿಗಳ ರಕ್ತವು ಚೆಲ್ಲಲ್ಪಟ್ಟಿರುವುದು. ಅದಲ್ಲದೆ ಈ ವನದಲ್ಲಿ ಅನೇಕ ಸರ್ಪಗಳುಂಟು. ಅಶುಚಿಯಾದವರೂ ಕೊಬ್ಬಿದವರೂ ರಾಕ್ಷಸರಿಂದಲೂ ಸರ್ಪಗಳಿಂದಲೂ ಕೊಲ್ಲಲ್ಪಡುವರು. ನೀವು ಅಂಥ ದುಷ್ಟಪ್ರಾಣಿಗಳನ್ನು ವಿಚಾರಿಸಿಕೊಂಡು ಸಂಚಾರಮಾಡಬೇಕು. ನಮ್ಮ ಆಶ್ರಮದಲ್ಲಿರುವ ಋಷಿಗಳು ಕಂದಮೂಲಫಲಗಳನ್ನು ತರುವುದಕ್ಕೆ ಹೋಗುವ ಮಾರ್ಗವಿದು ಎಂದು ವನದಲ್ಲಿ ಸಂಚಾರಮಾಡುವ ದಾರಿಗಳನ್ನು ತೋರಿಸಿ ಆಶೀರ್ವಾದಗಳನ್ನು ಮಾಡಿದರು. ಶ್ರೀರಾಮನು ಆಯಷಿಗಳಿಗೆ ಕೈಮುಗಿದು ನಮಸ್ಕಾರವನ್ನು ಮಾಡಿ ಸೀತಾಲಕ್ಷ್ಮಣ ಸಮೇತನಾಗಿ ಸೂರನು ಅಂತರಿಕ್ಷಮಾರ್ಗದಲ್ಲಿ ಮೇಘ ಮಂಡಲವನ್ನು ಪ್ರವೇಶಿಸುವಂತೆ ಅತ್ಯಂತ ಆನಂದದಿಂದ ದಂಡಕಾರಣ್ಯವನ್ನು ಪ್ರವೇಶಿಸಿದನು. ಇಂತು ಉತ್ತಮ ಕ್ಷತ್ರಿಯ ಕುಲೋದ್ಭವ, ಬಿರುದೆಂತೆಂಬರ ಗಂಡ, ಗಜಬೇಂಟೆಕಾರ, ಸಮಸ್ತ ಕತ್ರುಸಂಘ ಜೀಮೂತ ಜಂಝಾಮಾರುತ, ಪ್ರತ್ಯರ್ಥಿ ಪೃಥ್ವಿಪತಿ ವನ ದಾನಾನ ಸಮಸ್ಯೆ, ವಿದ್ವಜ್ಜನ ಸಮುದಾಯ ಕಲ್ಪಭೂಜಾತ, ಆಶ್ರಿತಜನ ಸುರಧೇನು, ಕಾಮಿನೀಜನ ನೂತನ ಪಂಚಬಾಣ, ಚೌಪಸ್ವಿ ಕಲಾಪ್ರವೀಣ, ಮಹಿಷಾಪುರವರಾಧೀಶ, ಚಾಮರಾಜವಂಶೋದ್ಧಾರಕ, ತಿಮ್ಮರಾಜ ತನೂಜ ನರಸರಾಜ ಗರ್ಭದುಗ್ಧ ಸಿಂಧು ಸುಧಾಕರ, ಶ್ರೀಲಕ್ಷ್ಮೀಕಾಂತ ಪಾದಾರ ವಿಂದ ದ್ವಂದ್ವನಿಷ್ಯಂದಾನಂದ ಮಕರಂದ ಬಿಂದುಸಂದೋಹಾಸ್ವಾದನ ನಿರ್ಮಲೀಕೃತಾಂತಃಕರಣ, ತ್ರಿಣಯನೇಶ್ವರ ಸದ್ಭಕ್ತಿಯುಕ್ತ ಮಹಾಬಲಾಡಲಾವಾಸ, ಶ್ರೀಚಾಮುಂಡಿ ಕಾಂಬಾ ಸದ್ಭಕ್ತಿ ಮಂಡಿತರಾದ ಶ್ರೀಚಾಮರಾಜ ಒಡೆಯರವರಿಂದ ಲೋಕೋಪಕಾರಾರ್ಥವಾಗಿ ಬುಧಜನಸಂಮತಿ ಯಿಂದ ಕರ್ಣಾಟಕಭಾಷಾವಚನ ರಚನೆ ಯಾದ ಶ್ರೀಚಾಮರಾಜೋಕ್ತಿ ವಿಲಾಸವೆಂಬ ಕನ್ನಡ ರಾಮಾಯಣದಲ್ಲಿ

**ಅಯೋಧ್ಯಾ ಕಾಂಡವು ಸಮಾಪ್ತವಾಯಿತು**

ಸೀತಾದೇನೀಯುತಂ ವೀರಂ ಸರಭೂಷಣಭೂಷಿತಮ್ । ಸೀತಾಪತಿಂ ಹರಿಂ ಧ್ಯಾಯೇದಯೋಧ್ಯಾಕಾಂಡ ಉತ್ತಮೇ । ಶ್ರೀರಾಮಚಂದ್ರಾಯ ನಮಃ

**ಅರಣ್ಯ ಕಾಂಡ**

ಈ ಪ್ರಕಾರದಲ್ಲಿ ಶ್ರೀರಾಮನು ನಿತ್ಯಾನಂದಸ್ವರೂಪನಾಗಿ ಸೀತಾಲಕ್ಷ್ಮಣರನ್ನು ಕೂಡಿಕೊಂಡು ದಂಡಕಾರಣ್ಯವನ್ನು ಪ್ರವೇಶಿಸಿ ಅಲ್ಲಿ ನಿತ್ಯವಾಸಿಗಳಾಗಿದ್ದ ಮಹಾತ್ಮರಾದ ಋಷಿಗಳ ಆಶ್ರಮವನ್ನು ಕಂಡನು. ಅದು ಅಂತರಿಕ್ಷಮಾರ್ಗದಲ್ಲಿ ಅತ್ಯಂತ ಕಾಂತಿಯುಕ್ತವಾದ ಸೂರ್ಯಮಂಡಲದಂತೆ ಬ್ರಹ್ಮತೇಜಸ್ಸಿನಿಂದ ಪರಿಪೂರ್ಣವಾಗಿ ಸಮಸ್ತ ಪ್ರಾಣಿಗಳಿಗೂ ಆಶ್ರಯವಾದ ಪರ್ಣಶಾಲೆಗಳಿಂದ ಮನೋಹರವಾಗಿತ್ತು.

**ಮುಂದುವರಿಯುವುದು...**

# ಶ್ರೀಮತಿ ವಿಜಯಲಕ್ಷ್ಮಿ ಪಂಡಿತ್ ರವರ 125ನೇ ವರ್ಷದ ಜನ್ಮಜಯಂತಿ



**ಕಲಾ ಸಾಹಿತ್ಯ**
**ಕೃಷ್ಣಪ್ಪ ಲೇಖಕರು**
**ಪ್ರಗತಿ ಪರ ಚಿಂತಕ ಹಾಗೂ ವಿಮರ್ಶಕರು**

ಶ್ರೀಮತಿ ವಿಜಯಲಕ್ಷ್ಮಿ ಪಂಡಿತ್ ರವರು 1900 ಆಗಸ್ಟ್ 18 ರಂದು ಪ್ರಯಾಗಂಜ್ ಎಂಬಲ್ಲಿ ಜನಿಸಿದರು. ತಂದೆ ಮೋತಿಲಾಲ್ ನೆಹರು, ತಾಯಿ ಸ್ವರೂಪರಾಣಿ,ಅಣ್ಣ ಜವಾಹರ್ಲಾಲ್ ನೆಹರು.

ತಂದೆಯ ಆಶ್ರಯದಲ್ಲಿ ಗುಣಮಟ್ಟದ ಶಿಕ್ಷಣ ಪಡೆದು ಬಾಲ್ಯದಿಂದಲೇ ಸ್ವಾತಂತ್ರ್ಯ ಹೋರಾಟದಲ್ಲಿ ಆಸಕ್ತಿಯನ್ನು ಮೂಡಿಸಿಕೊಂಡು ಸ್ವಾತಂತ್ರ್ಯ ಚಳುವಳಿಗೆ ಧುಮುಕಿದರು. ಅನೇಕಸಲ ಸೆರೆಮನೆ ವಾಸವನ್ನು ಅನುಭವಿಸಿದರು. ದೇಶಪ್ರೇಮಿ ವಿದ್ವಾಂಸ ಸೀತಾರಾಮ್ ಪಂಡಿತ್ ರವರೊಂದಿಗೆ ವಿವಾಹವಾಗಿ, ನಯನ ಸಹಗಲ್ ಎಂಬ ಮಗಳು. 1930 ರಲ್ಲಿ ನಡೆದ ಅಸಹಕಾರ ಚಳುವಳಿಯಲ್ಲಿ ವಿಜಯಲಕ್ಷ್ಮಿ ಪಂಡಿತ್ ಅವರು ಭಾಗವಹಿಸಿದ್ದರು. ಗಾಂಧೀಜಿ ಅವರಿಂದ ಪ್ರಾರಂಭವಾದ ಕ್ವಿಟ್ ಇಂಡಿಯಾ ಚಳುವಳಿಯಲ್ಲಿ ಭಾಗವಹಿಸಿ ನಾಡಿನ ಸ್ವಾತಂತ್ರ್ಯಕ್ಕಾಗಿ ತಮ್ಮ ಕಾಣಿಕೆ ಸಲ್ಲಿಸಿದರು.



ಸ್ವಾತಂತ್ರ್ಯಪೂರ್ವ 1937 ರಲ್ಲಿ ಪ್ರಾಂತ್ಯಮಟ್ಟದಲ್ಲಿ ಸರ್ಕಾರ ರಚಿಸಿದಾಗ ವಿಜಯಲಕ್ಷ್ಮಿ ಪಂಡಿತ್ ರವರು ಸಂಯುಕ್ತ ಪ್ರಾಂತ್ಯದ ಸಾರ್ವಜನಿಕ ಆರೋಗ್ಯ ಮತ್ತು ಸ್ಥಳೀಯ ಸ್ವಯಂ ಆಡಳಿತ ಖಾತೆಯ ಮಂತ್ರಿಯಾಗಿದ್ದರು. ಭಾರತಕ್ಕೆ ಸ್ವಾತಂತ್ರ್ಯ ಬಂದ ಮೇಲೆ ಇವರು ಅನೇಕ ಉನ್ನತ ಹುದ್ದೆಗಳನ್ನು ನಿರ್ವಹಿಸಿದರು. ಇಂಗ್ಲೆಂಡಿನಲ್ಲಿ ಭಾರತದ ಪ್ರಥಮ ಹೈಕಮಿಷನರ್ ಆಗಿ ನೇಮಕಗೊಂಡರು. ಬಳಿಕ ವಿಶ್ವಸಂಸ್ಥೆಯಲ್ಲಿ ಹಲವು ವರ್ಷಗಳ ಕಾಲ ಭಾರತದ ಪ್ರತಿನಿಧಿಯಾಗಿದ್ದರು ಹಾಗೂ ವಿಶ್ವಸಂಸ್ಥೆಯ ಮಹಾಸಭೆಯ ಅಧ್ಯಕ್ಷರಾಗಿದ್ದರು. ರಷ್ಯಾ,ಅಮೆರಿಕ ಮೆಕ್ಸಿಕೋ ದೇಶಗಳಲ್ಲಿ ಭಾರತದ ರಾಯಭಾರಿಯಾಗಿದ್ದರು. ಅತ್ಯಂತ ದಕ್ಷತೆ ಮತ್ತು ಸಾಮರ್ಥ್ಯದಿಂದ ಗುರುತರವಾದ ಹೊಣೆಗಾರಿಕೆಯನ್ನು ನಿರ್ವಹಿಸಿದ ಕೀರ್ತಿ ಅವರದು. 1962-1964 ಈ ಅವಧಿಯಲ್ಲಿ ಮಹಾರಾಷ್ಟ್ರದಲ್ಲಿ ಗೌರ್ನರ್ ಆಗಿದ್ದರು. ಅಖಿಲ ಭಾರತ ಮಹಿಳಾ ಸಮ್ಮೇಳನದ ಅಧ್ಯಕ್ಷರಾಗಿದ್ದರು. ಅಂತರಾಷ್ಟ್ರೀಯ ಶಾಂತಿ ಮತ್ತು ಸ್ವಾತಂತ್ರ್ಯ ಸಾಧನೆಗಾಗಿ ಸ್ಥಾಪಿತವಾದ ಮಹಿಳಾ ಸಂಘದ ಉಪಾಧ್ಯಕ್ಷರಾಗಿದ್ದರು. 1945 ರಲ್ಲಿ ಸ್ಯಾನ್ ಫ್ರಾನ್ಸಿಸ್ಕೋದಲ್ಲಿ ವಿಶ್ವಸಂಸ್ಥೆಯ ಸ್ಥಾಪನೆಗಾಗಿ ಸಮ್ಮೇಳನ ನಡೆದಾಗ ಭಾರತದ ಪ್ರತಿನಿಧಿಯಾಗಿ ವಿಜಯಲಕ್ಷ್ಮಿ ಪಂಡಿತ್ ಅವರು ಭಾಗವಹಿಸಿದ್ದರು. ಪ್ರಜಾಪ್ರಭುತ್ವದ ಹಿತರಕ್ಷಣೆಗಾಗಿ ಸರ್ವಾಧಿಕಾರದ ವಿರುದ್ಧ ಹೋರಾಟ ನಡೆಸುತ್ತಿದ್ದೇವೆ ಎನ್ನುವ ಬ್ರಿಟನ್ನಿಗೆ ಭಾರತವನ್ನು ದಾಸ್ಯದಲ್ಲಿಡಲು ಏನು ಅಧಿಕಾರ ಎಂದು ಭಾಷಣ ಮಾಡಿದ ಧೀರ ಮಹಿಳೆ.


ಶ್ರೀಮತಿ ವಿಜಯಲಕ್ಷ್ಮಿ ಪಂಡಿತ್ ರವರು ಲೇಖಕಿಯೂ ಆಗಿದ್ದು,ಮಂತ್ರಿಯಾಗಿದ್ದಾಗ ತನ್ನ ಅನುಭವಗಳನ್ನು ನಾನೂ ಮಂತ್ರಿಯಾದೆ ಎಂಬ ಕೃತಿಯನ್ನು ಸರಳ ಸುಂದರವಾಗಿ ಚಿತ್ರಿಸಿದ್ದಾರೆ. ಶ್ರೀಮತಿ ವಿಜಯಲಕ್ಷ್ಮಿ ಪಂಡಿತ್ ರವರು ವಯೋಸಹಜದ ಮೇರೆಗೆ 1990 ಡಿಸೆಂಬರ್ 01 ರಂದು ತನ್ನ 90ನೇ ವಯಸ್ಸಿನಲ್ಲಿ ತೀರಿಕೊಂಡರು. ಇಂದು ಅವರ 125 ನೇ ವರ್ಷದ ಜನ್ಮಜಯಂತಿ ದಿನ ಅವರನ್ನು ಸ್ಮರಿಸಿ, ನೆನೆಯುತ್ತಾ ಅವರ ಆದರ್ಶಗಳು, ಸಾಧನೆಗಳನ್ನು ಅದರಲ್ಲೂ ಹೆಣ್ಣು ಮಕ್ಕಳು ಪಾಲಿಸುವ ಸಂಕಲ್ಪ ಮಾಡಿದರೆ ಅವರಿಗೆ ಕೊಟ್ಟ ಗೌರವ.

# ಆರಾಧನೆಯಲ್ಲಿ ದರ್ಶನ..

## ಫಲ-ಮಂತ್ರಾಕ್ಷತೆ ಸ್ವೀಕರಿಸಿದ ಗಣ್ಯರು..

• **ಉದಯವಾಹಿನಿ ಬೆಂಗಳೂರು**

ಜಯನಗರ 5ನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ ಆರಾಧನೆಯಲ್ಲಿ ದರ್ಶನ.. ಫಲ-ಮಂತ್ರಾಕ್ಷತೆ ಸ್ವೀಕರಿಸಿದ ಗಣ್ಯರು.. ಇನ್ಫೋಸಿಸ್ ಸುಧಾಮೂರ್ತಿ, ನಾರಾಯಣ ಮೂರ್ತಿ ದಂಪತಿ, ಸಂಸದ ತೇಜಸ್ವಿ



ಸೂರ್ಯ ದಂಪತಿ, ಶ್ರೀ ಸೋಮಶೇಖರ, ಚಲನಚಿತ್ರ ಕಲಾವಿದರಾದ ಎಂ.ಎಸ್. ಉಮೇಶ್, ಪ್ರೇಮಾ, ಪದ್ಮಜಾ ರಾವ್. ಬಜರಂಗದಳದ ತೇಜಸ್ ಗೌಡ ಇವರಿಗೆ... ಆರ್ ಕೆ ವಾದೀಂದ್ರ ಆಚಾರ್ಯ ಮತ್ತು ನಂದಕಿಶೋರಾಚಾರ್ಯ ಗುರು ರಾಯರ ಶೇಷ ವಸ್ತ್ರದೊಂದಿಗೆ ಫಲ ಮಂತ್ರಾಕ್ಷತೆ ಕೊಟ್ಟು ಆಶೀರ್ವದಿಸಿದರು...

# ಬಸ್ ನಿಲ್ದಾಣಗಳ ಶೌಚಾಲಯ ನಿರ್ವಹಣೆ

## ಸರಿಪಡಿಸಿ: ರಾಮಲಿಂಗಾರೆಡ್ಡಿ ಸೂಚನೆ

• **ಉದಯವಾಹಿನಿ ಬೆಂಗಳೂರು**

ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣಗಳಲ್ಲಿ ಶೌಚಾಲಯಗಳ ಸ್ವಚ್ಛತೆ ನಿರ್ವಹಣೆಗಾಗಿ ಟೆಂಡರ್ ಪಡೆದವರು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸದೇ ಇದ್ದರೆ ಕರಾರು ರದ್ದು ಮಾಡಿ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರು ಅಧಿಕಾರಿಗಳಿಗೆ



ಸೂಚನೆ ನೀಡಿದ್ದಾರೆ. 'ಮೈಸೂರು ರಸ್ತೆ ಸ್ಯಾಟಲೈಟ್ ಬಸ್ ನಿಲ್ದಾಣದಲ್ಲಿ ಟಿಕೆಟ್ ಪಡೆಯುವ ಕೌಂಟರ್ ಸಮೀಪವೇ ಪುರುಷರ ಶೌಚಾಲಯ ಇರುವುದರಿಂದ ಮಹಿಳೆಯರಿಗೆ ಉಂಟಾಗುತ್ತಿದ್ದ ಕಸಿವಿಸಿ ಬಗ್ಗೆ ಪ್ರಯಾಣಿಕೆಯೊಬ್ಬರು ನನ್ನ ಗಮನಕ್ಕೆ ತಂದರು. ಕೂಡಲೇ ತಡೆಗೋಡೆ ನಿರ್ಮಿಸಲು ಕ್ರಮ ಕೈಗೊಳ್ಳಲಾಗಿದೆ. ಪ್ರಯಾಣಿಕರು ಗಮನಕ್ಕೆ ತರುವ ಮೊದಲೇ ಮುಂಜಾಗ್ರತಾ, ಸಂವೇದನಾಶೀಲ ಕ್ರಮಗಳನ್ನು ಕೈಗೊಳ್ಳುವುದು ಅಧಿಕಾರಿಗಳ ಕರ್ತವ್ಯ' ಎಂದು ತಿಳಿಸಿದ್ದಾರೆ. ಸಾರಿಗೆ ಸಂಸ್ಥೆಗಳ ಬಸ್ ನಿಲ್ದಾಣಗಳಲ್ಲಿ ಇರುವ ಶೌಚಾಲಯಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕರಿಂದ ಆಗಾಗ ದೂರುಗಳು ಬರುತ್ತಿವೆ. ನೈರ್ಮಲ್ಯ ಕಾಪಾಡುವಲ್ಲಿ ವಿಫಲವಾಗಿರುವ ಬಗ್ಗೆಯೇ ಹೆಚ್ಚು ದೂರುಗಳಿವೆ. ನಿಗದಿಪಡಿಸಿದ್ದಕ್ಕಿಂತ ಅಧಿಕ ದರ ವಸೂಲಿ ಮಾಡುತ್ತಿರುವ, ಇದನ್ನು ಪ್ರಶ್ನಿಸುವ ಸಾರ್ವಜನಿಕರೊಂದಿಗೆ ದುರ್ನಡತೆ ತೋರುವ ಬಗ್ಗೆಯೂ ದೂರುಗಳಿವೆ.

# ರಕ್ತನಾಳಗಳಲ್ಲಿ ಬ್ಲಾಕೇಜ್ ಆದ್ರೆ ಈ ರೀತಿಯ ಲಕ್ಷಣಗಳೆಲ್ಲಾ ಕಾಣಿಸಲಾರಂಭಿಸುತ್ತದೆ

ರಕ್ತನಾಳಗಳಲ್ಲಿ ಬ್ಲಾಕ್ ಆದರೆ ನಾನಾ ರೀತಿಯ ಸಮಸ್ಯೆಗಳನ್ನುಂಟು ಮಾಡುತ್ತದೆ. ಅದರಲ್ಲೂ ಕೆಲವೊಂದು ಲಕ್ಷಣಗಳು ಕಾಣಲಾರಂಭಿಸುತ್ತದೆ. ಆ ಲಕ್ಷಣಗಳು ಯಾವುವು ತಿಳಿಯೋಣ. ನಮ್ಮ ದೇಹದಲ್ಲಿ ಪ್ರತಿ ಹನಿ ರಕ್ತವು ರಕ್ತನಾಳಗಳ ಮೂಲಕ ಇಡೀ ದೇಹವನ್ನು ತಲುಪುತ್ತದೆ. ಆದರೆ ಈ ರಕ್ತನಾಳಗಳಲ್ಲಿ ಅಡಚಣೆ ಉಂಟಾದಾಗ, ಅದು ರಕ್ತದ ಹರಿವನ್ನು ನಿಲ್ಲಿಸುತ್ತದೆ ಮತ್ತು ಗಂಭೀರ ಕಾಯಿಲೆಗಳಿಗೆ ಕಾರಣವಾಗಬಹುದು. ರಕ್ತನಾಳಗಳಲ್ಲಿ ಅಡಚಣೆಯು ಹೃದಯಾಘಾತದ ಅಪಾಯವನ್ನು ಸೂಚಿಸುತ್ತದೆ, ಜೊತೆಗೆ ಪಾರ್ಶ್ವವಾಯು, ಆಯಾಸ ಮತ್ತು ಕೈಕಾಲುಗಳಲ್ಲಿ ಮರಗಟ್ಟುವಿಕೆ ಮುಂತಾದ ಸಮಸ್ಯೆಗಳನ್ನು ಉಂಟುಮಾಡಬಹುದು.



**ಪಾದಗಳು ಅಥವಾ ಕೈಗಳಲ್ಲಿ ಮರಗಟ್ಟುವಿಕೆ:** ರಕ್ತನಾಳಗಳಲ್ಲಿ ಅಡಚಣೆ ಉಂಟಾದಾಗ, ರಕ್ತದ ಹರಿವು ಕಡಿಮೆಯಾಗುತ್ತದೆ. ಇದು ಪಾದಗಳು ಅಥವಾ ಕೈಗಳಲ್ಲಿ ಮರಗಟ್ಟುವಿಕೆ ಮತ್ತು ಜುಮ್ಮೆನಿಸುವಿಕೆಗೆ ಕಾರಣವಾಗುತ್ತದೆ. ಇದು ವಿಶೇಷವಾಗಿ ದೀರ್ಘಕಾಲ ನಡೆದಾಡುವ ಅಥವಾ ದೀರ್ಘಕಾಲ ಕುಳಿತಿರುವಾಗ ಈ ರೀತಿ ಅನುಭವವಾಗುತ್ತದೆ. ಶುಂಠಿ ಚಹಾ ಕುಡಿಯುವುದು ಲಘು ವ್ಯಾಯಾಮ ಮಾಡುವುದರಿಂದ ರಕ್ತದ ಹರಿವನ್ನು ನೈಸರ್ಗಿಕವಾಗಿ ಸುಧಾರಿಸಬಹುದು.

**ತಲೆತಿರುಗುವಿಕೆ:** ರಕ್ತನಾಳಗಳಲ್ಲಿ ಅಡಚಣೆಯು ಮೆದುಳಿಗೆ ರಕ್ತದ ಪೂರೈಕೆಯನ್ನು ಕಡಿಮೆ ಮಾಡುತ್ತದೆ.

ತಲೆತಿರುಗುವಿಕೆ ಅಥವಾ ಕೇಂದ್ರೀಕರಿಸಲು ಅಸಮರ್ಥತೆಯಂತಹ ಸಮಸ್ಯೆಗಳನ್ನು ಉಂಟುಮಾಡುತ್ತದೆ. ಬೆಳಿಗ್ಗೆ ಖಾಲಿ ಹೊಟ್ಟೆಯಲ್ಲಿ ತುಳಸಿ ಎಲೆಗಳು ಮತ್ತು

**ಆಯಾಸ ಮತ್ತು ದೌರ್ಬಲ್ಯ**

**ಅಂಗಗಳಿಗೆ ಸರಿಯಾದ ರಕ್ತ ಪೂರೈಕೆಯ ಕೊರತೆಯು ದೇಹವನ್ನು ಆಯಾಸಗೊಳಿಸುತ್ತದೆ. ಸ್ವಲ್ಪ ಚಟುವಟಿಕೆಯ ನಂತರವೂ ದಣಿವು ಅನುಭವಿಸುವುದು ಅಡಚಣೆಯ ಸಂಕೇತವಾಗಿರಬಹುದು. ಬಾದಾಮಿ ಮತ್ತು ವಾಲ್ನಟ್ಸ್ ಸೇವನೆಯು ರಕ್ತನಾಳಗಳನ್ನು ಆರೋಗ್ಯಕರವಾಗಿಡಲು ಪ್ರಯೋಜನಕಾರಿಯಾಗಿದೆ.**

ಜೇನುತುಪ್ಪದ ಮಿಶ್ರಣವನ್ನು ಸೇವಿಸುವುದರಿಂದ ರಕ್ತದ ಹರಿವು ಸುಧಾರಿಸುತ್ತದೆ.

**ಎದೆ ನೋವು ಅಥವಾ ಒತ್ತಡ:** ನೀವು ಎದೆಯಲ್ಲಿ ಹಠಾತ್ ನೋವು ಅಥವಾ ಒತ್ತಡವನ್ನು ಅನುಭವಿಸುತ್ತಿದ್ದರೆ ಅದು ರಕ್ತನಾಳಗಳಲ್ಲಿ ಅಡಚಣೆಯ ಗಂಭೀರ ಸಂಕೇತವಾಗಿರಬಹುದು. ಅದನ್ನು ನಿರ್ಲಕ್ಷಿಸಬೇಡಿ.

ಆಹಾರದಲ್ಲಿ ಬೆಳ್ಳುಳ್ಳಿಯನ್ನು ಸೇರಿಸುವುದರಿಂದ ಕೊಲೆಸ್ಟ್ರಾಲ್ ಅನ್ನು ಕಡಿಮೆ ಮಾಡುವ ಮೂಲಕ ಅಪಧಮನಿಗಳನ್ನು ತೆರವುಗೊಳಿಸಲು ಸಹಾಯ ಮಾಡುತ್ತದೆ.

**ಉಸಿರಾಟದ ತೊಂದರೆ:** ರಕ್ತನಾಳಗಳಲ್ಲಿ ಅಡಚಣೆ ಉಂಟಾದಾಗ, ಹೃದಯವು ರಕ್ತವನ್ನು ಪಂಪ್ ಮಾಡಲು ಹೆಚ್ಚು ಶ್ರಮಿಸಬೇಕಾಗುತ್ತದೆ.

ಇದು ಉಸಿರಾಟದ ತೊಂದರೆ ಅಥವಾ ಹೆಚ್ಚಿನ ಉಸಿರಾಟಕ್ಕೆ ಕಾರಣವಾಗುತ್ತದೆ. ನೆಲ್ಲಿಕಾಯಿ ರಸ ಮತ್ತು ಉಗುರುಬೆಚ್ಚಗಿನ ನೀರನ್ನು ನಿಯಮಿತವಾಗಿ ಕುಡಿಯುವುದರಿಂದ ಹೃದಯವನ್ನು ಬಲಪಡಿಸಲು ಸಹಾಯ ಮಾಡುತ್ತದೆ.

**ಪಾದಗಳಲ್ಲಿ ಊತ:** ಯಾವುದೇ ಅಡಚಣೆಯ ಸಂದರ್ಭದಲ್ಲಿ ರಕ್ತ ಮತ್ತು ದ್ರವಗಳು ಪಾದಗಳಲ್ಲಿ ಸಂಗ್ರಹವಾಗಬಹುದು, ಇದು ಊತಕ್ಕೆ ಕಾರಣವಾಗಬಹುದು. ರಾತ್ರಿ ಮಲಗುವ ಮೊದಲು ಉಪ್ಪಿನೊಂದಿಗೆ ಉಗುರು ಬೆಚ್ಚಗಿನ ನೀರಿನಲ್ಲಿ ಪಾದಗಳನ್ನು ಇಡುವುದು ಊತವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ.

# ಶ್ರೀಕೃಷ್ಣ ಜನ್ಮಾಷ್ಟಮಿ ವೈಭವಯುತವಾಗಿ ಆಚರಣೆ

• **ಉದಯವಾಹಿನಿ ಬೆಂಗಳೂರು**

ಕೆಂಗೇರಿಯ ದೊಡ್ಡ ಆಲದಮರದ ಬಳಿ ಇರುವ ಆನಂದ ಗೋವಿಂದ ದೇವಾಲಯದಲ್ಲಿ ಶ್ರೀಕೃಷ್ಣ ಜನ್ಮಾಷ್ಟಮಿಯನ್ನು ವೈಭವಯುತವಾಗಿ ಆಚರಿಸಲಾಯಿತು, ಈ ಸಂದರ್ಭದಲ್ಲಿ ನಾಟ್ಯ ಸನ್ನಿಧಿ ನೃತ್ಯ ಕಲಾ ಶಾಲೆಯ ಮಕ್ಕಳು ನಾಟ್ಯ ಗುರು ಮೋನಿಷಾ ನವೀನ್ ನೇತೃತ್ವದಲ್ಲಿ ನೃತ್ಯ ಸೇವೆಯನ್ನು ಸಲ್ಲಿಸಿದರು, ಸಹಕಾರ ಇಲಾಖೆಯ ಪಿ ಆರ್ ಓ ಎಸ್ ಎನ್ ಶಂಕರ್, ಹಿರಿಯ ಪತ್ರಕರ್ತ ಎನ್. ಎಸ್.ಸುಧೀಂದ್ರ ರಾವ್, ದೇವಾಲಯದ ಸಂಸ್ಥಾಪಕ ವೈಕುಂಠ ದಾಸ್ ಹಾಗು ಚಿಕ್ಕನಹಳ್ಳಿ ಪಂಚಾಯ್ತಿ



ಸದಸ್ಯ ಸೂಲಿವಾರ ಬಸವರಾಜ್ ಸೇರಿದಂತೆ ಸಾವಿರಾರು ಭಕ್ತರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಸರ್ವರಿಗೂ ತೀರ್ಥ ಪ್ರಸಾದದ ವ್ಯವಸ್ಥೆಯನ್ನು ಮಾಡಲಾಗಿತ್ತು.

# ರಾಜ್ಯದ ವಿವಿಧೆಡೆ ಧಾರಾಕಾರ ಮಳೆ: 5 ಜಿಲ್ಲೆಗಳಿಗೆ ಆರೆಂಜ್ ಅಲರ್ಟ್

• **ಉದಯವಾಹಿನಿ ಬೆಂಗಳೂರು**

ರಾಜ್ಯದ ವಿವಿಧೆಡೆ ಸೋಮವಾರ ಧಾರಾಕಾರ ಮಳೆಯಾಗುವ ಸಾಧ್ಯತೆಯಿದ್ದು, ಹವಾಮಾನ ಇಲಾಖೆಯು ಐದು ಜಿಲ್ಲೆಗಳಿಗೆ 'ರೆಡ್ ಅಲರ್ಟ್' ಹಾಗೂ ನಾಲ್ಕು ಜಿಲ್ಲೆಗಳಿಗೆ 'ಆರೆಂಜ್ ಅಲರ್ಟ್' ಘೋಷಿಸಿದೆ.ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ, ಮಲೆನಾಡಿನ ಶಿವಮೊಗ್ಗ ಹಾಗೂ ಚಿಕ್ಕಮಗಳೂರು ಜಿಲ್ಲೆಗೆ 'ರೆಡ್ ಅಲರ್ಟ್' ನೀಡಲಾಗಿದೆ. ಈ ಜಿಲ್ಲೆಗಳಲ್ಲಿ ಮಳೆಯ ತೀವ್ರತೆ ಹೆಚ್ಚಲಿದ್ದು, ಗಂಟೆಗೆ 40 ರಿಂದ 60 ಕಿ.ಮೀ. ವೇಗದಲ್ಲಿ ಗಾಳಿಯೊಂದಿಗೆ ಧಾರಾಕಾರ ಮಳೆ ಸುರಿಯುವ ಸಾಧ್ಯತೆಯಿದೆ.

ಕಲಬುರಗಿ, ವಿಜಯಪುರ, ಬೆಳಗಾವಿ ಹಾಗೂ ಕೊಡಗು ಜಿಲ್ಲೆಗೆ ಆರೆಂಜ್ ಅಲರ್ಟ್ ನೀಡಲಾಗಿದೆ. ಈ ಜಿಲ್ಲೆಗಳ ವಿವಿಧೆಡೆ ಗಂಟೆಗೆ 50 ರಿಂದ 60 ಕಿ.ಮೀ. ವೇಗದಲ್ಲಿ ಗಾಳಿಯೊಂದಿಗೆ ಭಾರಿ ಮಳೆಯಾಗುವ ಸಂಭವವಿದೆ.

ಉತ್ತರ ಹಾಗೂ ದಕ್ಷಿಣ ಒಳನಾಡಿನ ಉಳಿದ ಜಿಲ್ಲೆಗಳಲ್ಲಿ ನಿರಂತರ ಗಾಳಿಯೊಂದಿಗೆ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ ಎಂದು ಇಲಾಖೆ ತಿಳಿಸಿದೆ.

ಬೆಂಗಳೂರಿನಲ್ಲಿ ಸೋಮವಾರದಿಂದ ಮುಂದಿನ ಒಂದು ವಾರ ಮೋಡ ಕವಿದ ವಾತಾವರಣ ಇರಲಿದ್ದು, ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ. ಕರಾವಳಿ ಸೇರಿ ರಾಜ್ಯದ ವಿವಿಧೆಡೆ ಮಂಗಳವಾರ ಮತ್ತು ಬುಧವಾರವೂ ಭಾರಿ ಮಳೆ ಮುಂದುವರಿಯುವ ಸಂಭವವಿದೆ ಎಂದು ಇಲಾಖೆ ತಿಳಿಸಿದೆ.



**ಮೀನುಗಾರರಿಗೆ ಎಚ್ಚರಿಕೆ**

**ಇದೇ 20ರವರೆಗೂ ಸಮುದ್ರಕ್ಕೆ ತೆರಳದಂತೆ ಇಲಾಖೆಯು ಮೀನುಗಾರರಿಗೆ ಎಚ್ಚರಿಕೆ ನೀಡಿದೆ. ಕರಾವಳಿ ಮತ್ತು ಹೊರಗೆ ಗಂಟೆಗೆ 40 ರಿಂದ 60 ಕಿ.ಮೀ. ವೇಗದಲ್ಲಿ ಗಾಳಿ ಬೀಸುವ ಸಾಧ್ಯತೆಯಿದೆ. ಈ ಅವಧಿಯಲ್ಲಿ ಬಿರುಗಾಳಿ ಕಾಣಿಸಿಕೊಳ್ಳುವ ಸಂಭವವೂ ಇದೆ. ಆದ್ದರಿಂದ ಮೀನುಗಾರರು ಸಮುದ್ರಕ್ಕೆ ಹೋಗಬಾರದು ಎಂದು ಇಲಾಖೆ ಮುನ್ಸೂಚನೆ ನೀಡಿದೆ.**

# ಸೋಂಪು ಚಹಾ ಕುಡಿಯುವ ಅಭ್ಯಾಸ ಮಾಡಿ

## ಹೊಟ್ಟೆ ಉಬ್ಬರ, ಗ್ಯಾಸ್ ಸಮಸ್ಯೆ ಕಡಿಮೆ ಆಗುತ್ತಾ ಬರುತ್ತೆ ನೋಡಿ?

ಬೆಳಗ್ಗೆ ಹಾಲಿನ ಚಹಾ ಅಥವಾ ಕಾಫಿ ಕುಡಿಯುವುದು ಆರೋಗ್ಯಕ್ಕೆ ಒಳ್ಳೆಯದಲ್ಲ. ಹಾಲಿನ ಚಹಾ ಕುಡಿಯುವುದರಿಂದ ಹೊಟ್ಟೆಯಲ್ಲಿ ಗ್ಯಾಸ್ ಮತ್ತು ಆಮ್ಲೀಯತೆ ಉಂಟಾಗುತ್ತದೆ. ನೀವು ಚಹಾ ಕುಡಿಯಲು ಬಯಸಿದರೆ, ಈ ಸೋಂಪುಕಾಳಿನ ಚಹಾವನ್ನು ತಯಾರಿಸಿ ಕುಡಿಯಿರಿ. ಇದು ಬಹಳಷ್ಟು ಆರೋಗ್ಯ ಪ್ರಯೋಜನಗಳನ್ನು ನೀಡುತ್ತದೆ.


ಮುಂಜಾನೆ ಎದ್ದು ಖಾಲಿ ಹೊಟ್ಟೆಗೆ ಏನೇ ಸೇವನೆ ಮಾಡಿದರೂ ಕೂಡ ಅದರ ಅಡ್ಡಪರಿಣಾಮಗಳು ನೇರವಾಗಿ ನಮ್ಮ ಆರೋಗ್ಯದ ಮೇಲೆ ಕಾಣಿಸಿಕೊಳ್ಳುತ್ತದೆ ಎಂದು ಹೇಳಲಾಗುತ್ತದೆ. ಈ ಬಗ್ಗೆ ಆರೋಗ್ಯ ತಜ್ಞರು ಕೂಡ ಹೇಳುವ ಪ್ರಕಾರ ಬೆಳಗ್ಗೆ ಎದ್ದ ಕೂಡಲೇ ಸೇವನೆ ಮಾಡುವಂತಹ ಯಾವುದೇ ಆರೋಗ್ಯಕಾರಿ ಪಾನೀಯವಾದರೂ ಕೂಡ ಕೆಲವೊಮ್ಮೆ ಅದರ ಪರಿಣಾಮ ತೀವ್ರವಾಗಿರುವುದು ಎಂದು ಸಲಹೆ ನೀಡುತ್ತಾರೆ.ಆದರೆ ನಾವೆಲ್ಲರೂ ಹೆಚ್ಚಾಗಿ ಬೆಳಗ್ಗೆ ಎದ್ದು ಕೆಫೇನ್ ಅಂಶ ಹೆಚ್ಚಿರುವ ಚಹಾ ಅಥವಾ ಕಾಫಿಯನ್ನೇ ಕುಡಿಯುವುದು ಇದರಿಂದ ದೇಹಕ್ಕೆ ಸಾಕಷ್ಟು ಅಡ್ಡಪರಿಣಾಮಗಳು ಕಾಣಿಸಿಕೊಳ್ಳುತ್ತವೆ...

**ಗಿಡಮೂಲಿಕೆ ಚಹಾ:** ಖಾಲಿ ಹೊಟ್ಟೆಯಲ್ಲಿ ಚಹಾ ಅಥವಾ ಕಾಫಿ ಕುಡಿಯುವುದು ಆರೋಗ್ಯಕ್ಕೆ ಒಳ್ಳೆಯದಲ್ಲ, ಇದರಿಂದ ಗ್ಯಾಸ್ಟ್ರಿಕ್ ಆಮ್ಲೀಯತೆ ಮತ್ತು ಹೊಟ್ಟೆ ಉಬ್ಬುವಿಕೆ ಸಮಸ್ಯೆ ಕಾಣಿಸಿಕೊಳ್ಳುವ ಸಾಧ್ಯತೆ ಇರುತ್ತದೆ. ಒಂದು ವೇಳೆ ಟೀ ಅಥವಾ ಕಾಫಿ ಕುಡಿಯಲೇಬೇಕೆಂಬ ಹಂಬಲ ವಿದ್ದರೆ, ಬೆಳಗ್ಗೆ ಗಿಡಮೂಲಿಕೆ ಚಹಾ ಕುಡಿಯುವ ಅಭ್ಯಾಸ ಮಾಡಿ ಕೊಳ್ಳಿ. ಏಕೆಂದರೆ ನೈಸರ್ಗಿಕವಾಗಿ ಸಿಗುವ ಗಿಡಮೂಲಿಕೆ ಅಂಶಗಳೇ ಇದರಲ್ಲಿ ಹೆಚ್ಚಾಗಿ ಕಂಡು ಬರುವುದರಿಂದ, ಇವು ಗಳಿಂದ ಆರೋಗ್ಯಕ್ಕೆ ಒಳ್ಳೆಯದೇ ಆಗುತ್ತದೆ ಹೊರತು ಯಾವುದೇ ರೀತಿಯಲ್ಲಿಯೂ ಕೂಡ ಅಡ್ಡ ಪರಿಣಾಮಗಳು ಉಂಟಾಗುವುದಿಲ್ಲ. ಪ್ರಮುಖವಾಗಿ ಹೊಟ್ಟೆಗೆ ಸಂಬಂಧಪಟ್ಟ



ಸಮಸ್ಯೆಗಳನ್ನು ದೂರ ಮಾಡುವುದರ ಜೊತೆಗೆ ಹೊಟ್ಟೆ ಉಬ್ಬರ, ಗ್ಯಾಸ್ಟ್ರಿಕ್ ಮತ್ತು ಇನ್ನಿತರ ರೋಗ ಲಕ್ಷಣಗಳನ್ನು ನಮ್ಮಿಂದ ದೂರ ಮಾಡುತ್ತದೆ. ಅದರಲ್ಲೂ ಬೆಳಗ್ಗೆ ಸೋಂಪು ಕಾಳುಗಳ ಚಹಾ ಮಾಡಿ ಕುಡಿಯುವು ದರಿಂದ, ಗ್ಯಾಸ್ಟ್ರಿಕ್, ಆಮ್ಲೀಯತೆ, ಎದೆಯುರಿ, ಮಲಬದ್ಧತೆ ಹುಳಿ ತೇಗು ಮುಂತಾದ ಆರೋಗ್ಯ ಸಮಸ್ಯೆಗಳನ್ನು ದೂರ ಮಾಡುತ್ತದೆ.

**ಈ ಗಿಡಮೂಲಿಕೆ ಚಹಾ ತಯಾರಿಸುವುದು ಹೇಗೆ:** ಒಂದು ಸಣ್ಣ ಪಾತ್ರೆಯಲ್ಲಿ ಒಂದು ಲೋಟ ನೀರನ್ನು ಕುದಿಯಲು ಬಿಡಿ ಮತ್ತು ಇದಕ್ಕೆ ಒಂದು ಟೀ ಚಮಚ ಸೋಂಪು ಕಾಳುಗಳನ್ನು ಹಾಕಿ ಮೀಡಿಯಂ ಉರಿಯಲ್ಲಿ ಸ್ವಲ್ಪ ಹೊತ್ತು ಹಾಗೆಯೇ ಕುದಿಯಲು ಬಿಡಿ. ಮಧ್ಯಮ ಉರಿಯಲ್ಲಿ ನೀರನ್ನು ಕುದಿಯಲು ಬಿಟ್ಟರೆ ಒಳ್ಳೆಯದು. ಎರಡು-ಮೂರು ನಿಮಿಷ ಹಾಗೆಯೇ ನೀರು ಕುದಿ ಬಂದು ಅದರ ಬಣ್ಣ ಹಳದಿ ಬಣ್ಣಕ್ಕೆ ಬದಲಾಗುವವರೆಗೆ ಕಾಯಿಲೆ, ಮೇಲೆ ಗ್ಯಾಸ್ ಒಲೆ ಆಫ್ ಮಾಡಿ. ಪಾನೀಯನ್ನು ದಿನದಲ್ಲಿ ಒಂದೆರಡು ಬಾರಿ ಕುಡಿಯುವ ಅಭ್ಯಾಸ ಮಾಡಿಕೊಳ್ಳಿ. ಅತ್ಯಂತ ಮುಖ್ಯವಾದ ವಿಷಯವೆಂದರೆ ಚಹಾ ಕುಡಿಯುವುದರಿಂದ ರೋಗನಿರೋಧಕ ಶಕ್ತಿ ಹೆಚ್ಚಾಗುತ್ತದೆ. ಶೀತ ಮತ್ತು ಕೆಮ್ಮಿನ ಪರಿಣಾಮ ಕಡಿಮೆಯಾಗುತ್ತದೆ. ಬೆಳಗ್ಗೆ ಹೊಟ್ಟೆ ಉಬ್ಬರ ಗ್ಯಾಸ್ಟ್ರಿಕ್ ಮಲಬದ್ಧತೆ ಇತರ ಹೊಟ್ಟೆಗೆ ಸಂಬಂಧಪಟ್ಟ ಸಮಸ್ಯೆ ಇರುವವರು ಈ ಚಹಾ ಮಾಡಿ ಕುಡಿಯುವುದರಿಂದ ಇವೆಲ್ಲಾ ಆರೋಗ್ಯ ಸಮಸ್ಯೆಗಳು ಕ್ರಮೇಣವಾಗಿ ನಿಯಂತ್ರಣಕ್ಕೆ ಬರುತ್ತವೆ . ನೀವು ಬಯಸಿದರೆ, ಅದರಲ್ಲಿರುವ ಮಸಾಲೆಗಳನ್ನು ಬದಲಾಯಿಸ ಬಹುದು. ನೀವು ಅದರಲ್ಲಿ ದಾಲ್ಚಿನ್ನಿ ಬಳಸಬಹುದು. ನೀವು ಲವಂಗದ ಬದಲಿಗೆ ಕರಿಮೆಣಸನ್ನು ಸಹ ಬಳಸಬಹುದು. ಕೆಲವೊಮ್ಮೆ ಫೆನ್ನೆಲ್ ಬದಲಿಗೆ ಜೀರಿಗೆ ಅಥವಾ ಸೆಲರಿಯನ್ನು ಸಹ ಬಳಸಬಹುದು. ಮಳೆಗಾಲದಲ್ಲಿ ಈ ಚಹಾವನ್ನು ಕುಡಿಯುವುದ ರಿಂದ ಅನೇಕ ರೀತಿಯ ಸೋಂಕುಗಳನ್ನು ತಡೆಯಬಹುದು. ಈ ಚಹಾವು ಶೀತ ಮತ್ತು ಕೆಮ್ಮನ್ನು ಗುಣಪಡಿಸುವಲ್ಲಿ ಬಹಳ ಪರಿಣಾ ಮಕಾರಿ ಎಂದು ಹೇಳಲಾಗುತ್ತದೆ.



**ಈ ಚಹಾ ಮಾಡಿ ಕುಡಿಯುವುದರಿಂದ ಸಿಗುವ ಇನ್ನಷ್ಟು ಪ್ರಯೋಜನಗಳ ಬಗ್ಗೆ ನೋಡುವುದಾದರೆ**: ಫೆನ್ನೆಲ್ ಟೀ ಅಥವಾ ಸೋಂಪು ಕಾಳುಗಳ ಚಹಾ ಮಾಡಿ ಕುಡಿಯು ವುದರಿಂದ ಜೀರ್ಣಕ್ರಿಯೆಯನ್ನು ಉತ್ತೇಜಿಸುತ್ತದೆ ಅನೇಕ ಜೀರ್ಣಕಾರಿ ಸಮಸ್ಯೆಗಳನ್ನು ನಿಯಂತ್ರಣ ಮಾಡಲು ಸಹಾಯ ಮಾಡುತ್ತದೆ.

ಪ್ರಮುಖವಾಗಿ ಈ ಗಿಡಮೂಲಿಕೆ ಚಹಾ ಮಾಡಿ ಕುಡಿಯುವುದರಿಂದ ಮಾಂಸ ಖಂಡಗಳ ದಣಿವು ಸಮಸ್ಯೆ ನಿಯಂತ್ರಣಕ್ಕೆ ಬರುತ್ತದೆ, ದೀರ್ಘಕಾಲದಿಂದ ನಿದ್ರಾಹೀನತೆಯಿಂದ ಬಳಲುತ್ತಿರುವವರು ಮಿತ ವಾಗಿ ಈ ಕಾಳುಗಳ ಚಹಾ ಮಾಡಿ ಕುಡಿಯುವುದರಿಂದ ರಾತ್ರಿಯ ಸಮಯದಲ್ಲಿ ಒಳ್ಳೆಯ ನಿದ್ರೆ ಬರಲು ಅನುಕೂಲ ವಾಗುತ್ತದೆ.

**ಕ್ಯಾನ್ಸರ್ ನಂತಹ ಮಾರಕ ಕಾಯಿಲೆಯನ್ನು ತಡೆಗಟ್ಟುತ್ತದೆ**

**ಸೋಂಪು ಕಾಳುಗಳ ಕ್ಯಾನ್ಸರ್ ನಂತಹ ಮಾರಕ ಕಾಯಿಲೆಯನ್ನು ತಡೆ ಗಟ್ಟಲು ಕೂಡ ಸಹಾಯ ಮಾಡುತ್ತವೆ. ಹೊಟ್ಟೆ, ಚರ್ಮ ಅಥವಾ ಸ್ತನ ಕ್ಯಾನ್ಸರ್‌ನಂತಹ ವಿವಿಧ ರೀತಿಯ ಕ್ಯಾನ್ಸರ್‌ಗಳನ್ನು ತಡೆಯುವುದರಲ್ಲಿ ಇದರ ಪಾತ್ರೆ ಬಹಳ ದೊಡ್ಡದಿದೆ. ಎಲ್ಲಾಕ್ಕಿಂತ ಮುಖ್ಯವಾಗಿ ದೇಹದಲ್ಲಿ ಉರಿಯೂತಕ್ಕೆ ಕಾರಣವಾಗುವ ಫ್ರೀ ರಾಡಿಕಲ್ಸ್ ವಿರುದ್ಧ ಹೋರಾಡುವಲ್ಲಿ ತುಂಬಾನೇ ನೆರವಿಗೆ ಬರುತ್ತದೆ.**

# ಸರ್ಕಾರದ ಅನುದಾನ ಸದ್ಬಳಕೆಯಾಗಲಿ: ದೀಪಕ್ ಮಡಿವಾಳ

## ಗ್ರಾಮೀಣ ಪ್ರದೇಶದಲ್ಲಿ ಜಲಜೀವನ್ ಮಿಷನ್ ಯೋಜನೆ ಸಮರ್ಪಕವಾಗಿ ಅನುಷ್ಠಾನವಾಗುತ್ತಿಲ್ಲ

• ಉದಯವಾಹಿನಿ, ಹುಬ್ಬಳ್ಳಿ

ಗ್ರಾಮೀಣ ಭಾಗದ ಜನರಿಗೆ ಶುದ್ಧ ಕುಡಿಯುವ ನೀರು, ಚರಂಡಿ ವ್ಯವಸ್ಥೆ, ರಸ್ತೆ ಸೇರಿದಂತೆ ಅಗತ್ಯ ಮೂಲಸೌಕರ್ಯ ಒದಗಿಸಲು ಅಧಿಕಾರಿಗಳು ಮುಂದಾಗಬೇಕು. ಅನುದಾನವನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ದೀಪಕ್ ಮಡಿವಾಳ ಹೇಳಿದರು. ನಗರದ ತಾಲ್ಲೂಕು ಆಡಳಿತಸೌಧದ ತಾಲ್ಲೂಕು ಪಂಚಾಯಿತಿ ಸಭಾಭವನದಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ ಅವರು ಮಾತನಾಡಿದರು.


ಉದಯವಾಹಿನಿ ಚಿತ್ರ

> **ಉತ್ತಮ ಮಳೆಯಾಗಿದ್ದು ಹೊಲದಲ್ಲಿನ ಹೆಚ್ಚುವರಿ ನೀರನ್ನು ರೈತರು ಹೊರಗೆ ಹಾಕುವ ಮೂಲಕ ಬೆಳೆ ರಕ್ಷಣೆಗೆ ಆದ್ಯತೆ ನೀಡಬೇಕು. ನ್ಯಾನೋ ಯೂರಿಯಾ ಬಳಸಬೇಕು.**
> –ಮಂಜುಳಾ ತೆಂಬದ, ಸಹಾಯಕ ನಿರ್ದೇಶಕಿ, ತಾಲ್ಲೂಕು ಕೃಷಿ ಇಲಾಖೆ

> **ತಿರುಮಲಕೊಪ್ಪದಲ್ಲಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿ ನಿಲಯ ವ್ಯವಸ್ಥಿತವಾಗಿಲ್ಲ. ಅಧಿಕಾರಿಗಳು ಖುದ್ದು ಭೇಟಿ ನೀಡಿ ಪರಿಶೀಲಿಸಿ ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ಕ್ರಮವಹಿಸಬೇಕು.**
> –ರಾಮಚಂದ್ರ ಹೊಸಮನಿ, ಇಒ, ತಾಲ್ಲೂಕು ಪಂಚಾಯಿತಿ

ಗ್ರಾಮೀಣ ಪ್ರದೇಶದಲ್ಲಿ ಜಲಜೀವನ್ ಮಿಷನ್ ಯೋಜನೆ ಸಮರ್ಪಕವಾಗಿ ಅನುಷ್ಠಾನವಾಗುತ್ತಿಲ್ಲ. ಕಲುಷಿತ ನೀರನ್ನು ಜನರಿಗೆ ಪೂರೈಸಲಾಗುತ್ತಿದೆ ಎಂಬ ದೂರುಗಳಿವೆ. ಆದಷ್ಟು ಬೇಗ ಸಮಸ್ಯೆ ಬಗೆಹರಿಸಿ, ಜನರಿಗೆ ಶುದ್ಧ ಕುಡಿಯುವ ನೀರು ಪೂರೈಸಬೇಕು ಎಂದು ಗ್ರಾಮೀಣ ಕುಡಿಯುವ ನೀರು, ನೈರ್ಮಲ್ಯ ಇಲಾಖೆಯ ಅಧಿಕಾರಿಗೆ ಸೂಚಿಸಿದರು. ಸರ್ಕಾರಿ ಶಾಲೆಯ ವಿದ್ಯಾರ್ಥಿಗಳಿಗೆ ಬಿಸಿಯೂಟದ ವೇಳೆ ವಿತರಿಸುತ್ತಿರುವ ಬಾಳೆ ಹಣ್ಣು ಗುಣಮಟ್ಟವಾಗಿಲ್ಲ. ಹಣ್ಣು ಪರಿಶೀಲಿಸಿ, ವಿತರಿಸಬೇಕು ಎಂದು ತಾಲ್ಲೂಕು ಪಂಚಾಯಿತಿ ಇಒ ರಾಮಚಂದ್ರ ಹೊಸಮನಿ, ಶಿಕ್ಷಣಾಧಿಕಾರಿಗಳಿಗೆ ಸೂಚಿಸಿದರು. ಸರ್ಕಾರಿ ಶಾಲೆಗಳಲ್ಲಿ ಕೆಲ ಮಕ್ಕಳು ಹಾಲು ಕುಡಿಯಲು ಇಷ್ಟಪಡುತ್ತಿಲ್ಲ ಎಂಬ ಮಾಹಿತಿ ಇದೆ. ಹಾಲು ಕುಡಿಯುವಂತೆ ಮಕ್ಕಳ ಮನವೊಲಿಸಬೇಕು. ಸಮವಸ್ತ್ರ, ಪಠ್ಯ ಪುಸ್ತಕ, ಶೂ, ಸಾಕ್ಸ್ ವಿತರಣೆಯಲ್ಲಿ ಯಾವುದೇ ವ್ಯತ್ಯಾಸವಾಗದಂತೆ ಬಿಇಒ ಗಮನಹರಿಸಬೇಕು ಎಂದರು.

ಶಾಲಾ ಮಕ್ಕಳಿಗೆ ಈಗಾಗಲೇ ಸಮವಸ್ತ್ರ, ಪಠ್ಯಪುಸ್ತಕ ವಿತರಿಸಲಾಗಿದೆ. ಶೂ, ಸಾಕ್ಸ್ ಶೀಘ್ರದಲ್ಲಿಯೇ ವಿತರಿಸಲಾಗುವುದು. ಶಿಕ್ಷಕರ ಕೊರತೆ ಇದ್ದು, ಅತಿಥಿ ಶಿಕ್ಷಕರನ್ನು ನೇಮಿಸಿಕೊಳ್ಳುವ ಮೂಲಕ ಮಕ್ಕಳ ಬೋಧನೆಗೆ ತೊಂದರೆಯಾಗಂತೆ ಕ್ರಮವಹಿಸಲಾಗಿದೆ ಎಂದು ಹುಬ್ಬಳ್ಳಿ ಗ್ರಾಮೀಣ ಬಿಇಒ ಉಮೇಶ ಬೊಮ್ಮಕ್ಕನವರ ಮಾಹಿತಿ ನೀಡಿದರು. ಕುಸುಗಲ್ ಗ್ರಾಮದ ಶಾಲೆಗೆ ಸಿಸಿ ಟಿವಿ ಕ್ಯಾಮೆರಾ ಅಳವಡಿಸಬೇಕಿದೆ.

**ಕೃಷಿ ಹೊಂಡ ನಿರ್ಮಾಣಕ್ಕೆ ಆದ್ಯತೆ ನೀಡಿ**

**ಕೃಷಿಹೊಂಡ ನಿರ್ಮಾಣಕ್ಕೆ ಆದ್ಯತೆ ನೀಡಬೇಕು. ಹೊಂಡದ ಸುತ್ತ ತಂತಿ ಬೇಲಿ ಅಳವಡಿಸಬೇಕು. ಹೆಸರು ಕಾಳು ಖರೀದಿ ಕೇಂದ್ರ ತೆರೆಯಲು ಪ್ರಸ್ತಾವ ಸಲ್ಲಿಸಬೇಕು ಎಂದು ತಾಲ್ಲೂಕು ಕೃಷಿ ಇಲಾಖೆಯ ಸಹಾಯಕ ನಿರ್ದೇಶಕಿ ಮಂಜುಳಾ ತೆಂಬದ ಅವರಿಗೆ ತಾ.ಪಂ. ಇಒ ರಾಮಚಂದ್ರ ಹೊಸಮನಿ ಸೂಚಿಸಿದರು. ರೈತರ ಬೇಡಿಕೆಗೆ ತಕ್ಕಂತೆ ಯೂರಿಯಾ ಗೊಬ್ಬರವನ್ನು ವಿತರಿಸಲಾಗಿದೆ. ನಮ್ಮಲ್ಲಿ 175 ಮೆಟ್ರಿಕ್ ಟನ್ ಹೆಚ್ಚುವರಿ ಯೂರಿಯಾ ದಾಸ್ತಾನು ಇದೆ. ರೈತರು ಹೆಚ್ಚು ಯೂರಿಯಾ ಬಳಸದೇ ನ್ಯಾನೊ ಯೂರಿಯಾ ಬಳಸುವಂತೆ ಸಲಹೆ ನೀಡಲಾಗಿದೆ ಎಂದು ಮಂಜುಳಾ ತೆಂಬದ ಮಾಹಿತಿ ನೀಡಿದರು.**

ಮಂಟೂರಿನಲ್ಲಿನ ಸರ್ಕಾರಿ ಶಾಲೆಯ ಮಕ್ಕಳಿಗೆ ಶುದ್ಧ ಕುಡಿಯುವ ನೀರು ಒದಗಿಸಲು ಕ್ರಮ ವಹಿಸಬೇಕು. ಶಾಲೆ ಬಿಟ್ಟ ಮಕ್ಕಳನ್ನು ಪುನಃ ಶಾಲೆ ಕರೆತರಬೇಕು ಎಂದು ತಾ.ಪಂ ಇಒ ಸೂಚಿಸಿದರು. ಕೋಳಿವಾಡ ಗ್ರಾಮದಲ್ಲಿನ ವಸತಿ ನಿಲಯದ ವಿದ್ಯಾರ್ಥಿಗಳಿಗೆ ಶುದ್ಧ ಕುಡಿಯುವ ನೀರು ಪೂರೈಸುವ ನಿಟ್ಟಿನಲ್ಲಿ ಆರ್‌ಒ ಫಿಲ್ಟರ್ ಅಳವಡಿಸಲಾಗುತ್ತಿದೆ. ಸ್ನಾನ ಗೃಹ, ಶೌಚಾಲಯ ನಿರ್ಮಾಣ ಕಾಮಗಾರಿ ಕೈಗೊಳ್ಳಲಾಗಿದೆ. ಎರಡು ಸಮುದಾಯ ಭವನ ನಿರ್ಮಾಣಕ್ಕೆ ಅನುದಾನದ ಕೊರತೆಯಿದೆ. ವಿವಿಧ ಯೋಜನೆಗಳ ಸೌಲಭ್ಯಕ್ಕಾಗಿ ಸಲ್ಲಿಸಿರುವ ಅರ್ಜಿಗಳು ತ್ವರಿತ ವಿಲೇವಾರಿ ಮಾಡಲಾಗುತ್ತಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕಿ ಪ್ರಿಯದರ್ಶಿನಿ ಹಿರೇಮಠ ತಿಳಿಸಿದರು.

## ಶಾಸಕ ಯತ್ನಾಳ ವಿರುದ್ಧ ಕಪ್ಪುಬಟ್ಟೆ ಪ್ರದರ್ಶನ, ಮುತ್ತಿಗೆ ಹಾಕಲು ಯತ್ನ

• ಉದಯವಾಹಿನಿ, ವಿಜಯಪುರ

ಮುಸ್ಲಿಂ ಯುವತಿಯರನ್ನು ಮದುವೆಯಾಗುವ ಹಿಂದೂ ಯುವಕರಿಗೆ 5 ಲಕ್ಷ ನಗದು ಪ್ರೋತ್ಸಾಹ ನೀಡುತ್ತೇನೆ ಎಂದು ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರು ಇತ್ತೀಚೆಗೆ ಕೊಪ್ಪಳದಲ್ಲಿ ನೀಡಿದ ಹೇಳಿಕೆ ವಿರೋಧಿಸಿ ಜಿಲ್ಲೆಯ ಆಲಮೇಲ ಪಟ್ಟಣದಲ್ಲಿ ಭಾನುವಾರ ಯತ್ನಾಳಗೆ ಮುಸ್ಲಿಂ ಯುವಕರು ಕಪ್ಪು ಬಟ್ಟೆ ಪ್ರದರ್ಶಿಸಿದರು. ಮಹಿಳೆಯರು ಮುತ್ತಿಗೆ ಹಾಕಲು ಯತ್ನಿಸಿದರು.

ಸಿದ್ಧಸಿರಿ ಬ್ಯಾಂಕಿನ ನೂತನ ಕಟ್ಟಡ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸಲು ಯತ್ನಾಳ ಅವರು ಆಲಮೇಲ ಪಟ್ಟಣದ ಅಂಬೇಡ್ಕರ್ ವೃತ್ತದ ಬಳಿ ಬರುತಿದ್ದಂತೆ ಕಾರು ಅಡ್ಡಗಟ್ಟಿದ ಎಂಟತ್ತು ಯುವಕರ ಗುಂಪು ಕಪ್ಪು ಬಟ್ಟೆ ಪ್ರದರ್ಶಿಸಿ, ಘೋಷಣೆ ಕೂಗಿದರು. ಸ್ಥಳದಲ್ಲಿದ್ದ ಪೊಲೀಸರು


ಉದಯವಾಹಿನಿ ಚಿತ್ರ

ಯುವಕರನ್ನು ವಶಕ್ಕೆ ಪಡೆದು, ಯಾವುದೇ ಅಹಿತಕರ ಘಟನೆಯಾಗದಂತೆ ತಡೆದರು. ಬಳಿಕ ಕಾರ್ಯಕ್ರಮ ನಡೆಯುತ್ತಿರುವ ಸ್ಥಳಕ್ಕೆ ಬಂದ ಆರೇಳು ಮುಸ್ಲಿಂ ಮಹಿಳೆಯರು ಯತ್ನಾಳಗೆ ಮುತ್ತಿಗೆ ಹಾಕಲು ಯತ್ನಿಸಿದರು. ಕುಳಿತಿದ್ದ ವೇದಿಕೆ ಏರಲು ಮುಂದಾದ ಮಹಿಳೆಯರನ್ನು ಪೊಲೀಸರು ತಡೆದರು. ಯತ್ನಾಳ ಜೊತೆ ನಾವು ಮಾತನಾಡಬೇಕು ನಮ್ಮನ್ನು ಬಿಡಿ ಎಂದು ಮಹಿಳೆಯರು ಹಠ ಹಿಡಿದರು. ಅದಕ್ಕೆ ಪೊಲೀಸರು ಅವಕಾಶ ನೀಡಲಿಲ್ಲ. ಈ ವೇಳೆ ಪೊಲೀಸರೊಂದಿಗೆ ಮಹಿಳೆಯರು ವಾಗ್ವಾದ ನಡೆಸಿದರು. ಬಳಿಕ ಪೊಲೀಸರು ಮಹಿಳೆಯನ್ನು ವಶಕ್ಕೆ ಪಡೆದು, ಠಾಣೆಗೆ ಕರೆದೊಯ್ದರು. ಘಟನೆಯ ಬಳಿಕ ಬಿಗಿ ಪೊಲೀಸ್ ಬಂದೂಬಸ್ತಿನಲ್ಲಿ ಶಾಸಕ ಬಸನಗೌಡ ಯತ್ನಾಳ ವಿಜಯಪುರಕ್ಕೆ ತೆರಳಿದರು. ನಂತರ ಪಟ್ಟಣದ ಮುಸ್ಲಿಂ ಸಮುದಾಯದ ನೂರಾರು ಜನರು ಪೊಲೀಸ್ ಠಾಣೆಗೆ ಮುತ್ತಿಗೆ ಹಾಕಿ, ಮಹಿಳೆಯರನ್ನು ಠಾಣೆಗೆ ಯಾಕೆ ಕರೆ ತಂದಿದ್ದೀರಿ, ತಕ್ಷಣ ಅವರನ್ನು ಬಿಡುಗಡೆ ಮಾಡಿ ಎಂದು ಆಗ್ರಹಿಸಿದರು. ಈ ವೇಳೆ ಪೊಲೀಸರೊಂದಿಗೆ ವಾಗ್ವಾದ ನಡೆಯಿತು.

ಆಲಮೇಲ ಠಾಣೆ ಪಿಎಸ್‌ಐ ಅರವಿಂದ ಅಂಗಡಿ, ಸಿಪಿಐ ನಾನಗೌಡ ಪೊಲೀಸ್ ಪಾಟೀಲ ಅವರು ಮುಸ್ಲಿಂ ಮುಖಂಡರ ಜೊತೆ ಮಾತನಾಡಿ, ಮಹಿಳೆಯರನ್ನು ಬಿಟ್ಟು ಕಳುಹಿಸಿದರು.

## ಬಾಲ್ಯ ವಿವಾಹ ದುಷ್ಪಾರಿಣಾಮ ಕುರಿತು ಬೀದಿ ನಾಟಕ ಪ್ರದರ್ಶನ

• ಉದಯವಾಹಿನಿ, ಚಿತ್ರದುರ್ಗ

ಚಿತ್ರದುರ್ಗ ನಗರದ ಮಾರುತಿ ನಗರ ಆರೋಗ್ಯ ಕೇಂದ್ರ ವ್ಯಾಪ್ತಿಯ ಭೋವಿ ಕಾಲೋನಿಯಲ್ಲಿ ಇಂದು ಬಾಲ್ಯ ವಿವಾಹ ತಡೆ ಹಾಗೂ ದುಷ್ಪಾರಿಣಾಮಗಳ ಕುರಿತು ಬೀದಿ ನಾಟಕ ಪ್ರದರ್ಶನ ನಡೆಯಿತು. ಬಾಲ್ಯ ವಿವಾಹ ತಡೆ ಕುರಿತು ಕರಪತ್ರಗಳು ಮತ್ತು ಪೋಸ್ಟರ್ ಪ್ರದರ್ಶನದ ಮುಖಾಂತರ ನಿಲ್ಲಿಸಿ ನಿಲ್ಲಿಸಿ ಬಾಲ್ಯ ವಿವಾಹ ನಿಲ್ಲಿಸಿ ಎಂಬ ಘೋಷಣೆಗಳನ್ನು ಹಾಕುತ್ತಾ ಬಾಲ್ಯ ವಿವಾಹದಿಂದ ಆಗುವ ದುಷ್ಪರಿಣಾಮಗಳ ಕುರಿತು ಕಲಾನಿಧಿ ಜಾನಪದ ಕಲಾತಂಡದಿಂದ ಸಾರ್ವಜನಿಕರಿಗೆ ಜಾಗೃತಿ ಮೂಡಿಸದರು.

ತಾಯಿ ಮರಣ, ಶಿಶು ಮರಣ ತಡೆಯಲು ಬಾಲ್ಯ ವಿವಾಹಕ್ಕೆ ಮೊದಲು ಕಡಿವಾಣ ಹಾಕಬೇಕು ಎಂದು ಬಾಲ್ಯ ವಿವಾಹದ ದುಷ್ಪಾರಿಣಾಗಳ ಕುರಿತು ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೃಷ್ಣನಾಯಕ್ ಜಾಗೃತಿ ಮೂಡಿಸಿದರು. ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿ, ಬಾಲ್ಯ ವಿವಾಹ ಶಿಕ್ಷಾರ್ಹ ಅಪರಾಧ ಒಂದೆಡೆಯಾದರೆ, ಬಾಲ್ಯ


ಉದಯವಾಹಿನಿ ಚಿತ್ರ


ವಿವಾಹ ಮಾಡಿ ನಮ್ಮ ಮನೆಯ ಮಗಳನ್ನು ಸಾವಿನಾಚೆಗೆ ತಳ್ಳಬಾರದು. ಆರೋಗ್ಯವಂತ ಮಗು ದೇಶದ ಸಂಪತ್ತು ಆರೋಗ್ಯವಂತ ಮಕ್ಕಳು ಜನಿಸಬೇಕಾದರೆ ತಾಯಿಯ ಆರೋಗ್ಯ ಬಹು ಮುಖ್ಯ. ತಾಯಿಯಂತೆ ಮಗಳು ನೂಲಿನಂತೆ ಸೀರೆ ದೇಹದಾಢ್ಯತೆ ಇಲ್ಲದ ಅಂಗಾಂಗ ಬೆಳವಣಿಗೆಗಳಾಗದ ಬಾಲಕಿಯರಿಗೆ ಮದುವೆ ಮಾಡಿ ಸಮಸ್ಯೆಗೆ ಸಿಲುಕಬೇಡಿರಿ ಎಂದರು. ಕಾರ್ಯಕ್ರಮದಲ್ಲಿ ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿಗಳಾದ ರೂಪ, ಲಕ್ಕಮ್ಮ, ಆರೋಗ್ಯ ನಿರೀಕ್ಷಣಾಧಿಕಾರಿ ಸುಪ್ರೀತಾ, ಜಬ್ಬರ್ ಸಾಹೇಬ್, ತಾಯಂದಿರು ಮತ್ತು ಮಕ್ಕಳು ಸೇರಿದಂತೆ ಸಾರ್ವಜನಿಕರು ಹಾಜರಿದ್ದರು.

## ನೀರು ಹರಿಸುವ ಕಾರ್ಯಕ್ಕೆ ಚಾಲನೆ

• ಉದಯವಾಹಿನಿ, ಅರಕಲಗೂಡು

ಅಡಿಕೆ ಬೊಮ್ಮನ ಹಳ್ಳಿ ಏತನೀರಾವರಿ ಯೋಜನೆಯು ಕಸಬಾ ಹೋಬಳಿಯ 33 ಗ್ರಾಮಗಳ 850 ಎಕರೆ ಕೃಷಿ ಜಮೀನಿಗೆ ನೀರೊದಗಿಸಲಿದೆ ಎಂದು ಶಾಸಕ ಎ. ಮಂಜು ತಿಳಿಸಿದರು. ಏತನೀರಾವರಿ ಯೋಜನೆಯಿಂದ ನೀರು ಹರಿಸುವ ಕಾರ್ಯಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, 2007ರಲ್ಲಿ ಪೂರ್ಣಗೊಂಡಿರುವ ಈ ಯೋಜನೆಯಿಂದ 65 ಕೆರೆಗಳಿಗೆ ನೀರು ತುಂಬಿಸಲಾಗುತ್ತಿದೆ. ವಿತರಣಾ ನಾಲೆಗಳ ನಿರ್ಮಾಣಕ್ಕೆ ವಶಪಡಿಸಿ ಕೊಂಡಿರುವ 359 ಎಕರೆ ಪ್ರದೇಶ ವ್ಯಾಪ್ತಿಯಲ್ಲಿ 169 ಎಕರೆಗೆ ಪರಿಹಾರ ಧನ ವಿತರಿಸಲಾಗಿದೆ ಎಂದರು.

ಪ್ರಸ್ತುತ 2.5 ಕೋಟಿ ಹಣ ಬಿಡುಗಡೆಯಾಗಿದ್ದು ಉಳಿದ 120 ಎಕರೆ ಪ್ರದೇಶ ವ್ಯಾಪ್ತಿಗೆ ಪರಿಹಾರಧನ ವಿತರಿಸಲು ಕ 34 ಕೋಟಿ ಹಣ ಅಗತ್ಯವಿದ್ದು ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದೆ ಎಂದರು. ದಶಕ ಕಳೆದರೂ ಪರಿಹಾರ ಧನ ವಿತರಿಸಲು ಸರ್ಕಾರದ ಗಮನ ಸೆಳೆದು ಕ್ರಮ ವಹಿಸಲಾಗುವುದು. ರೈತರು ಅರೆ ನೀರಾವರಿ ಬೆಳೆ ಬೆಳೆಯುವುದು ಸೂಕ್ತವಾಗಿದ್ದು ಇದು ಆರ್ಥಿಕವಾಗಿ ಲಾಭ ತರಲಿದೆ ಎಂದರು.


ಉದಯವಾಹಿನಿ ಚಿತ್ರ

**ಸಂಪರ್ಕ ರಸ್ತೆ ನಿರ್ಮಾಣಕ್ಕೆ ಭೂಮಿ ಪೂಜೆ:** ತಾಲ್ಲೂಕಿನ ಮಲ್ಲಿಪಟ್ಟಣ ಹೋಬಳಿಯ ವಿವಿಧ ಗ್ರಾಮಗಳಲ್ಲಿ 1.67 ಕೋಟಿ ವೆಚ್ಚದಲ್ಲಿ ಸಂಪರ್ಕ ರಸ್ತೆ ನಿರ್ಮಾಣ ಕಾರ್ಯಕ್ಕೆ ಶಾಸಕ ಮಂಜು ಭೂಮಿ ಪೂಜೆ ನೆರವೇರಿಸಿದರು. ಅಂಬಿಗೋಡನಹಳ್ಳಿ, ಸಿಂಗನಕುಪ್ಪೆ, ಮಾಗಲು ಕೊಪ್ಪಲು ಗ್ರಾಮಗಳಿಗೆ ತಲಾ 20 ಲಕ್ಷ, ಬಸವನಹಳ್ಳಿ 25 ಲಕ್ಷ, ಯಡಿಯೂರು ರೂ 35 ಲಕ್ಷ, ಬೆಮ್ಮತ್ತಿ 22 ಲಕ್ಷ ಹಾಗೂ ಕಾಕೋಡನಹಳ್ಳಿ ಗ್ರಾಮಕ್ಕೆ 25 ಲಕ್ಷ ಹಣ ನೀಡಲಾಗಿದೆ. ಕ್ಷೇತ್ರಕ್ಕೆ ಒದಗಿಸಿದ್ದ 10 ಕೋಟಿ ಹಣದಲ್ಲಿ ಜಿಪಂ ಅನುದಾನದಲ್ಲಿ ಮಲ್ಲಿಪಟ್ಟಣ ಹೋಬಳಿಗೆ 1.67 ಕೋಟಿ ಅನುದಾನ ನೀಡಲಾಗಿದೆ. ಗುಣಮಟ್ಟದ ಕಾಮಗಾರಿ ನಡೆಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದು ಗ್ರಾಮಸ್ಥರು ಸಹ ಕಾಮಗಾರಿ ಬಗ್ಗೆ ಗಮನ ಹರಿಸಬೇಕು ಎಂದರು.

## ಸಂಚಾರ ದಟ್ಟಣೆ, ಪ್ರವಾಸಿಗರು ಹೈರಾಣ

• ಉದಯವಾಹಿನಿ, ಹೊಸಪೇಟೆ

ಮಳೆ ಕಡಿಮೆಯಾಗಿ ನಿರೀಕ್ಷೆಗೂ ಮೀರಿ ಪ್ರವಾಸಿಗರು ಹಂಪಿಗೆ ಬಂದ ಕಾರಣ ಎಲ್ಲೆಡೆ ಸಂಚಾರ ದಟ್ಟಣೆ ಕಂಡುಬಂತು. ಸೂಕ್ತ ಮೂಲಸೌಲಭ್ಯ ಕಲ್ಪಿಸದ ಆಡಳಿತ ವ್ಯವಸ್ಥೆಗೆ ಪ್ರವಾಸಿಗರು ಹಿಡಿಶಾಪ ಹಾಕಿದರು. ಸರಣಿ ರಜೆ ಇದೆ, ಸಹಜವಾಗಿಯೇ ಹಂಪಿಗೆ ಪ್ರವಾಸಿಗರು ಅಧಿಕ ಸಂಖ್ಯೆಯಲ್ಲಿ ಬರುತ್ತಾರೆ ಎಂಬ ನಿರೀಕ್ಷೆ ಇದ್ದೇ ಇರುತ್ತದೆ. ಅದಕ್ಕೆ ತಕ್ಕಂತೆ ಕನಿಷ್ಠ ಮೂಲಸೌಲಭ್ಯ ಕಲ್ಪಿಸಬೇಡವೇ ನಾವು ಮತ್ತೊಮ್ಮೆ ಇಲ್ಲಿಗೆ ಬರಬೇಕೇ, ಬೇಡವೇ ಎಂಬುದು ಹಲವು ಪ್ರವಾಸಿಗರ ಪ್ರಶ್ನೆಯಾಗಿತ್ತು.

ವಿಜಯವಿಠಲ ದೇವಸ್ಥಾನದ ಗೆಜ್ಜಲ ಮಂಟಪದಿಂದ ಆರಂಭವಾದ ವಾಹನ ದಟ್ಟಣೆ ಎರಡು ಕಿ.ಮೀ. ದೂರದ ಟಾಮರೆಂಡ್ ಟೀ ರೆಸಾರ್ಟ್ ತನಕವೂ ಇತ್ತು. ಹೊಂಡ, ಗುಂಡಿಗಳಿಂದ ಕೂಡಿದ ಉಗ್ರ ನರಸಿಂಹ ಸಮೀಪ ವಾಹನ ನಿಲುಗಡೆಗೆ ಸ್ಥಳವೇ ಇರಲಿಲ್ಲ. ವಿರೂಪಾಕ್ಷ ದೇವಸ್ಥಾನಕ್ಕೆ ತೆರಳುವ ಹೇಮಕೂಟ ಏರು ಮಾರ್ಗದಲ್ಲೂ ಹಲವು ವಾಹನಗಳು ಸಂಚಾರ ದಟ್ಟಣೆಯಲ್ಲಿ ಸಿಲುಕಿದ್ದವು. ಪ್ರವಾಸಿಗರಿಗೆ ಅಗತ್ಯದ ಮೂಲಸೌಲಭ್ಯ ಒದಗಿಸದಿದ್ದರೆ ಅವರು ಮುಂದಿನ ಬಾರಿ ಬರುತ್ತಾರೆಯೇ? ಇದರ ನೇರ ಹೊಡೆತ


ಉದಯವಾಹಿನಿ ಚಿತ್ರ

ಬೀಳುವುದು ರಿಕ್ಷಾಗಳು, ಗೈಡ್‌ಗಳಿಗೆ ಎಂದು ಪ್ರವಾಸಿ ಮಾರ್ಗದರ್ಶಿಯೊಬ್ಬರು ಅಳಲು ತೋಡಿಕೊಂಡರು.

**1 ಲಕ್ಷ ಮಂದಿ ಭೇಟಿ:** ಸಾಲು ಸಾಲು ರಜೆ ಇದ್ದ ಕಾರಣ ಹಂಪಿಗೆ ಶನಿವಾರ 70 ಸಾವಿರದಿಂದ 1 ಲಕ್ಷದವರೆಗೆ ಪ್ರವಾಸಿಗರು ಬಂದಿರಬಹುದು ಎಂಬ ಅಂದಾಜು ಮಾಡಲಾಗಿದೆ. ಕಮಲಾಪುರ, ಕಡ್ಡಿರಾಂಪುರ, ಹೊಸಪೇಟೆಗಳಲ್ಲಿ ಬಹುತೇಕ ಲಾಡ್ಜ್, ಕಾಟೇಜ್‌ಗಳು ಭರ್ತಿಯಾಗಿದ್ದವು. ಇವುಗಳ ದರ ದುಪ್ಪಟ್ಟು, ಮೂರು ಪಟ್ಟು ಏರಿಕೆಯಾಗಿದ್ದು ಸಹ ಕಂಡುಬಂತು. ಮತ್ತೊಂದೆಡೆ ಟಿ.ಬಿ.ಡ್ಯಾಂಗೂ ಭಾರಿ ಸಂಖ್ಯೆಯಲ್ಲಿ ಪ್ರವಾಸಿಗರು ಬಂದಿದ್ದರು.

**ಜಾರಿಕೊಳ್ಳುವ ಪರಿ**

**ಹಂಪಿ ಹಲವು ಇಲಾಖೆಗಳ ಸುಪರ್ದಿಗೆ ಒಳಪಡುವ ಪ್ರವಾಸಿ ತಾಣವಾಗಿದ್ದು ಹೊಣೆಗಾರಿಕೆ ವಹಿಸಿಕೊಳ್ಳಲು ಯಾವ ಇಲಾಖೆಯೂ ಸಿದ್ಧವಿಲ್ಲ. ಮೂಲಸೌಲಭ್ಯ ಸಂಚಾರ ದಟ್ಟಣೆ ಸಹಿತ ಪ್ರವಾಸಿಗರಿಗೆ ಸೌಲಭ್ಯ ಕಲ್ಪಿಸಿಕೊಡುವ ಕೆಲಸವನ್ನು ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ (ಎಎಸ್‌ಐ) ಹಂಪಿ ವಿಶ್ವಪಾರಂಪರಿಕ ತಾಣ ನಿರ್ವಹಣಾ ಪ್ರಾಧಿಕಾರ (ಹವಾಮ) ಮಾಡಬೇಕು ಎಂದು ಹೇಳಿದ ಪ್ರವಾಸೋದ್ಯಮ ಇಲಾಖೆಯ ಅಧಿಕಾರಿಯೊಬ್ಬರು ಪ್ರವಾಸಿಗರಿಗೆ ಆಗುವ ತೊಂದರೆಗೂ ನಿಮಗೂ ಸಂಬಂಧವೇ ಇಲ್ಲವೇ ಎಂದು ಕೇಳಿದ್ದಕ್ಕೆ ನಿರುತ್ತರರಾದರು.**

## ಕಲಿಯುಗದ ಮಹಾ ಸುಳ್ಳುಗಾರ ಈಶ್ವರ ಖಂಡ್ರೆ: ಭಗವಂತ ಖೂಬಾ

• ಉದಯವಾಹಿನಿ, ಬೀದರ್



ಸ್ವಾತಂತ್ರ್ಯೋತ್ಸವ ಮುಗಿಸಿದ ಮೇಲೆ ಸುಳ್ಳಿನ ಭಾಷಣ ಮಾಡಿ, ಮಾಧ್ಯಮಗಳ ಮುಂದೆ ನನ್ನ ಬಗ್ಗೆ ಅನಾಗರಿಕ ಹೇಳಿಕೆ ನೀಡಿರುವ ಈಶ್ವರ ಖಂಡ್ರೆ ಒಬ್ಬ ಮಹಾಸುಳ್ಳುಗಾರ ಎಂದು ಮಾಜಿ ಕೇಂದ್ರ ಸಚಿವ ಭಗವಂತ ಖೂಬಾ ತಿರುಗೇಟು ನೀಡಿದ್ದಾರೆ. ಜನರಿಗೆ ಹೇಸಿಗೆ ಬರುವಂತಹ ಭಾಷೆಗಳನ್ನು ಬಳಸಿ, ಅಹಂಕಾರದಿಂದ ಮಾತನಾಡಿದ ಈಶ್ವರ ಖಂಡ್ರೆ, ಈ ಕಲಿಯುಗದ ಒಬ್ಬ ಮಹಾನ್ ಮೋಸಗಾರ. ಜೀವನಪೂರ್ತಿ ಸುಳ್ಳು ಮೋಸದಿಂದಲೇ ಬದುಕುವ ರೂಢಿ ಮಾಡಿಕೊಂಡಿದ್ದಾರೆ ಎಂದು ಹರಿಹಾಯ್ದರು.

ಜಿಲ್ಲೆಯಲ್ಲಿ ರೈತರಿಗೆ ಸಾಲ ಸಿಗುತ್ತಿಲ್ಲ. ಡಿಸಿಸಿ ಬ್ಯಾಂಕ್ ನಷ್ಟದಲ್ಲಿದೆ. ದರೋಡೆ, ಅಕ್ಕಿ, ಗಾಂಜಾ ಕಳ್ಳ ಸಾಗಾಣೆ, ಇಸ್ಪಿಟ್, ಮಟಕಾ ಕ್ಲಬ್‌ಗಳು, ಎಟಿಎಮ್ ದರೋಡೆ, ಕೊಲೆಯಂತಹ ಜ್ವಲಂತ ಸಮಸ್ಯೆಗಳನ್ನು ಬಿಟ್ಟು ವೈಯಕ್ತಿಕ ದ್ವೇಶಕ್ಕೆ ಇಳಿದಿದ್ದಾರೆ ಎಂದು ಆರೋಪಿಸಿದರು.

ಪ್ರಸಾದ ಯೋಜನೆಯಡಿ ನೀಡುವ ಅನುದಾನ ಕೇವಲ 5 ಕೋಟಿ. ಆದರೆ ನಾನು 22 ಕೋಟಿ ಅನುದಾನ ತಂದಿದ್ದೆ. ಮಾರ್ಚ್ 4, 2024ರಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಈ ಯೋಜನೆಗೆ ಶಂಕುಸ್ಥಾಪನೆ ಮಾಡಿದ್ದಾರೆ. ನಿಮಗೆ ತಾಕತ್ ಇದ್ದರೆ ರಾಜ್ಯ ಸರ್ಕಾರದಿಂದ 25 ಕೋಟಿ ಅನುದಾನ ಕೊಡಿಸಿ ಎಂದು ಸವಾಲು ಹಾಕಿದ್ದಾರೆ. ನಾನು ಮೋದಿ ಹೆಸರಿನ ಮೇಲೆ ಗೆದ್ದಿದ್ದೀನಿ ಎಂದು ಹೆಮ್ಮೆಯಿಂದ ಹೇಳಿಕೊಳ್ಳುತ್ತೇನೆ, ನನ್ನಂತಹ ಒಬ್ಬ ಸಾಮಾನ್ಯ ಕಾರ್ಯಕರ್ತ ಗೆಲ್ಲಬೇಕಾದರೆ ಪಕ್ಷ, ಸಂಘಟನೆ, ಮೋದಿ ಶಕ್ತಿಯಿಂದಲೆ ಸಾಧ್ಯ. ನಿಮಗೆ ಆ ಶಕ್ತಿ ಇದ್ದರೆ ಮುಂಬರುವ ಚುನಾವಣೆಯಲ್ಲಿ ಕಾಂಗ್ರೆಸ್ ನೆರಳಿನಿಂದ ಆಚೆ ಬಂದು ಸ್ವತಂತ್ರ ಅಭ್ಯರ್ಥಿಯಾಗಿ ನಿಂತು ಗೆದ್ದು ತೋರಿಸಿ ಎಂದು ಕೇಳಿದರು.

ನಾನು 10 ವರ್ಷ ಸಂಸದನಾಗಿ ಮಾಡಿರುವ ಅಭಿವೃದ್ಧಿ ಕಾರ್ಯಗಳನ್ನು ರಾಜ್ಯದ ಜನ ನೋಡಿ, ಮೆಚ್ಚಿದ್ದಾರೆ. ನಿಮ್ಮ ಮಗನ ಸಾಧನೆ ಏನು ಎನ್ನುವುದು ಕೂಡ ಜನರಿಗೆ ಗೊತ್ತಿದೆ. ಅದನ್ನು ಮರೆಮಾಚಲು ಸುಳ್ಳಿನ ಮೇಲೆ ಸುಳ್ಳು ಹೇಳುತ್ತಿದ್ದೀರಿ. ನಾವು ಮಾಡಿದ ಕೆಲಸಗಳೆಲ್ಲಾ ನಿಮ್ಮ ಮಗ ಮಾಡಿದ್ದು ಎಂದು ನಿಮ್ಮ ಮಗನ ಅವಧಿ ಮುಗಿಯುವವರೆಗೂ ಸುಳ್ಳು ಹೇಳಿಕೊಂಡೆ ತಿರುಗಾಡಿ ಎಂದು ಖಂಡ್ರೆಗೆ ಲೇವಡಿ ಮಾಡಿದರು.

ಒಬ್ಬ ತಂದೆಯಾಗಿ ಮಕ್ಕಳಿಗೆ ಸತ್ಯ ಮತ್ತು ಧರ್ಮ ಮಾರ್ಗದಲ್ಲಿ ನಡೆಯಲು ಹೇಳಿಕೊಡಬೇಕು, ಆದರೆ ಈಶ್ವರ ಖಂಡ್ರೆ ಅವರ ಮಗನಿಗೆ ಅಸತ್ಯ ಮತ್ತು ಅಧರ್ಮದ ಮಾರ್ಗದಲ್ಲಿ ರಾಜಕಾರಣ ಮಾಡಬೇಕೆಂದು ಹೇಳಿಕೊಡುತ್ತಿದ್ದಾರೆ ಎಂದರು.

## ಅತಿವೃಷ್ಟಿ: ಪರಿಹಾರಕ್ಕೆ ಕೇಂದ್ರದ ಮೇಲೆ ಒತ್ತಡ ಹಾಕಲಿ

• ಉದಯವಾಹಿನಿ, ಕಲಬುರಗಿ

ರಾಜ್ಯದಾದ್ಯಂತ ಭಾರಿ ಮಳೆ ಬಿದ್ದಿದ್ದರಿಂದ ಹೆಸರು, ಉದ್ದು ಸಂಪೂರ್ಣ ಹಾಳಾಗಿವೆ. ಅತಿವೃಷ್ಟಿಗೆ ಪರಿಹಾರ ನೀಡುವಂತೆ ಬಿಜೆಪಿಯ 17 ಸಂಸದರು ಕೇಂದ್ರ ಸರ್ಕಾರದ




ಮೇಲೆ ಒತ್ತಡ ಹಾಕಬೇಕು ಎಂದು ಯೋಜನಾ ಮತ್ತು ನೀತಿ ಆಯೋಗದ ಉಪಾಧ್ಯಕ್ಷ, ಶಾಸಕ ಬಿ.ಆರ್.ಪಾಟೀಲ ಒತ್ತಾಯಿಸಿದರು.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದೊಂದು ತಿಂಗಳಲ್ಲಿ ಜಿಲ್ಲೆಯಲ್ಲಿ ವಾಡಿಕೆಗಿಂತ ಶೇ 50ರಷ್ಟು ಮಳೆ ಬಿದ್ದಿದೆ. ಇದರಿಂದ ಮುಂಗಾರಿನಲ್ಲಿ ಬಿತ್ತನೆಯಾಗಿದ್ದ ಹೆಸರು, ಉದ್ದು ರೈತರ ಕೈಸೇರುವುದು ಅನುಮಾನವಾಗಿದೆ. ಆರು ಲಕ್ಷ ಹೆಕ್ಟೇರ್‌ಗಿಂತ ಹೆಚ್ಚಿನ ಪ್ರದೇಶದಲ್ಲಿ ಬಿತ್ತನೆಯಾದ ತೊಗರಿಯೂ ಹಾಳಾಗುವ ಹಂತದಲ್ಲಿದೆ.

> **ಕಾಂಗ್ರೆಸ್ ಹೈಮಾಂಡ್ ಸದ್ಯ ಮತಗಳುವಿನ ಕುರಿತು ದಾಖಲೆ ಸಮೇತ ಹೋರಾಟ ಮಾಡುತ್ತಿದೆ. ಇಂತಹ ಸಂದರ್ಭದಲ್ಲಿ ಹೈಕಮಾಂಡ್ ನಿಲುವಿನ ಬಗ್ಗೆ ಮಾಜಿ ಸಚಿವ ಕೆ.ಎನ್.ರಾಜಣ್ಣ ಹಗುರವಾಗಿ ಮಾತನಾಡಿರುವುದು ಸರಿಯಲ್ಲ.**
> –ಬಿ.ಆರ್.ಪಾಟೀಲ, ಯೋಜನಾ ಆಯೋಗದ ಉಪಾಧ್ಯಕ್ಷ

ಇದಕ್ಕೆಲ್ಲ ಅತಿಯಾದ ಮಳೆ ಕಾರಣವಾಗಿದೆ. ಕೂಡಲೇ ಈ ಕುರಿತು ಕೇಂದ್ರದ ನರೇಂದ್ರ ಮೋದಿ ಸರ್ಕಾರಕ್ಕೆ ಸಂಸದರು ಪರಿಹಾರ ಬಿಡುಗಡೆಗಾಗಿ ಒತ್ತಡ ಹೇರಬೇಕು ಎಂದರು. ಅತಿವವೃಷ್ಟಿಯ ಅಂದಾಜು ಮಾಡಲು ರಾಜ್ಯ ಸರ್ಕಾರ ಕೂಡಲೇ ಸಮೀಕ್ಷಾ ತಂಡ ಕಳುಹಿಸುವಂತೆ ಕೇಂದ್ರದ ಮೇಲೆ ಒತ್ತಡ ಹಾಕಬೇಕು ಎಂದು ಒತ್ತಾಯಿಸಿದರು.

## ರಸ್ತೆಯುದ್ದಕ್ಕೂ ತಗ್ಗುದಿನ್ನೆ: ಸಂಚಾರ ಸಂಕಟ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಕೆಂಭಾವಿ

6 ಕಿ.ಮೀ ವಾಹನ ಕ್ರಮಿಸಲು ಹೆಚ್ಚೆಂದರೆ 10 ನಿಮಿಷ ಬೇಕಾತ್ತದೆ. ಆದರೆ ಕೆಂಭಾವಿಯಿಂದ ಯಡಿಯಾಪುರ ಗ್ರಾಮಕ್ಕೆ ತಲುಪಲು ಅರ್ಧ ಗಂಟೆಗೂ ಹೆಚ್ಚುಕಾಲ ಬೇಕು. ರಸ್ತೆಯುದ್ದಕ್ಕೂ ತಗ್ಗು ದಿನ್ನೆಗಳಿದ್ದು, ಅಲ್ಲಲ್ಲಿ ದೊಡ್ಡ ಗುಂಡಿಗಳು ನಿರ್ಮಾಣವಾಗಿವೆ. ವಾಹನಗಳು ಕುಂಟುತ್ತಾ ಸಾಗಬೇಕಾಗಿದ್ದು, ಇದರಿಂದ ಹೆಚ್ಚು ಸಮಯ ತೆಗೆದುಕೊಳ್ಳುತ್ತದೆ. ರಸ್ತೆಗಳ ಮೇಲಿನ ಗುಂಡಿಗಳನ್ನು ತಪ್ಪಿಸಲು ಹೋಗಿ ವಾಹನ ಸವಾರರು ಅಪಘಾತಗಳಿಗೆ ತುತ್ತಾಗಿದ್ದಾರೆ. ಗುಂಡಿಗಳನ್ನು ಸರಿಪಡಿಸುವಂತೆ ಜನರು ಅಧಿಕಾರಿ, ಜನಪ್ರತಿನಿಧಿಗಳಿಗೆ ಮನವಿ ಮಾಡಿದರೂ ಯಾವುದೇ ಪ್ರಯೋಜನ ಆಗಿಲ್ಲ. ಈ ಮಾರ್ಗದ ರಸ್ತೆಯಲ್ಲಿ ಸಂಚರಿಸುವ ವಾಹನಗಳ ಸವಾರರು ಸ್ವಲ್ಪ ಎಚ್ಚರ ತಪ್ಪಿದರೂ ಅನಾಹುತ ತಪ್ಪಿದ್ದಲ್ಲ. ರಸ್ತೆ ಸಂಪೂರ್ಣ ಹದಗೆಟ್ಟಿದ್ದು, ಇದು ಬೈಕ್, ಆಟೊ, ಕಾರು, ಸೈಕಲ್, ಟ್ರ್ಯಾಕ್ಟರ್ ಸೇರಿದಂತೆ ಹಲವು ವಾಹನಗಳ ಸವಾರರಿಗೆ ನುಂಗಲಾರದ ತುತ್ತಾಗಿದೆ. ನಿತ್ಯ ಶಾಲಾ ವಾಹನಗಳು ಬೆಳಿಗ್ಗೆ ಸಂಜೆ ಇದೇ ರಸ್ತೆಯಲ್ಲಿ ಸಂಚರಿಸುತ್ತಿದ್ದು, ಸಮಯಕ್ಕೆ ಸರಿಯಾಗಿ ಶಾಲೆಗೆ ತಲುಪಲು ಆಗುತ್ತಿಲ್ಲ ಎಂದು ಚಾಲಕ ಮಂಜು ಹೇಳುತ್ತಾರೆ.

ಮಳೆ ಬಂದರಂತೂ ವಾಹನ ಸವಾರರ ಪಾಡು ಹೇಳದಂತಾಗಿದೆ. ರಸ್ತೆಯುದ್ದಕ್ಕೂ ಅಕ್ಕ ಪಕ್ಕದಲ್ಲಿ ಜಾಲಿಗಿಡಗಳು ಬೆಳೆದಿದ್ದು ರಸ್ತೆ ಮಾಯವಾಗುತ್ತದೆ. ಈ ರಸ್ತೆಯು 6 ಕಿ.ಮೀ. ಇದ್ದು 3 ಕಿ.ಮೀ ಶಹಾಪುರ ಮತಕ್ಷೇತ್ರದಲ್ಲಿ ಬರುತ್ತಿದ್ದರೆ ಇನ್ನುಳಿದಿದ್ದು, ಸುರಪುರ ಮತಕ್ಷೇತ್ರಕ್ಕೆ ಒಳಪಡುತ್ತದೆ. ಹೀಗಾಗಿ ಈ ರಸ್ತೆ ಯಾವ ಶಾಸಕರು ಮಾಡಿಸಬೇಕೆಂಬುದೇ ತಿಳಿಯದಂತಾಗಿದೆ. ಅದೇನೆ ಇರಲಿ ಹಾಳಾಗಿರುವ ರಸ್ತೆಯನ್ನು ದುರಸ್ತಿಗೊಳಿಸುವುದು ಜನಪ್ರತಿನಿಧಿಗಳ ಕೆಲಸವಾಗಿದ್ದು, ಈ ಬಗ್ಗೆ ಇಬ್ಬರೂ ಶಾಸಕರು ಮುತುವರ್ಜಿ ವಹಿಸಬೇಕಿದೆ ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

### ದುರಸ್ತಿಯಲ್ಲಿ ತುಂಗಭದ್ರಾ ಜಲಾಶಯದ ಕ್ರಸ್ಟ್ ಗೇಟ್, ಆತಂಕದಲ್ಲಿ ರೈತರು

## ಚಿಂತೆಗೀಡಾದ ರಾಬಕೊವಿ ಜಿಲ್ಲೆಯ ರೈತರು

• ಉದಯವಾಹಿನಿ, ಕೊಪ್ಪಳ

ತುಂಗಭದ್ರಾ ಜಲಾಶಯದ 6ಕ್ರಸ್ಟ್ ಗೇಟ್ ದುರಸ್ತಿಯಲ್ಲಿರುವುದರಿಂದ ಜಲಾಶಯದಲ್ಲಿ ಹೆಚ್ಚಿನ ಪ್ರಮಾಣದ ನೀರು ಸಂಗ್ರಹಿಸುವ ಸಮಸ್ಯೆ ಎದುರಾಗಿದ್ದು, ಇಲ್ಲಿಯವರೆಗೆ ಅಂದಾಜು 130 ಟಿಎಂಸಿ ನೀರು ನದಿಗೆ ಹರಿದು ಹೋಗಿದ್ದರಿಂದ ಈ ಬಾರಿ ಎರಡನೆ ಬೆಳೆಗೆ ನೀರು ಲಭಿಸುತ್ತದೆಯೋ ಇಲ್ಲವೋ ಎಂಬ ಆತಂಕ ಆತಂಕ ಕೊಪ್ಪಳ, ವಿಜಯನಗರ, ಬಳ್ಳಾರಿ, ರಾಯಚೂರು ಜಿಲ್ಲೆಯ ರೈತರನ್ನು ಬಾಧಿಸುತ್ತಿದೆ. ಈ ಬಾರಿ ಉತ್ತಮ ಮಳೆಯಾಗಿ ತುಂಗಭದ್ರಾ ಜಲಾಶಯಕ್ಕೆ ಹೆಚ್ಚಿನ ಒಳಹರಿವಿದೆ. ಆದರೂ ಕ್ರಸ್ಟ್ ಗೇಟ್‌ಗಳಲ್ಲಿಕಾಣಿಸಿಕೊಂಡಿರುವ ಸಮಸ್ಯೆಯಿಂದಾಗಿ ಜಲಾಶಯದಿಂದ ಅಪಾರ ಪ್ರಮಾಣದ ನೀರನ್ನು ನದಿಗೆ ಬಿಡಲಾಗುತ್ತಿದೆ. 19ನೇ ಗೇಟ್ ಕೊಚ್ಚಿಹೋಗಿದ್ದರಿಂದ ಅಪಾರ ಪ್ರಮಾಣದ ನೀರು ಪೋಲಾಗಿತ್ತು.

ಒಂದು ವಾರದ ಕಾರ್ಯಾಚರಣೆ ಬಳಿಕ ಗೇಟ್ ತಾತ್ಕಾಲಿಕವಾಗಿ ಸರಿಪಡಿಸಲಾಗಿತ್ತು. ಈಗ 11, 18, 20, 24, 27, 28ನೇ ಗೇಟ್‌ಗಳು ದುರಸ್ತಿಯಲ್ಲಿವೆ ಎಂಬ ತಜ್ಞರ ಹೇಳಿಕೆಯಿಂದ ಈ ಗೇಟ್‌ಗಳ ಮೂಲಕ ನೀರು ಹರಿಸುವುದನ್ನು ಸ್ಥಗಿತಗೊಳಿಸಲಾಗಿದೆ.

ಒಂದು ವೇಳೆ ಅದನ್ನು ಲೆಕ್ಕಿಸದೆ ಗೇಟ್ ಮೇಲೆತ್ತುವ ಸಾಹಸ ಮಾಡಿದರೆ ಗೇಟ್ ತುಂಡಾಗುವ


ಉದಯವಾಹಿನಿ ಚಿತ್ರ

- **ರೈತರ 2ನೇ ಬೆಳೆಗೆ ನೀರು ಲಭ್ಯ, ಮರೀಚಿಕೆ**
- **ಈ ಸಲದ ಮುಂಗಾರಿನಲ್ಲಿ ಅಂದಾಜು 130 ಟಿಎಂಸಿ ನೀರು ಪೋಲಾಗಿದೆ.**



ಭೀತಿ ಎದುರಾಗಿದೆ. ಐಸಿಸಿ ನೀರಾವರಿ ಸಲಹಾ ಸಮಿತಿ ಅಧ್ಯಕ್ಷ ಹಾಗೂ ಕೊಪ್ಪಳ ಜಿಲ್ಲಾಉಸ್ತುವಾರಿ ಸಚಿವರೇ ಈ ಆತಂಕ ವ್ಯಕ್ತಪಡಿಸಿದ್ದು, ರೈತರನ್ನು ಮತ್ತಷ್ಟು ಸಂಕಷ್ಟಕ್ಕೆ ದೂಡಿದಂತಾಗಿದೆ.

ಒಟ್ಟು 105 ಟಿಎಂಸಿ ನೀರು ಸಂಗ್ರಹ ಸಾಮರ್ಥ್ಯವುಳ್ಳ ಜಲಾಶಯದಲ್ಲಿ ಗೇಟ್‌ಗಳ ಸಮಸ್ಯೆಯಿಂದ ಈ ಸಲದ ಮುಂಗಾರಿನಲ್ಲಿ ಅಂದಾಜು 130 ಟಿಎಂಸಿ ನೀರು ಪೋಲಾಗಿದೆ. ಜತೆಗೆ ಇನ್ನು ಮಳೆ ಮುಂದುವರಿದಿದ್ದು ಮುಂದಿನ ದಿನಗಳಲ್ಲಿಒಳಹರಿವು ಹೆಚ್ಚಾಗುವ ಸಾಧ್ಯತೆ ಇದೆ.

> **ತಜ್ಞರ ವರದಿ ಪ್ರಕಾರ 6 ಗೇಟ್‌ಗಳು ದುರಸ್ತಿಯಲ್ಲಿವೆ. ಅವುಗಳ ಮೂಲಕ ಸಂಪೂರ್ಣವಾಗಿ ನೀರು ಬಿಡಲು ಸಾಧ್ಯವಾಗುತ್ತಿಲ್ಲ. ಹೀಗಾಗಿ ಉಳಿದ ಗೇಟ್‌ಗಳಲ್ಲಿಹೆಚ್ಚಿನ ಪ್ರಮಾಣದ ನೀರು ಹರಿಸಲಾಗುತ್ತದೆ. ಈಗಾಗಲೇ ಜಲಾಶಯಕ್ಕೆ ಭೇಟಿ ನೀಡಿ, ಈ ಕುರಿತು ತಜ್ಞರ ಜೊತೆ ಚರ್ಚಿಸಿದ್ದೇನೆ. ಜಲಾಶಯದ ಎಲ್ಲಾ ಗೇಟ್‌ಗಳನ್ನು ಬದಲಿಸುವ ಅಗತ್ಯವಿದೆ.**
> –ಶಿವರಾಜ್ ತಂಗಡಗಿ, ಐಸಿಸಿ ನೀರಾವರಿ ಸಲಹಾ ಸಮಿತಿ ಅಧ್ಯಕ್ಷ

**ಒಂದೇ ಬೆಳೆಗೆ ನೀರು:** ಕೊಪ್ಪಳ, ರಾಯಚೂರು, ವಿಜಯನಗರ, ಬಳ್ಳಾರಿ ಜಿಲ್ಲೆ, ಆಂಧ್ರ, ತೆಲಂಗಾಣ ರಾಜ್ಯಗಳ ಜೀವನಾಡಿಯಾಗಿರುವ ತುಂಗಭದ್ರಾ ಜಲಾಶಯದ ನೀರನ್ನು ಕುಡಿಯಲು, ಕೃಷಿ ಚಟುವಟಿಕೆಗಳಿಗೆ ಬಳಸುತ್ತಾರೆ. ಪ್ರತಿವರ್ಷ ಎರಡು ಭತ್ತದ ಬೆಳೆ ಬೆಳೆಯಲು ನೀರು ಆಸರೆಯಾಗಿತ್ತು. ಈಗ ನೀರಿದ್ದರೂ ಗೇಟ್‌ಗಳ ದುರಸ್ತಿ ಕಾರಣಕ್ಕೆ ಈ ಬಾರಿ ಒಂದೇ ಬೆಳೆಗೆ ನೀರು ನೀಡುವ ಮುನ್ಸೂಚನೆ ದೊರಕಿದ್ದು, ರೈತರಲ್ಲಿಆತಂಕ ಮನೆ ಮಾಡಿದೆ.

## ಮಿನಿ ನ್ಯೂಸ್

### ಟಿಬಿ ಡ್ಯಾಂ ಅಲರ್ಟ್: ಒಳಹರಿವು ಏರಿಕೆ, 80 ಸಾವಿರ ಕ್ಯುಸೆಕ್ ನೀರು ನದಿಗೆ

• ಉದಯವಾಹಿನಿ, ವಿಜಯನಗರ

ತುಂಗಭದ್ರಾ ಜಲಾನಯನ ಪ್ರದೇಶದಲ್ಲಿ ಮಳೆ ಸುರಿಯುತ್ತಿರುವುದು, ತುಂಗಾ, ಭದ್ರಾ ಜಲಾಶಯ ಹಾಗೂ ವರದಾ ನದಿಯಿಂದ ಹೆಚ್ಚಿನ ನೀರು ಹರಿದು ಬರುತ್ತಿರುವುದರಿಂದ ಮಧ್ಯಾಹ್ನ 12 ಗಂಟೆ ನಂತರ 60 ರಿಂದ 80 ಸಾವಿರ ಕ್ಯುಸೆಕ್ ನೀರು ನದಿಗೆ ಹರಿಸಲಾಗುವುದು ಎಂದು ತುಂಗಭದ್ರ ಮಂಡಳಿ ಅಲರ್ಟ್ ಸಂದೇಶ ನೀಡಿದೆ. ಕಲ್ಯಾಣ ಕರ್ನಾಟಕದ ರೈತರ ಜೀವನಾಡಿ ತುಂಗಭದ್ರಾ ಜಲಾಶಯಕ್ಕೆ ಕಳೆದ ಕೆಲ ದಿನಗಳಿಂದ ಹೆಚ್ಚಿನ ಒಳಹರಿವು ಹರಿದು ಬರುತ್ತಿದ್ದು, ಭಾನುವಾರ ಬೆಳಗ್ಗೆ 8 ಗಂಟೆಗೆ 42 ಸಾವಿರ ಕ್ಯುಸೆಕ್ ಒಳಹರಿವಿದ್ದು, ಇದು 80 ಸಾವಿರ ಕ್ಯುಸೆಕ್ ವರೆಗೆ ಏರಿಕೆಯಾಗಲಿದೆ.

ತುಂಗಾ ಜಲಾಶಯದಿಂದ 34 ಸಾವಿರ, ಭದ್ರಾ ಜಲಾಶಯದಿಂದ 24 ಸಾವಿರ ಹಾಗೂ ವರದಾ ನದಿಯಿಂದ 10 ಸಾವಿರ ಕ್ಯುಸೆಕ್ ನೀರು ಹರಿದು ಬರುತ್ತಿದೆ. ಇದರ ಜತೆಗೆ ಜಲಾನಯನ ಪ್ರದೇಶದಲ್ಲಿ ಉತ್ತಮ ಮಳೆ ಸುರಿಯುತ್ತಿರುವುದರಿಂದ ಒಳಹರಿವಿನ ಪ್ರಮಾಣದಲ್ಲಿ ಗಣನೀಯ ಏರಿಕೆಯಾಗುತ್ತಿದೆ. ಈ ಕಾರಣಕ್ಕೆ ಜಲಾಶಯದ ಸುರಕ್ಷತೆ ದೃಷ್ಟಿಯಿಂದ ಹೆಚ್ಚುವರಿ ನೀರನ್ನು ನದಿಗೆ ಹರಿಸಲು ನಿರ್ಧರಿಸಲಾಗಿದ್ದು, ಮುಂದೆ ಒಳಹರಿವಿನ ಪ್ರಮಾಣವನ್ನು ಆಧರಿಸಿ ನದಿಗೆ ನೀರು ಹರಿಸಲಾಗುತ್ತದೆ. ಈ ಕುರಿತು ನದಿ ಪಾತ್ರ ಮತ್ತು ಕೆಳಭಾಗದ ಗ್ರಾಮಗಳಲ್ಲಿ ಎಚ್ಚರಿಕೆ ವಹಿಸುವಂತೆ ಟಿಬಿ ಬೋರ್ಡ್ ಎಚ್ಚರಿಕೆ ನೀಡಿದೆ. ಜಲಾಶಯದ ಗರಿಷ್ಟ ಮಟ್ಟ 1633 ಅಡಿ, ಇಂದಿನ ಮಟ್ಟ 1625.76 ಅಡಿ, ಸಂಗ್ರಹ 78.969 ಟಿಎಂಸಿ ಸಂಗ್ರಹ ದಾಖಲಾಗಿದೆ.

### ಮಹಿಳಾ ಸಬಲೀಕರಣ; ಜ್ಞಾನವಿಕಾಸ ಕೇಂದ್ರ ಸಹಕಾರಿ-ಎಸ್.ಸೋಮಯ್ಯ

• ಉದಯವಾಹಿನಿ, ಸಿರುಗುಪ್ಪ

ಜ್ಞಾನವಿಕಾಸ ಕೇಂದ್ರವು ಮಹಿಳೆಯರನ್ನು ಸಬಲೀಕರಣಗೊಳಿಸಿ ಮುಖ್ಯವಾಹಿನಿಗೆ ತರುವ ಉದ್ದೇಶದಿಂದ ಆರಂಭವಾದ ವೇದಿಕೆವಾಗಿದೆ ಎಂದು ಗ್ರಾಮ ಪಂಚಾಯಿತಿ ಸದಸ್ಯ ಎಸ್.ಸೋಮಯ್ಯ ಹೇಳಿದರು. ತಾಲ್ಲೂಕಿನ ರಾರಾವಿ ಗ್ರಾಮದ ಈಶ್ವರ ದೇವಸ್ಥಾನ ಆವರಣದಲ್ಲಿ ನಡೆದ ಸ್ವಸಹಾಯ ಸಂಘಗಳ ಜ್ಞಾನವಿಕಾಸ ಕೇಂದ್ರದ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಹಿಳೆಯರ ಆರ್ಥಿಕ, ಬೌದ್ಧಿಕ, ಸಾಮಾಜಿಕ ಬಡತನಗಳನ್ನು ದೂರ ಮಾಡುವ ದೃಷ್ಟಿಯಿಂದ ಜ್ಞಾನ ವಿಕಾಸ ಕೇಂದ್ರಗಳನ್ನು ತೆರೆಯಲಾಗುತ್ತಿದೆ. ಮಹಿಳೆಯರಿಗೆ ಶಿಕ್ಷಣ, ಆರ್ಥಿಕ ನೆರವು ನೀಡಿ ನಿರಂತರ ಬದಲಾವಣೆಗೆ ಪ್ರಯತ್ನಿಸಲಾಗುತ್ತಿದೆ ಎಂದು ತಿಳಿಸಿದರು.

### ಕುರಿಹಟ್ಟಿಯ ಮೇಲೆ ನಾಯಿಗಳ ದಾಳಿ: 23 ಕುರಿಮರಿ ಸಾವು

• ಉದಯವಾಹಿನಿ, ಹೂವಿನಹಡಗಲಿ

ತಾಲ್ಲೂಕಿನ ಹೊಳಗುಂದಿ ಗ್ರಾಮದ ನಿಜಲಿಂಗಪ್ಪ ನಗರದ ಬಳಿಯ ಕುರಿಹಟ್ಟಿಯ ಮೇಲೆ ಬೀದಿನಾಯಿಗಳು ದಾಳಿ ನಡೆಸಿದ ಪರಿಣಾಮ 23 ಕುರಿಮರಿಗಳು ಸತ್ತಿರುವ ಘಟನೆ ಸಂಭವಿಸಿದೆ. ಗ್ರಾಮದ ಕುರಿಗಾಹಿ ಹುಲುಗಪ್ಪ ಎಂಬುವವರ ಕುರಿಹಟ್ಟಿಯ ಮೇಲೆ ಬೀದಿ ನಾಯಿಗಳು ದಾಳಿ ನಡೆಸಿವೆ. ಹುಲುಗಪ್ಪ ಅವರ 20 ಕುರಿಮರಿ, ಕಂದಗಲ್ ಶಿವರಾಜ್ ಅವರ ಎರಡು, ದೊಡ್ಡಬಸಪ್ಪ ಅವರಿಗೆ ಸೇರಿದ ಒಂದು ಮರಿ ಸತ್ತಿದೆ. ಮರಿಗಳನ್ನು ಹಟ್ಟಿಯಲ್ಲಿ ಕೂಡಿಹಾಕಿ, ಕುರಿಗಳನ್ನು ಮೇಯಿಸಲು ಅಡವಿಗೆ ತೆರಳಿದ್ದಾಗ ನಾಯಿಗಳ ದಾಳಿ ನಡೆದಿದೆ. ಮಧ್ಯಾಹ್ನವರೆಗೆ ಹಟ್ಟಿಯಲ್ಲೇ ಇದ್ದೆ. ಊಟಕ್ಕೆ ಮನೆಗೆ ಹೋಗಿ ಬರುವಷ್ಟರಲ್ಲಿ ನಾಯಿಗಳು ದಾಳಿ ನಡೆಸಿವೆ. ಇದರಿಂದ ಸಾಕಷ್ಟು ನಷ್ಟವಾಗಿದೆ' ಎಂದು ಹುಲುಗಪ್ಪ ಹೇಳಿದರು. ಗ್ರಾಮ ವ್ಯಾಪ್ತಿಯ ಕುರಿಹಟ್ಟಿಗಳ ಮೇಲೆ ಪದೇ ಪದೇ ಬೀದಿನಾಯಿಗಳ ದಾಳಿ ನಡೆಸುತ್ತಿವೆ. ಇದರಿಂದ ಕುರಿಗಾಹಿಗಳಿಗೆ ಸಂಕಷ್ಟ ಎದುರಾಗಿದ್ದು, ಸರ್ಕಾರ ಪರಿಹಾರ ನೀಡಬೇಕು ಎಂದು ರೈತ ಸಂಘದ ಪ್ರಧಾನ ಕಾರ್ಯದರ್ಶಿ ಎಂ.ಶಿವರಾಜ್ ಒತ್ತಾಯಿಸಿದ್ದಾರೆ.

### ನಾಗಮೋಹನ ದಾಸ ವರದಿ ತಿರಸ್ಕರಿಸಲು ಬೋವಿ ಸಮಾಜ ಒತ್ತಾಯ

• ಉದಯವಾಹಿನಿ, ವಾಡಿ

ನಾಗಮೋಹನದಾಸ್ ಸಮಿತಿ ನೀಡಿರುವ ವರದಿ ಸಂಪೂರ್ಣ ಅವೈಜ್ಞಾನಿಕ, ಬೋವಿ ವಡ್ಡರ ಸಮಾಜಕ್ಕೆ ವಿರುದ್ಧವಾಗಿದ್ದು ಸರ್ಕಾರ ವರದಿಯನ್ನು ತಿರಸ್ಕರಿಸಬೇಕು ಎಂದು ಒತ್ತಾಯಿಸಿ ಬೋವಿವಡ್ಡರ ಸಮಾಜ ಜಿಲ್ಲಾ ಸಮಿತಿ ಪದಾಧಿಕಾರಿಗಳು ಜಿಲ್ಲಾಡಳಿತದ ಮೂಲಕ ಮುಖ್ಯಮಂತ್ರಿಗೆ ಮನವಿ ಪತ್ರ ಸಲ್ಲಿಸಿದರು. ಬೋವಿ ವಡ್ಡರ ಸಮಾಜ ಜನಸಂಖ್ಯೆ 2011ರಲ್ಲಿ 11.19 ಲಕ್ಷವಿತ್ತು. ಆದರೆ 2025ರ ನಾಗಮೋಹನದಾಸ್ ವರದಿ ಪ್ರಕಾರ 11.28 ಲಕ್ಷ ಎಂದು ತೋರಿಸಲಾಗಿದ್ದು, ಇದು ಸಂಪೂರ್ಣ ಅವೈಜ್ಞಾನಿಕವಾಗಿದೆ. ಇತರ ಹಿಂದುಳಿದ ಜಾತಿಗಳಿಗಿಂತಲೂ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಮತ್ತು ಸರ್ಕಾರಿ ನೌಕರಿಯಲ್ಲಿ ಬೋವಿ ಸಮುದಾಯ ಅತ್ಯಂತ ಹಿಂದುಳಿದಿದ್ದರೂ ಮುಂದುವರೆದ ಜಾತಿಗೆ ಸೇರಿಸಲಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

### ಬೆಳೆ ಹಾನಿ: 4,828 ರೈತರಿಗೆ ಪರಿಹಾರ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಕೊಪ್ಪಳ

ಅಕಾಲಿಕ ಆಲಿಕಲ್ಲು ಮಳೆಯಿಂದ ಬೆಳೆ ಹಾನಿಯಾದ ಜಿಲ್ಲೆಯ 4,828 ರೈತರಿಗೆ ಸರ್ಕಾರದಿಂದ ಪರಿಹಾರ ನೀಡಲಾಗಿದೆ ಎಂದು ಜಿಲ್ಲಾಧಿಕಾರಿ ಸುರೇಶ್ ಬಿ. ಇಟ್ನಾಳ ಅವರು ತಿಳಿಸಿದ್ದಾರೆ. ಜಿಲ್ಲೆಯಲ್ಲಿ ಏಪ್ರಿಲ್ ಮತ್ತು ಮೇನಲ್ಲಿ ಸುರಿದ ಮಳೆಯಿಂದಾಗಿ ಸುಮಾರು 4739.24 ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಹಾನಿಯಾಗಿದ್ದು, ಕಂದಾಯ, ಕೃಷಿ ಮತ್ತು ತೋಟಗಾರಿಕೆ ಇಲಾಖೆಯವರ ಮೂಲಕ ಜಂಟಿ ಸಮೀಕ್ಷೆ ಮಾಡಿ ಜೂನ್ 24ರಂದು ಸರ್ಕಾರಕ್ಕೆ ಪ್ರಸ್ತಾವ ಸಲ್ಲಿಸಲಾಗಿತ್ತು.

ಹಾನಿಯಾದ ಬೆಳೆಗಳ ವಿವರಗಳನ್ನು ಪರಿಹಾರ ತಂತ್ರಾಂಶದ ಮೂಲಕ 5016ಕ್ಕೂ ಹೆಚ್ಚು ರೈತರ ಬೆಳೆಹಾನಿಯಾದ ವಿವರವನ್ನು ದತ್ತಾಂಶಗಳನ್ನು ದಾಖಲಿಸಲಾಗಿದೆ. ಅದರಲ್ಲಿ 4,828 ರೈತರಿಗೆ 6.84 ಕೋಟಿ ಪರಿಹಾರ ನೇರವಾಗಿ ರೈತರ ಖಾತೆಗೆ ಜಮೆಯಾಗಿದೆ ಎಂದು ಅವರು ಹೇಳಿದ್ದಾರೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 07:30 ರಿಂದ 09:00 |
| ಗುಳಿಕ ಕಾಲ | ಮಧ್ಯಾಹ್ನ | 01:30 ರಿಂದ 03:00 |
| ಯಮಗಂಡ ಕಾಲ | ಬೆಳಿಗ್ಗೆ | 10:30 ರಿಂದ 12:00 |

**ಮೇಷ** ನಿಮ್ಮ ಭರವಸೆ ಒಂದು ಸಮೃದ್ಧ, ಸೂಕ್ಷ್ಮ ಪರಿಮಳಯುಕ್ತ ಮತ್ತು ಬೆರಗುಗೊಳಿಸುವ ಹೂವಿನ ಹಾಗೆ ಅರಳುತ್ತದೆ. ನಿಮ್ಮ ಹಣವನ್ನು ಸಂಗ್ರಹಿಸಿದಾಗ ಮಾತ್ರ ಹಣ ನಿಮ್ಮ ಕೆಲಸಕ್ಕೆ ಬರುತ್ತದೆ. ಇದನ್ನು ನೀವು ಚೆನ್ನಾಗಿ ಅರ್ಥಮಾಡಿಕೊಳ್ಳಿ ಇಲ್ಲದಿದ್ದರೆ ನೀವು ಮುಂಬರುವ ಸಮಯದಲ್ಲಿ ವಿಷಾದಿಸಬೇಕಾಗುತ್ತದೆ.

**ವೃಷಭ** ನಿಮ್ಮ ಮಗುವಿನಂಥ ಸ್ವಭಾವ ಕಾಣಿಸಿಕೊಳ್ಳುತ್ತದೆ ಮತ್ತು ನೀವು ಒಂದು ಆಹ್ಲಾದಕಾರಿ ಮನಸ್ಥಿತಿಯಲ್ಲಿರುತ್ತೀರಿ. ಯಾವುದೇ ಅಪರಿಚಿತ ವ್ಯಕ್ತಿಯ ಸಲಹೆಯಿಂದ ಎಲ್ಲಾದರೂ ಹೂಡಿಕೆ ಮಾಡಿರುವ ಜನರಿಗೆ, ಇಂದು ಆ ಹೂಡಿಕೆಯಿಂದ ಪ್ರಯೋಜನವನ್ನು ಪಡೆಯುವ ಪೂರ್ತಿಸಾಧ್ಯತೆ ಇದೆ.

**ಮಿಥುನ** ನೀವು ನಿಮ್ಮನ್ನು ಒಂದು ರೋಮಾಂಚಕಾರಿ ಪರಿಸ್ಥಿತಿಯಲ್ಲಿ ಕಂಡುಕೊಳ್ಳಬಹುದು-ಇದು ನಿಮಗೆ ಆರ್ಥಿಕ ಲಾಭವನ್ನೂ ತರುತ್ತದೆ. ಸ್ನೇಹಿತರು ಇಂದು ರಾತ್ರಿ ರೋಮಾಂಚಕವಾದದ್ದನ್ನೇನಾದರೂ ಯೋಜಿಸಿ ನಿಮಗೆ ಆನಂದ ತರುತ್ತಾರೆ.

**ಕರ್ಕಾಟಕ** ಇಂದು ಧಾರ್ಮಿಕ ಮತ್ತು ಆಧ್ಯಾತ್ಮಿಕ ಆಸಕ್ತಿಗಳನ್ನು ಅನುಸರಿಸಲೂ ಒಂದು ಒಳ್ಳೆಯ ದಿನ. ಜೀವನದ ವಾಹನವನ್ನು ಚೆನ್ನಾಗಿ ಚಲಾಯಿಸಲು ಬಯಸುತ್ತಿದ್ದರೆ, ಇಂದು ನೀವು ಹಣದ ಬಗ್ಗೆ ವಿಶೇಷ ಗಮನ ಹರಿಸಬೇಕು. ಸಣ್ಣ ಮಕ್ಕಳು ನಿಮಗೆ ಸಂತೋಷ ತರುತ್ತಾರೆ.

**ಸಿಂಹ** ಸ್ವಲ್ಪ ವ್ಯಾಯಾಮದೊಂದಿಗೆ ನಿಮ್ಮ ದಿನವನ್ನು ಪ್ರಾರಂಭಿಸಿ ನಿಮ್ಮ ಬಗ್ಗೆ ನೀವೇ ಒಳ್ಳೆಯ ಅಭಿಪ್ರಾಯ ಇಟ್ಟುಕೊಳ್ಳುವುದು ಮುಖ್ಯ ಇದನ್ನು ದಿನವೂ ಮಾಡುವುದನ್ನು ರೂಢಿ ಮಾಡಿಕೊಳ್ಳಿ, ಅದನ್ನು ಕಟ್ಟುನಿಟ್ಟಾಗಿ ಅನುಸರಿಸಿ. ಇಂವು ನಿಮಗೆ ನಿಮ್ಮ ಸಹೋದರ, ಸಹೋದರಿಯ ಸಹಾಯದಿಂದ ಹಣದ ಲಾಭವಾಗುವ ಸಾಧ್ಯತೆ ಇದೆ.

**ಕನ್ಯಾ** ನಿಮ್ಮ ಸಹಕಾರದ ಸ್ವಭಾವ ಕೆಲಸದ ಬಯಸಿದ ಫಲಿತಾಂಶಗಳು ತರುವ. ಜವಾಬ್ದಾರಿಗಳನ್ನು ನಿಭಾಯಿಸುತ್ತಿದ್ದು, ನಿಮ್ಮನ್ನು ಕಂಪನಿಯಲ್ಲಿ ಪ್ರಮುಖ ಸ್ಥಾನದಲ್ಲಿಡುತ್ತದೆ. ಇಂದು ನೀವು ನಿಮ್ಮ ಉಚಿತ ಸಮಯವನ್ನು ಸರಿಯಾಗಿ ಬಳಸಿಕೊಳ್ಳಲು ತಮ್ಮ ಹಳೆ ಸ್ನೇಹಿತರೊಂದಿಗೆ ಭೇಟಿ ಮಾಡಲು ಯೋಜಿಸಬಹುದು.

**ತುಲಾ** ಏನಾದರೂ ಆಸಕ್ತಿದಾಯಕವಾದದ್ದನ್ನು ಓದುವ ಮೂಲಕ ಮಾನಸಿಕ ವ್ಯಾಯಾಮ ಮಾಡಿ. ಹಣಕಾಸಿನಲ್ಲಿ ಸುಧಾರಣೆ ದೀರ್ಘಕಾಲದಿಂದ ಬಾಕಿಯಿರುವ ನಿಮ್ಮ ಬಾಕಿಗಳು, ಬಿಲ್ಲುಗಳನ್ನು ಪಾವತಿಸುವುದನ್ನು ಅನುಕೂಲಕರವಾಗಿಸುತ್ತದೆ. ನಿಮ್ಮ ಜ್ಞಾನ, ಒಳ್ಳೆಯ ಹಾಸ್ಯ ನಿಮ್ಮ ಬಳಿಯಿರುವ ಜನರನ್ನು ಆಕರ್ಷಿಸಬಹುದು.

**ವೃಶ್ಚಿಕ** ತುಂಬಾ ಚಿಂತೆ ಮಾನಸಿಕ ಶಾಂತಿಗೆ ಭಂಗ ತರಬಹುದು. ಆತಂಕ, ಉದ್ವೇಗದ ಪ್ರತೀ ತುಣುಕೂ ದೇಹದ ಮೇಲೆ ಪ್ರತಿಕೂಲ ಪರಿಣಾಮ ಬೀರುವುದರಿಂದ ಇದನ್ನು ತಡೆಯಿರಿ. ಈ ರಾಶಿಚಕ್ರದ ದೊಡ್ಡ ಉದ್ಯಮಿಗಳು ಇಂದು ತುಂಬಾ ಯೋಚಿಸಿ ಅರ್ಥಮಾಡಿಕೊಂಡು ಹಣದ ಹೂಡಿಕೆ ಮಾಡುವ ಅಗತ್ಯವಿದೆ.

**ಧನಸ್ಸು** ಇತ್ತೀಚೆಗೆ ನಿಮಗೆ ಹತಾಶೆಯೆನಿಸುತ್ತಿದ್ದಲ್ಲಿ ಇಂದು ಸರಿಯಾದ ಆಲೋಚನೆಗಳು, ಕಾರ್ಯಗಳು ನಿಮಗೆ ಅಗತ್ಯವಿರುವ ಸಮಾಧಾನವನ್ನು ತರುತ್ತವೆ ಎಂದು ನೀವು ನೆನಪಿಡಬೇಕು. ದೀರ್ಘಕಾಲ ಬಾಕಿಯಿದ್ದ ಬಾಕಿಗಳು ಕೊನೆಗೂ ದೊರಕುತ್ತವೆ. ನಿಮ್ಮ ಪ್ರೇಮಿಯ ಜೊತೆ ಹೊರಹೋದಾಗ ನಿಮ್ಮ ರೂಪ, ವರ್ತನೆಯಲ್ಲಿ ನೈಜತೆಯಿರಲಿ.

**ಮಕರ** ನೀವು ಭಯವೆಂಬ ದೈತ್ಯನ ಜೊತೆ ಹೋರಾಡಲು ಸಿದ್ಧವಾಗುತ್ತಿದ್ದ ಹಾಗೆ ನಿಮ್ಮ ಆಲೋಚನೆಗಳನ್ನು ಸಕಾರಾತ್ಮಕವಾಗಿ ರೂಪಿಸಿಕೊಳ್ಳಿ. ಇಲ್ಲದಿದ್ದಲ್ಲಿ ನೀವು ಈ ರಾಕ್ಷಸನಿಗೆ ಒಬ್ಬ ಜಡ ಮತ್ತು ನಿಷ್ಕರುಣೆಯ ಬಲಿಯಾಗುತ್ತೀರಿ. ಹಿಂದಿನ ಬಂಡವಾಳದಿಂದ ಆದಾಯವನ್ನು ನಿರೀಕ್ಷಿಸಿದ್ದಲ್ಲಿ.

**ಕುಂಭ** ಬೆಂಬಲ ನೀಡುವ ಸ್ನೇಹಿತರು ನಿಮ್ಮನ್ನು ಸಂತೋಷವಾಗಿರಿಸುತ್ತಾರೆ. ದಿನದ ಆರಂಭದಲ್ಲಿ ಇಂದು ನೀವು ಯಾವುದೇ ಆರ್ಥಿಕ ನಷ್ಟವನ್ನು ಹೊಂದಿರಬಹುದು. ಇದರಿಂದ ನಿಮ್ಮ ಪೂರ್ತಿ ದಿನ ಹದಗೆಡಬಹುದು. ನಿಮ್ಮ ಮಕ್ಕಳಿಗಾಗಿ ಯೋಜನೆಗಳು ಮಾಡಲು ಅತ್ಯುತ್ತಮ ದಿನ. ವೈಯಕ್ತಿಕ ಸಂಬಂಧಗಳು ಸೂಕ್ಷ್ಮ ಸಂವೇದನಾಶೀಲವಾಗಿವೆ.


**ಮೀನ** ಅನಗತ್ಯ ಆಲೋಚನೆಗಳು ನಿಮ್ಮ ಮನಸ್ಸನ್ನು ಆಕ್ರಮಿಸಿಕೊಳ್ಳಲು ಬಿಡಬೇಡಿ. ಶಾಂತವಾಗಿ, ಒತ್ತಡ ಮುಕ್ತವಾಗಿ ಉಳಿಯಲು ಪ್ರಯತ್ನಿಸಿ ಹಾಗೂ ಅದು ನಿಮ್ಮ ಮಾನಸಿಕ ದೃಢತೆಯನ್ನು ಹೆಚ್ಚಿಸುತ್ತದೆ. ಮನರಂಜನೆ ಅಥವಾ ಹೊರನೋಟದ ಸುಧಾರಣೆಗಾಗಿ ಹೆಚ್ಚು ಖರ್ಚು ಮಾಡಬೇಡಿ.

# ಧರ್ಮಸ್ಥಳ; ಕೇರಳದ ಕಮ್ಯೂನಿಸ್ಟ್ ಸರ್ಕಾರಕ್ಕೂ ಇದಕ್ಕೂ ಏನು ಸಂಬಂಧ

• ಉದಯವಾಹಿನಿ, ಹುಬ್ಬಳ್ಳಿ

ಧರ್ಮಸ್ಥಳ ವಿಚಾರದಲ್ಲಿ ರಾಜ್ಯ ಸರ್ಕಾರ ಪ್ರಹಸನ ನಡೆಸಿದ್ದು, ಈ ಕೂಡಲೇ ಸದನಕ್ಕೆ ಮಧ್ಯಂತರ ವರದಿ ಸಲ್ಲಿಸಬೇಕು ಎಂದು ಕೇಂದ್ರ ಆಹಾರ, ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಆಗ್ರಹಿಸಿದ್ದಾರೆ. ನಗರದಲ್ಲಿ ಮಾಧ್ಯವರೊಂದಿಗೆ ಮಾತನಾಡಿ, ಧರ್ಮಸ್ಥಳದ ವಿಚಾರದಲ್ಲಿ ಕಾಣದ ಕೈಗಳ ಆಟ ನಡೆಯುತ್ತಿದೆ. ಅದಕ್ಕೆ ತಕ್ಕಂತೆ ರಾಜ್ಯ ಸರ್ಕಾರವೂ ತಾಳ ಹಾಕುತ್ತಾ ಕುಣಿಯುತ್ತಿದೆ ಎಂದು ಪ್ರಲ್ಹಾದ ಜೋಶಿ ಕಿಡಿ ಕಾರಿದರು.

**ಕೇರಳ ಸರ್ಕಾರಕ್ಕೇನು ಸಂಬಂಧ:** ಧರ್ಮಸ್ಥಳ ಪ್ರಕರಣದಲ್ಲಿ ಕೇರಳದವರೂ ಬರುತ್ತಿದ್ದಾರೆ. ಕೇರಳ ಸರ್ಕಾರಕ್ಕೇನು ಸಂಬಂಧ ಎಂದು ಪ್ರಶ್ನಿಸಿದ ಸಚಿವರು, ಧರ್ಮಸ್ಥಳದ ಹೆಸರು ಹಾಳು ಮಾಡುವುದು, ಹಿಂದೂಗಳ ನಂಬಿಕೆ ಕ್ಷೇತ್ರದ ವಿರುದ್ಧ ಷಡ್ಯಂತ್ರ ನಡೆಸುವುದೇ ಇದರ ಉದ್ದೇಶವಾಗಿದೆ ಎಂದು ಹರಿಹಾಯ್ದರು. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಹಿಂದೂ ಧರ್ಮದ ವಿಚಾರವಾಗಿ ಪದೇ ಪದೇ ಒಂದಿಲ್ಲೊಂದು ಸಮಸ್ಯೆಗಳನ್ನು ಸೃಷ್ಟಿಸುತ್ತಲೇ ಇದೆ. ಪವಿತ್ರ ಕ್ಷೇತ್ರಗಳ ಹೆಸರು ಹಾಳು ಮಾಡುತ್ತಿದೆ ಎಂದು ಜೋಶಿ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.



**ಅನಾಮಿಕನ ಬಂಧನಕ್ಕೆ ಆಗ್ರಹ:** ಅನಾಮಿಕ ಮುಸುಕುದಾರಿ ಒಂದೆರೆಡಲ್ಲ ನೂರಾರು ಹೆಣಗಳನ್ನು ಹೂತ್ತಿದ್ದೇನೆ ಎನ್ನುತ್ತಾನೆ. ಈತನ ವಿರುದ್ಧ ಕಾನೂನಾತ್ಮಕವಾದ ತನಿಖೆ ನಡೆಸಬೇಕು, ಆತನನ್ನು ಮೊದಲು ಬಂಧಿಸಬೇಕು ಎಂದು ಆಗ್ರಹಿಸಿದರು.

**ಇಷ್ಟು ದಿನ ಕತ್ತೆ ಕಾಯುತ್ತಿದ್ದನೇ?:** ಹತ್ತು ವರ್ಷದ ಹಿಂದೆ ನೂರಾರು ಮಹಿಳೆಯರ ಅದರಲ್ಲೂ ಅತ್ಯಾಚಾರಕ್ಕೆ ಒಳಗಾದವರ ಹೆಣ ಹೂತ್ತಿದ್ದೇನೆ ಎನ್ನುತ್ತಾನೆ ಈ ಅನಾಮಿಕ. ಇಷ್ಟು ದಿನ ಏನು ಕತ್ತೆ ಕಾಯುತ್ತಿದ್ದನೇ? ಆಗಲೇ ಏಕೆ ದೂರು ಕೊಡಲಿಲ್ಲ? ಈವರೆಗೂ ಸುಮ್ಮನಿದ್ದದ್ದು ಏಕೆ? ಎಂದು ಪ್ರಶ್ನಿಸಿದರು.

**ಸದನಕ್ಕೆ ತಕ್ಷಣ ಮಧ್ಯಂತ ವರದಿ ಸಲ್ಲಿಸಲಿ ಸರ್ಕಾರ:** ರಾಜ್ಯದಲ್ಲಿ ಕಾನೂನು-ಸುವ್ಯವಸ್ಥೆ ಹಾಳು ಮಾಡಿರುವ ಈ ವ್ಯಕ್ತಿಯ ವಿರುದ್ಧ ಸರ್ಕಾರ ಕಾನೂನಾತ್ಮಕವಾಗಿ ತನಿಖೆ ನಡೆಸಬೇಕು. ಅಲ್ಲದೇ, ಇಷ್ಟು ದಿನ ನಡೆದ ಪ್ರಹಸನದ ಬಗ್ಗೆ ಈ ಕೂಡಲೇ ವಿಧಾನಸಭೆ ಅಧಿವೇಶನದಲ್ಲಿ ಸದನಕ್ಕೆ ಮಧ್ಯಂತರ ವರದಿ ಸಲ್ಲಿಸಬೇಕು ಎಂದು ಪ್ರಲ್ಹಾದ ಜೋಶಿ ಆಗ್ರಹಿಸಿದರು. ಧರ್ಮಸ್ಥಳದ ಬಗ್ಗೆ ಹಿಂದೂಗಳ ನಂಬಿಕೆಗೆ ಧಕ್ಕೆ ತರುವುದು ಮತ್ತು ಮಂಜುನಾಥನ ಸನ್ನಿಧಿಗೆ ಏಕೆ ಹೋಗುತ್ತೀರಿ? ಧರ್ಮಸ್ಥಳಕ್ಕೆ ಏಕೆ ಹೋಗುತ್ತೀರಿ? ಎಂಬಂತಹ ವಾತಾವರಣ ನಿರ್ಮಿಸುವ ವ್ಯವಸ್ಥಿತ ಷಡ್ಯಂತ್ರ ಇದಾಗಿದೆ ಎಂದು ಪ್ರಲ್ಹಾದ ಜೋಶಿ ವಾಗ್ದಾಳಿ ನಡೆಸಿದರು. . ಕ್ಷೇತ್ರದ ತೇಜೋವಧೆ ಮೂಲಕ ನೂರಾರು ವರ್ಷಗಳ ಪರಂಪರೆ ಹಾಳು ಮಾಡಲು ಹೊರಟಿದ್ದಾರೆ. ಡಿಸಿಎಂಗೆ ಗೊತ್ತಿರುವ ಈ ವಿಚಾರ ಸಿಎಂಗೆ ಗೊತ್ತಾಗಿರಲಿಲ್ಲವೇ? ಎಂದು ಜೋಶಿ ಪ್ರಶ್ನಿಸಿದ್ದಾರೆ.

**ಅಸಹಿಷ್ಣುತೆಯ ಪರಮಾವಧಿ**

**ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಹಿಂದೂ ಧರ್ಮ ಹಾಗೂ ಧಾರ್ಮಿಕ ಸ್ಥಳಗಳ ಹೆಸರು ಕೆಡುವಂತೆ ಮಾಡುತ್ತಿರುವುದು ನಿಜಕ್ಕೂ ಅಸಹಿಷ್ಣುತೆಯ ಪರಮಾವಧಿ ಎಂದು ಸಚಿವ ಪ್ರಲ್ಹಾದ ಜೋಶಿ ಖಂಡಿಸಿದರು.**

# ಭಾರೀ ಮಳೆ; ಶಿರಾಡಿ ಸಂಚಾರ ಅಯೋಮಯ

## ಹಾಸನ ಜಿಲ್ಲೆಯ ಸಕಲೇಶಪುರದ ಹಲವಾರು ಕಡೆ ಭೂ ಕುಸಿತ

• ಉದಯವಾಹಿನಿ, ಹಾಸನ

ಮುಂದುವರೆದ ಧಾರಾಕಾರ ಮಳೆಯಿಂದ ಶಿರಾಡಿ ಘಾಟ್ ಹೆದ್ದಾರಿ ಸಂಚಾರ ಮತ್ತಷ್ಟು ಅಯೋಮಯವಾಗಿದೆ. ಸಕಲೇಶಪುರ ತಾಲ್ಲೂಕು ಮಾರನಹಳ್ಳಿ, ದೊಡ್ಡತಪ್ಪಲೆ ಸೇರಿದಂತೆ ಅಲ್ಲಲ್ಲಿ ಭೂ ಕುಸಿತ ಮುಂದುವರೆದಿದ್ದು, ತುರ್ತು ಕಾರ್ಯಾಚರಣೆ ಮೂಲಕ ತೆರವುಗೊಳಿಸಲಾಗುತ್ತಿದೆ. ಭೂಕುಸಿತ ಹಾಗೂ ಮರಗಳು ಧರೆಗುರುಳಿದ್ದ ಮರ ಮತ್ತು ಮಣ್ಣು ತೆರವುಗೊಳಿಸಿ ಮುಂಜಾನೆ ವೇಳೆಗೆ ವಾಹನ ಸಂಚಾರಕ್ಕೆ ಅನುವು ಮಾಡಿಕೊಡಲಾಯಿತು. ಆದರೆ, ಅತೀವ ಮಳೆಯಿಂದಾಗಿ ಸುಗಮ ಸಂಚಾರ ಸಾಧ್ಯವಾಗಿಲ್ಲ.

**ರೈಲು ಸಂಚಾರ ಪ್ರಾರಂಭ:** ಸಕಲೇಶಪುರ- ಎಡಕುಮೇರಿ ನಡುವಿನ ರೈಲ್ವೆಮಾರ್ಗದಲ್ಲಿ ರೈಲ್ವೆಹಳಿ ಮೇಲೆ ನೀರು ಹರಿದು, ಮಣ್ಣು ಕುಸಿದು ಸಂಚಾರ ಸ್ಥಗಿತಗೊಳಿಸಿದ್ದ ರೈಲು ಶನಿವಾರ, ಭಾನುವಾರ ಕಾರ್ಯಾಚರಣೆ ಬಳಿಕ ಸಂಚಾರ ಪುನರಾರಂಭಗೊಂಡಿದೆ. ಎರಡು ಮಾರ್ಗದಲ್ಲಿ ರೈಲು ಹಾಗೂ ವಾಹನ ಸಂಚಾರ ಆತಂಕದ ನಡುವೆ ಪುನರಾರಂಭಗೊಂಡಿದೆ.

**ದಕ್ಷಿಣ ಕರ್ನಾಟಕದಲ್ಲಿ ಆ.24 ರವರೆಗೂ ಭಾರಿ ಮಳೆ ಆರ್ಭಟ:** ರಾಜ್ಯದಲ್ಲಿ ಮುಂದಿನ ಐದು ದಿನಗಳ ಕಾಲ ವ್ಯಾಪಕವಾಗಿ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಕರಾವಳಿ ಜಿಲ್ಲೆಗಳಾದ ಉತ್ತರ ಕನ್ನಡ, ಉಡುಪಿ ಮತ್ತು ದಕ್ಷಿಣ ಕನ್ನಡದಲ್ಲಿ ಭಾರೀ ಮಳೆಯಾಗುವ ನಿರೀಕ್ಷೆಯಿದ್ದು, ಈ ಜಿಲ್ಲೆಗಳಿಗೆ ರೆಡ್ ಅಲರ್ಟ್ ಘೋಷಿಸಲಾಗಿದೆ. ಅದೇ ರೀತಿ, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳಿಗೂ ರೆಡ್ ಅಲರ್ಟ್ ನೀಡಲಾಗಿದ್ದು, ಕೆಲವು ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಸಹ ಘೋಷಿಸಲಾಗಿದೆ. ರಾಜಧಾನಿ ಬೆಂಗಳೂರಿನಲ್ಲಿ ಆಗಸ್ಟ್ 24ರವರೆಗೆ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ ಎಂದು ತಿಳಿಸಲಾಗಿದೆ.


ಉದಯವಾಹಿನಿ ಚಿತ್ರ

**ಒಂದು ವಾರ ಭಾರಿ ಮಳೆಯಾಗುವ ಮುನ್ಸೂಚನೆ:** ಕರ್ನಾಟಕದಲ್ಲಿ ಮುಂದಿನ ಒಂದು ವಾರದವರೆಗೆ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಕರಾವಳಿ ಭಾಗದ ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಅದೇ ಸಮಯದಲ್ಲಿ, ಬೆಂಗಳೂರು ಸೇರಿದಂತೆ ಇತರ ಜಿಲ್ಲೆಗಳಲ್ಲಿ ಸಾಧಾರಣ ಮಳೆಯಾಗುವ ನಿರೀಕ್ಷೆಯಿದೆ. ಈ ತಂಪಾದ ವಾತಾವರಣದಲ್ಲಿ ಮಕ್ಕಳು ಮತ್ತು ಹಿರಿಯರು ತಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು. ಆರೋಗ್ಯ ತಜ್ಞರು ಸ್ವೆಟರ್, ಮಫ್ಲರ್ ಧರಿಸುವುದು ಹಾಗೂ ಕುದಿಸಿ ಆರಿಸಿದ ನೀರನ್ನು ಕುಡಿಯುವಂತೆ ಸಲಹೆ ನೀಡಿದ್ದಾರೆ.

**ಸಂಚಾರ ಸುಗಮವಾಗಿ ಸಾಗುತ್ತಿಲ್ಲ**

**ಕರ್ನಾಟಕದಲ್ಲಿ ಭಾರೀ ಮಳೆ ಸುರಿಯುತ್ತಿದೆ. ಹವಾಮಾನ ಇಲಾಖೆ ಕೊಟ್ಟಿದ್ದ ಸೂಚನೆಯಂತೆ ಆ. 14ರ ನಂತರ ಭಾರೀ ಮಳೆಯಾಗುತ್ತಿದೆ. ಹಾಸನ ಜಿಲ್ಲೆಯ ಸಕಲೇಶಪುರ ತಾಲ್ಲೂಕಿನ ಅಲ್ಲಲ್ಲಿ ಭೂಕಸಿತದ ಘಟನೆಗಳು ನಡೆದಿವೆ. ಸಕಲೇಶಪುರ ತಾಲ್ಲೂಕು ಮಾರನಹಳ್ಳಿ, ದೊಡ್ಡತಪ್ಪಲೆ ಸೇರಿದಂತೆ ಹಲವಾರು ಭೂ ಕುಸಿತ, ಬೆಟ್ಟ ಕುಸಿತಗಳು ಉಂಟಾಗಿದ್ದು ರಸ್ತೆಗೆ ಬಿದ್ದಿದ್ದ ಮಣ್ಣನ್ನು ತೆರವುಗೊಳಿಸಲಾಗಿದೆ. ಆದರೂ ಸಂಚಾರ ಸುಗಮವಾಗಿ ಸಾಗುತ್ತಿಲ್ಲ.**

## ಧರ್ಮಸ್ಥಳದ ವಿರುದ್ಧ ಅಪಪ್ರಚಾರ ಪ್ರತಿಭಟನೆ 19ಕ್ಕೆ

• ಉದಯವಾಹಿನಿ, ಹುಕ್ಕೇರಿ

ಸುಕ್ಷೇತ್ರ ಧರ್ಮಸ್ಥಳದ ವಿರುದ್ಧ ನಡೆದಿರುವ ಅಪಪ್ರಚಾರ ಖಂಡಿಸಿ ತಾಲ್ಲೂಕಿನ ನಿಡಸೋಶಿ ಮಠದ ಪಂಚಮ ಶಿವಲಿಂಗೇಶ್ವರ ಸ್ವಾಮೀಜಿ ನೇತೃತ್ವದಲ್ಲಿ ಆ.19 ರಂದು ಪ್ರತಿಭಟನೆ ನಡೆಸಲಾಗುವುದು ಎಂದು ಕ್ಯಾರಗುಡ್ಡ ಔಜೀಕರ ಆಶ್ರಮದ ಮಂಜುನಾಥ ಸ್ವಾಮೀಜಿ ಹೇಳಿದರು. ಪಟ್ಟಣದ ಮಹಾವೀರ ಶಿಕ್ಷಣ ಸಂಸ್ಥೆ ಆವರಣದಲ್ಲಿ ನಡೆದ ಧರ್ಮಸ್ಥಳ ಸದ್ಭಕ್ತರು, ಸರ್ವ ಧರ್ಮೀಯರ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು.

ಮಹಾವೀರ ಸಮೂಹ ಸಂಸ್ಥೆಯ ಅಧ್ಯಕ್ಷ, ಮಹಾವೀರ ನಿಲಜಗಿ ಮಾತನಾಡಿ, ಆ.19 ರಂದು ಬೆಳಿಗ್ಗೆ 10 ಗಂಟೆಗೆ ಪಟ್ಟಣದ ಅಡಿವಿಸಿದ್ದೇಶ್ವರ ಮಠದಿಂದ ಕೋರ್ಟ್ ಸರ್ಕಲ್ ವರೆಗೆ ತಾಲ್ಲೂಕಿನ ಸಾವಿರಾರು ಭಕ್ತರು ಪ್ರತಿಭಟನೆಯಲ್ಲಿ ಭಾಗವಹಿಸುವರು ಎಂದರು.

## ರಾಜ್ಯದಾದ್ಯಂತ ಸರ್ಕಾರದ ವಿರುದ್ಧ ಹೋರಾಟದ ಎಚ್ಚರಿಕೆ

• ಉದಯವಾಹಿನಿ, ಬಾದಾಮಿ

ಯಾವುದೇ ಆರೋಪವಿಲ್ಲದ ಸಹಕಾರ ಸಚಿವ ಕೆ.ಎನ್. ರಾಜಣ್ಣ ಅವರನ್ನು ಏಕಾಏಕಿ ಸಚಿವ ಸಂಪುಟದಿಂದ ಏಕಪಕ್ಷೀಯವಾಗಿ ವಜಾ ಮಾಡಿದ್ದನ್ನು ವಾಲ್ಮೀಕಿ ಸಮುದಾಯ ಖಂಡಿಸುತ್ತದೆ ಎಂದು ವಾಲ್ಮೀಕಿ ಸಮುದಾಯದ ಮುಖಂಡ ಲಕ್ಷ್ಮಣ ಮರಡಿತೋಟ ಹೇಳಿದರು. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಬರಬೇಕಾದರೆ ಎಸ್ಸಿ, ಎಸ್ಟಿ ಶೋಷಿತ ಸಮುದಾಯ ಮತ್ತು ಅಲ್ಪಸಂಖ್ಯಾತರು ಬೆನ್ನೆಲುಬಾಗಿ ಇಡಿಯಾಗಿ ಮತವನ್ನು ಚಲಾಯಿಸಿದ ಕಾರಣ ಕಾಂಗ್ರೆಸ್ ಸರ್ಕಾರ ಬಂದಿದೆ ಎಂದು ಅವರು ಸುದ್ದಿಗಾರರಿಗೆ ತಿಳಿಸಿದರು.

ಕೇಂದ್ರದ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಜಾತಿಗಣತಿ ರಾಷ್ಟ್ರವ್ಯಾಪಿ ಮಾಡಲು ಕೇಂದ್ರ ಸರ್ಕಾರಕ್ಕೆ ಒತ್ತಾಯಿಸಿದಾಗ ಸಿಎಂ ಸಿದ್ದರಾಮಯ್ಯ ಸಚಿವ ಸಂಪುಟದಲ್ಲಿ ಜಾತಿ ಗಣತಿ ಜಾರಿ ಮಾಡುತ್ತೇವೆ ಎಂದು ಹೇಳಿದಾಗ ಡಿಸಿಎಂ ಡಿ.ಕೆ. ಶಿವಕುಮಾರ್, ಶಾಮನೂರ ಶಿವಶಂಕ್ರಪ್ಪ, ಆರ್.ವಿ. ದೇಶಪಾಂಡೆ ವಿರೋಧಿಸಿದರು. ರಾಹುಲ್ ಗಾಂಧಿ ಹೇಳಿದ ಮಾತನ್ನು ತಿರಸ್ಕರಿಸಿದ್ದರಿಂದ ಇವರ ಮೇಲೆ ಯಾಕೆ ಹೈಕಮಾಂಡ್ ಶಿಸ್ತು ಕ್ರಮ ಕೈಗೊಳ್ಳಲಿಲ್ಲ ಎಂದು ಪ್ರಶ್ನಿಸಿದರು. ಐದು ದಶಕಗಳಿಂದ ಕ್ಷೇತ್ರದಲ್ಲಿ ಜನರ ಪ್ರೀತಿ ವಿಶ್ವಾಸವನ್ನು ಹೊಂದಿದ ನಿಷ್ಠಾವಂತ ಮತ್ತು ನೇರ ನುಡಿಯ ರಾಜಕಾರಣಿ ರಾಜಣ್ಣ ಅವರನ್ನು ವಜಾ ಮಾಡಿದ್ದು ವಾಲ್ಮೀಕಿ ಸಮುದಾಯಕ್ಕೆ ನೋವನ್ನು ತಂದಿದೆ. ಶೀಘ್ರವಾಗಿ ಸಂಪುಟಕ್ಕೆ ಸೇರಿಸಿಕೊಳ್ಳದಿದ್ದರೆ ರಾಜ್ಯದಾದ್ಯಂತ ಸರ್ಕಾರದ ವಿರುದ್ಧ ಹೋರಾಟ ಮಾಡುತ್ತೇವೆ ಎಂದು ಬಿ.ಬಿ. ಜಲಗೇರಿ ಹೇಳಿದರು.

# ಶ್ರೀಕೃಷ್ಣ ಸಂದೇಶಗಳು ಇಂದಿಗೂ ಜೀವಂತ: ಕೆ. ವಿರೂಪಾಕ್ಷಪ್ಪ

• ಉದಯವಾಹಿನಿ, ಸಿಂಧನೂರು

ತಾಲ್ಲೂಕು ಆಡಳಿತ ವತಿಯಿಂದ ಕಛೇರಿಯಲ್ಲಿ ಶ್ರೀ ಕೃಷ್ಣ ಜನ್ಮಾಷ್ಟಮಿ ಅಂಗವಾಗಿ ಭಾವಚಿತ್ರಕ್ಕೆ ಮಾಲಾರ್ಪಣೆ ಪೂಜೆ ಮಾಡಿ ಆಚರಿಸಲಾಯಿತು. ನಂತರ ಜಯಂತಿ ಉದ್ದೇಶಿಸಿ ಮಾತನಾಡಿದ ಮಾಜಿ ಸಂಸದರಾದ ಕೆ. ವಿರೂಪಾಕ್ಷಪ್ಪ ಅವರು ಶ್ರೀ ಕೃಷ್ಣನ ಸಾರಿದ ಭಗವದ್ಗೀತೆ ಶ್ಲೋಕ ಗಳು ಮಾನವ ಧರ್ಮಕ್ಕೆ ಒಳ್ಳೆಯ ಸಂದೇಶ ವಾಗಿವೆ ಎಂದರು. ಶ್ರೀ ಕೃಷ್ಣ ಆಚರಣೆ ಭಾರತ ದೇಶದಲ್ಲಿ ಅತಿ ದೊಡ್ಡ ಮಟ್ಟದಲ್ಲಿ ಆಚರಣೆ ಮಾಡುತ್ತಾರೆ. ವಿದೇಶಗಳಲ್ಲಿ. ಅವರು ಆದರ್ಶ ತತ್ವಗಳು ಇವತ್ತಿಗೂ ಜೀವಂತವಾಗಿವೆ ಎಂದು ಹೇಳಿದರು. ಶ್ರೀ ಕೃಷ್ಣ ರೂಪದಲ್ಲಿ ಇದ್ದವರು ಯಾದವ್ ಸಮಾಜ ಎಂದರೆ ತಪ್ಪಾಗಲಾರದು. ಆದರೆ ಶೈಕ್ಷಣಿಕ ಆರ್ಥಿಕ ಮತ್ತು ರಾಜಕೀಯವಾಗಿ ಇನ್ನೂ ಮುಂದೆ ಬರಬೇಕು ಎಂದು ಮಾಜಿ ಸಚಿವ ವೆಂಕಟರಾವ್ ನಾಡಗೌಡ ಹೇಳಿದರು.



ಉದಯವಾಹಿನಿ ಚಿತ್ರ

ಈ ಸಂದರ್ಭದಲ್ಲಿ, ಶಾಸಕ ಹಂಪನಗೌಡ ಬಾದರ್ಲಿ.ನಗರಸಭೆ ಅಧ್ಯಕ್ಷೆ ಮಂಜುಳಾ ಪ್ರಭುರಾಜ, ಸದಸ್ಯೆಯರಾದ ಲಕ್ಷ್ಮಿ ತಿಮ್ಮಯ್ಯ ಭಂಗಿ, ನಳಿನಿ ಚಂದ್ರಶೇಖರ ಮೇಟಿ, ನಿವೃತ್ತ ಯೋಧ ವೀರೇಶ ಯಾದವ್, ಮುಖಂಡರಾದ ಖಾಜಿಮಲಿಕ್ ವಕೀಲ, ಅನಿಲಕುಮಾರ ವೈ, ಜೆಡಿಎಸ್ ಯುವ ಘಟಕದ ಕಾರ್ಯದರ್ಶಿ ಸೈಯ್ಯ ದ್ ಆಸೀಫ್, ಶಿರಸ್ತೇದಾರ್ ಅಂಬಾದಾಸ್ ಸೇರಿದಂತೆ ಯಾದವ ಸಮಾಜದ ಮುಖಂಡರು ಹಾಗೂ ತಹಶೀಲ್ದಾರ್ ಕಚೇರಿಯ ಸಿಬ್ಬಂದಿ ಉಪಸ್ಥಿತರಿದ್ದರು.

# ಬೆಳೆಹಾನಿ ಪರಿಹಾರಕ್ಕೆ ಒತ್ತಾಯಿಸಿ ರಸ್ತೆ ತಡೆ

• ಉದಯವಾಹಿನಿ, ಬೈಲಹೊಂಗಲ

ಕಳಪೆ ಬೀಜ, ಕಳಪೆ ಕೀಟನಾಶಕದಿಂದ ಪ್ರಸಕ್ತ ಹಂಗಾಮಿನ ಸೋಯಾಬಿನ್, ಹೆಸರು, ಹತ್ತಿ ಮತ್ತು ಉದ್ದು ಸೇರಿದಂತೆ ವಿವಿಧ ತರಹದ ಬೆಳೆ ಹಾನಿಗೆ ಸರ್ಕಾರ ಸೂಕ್ತ ಪರಿಹಾರ ಒದಗಿಸಬೇಕೆಂದು ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘದಿಂದ ರೈತರು ಬೃಹತ್ ಪ್ರತಿಭಟನೆ ನಡೆಸಿದರು. ಪಟ್ಟಣದ ಕಿತ್ತೂರು ಚನ್ನಮ್ಮ ವೃತ್ತ, ಎಪಿಎಂಸಿ, ಇಂಚಲ ಕ್ರಾಸ್, ಬಸ್ ನಿಲ್ದಾಣ ಮೂಲಕ ಪ್ರತಿಭಟನೆ ನಡೆಸಿ, ರಾಯಣ್ಣ ವೃತ್ತದಲ್ಲಿ ರಸ್ತೆ ತಡೆ ಮಾಡಿ ಪ್ರತಿಭಟಿಸಿದರು. ಉಪವಿಭಾಗಾಧಿಕಾರಿ ಕಚೇರಿಗೆ ತೆರಳಿ ಧರಣಿ ಕುಳಿತರು.

ಮಾಜಿ ಶಾಸಕ ಡಾ.ವಿಶ್ವನಾಥ ಪಾಟೀಲ, ಉದ್ಯಮಿ ವಿಜಯ ಮೆಟಗುಡ ಮಾತನಾಡಿ, ಬೆಳಗಾವಿ ಜಿಲ್ಲೆಯ ಬೈಲಹೊಂಗಲ, ಸವದತ್ತಿ, ಚನ್ನಮ್ಮನ ಕಿತ್ತೂರು, ಗೋಕಾಕ ಹಾಗೂ ರಾಮದುರ್ಗ ತಾಲ್ಲೂಕಿನಾದ್ಯಂತ ಸೋಯಾಬಿನ್, ಹೆಸರು, ಹತ್ತಿ, ಹಾಗೂ ಉದ್ದು ಬೆಳೆಗಳು ಕೀಡೆ, ಹುಳ ಭಾದೆಯಿಂದ ಸಂಪೂರ್ಣ ಹಾಳಾಗಿವೆ. ಕಳಪೆ ಬೀಜ, ಕಳಪೆ ಕೀಟನಾಶಕ ಇದಕ್ಕೆ ಕಾರಣವಾಗಿದ್ದು ಸುಮಾರು 4 ರಿಂದ 5 ಬಾರಿ ಔಷಧ ಸಿಂಪರಣೆ ಮಾಡಿದರೂ ಪ್ರಯೋಜನವಾಗಿಲ್ಲ ಎಂದು ದೂರಿದರು. ಒಂದು ಎಕರೆ ಬೆಳೆಯಲು ಸುಮಾರು 40 ಸಾವಿರದಿಂದ 50ಸಾವಿರ ವರೆಗೆ ಖರ್ಚು ಮಾಡಲಾಗಿದೆ. ಹೀಗಾಗಿ ಸರ್ಕಾರ ರೈತರ ಹಿತ ದೃಷ್ಟಿಯಿಂದ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು.


ಉದಯವಾಹಿನಿ ಚಿತ್ರ

**ಸರ್ಕಾರದ ಗಮನಕ್ಕೆ ತಂದು ಪರಿಹಾರ:** ಶಾಸಕ ಮಹಾಂತೇಶ ಕೌಜಲಗಿ ಮಾತನಾಡಿ ರೈತರು ದೇಶದ ಬೆನ್ನೆಲುಬು. ರಾಜ್ಯ ಸರ್ಕಾರ ಅನ್ನದಾತರ ಪರ ನಿಲುವು ಹೊಂದಿದೆ. ಈಗಾಗಲೇ ಜಿಲ್ಲಾಧಿಕಾರಿ, ಸಂಬಂಧಪಟ್ಟ ಅಧಿಕಾರಿಗಳ ಜೊತೆ ರೈತರ ಸಮಸ್ಯೆ ಬಗ್ಗೆ ಸಮಾಲೋಚನೆ ಮಾಡಿದ್ದೇನೆ. ರೈತರಿಗಾದ ಬೆಳೆ ಹಾನಿಯ ಬಗ್ಗೆ ಸರ್ಕಾರದ ಗಮನಕ್ಕೆ ತಂದು ಪರಿಹಾರ ಕೊಡಿಸುವೆ. ಈ ಹೋರಾಟವನ್ನು ಕೈಬೀಡಬೇಕು ಎಂದು ಮನವಿ ಮಾಡಿದರು.

# ಪಿಒಪಿ ಗಣೇಶ ಮೂರ್ತಿ ಮಾರಿದರೆ ಕ್ರಮ

• ಉದಯವಾಹಿನಿ, ಬಾಗಲಕೋಟೆ

ಪ್ಲಾಸ್ಟರ್ ಆಫ್ ಪ್ಯಾರಿಸ್ ಮತ್ತು ಬಣ್ಣ ಲೇಪಿತ ಗಣೇಶ ಮೂರ್ತಿಗಳನ್ನು ಕೆರೆ ಮತ್ತು ಇತರೆ ಜಲಮೂಲಗಳಲ್ಲಿ ವಿಸರ್ಜಿಸುವುದನ್ನು ನಿಷೇಧಿಸಲಾಗಿದ್ದು, ಈ ಆದೇಶ ಉಲ್ಲಂಘಿಸಿದಲ್ಲಿ ದಂಡ ಮತ್ತು ಜೈಲುವಾಸ ವಿಧಿಸಲಾಗುತ್ತದೆ ಎಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಜಿಲ್ಲಾ ಪರಿಸರ ಅಧಿಕಾರಿ ಅನೀಲಕುಮಾರ ತಳಗೇರಿ ತಿಳಿಸಿದ್ದಾರೆ. ಪಿಒಪಿ ಮತ್ತು ಬಣ್ಣದ ಮೂರ್ತಿಗಳನ್ನು ಜಲಮೂಲದಲ್ಲಿ ವಿಸರ್ಜನೆ ಮಾಡುವುದರಿಂದ ಕಲುಷಿತಗೊಂಡು ಪರಿಸರದ ಮೇಲೆ ದುಷ್ಪರಿಣಾಮ ಬೀರುತ್ತವೆ.

ರಾಸಾಯನಿಕ ಬಣ್ಣಗಳಿಂದ ಮಾಡಿದ ಮೂರ್ತಿಗಳ ಬದಲಾಗಿ ನೈಸರ್ಗಿಕ ವಸ್ತುಗಳಿಂದ ತಯಾರಿಸಿದ ಹಾಗೂ ನೈಸರ್ಗಿಕ ಬಣ್ಣ ಲೇಪಿತ ಮೂರ್ತಿಗಳನ್ನು ಪ್ರತಿಷ್ಠಾಪಿಸಬೇಕು ಎಂದು ಮನವಿ ಮಾಡಿದ್ದಾರೆ. ಗಣೇಶ ವಿಸರ್ಜನೆ ಸಂದರ್ಭದಲ್ಲಿ ಹೂ, ಹಣ್ಣು, ಬಾಳೆ, ಕಂಬ, ಮಾವಿನ ತೋರಣ ಇತ್ಯಾದಿ ಅಲಂಕಾರಿಕ ವಸ್ತುಗಳನ್ನು ಪ್ರತ್ಯೇಕಿಸಿ ಕಸ ಸಂಗ್ರಹ ವಾಹನಕ್ಕೆ ನೀಡಬೇಕು. ಮಂಡಳಿ ವತಿಯಿಂದ ನಗರದ ಆಯ್ದ ಸ್ಥಳಗಳಲ್ಲಿ ಗಣೇಶ ಮೂರ್ತಿ ವಿಸರ್ಜಿಸಲು ಸಂಚಾರಿ ತೊಟ್ಟಿ ವ್ಯವಸ್ಥೆ ಮಾಡಲಾಗುತ್ತಿದೆ. ಅಲ್ಲಿಯೇ ವಿಸರ್ಜಿಸಬೇಕು ಎಂದು ತಿಳಿಸಿದ್ದಾರೆ.


ಉದಯವಾಹಿನಿ ಚಿತ್ರ

## ಅಪಪ್ರಚಾರ ಮಾಡಿದವರ ವಿರುದ್ಧ ಕಠಿಣ ಕ್ರಮ ಜರುಗಿಸಿ

• ಉದಯವಾಹಿನಿ, ಗದಗ

ಅತ್ಯಂತ ಪವಿತ್ರವಾದ ಧರ್ಮಸ್ಥಳ ಮಂಜುನಾಥಸ್ವಾಮಿ ದೇವಸ್ಥಾನಕ್ಕೆ ಸಂಬಂಧಿಸಿದಂತೆ ದಾಖಲೆರಹಿತ ಸುಳ್ಳು ಆರೋಪಗಳನ್ನು ಮಾಡಿ ಎಸ್ಐಟಿ ತನಿಖೆಗೆ ಒಳಪಡಿಸಿರುವ ವ್ಯಕ್ತಿ ಹಾಗೂ ಸಂಘಟನೆಗಳ ವಿರುದ್ಧ ಕಠಿಣ ಕಾನೂನುಕ್ರಮ ಜರುಗಿಸಬೇಕು ಎಂದು ವಿಧಾನ ಪರಿಷತ್ ಸದಸ್ಯ, ಎಸ್.ವಿ. ಸಂಕನೂರ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಎರಡು ಮೂರು ವಾರಗಳಿಂದ ಅನಾಮಧೇಯ ವ್ಯಕ್ತಿಯೊಬ್ಬ ಧರ್ಮಸ್ಥಳದ ಕುರಿತು ಇಲ್ಲಸಲ್ಲದ ಆರೋಪ ಮಾಡಿ ಅಸ್ಥಿಪಂಜರ ಶೋಧನೆಗಾಗಿ ಭೂಮಿ ಅಗೆದು ಅಲ್ಲಿ ಯಾವುದೇ ಒಂದು ಕಳೆಬರ ಪತ್ತೆ ಆಗದೇ, ಆರೋಪ ಸುಳ್ಳಾಗಿದೆ. ಎಸ್ಐಟಿ ತನಿಖೆಯ ಪ್ರಕ್ರಿಯೆಯನ್ನು ಲಕ್ಷಾನುಗಟ್ಟಲೆ ಭಕ್ತರು ದಿನವಿಡೀ ಟೀವಿ ಮತ್ತು ಪತ್ರಿಕೆಗಳಲ್ಲಿ ನೋಡಿ ಮನಸ್ಸಿಗೆ ನೋವು ಹಾಗೂ ಆಘಾತ ಉಂಟಾಗಿದ್ದನ್ನು ಯಾರು ಸರಿಪಡಿಸಲಿಕ್ಕೆ ಆಗುವುದಿಲ್ಲ ಎಂದು ತಿಳಿಸಿದ್ದಾರೆ. ಅಂತರ್ಜಾಲದಲ್ಲಿ ಅಪಪ್ರಚಾರ ಮಾಡಿದವರ ವಿರುದ್ಧ ಏಕೆ ಕ್ರಮ ಜರುಗಿಸಿಲ್ಲ ಎಂಬುದರ ಬಗ್ಗೆ ಸ್ಪಷ್ಟೀಕರಣ ಕೊಡಬೇಕು' ಎಂದು ಒತ್ತಾಯಿಸಿದ್ದಾರೆ.

## ಭೂಕುಸಿತ: ರೈಲು ಸಂಚಾರ ಮಾರ್ಗ ಬದಲು


• ಉದಯವಾಹಿನಿ, ಹುಬ್ಬಳ್ಳಿ

ಧಾರಾಕಾರ ಮಳೆಯಿಂದ ಶ್ರೀವಗಿಲು-ಯೆದಕುಮಾರಿ ಕಡಗರಬಳ್ಳಿ-ದೊನಿಗಲ್ ವಿಭಾಗದಲ್ಲಿ ಭೂಕುಸಿತ ಸಂಭವಿಸಿದ್ದರಿಂದ ರೈಲು ಸಂಚಾರ ಮಾರ್ಗದಲ್ಲಿ ಬದಲಾವಣೆ ಮಾಡಲಾಯಿತು. ಸಂಚಾರ ಆರಂಭಿಸಿದ ಮಂಗಳೂರು ಸೆಂಟ್ರಲ್-ವಿಜಯಪುರ ಸ್ಪೆಷಲ್ ಎಕ್ಸ್‌ಪ್ರೆಸ್ (07378), ಮುರುಡೇಶ್ವರ-ಎಸ್ಎಂವಿಟಿ ಬೆಂಗಳೂರು ಎಕ್ಸ್ ಪ್ರೆಸ್ (16586), ಕಾರವಾರ-ಕೆಎಸ್ಆರ್ ಬೆಂಗಳೂರು ಎಕ್ಸ್‌ಪ್ರೆಸ್ (16596) ರೈಲು ಕೆಲವು ಮಾರ್ಗಗಳಲ್ಲಿ ನಿಲುಗಡೆ ಆಗದೆ, ಬೇರೆ ಮಾರ್ಗದಲ್ಲಿ ಸಂಚರಿಸಿದವು ಎಂದು ನೈರುತ್ಯ ರೈಲ್ವೆ ಪ್ರಕಟಣೆ ತಿಳಿಸಿದೆ.


ಉದಯವಾಹಿನಿ ಚಿತ್ರ

# ಹಾನಗಲ್ ಬಂದ್: ಶಿವಾನಂದ ಪಾಟೀಲ ಹೇಳಿಕೆಗೆ ಖಂಡನೆ

• ಉದಯವಾಹಿನಿ, ಹಾನಗಲ್



ಜಿಲ್ಲಾ ಉಸ್ತುವಾರಿ ಸಚಿವ ಶಿವಾನಂದ ಪಾಟೀಲ ಅವರಿಗೆ ಹಾನಗಲ್ ಪಟ್ಟಣ, ತಾಲ್ಲೂಕಿನ ಸ್ಥಿತಿಗತಿಯ ವಾಸ್ತವದ ಅರಿವಿಲ್ಲ. ಹೀಗಾಗಿ, ಆಗಸ್ಟ್ 6ರಂದು ನಡೆಸಿದ್ದ ಹಾನಗಲ್ ಬಂದ್ ಬಗ್ಗೆ ಹಗುರವಾಗಿ ಮಾತನಾಡಿದ್ದಾರೆ' ಎಂದು ನಾಗರಿಕ ಹಿತರಕ್ಷಣಾ ಸಮಿತಿಯ ಮುಖಂಡ ಭೋಜರಾಜ ಕರೂದಿ ದೂರಿದರು. ಪಟ್ಟಣದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಹಾನಗಲ್‌ನಲ್ಲಿ ಒಂದು ನಿರ್ದಿಷ್ಟ ಸಂಘಟನೆ ಬಂದ್ ಆಚರಿಸಿದೆ. ಕಾನೂನು ಸುವ್ಯವಸ್ಥೆಯಲ್ಲಿ ರಾಜಕೀಯ ಮಾಡಬಾರದೆಂದು ಸಚಿವರು ಹೇಳಿಕೆ ನೀಡಿರುವುದು ಖಂಡನೀಯ ಎಂದರು.

ಸಚಿವರು ಎಷ್ಟು ಬಾರಿ ಹಾನಗಲ್‌ಗೆ ಭೇಟಿ ನೀಡಿದ್ದಾರೆ ಇಲ್ಲಿನ ವಾಸ್ತವ ವಿಚಾರಗಳ ಕುರಿತು ಎಷ್ಟು ತಿಳಿದುಕೊಂಡಿದ್ದಾರೆ? ಎನ್ನುವುದನ್ನು ತಿಳಿಸಬೇಕು. ಸುಖಾಸುಮ್ಮನೇ, ನಾಗರಿಕ ಹಿತರಕ್ಷಣಾ ಸಮಿತಿಗೆ ಅವಮಾನ ಮಾಡುವ ಹೇಳಿಕೆ ನೀಡುವುದು ಸರಿಯಲ್ಲ. ಹಾನಗಲ್‌ನ ಎಲ್ಲಾ ವರ್ತಕರು ಸ್ವಯಂ ಪ್ರೇರಿತರಾಗಿ ಬಂದ್ ಗೆ ಬೆಂಬಲ ನೀಡಿದ್ದು ಅವರಿಗೆ ಗೊತ್ತಾಗಬೇಕಿತ್ತು' ಎಂದರು. ಹಾನಗಲ್ ಬಂದ್‌ಗೂ ಮುನ್ನವೇ ಸಚಿವರು, ಅಧಿಕಾರಿಗಳೊಂದಿಗೆ ಚರ್ಚಿಸಿ ಜನರ ಸಮಸ್ಯೆಗಳ ಆಲಿಸಬೇಕಿತ್ತು. ನಮ್ಮ ಸಮಿತಿ ಪಕ್ಷಾತೀತ, ಇದರಲ್ಲಿ ರಾಜಕೀಯ ಮಾಡುವ ಪ್ರಶ್ನೆಯೇ ಇಲ್ಲ. ನಾಗರಿಕ ಸಮಾಜಕ್ಕೆ ತೊಂದರೆ ಕೊಡುವ ದುಷ್ಟ ಶಕ್ತಿಗಳ ವಿರುದ್ಧ ಸಮಿತಿ ಹೋರಾಟ ಮುಂದುವರಿಸುತ್ತದೆ ಎಂದರು.

**ಕಾಲಾವಕಾಶ ಕೇಳಿರುವ ಎಸ್‌ಪಿ:** ಸಮಿತಿಯ ರಾಜು ಗೌಳಿ ಮಾತನಾಡಿ, 'ಹಾನಗಲ್ ಬಂದ್ ನಂತರ, ಶಿಗ್ಗಾವಿಯಲ್ಲಿ ಎಸ್‌ಪಿ ಅವರು ಸಭೆ ನಡೆಸಿದರು. ಜನರ ಸಮಸ್ಯೆಗಳನ್ನು ಹಂತ ಹಂತವಾಗಿ ಈಡೇರಿಸಲು ಒಂದು ತಿಂಗಳ ಕಾಲಾವಕಾಶ ಪಡೆದುಕೊಂಡಿದ್ದಾರೆ' ಎಂದರು. 'ಗಾಂಜಾ, ಜೂಜು, ಮಟ್ಕಾ, ವಿದ್ಯಾರ್ಥಿನಿಯರಿಗೆ ಕಿರುಕುಳ, ಗೂಂಡಾಗಿರಿ ಸೇರಿದಂತೆ ಎಲ್ಲವನ್ನೂ ಎಸ್‌ಪಿಗೆ ತಿಳಿಸಲಾಗಿದೆ. ಒಂದು ತಿಂಗಳು ಕಾದು ನೋಡಿ, ಮುಂದಿನ ಹೋರಾಟದ ಬಗ್ಗೆ ತೀರ್ಮಾನ ಕೈಗೊಳ್ಳಲಾಗುವುದು' ಎಂದು ಹೇಳಿದರು.

# ಶಾಲಾಭಿವೃದ್ಧಿಗೆ ಸಾರ್ವಜನಿಕ ಸಹಭಾಗಿತ್ವ ಅಗತ್ಯ

## ತಾಳವಟ್ಟಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಶತಮಾನೋತ್ಸವ ಕಟ್ಟಡ ಉದ್ಘಾಟನೆ ಸಮಾರಂಭದಲ್ಲಿ ಶಿಕ್ಷಣ ಸಚಿವ ಮಧು ಬಂಗಾರಪ್ಪ

• ಉದಯವಾಹಿನಿ, ಚಿತ್ರದುರ್ಗ

ಸರ್ಕಾರಿ ಶಾಲೆಗಳ ಅಭಿವೃದ್ಧಿ ಕೇವಲ ಸರ್ಕಾರದ ಕರ್ತವ್ಯ ಮಾತ್ರವಲ್ಲದೇ, ಸಾರ್ವಜನಿಕರು, ಗ್ರಾಮಸ್ಥರು, ಶಾಲೆಯಲ್ಲಿ ಓದಿ ಉನ್ನತ ಹುದ್ದೆಯಲ್ಲಿರುವ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳ ವೈಯಕ್ತಿಕ ಕರ್ತವ್ಯವೂ ಹೌದು. ಶಿಕ್ಷಣಕ್ಕೆ ಒತ್ತು ನೀಡುವುದು ಸಾರ್ವಜನಿಕರ ಸಾಮಾಜಿಕ ಜವಾಬ್ದಾರಿ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಾದ ಎಸ್.ಮಧು ಬಂಗಾರಪ್ಪ ಹೇಳಿದರು. ಹಿರಿಯೂರು ತಾಲ್ಲೂಕಿನ ತಾಳವಟ್ಟಿ ಗ್ರಾಮದಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶತಮಾನೋತ್ಸವ ಕಾರ್ಯಕ್ರಮ, ನೂತನ ಶಾಲಾ ಕೊಠಡಿ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು. ಶತಮಾನ ಪೂರೈಸಿರುವ ತಾಳವಟ್ಟಿ ಸರ್ಕಾರಿ ಶಾಲೆಗೆ ಹಳೆಯ ವಿದ್ಯಾರ್ಥಿಗಳ ನೆರವು, ದಾನಿಗಳ ಸಹಾಯದಿಂದ ಉತ್ತಮ ಕಾಯಕಲ್ಪ ನೀಡಿದ್ದು, ಶಿಕ್ಷಣಕ್ಕೆ ಅಗತ್ಯವಿರುವ ಎಲ್ಲಾ ಸೌಲಭ್ಯಗಳನ್ನು ಕಲ್ಪಿಸಿರುವುದು ಶ್ಲಾಘನೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ರಾಜ್ಯದಲ್ಲಿ ಪ್ರಸ್ತುತ 307 ಕರ್ನಾಟಕ ಪಬ್ಲಿಕ್ ಶಾಲೆಗಳು ಕಾರ್ಯನಿರ್ವಹಿಸುತ್ತಿದ್ದು, ಈ ವರ್ಷವೇ ರಾಜ್ಯ ಸರ್ಕಾರ ವತಿಯಿಂದ 500 ಕೆಪಿಎಸ್ ಶಾಲೆಗಳನ್ನು 15 ದಿನದೊಳಗಾಗಿ ಘೋಷಣೆ ಮಾಡಲಾಗುವುದು. ಇದರ ಜೊತೆಗೆ ಹೈದರಬಾದ್ ಕರ್ನಾಟಕದಲ್ಲಿ ಅಕ್ಷರ ಅವಿಷ್ಕಾರ ವತಿಯಿಂದ 100 ಕೆಪಿಎಸ್ ಶಾಲೆಗಳು ಸೇರಿದಂತೆ ಒಟ್ಟು 600 ಕೆಪಿಎಸ್ ಶಾಲೆಗಳು ಕಾರ್ಯಾರಂಭ ಮಾಡಲಿದೆ. ಒಂದು ಕೆಪಿಎಸ್ ಶಾಲೆಯಲ್ಲಿ 1200 ಮಕ್ಕಳು ಉತ್ತಮ ವಾತಾವರಣದಲ್ಲಿ ವ್ಯಾಸಂಗ ಮಾಡಬಹುದಾಗಿದ್ದು, ಖಾಸಗಿ ಶಾಲೆಗಳಿಗಿಂತ ಉತ್ತಮವಾದ ಗುಣಮಟ್ಟದ ಶಿಕ್ಷಣ ಸರ್ಕಾರಿ ಶಾಲೆಗಳಲ್ಲಿ ದೊರೆಯಲಿದೆ ಎಂದು ಹೇಳಿದರು.


ಉದಯವಾಹಿನಿ ಚಿತ್ರ

**ಶಿಕ್ಷಣಕ್ಕೆ ಒತ್ತು ನೀಡಿ**

ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ನಕಲು ತಡೆಗಟ್ಟುವ ನಿಟ್ಟಿನಲ್ಲಿ ವೆಬ್‌ಕಾಸ್ಟಿಂಗ್ ವ್ಯವಸ್ಥೆ ಜಾರಿಗೊಳಿಸಿದ್ದು, ಮಕ್ಕಳು ಸ್ವಂತ ಶಕ್ತಿ, ಸಾಮಾರ್ಥ್ಯದ ಮೇಲೆ ಉತ್ತೀರ್ಣರಾಗುವ ವ್ಯವಸ್ಥೆಗಾಗಿ ಪರೀಕ್ಷೆ-1, ಪರೀಕ್ಷೆ-2, ಪರೀಕ್ಷೆ-3 ಅವಕಾಶ ನೀಡಲಾಗಿದೆ ಎಂದು ತಿಳಿಸಿದರು. ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ಮಾತನಾಡಿ, ತಾಳವಟ್ಟಿ ಗ್ರಾಮದಲ್ಲಿ ವಿಶೇಷವಾದ ಸಂಭ್ರಮ. ಗ್ರಾಮದ ಹಿರಿಯರು ಸೇರಿ ಸುಮಾರು ರೂ.1 ಕೋಟಿ ಹಾಗೂ ಸರ್ಕಾರದಿಂದ ರೂ.25 ಲಕ್ಷ ವೆಚ್ಚ ಮಾಡಿ ಶತಮಾನೋತ್ಸವ ಶಾಲಾ ಕಟ್ಟಡ ಉದ್ಘಾಟನೆ ಮಾಡಲಾಗಿದೆ. ಸರ್ಕಾರಿ ಶಾಲೆಗಳಲ್ಲಿ ಮೆರಿಟ್ ಆಧಾರದ ಮೇಲೆ ಆಯ್ಕೆಯಾದ ಪ್ರತಿಭಾವಂತ ಶಿಕ್ಷಕರಿದ್ದು, ಸರ್ಕಾರಿ ಶಾಲೆಗಳಲ್ಲಿ ಮಕ್ಕಳಿಗೆ ಹಾಲು, ಮೊಟ್ಟೆ, ಸಮವಸ್ತ್ರ, ಶೂ ಸೇರಿದಂತೆ ಹಲವಾರು ಸೌಲಭ್ಯಗಳೊಂದಿಗೆ ಗುಣಮಟ್ಟದ ಶಿಕ್ಷಣ ನೀಡಲಾಗುತ್ತಿದೆ ಎಂದು ಹೇಳಿದರು. ಹಿರಿಯೂರು ವಿಧಾನ ಕ್ಷೇತ್ರದಲ್ಲಿ ಸುಮಾರು 250 ಶಾಲಾ ತರಗತಿ ಕೊಠಡಿಗಳು, 100ಕ್ಕೂ ಹೆಚ್ಚು ಶೌಚಾಲಯ, ಕಾಂಪೌಂಡ್ ಗಳನ್ನು ನಿರ್ಮಾಣಕ್ಕಾಗಿ ರೂ.30 ಕೋಟಿ ವೆಚ್ಚದಲ್ಲಿ ಯೋಜನೆ ಸಿದ್ದಪಡಿಸಲಾಗಿದ್ದು, ಶೀಘ್ರದಲ್ಲಿ ಶಾಲಾ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರಿಂದಲೇ ಯೋಜನೆಗೆ ಚಾಲನೆ ನೀಡಲಾಗುವುದು ಎಂದು ತಿಳಿಸಿದ ಅವರು, ಸಾರ್ವಜನಿಕ ಪಾಲುಗಾರಿಕೆಯಿಂದ ಶಾಲೆಗಳ ಅಭಿವೃದ್ಧಿಯಾಗಲಿದೆ. ಗ್ರಾಮಸ್ಥರ ಮನವಿಯಂತೆ ಐಮಂಗಲ ಹೋಬಳಿಯ ವ್ಯಾಪ್ತಿಯಲ್ಲಿ ಸುಮಾರು 4 ಎಕರೆ ವಿಸ್ತೀರ್ಣದಲ್ಲಿ ಕ್ರೀಡಾಂಗಣ ನಿರ್ಮಿಸಲು ಕ್ರಮವಹಿಸಲಾಗುವುದು ಎಂದು ಸಚಿವರು ಭರವಸೆ ನೀಡಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಎಸ್.ಆಕಾಶ್, ಶಾಲಾ ಶಿಕ್ಷಣ ಉಪನಿರ್ದೇಶಕರಾದ ಎಂ.ಆರ್.ಮಂಜುನಾಥ್, ನಾಸಿರುದ್ದೀನ್, ತಹಶೀಲ್ದಾರ್ ಸಿದ್ದೇಶ್, ಕ್ಷೇತ್ರ ಶಿಕ್ಷಣಾಧಿಕಾರಿ ತಿಪ್ಪೇಸ್ವಾಮಿ, ಶಾಲಾ ಪುನಃಶ್ಚೇತನ, ಶತಮಾನೋತ್ಸವ ಸಮಿತಿಯ ಅಧ್ಯಕ್ಷ ಡಾ. ವಿ.ವೀರಭದ್ರಯ್ಯ, ಗೌರವಾಧ್ಯಕ್ಷ ಎ.ಚಂದ್ರಾರೆಡ್ಡಿ, ಕಾರ್ಯಾಧ್ಯಕ್ಷ ಜಲೀಲ್ ಸಾಬ್, ವಿಶ್ವಮಾನವ ಸಾಂಸ್ಕೃತಿಕ ಮತ್ತು ವಿದ್ಯಾಸಂಸ್ಥೆ ಕಾರ್ಯದರ್ಶಿ ಎಂ.ನೀಲಕಂಠದೇವ, ಸಮಿತಿಯ ಲಕ್ಷ್ಮಿಕಾಂತ್ ಸೇರಿದಂತೆ ಮತ್ತಿತರರು ಇದ್ದರು.


**ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್, ತಾಳವಟ್ಟಿ ಶಾಲೆ ಅನೇಕ ಹಿರಿಯರಿಗೆ ಶಿಕ್ಷಣ ಕೊಡುವುದರಲ್ಲಿ 100 ವರ್ಷಗಳ ದೊಡ್ಡ ಯಶಸ್ಸು ಕಂಡಿದೆ. ಯಶಸ್ವಿನ ಪ್ರತಿಫಲವಾಗಿ ಶತಮಾನೋತ್ಸವ ಆಚರಣೆ ಮಾಡಿ ಮಾದರಿ ಶಾಲೆಯನ್ನಾಗಿ ರೂಪಿಸಲಾಗಿದೆ ಎಂದು ತಿಳಿಸಿದ ಅವರು, ತಾಳವಟ್ಟಿ ಸರ್ಕಾರಿ ಶಾಲೆಯ ಅಭಿವೃದ್ಧಿ ಸಂಪೂರ್ಣ ಸಹಕಾರ, ಅಗತ್ಯ ಅನುದಾನವನ್ನೂ ನೀಡಲಾಗುವುದು ಎಂದು ತಿಳಿಸಿದರು.**

**17 ಸಾವಿರ ಶಿಕ್ಷಕ ನೇಮಕಕ್ಕೆ ಕ್ರಮ**

**ರಾಜ್ಯದಲ್ಲಿ ಒಳಮೀಸಲಾತಿ ಜಾರಿಯಾದ ತಕ್ಷಣವೇ ಶಾಲಾ ಶಿಕ್ಷಣ ಇಲಾಖೆಗೆ 17 ಸಾವಿರ ಶಿಕ್ಷಕರ ನೇಮಕಕ್ಕೆ ಕ್ರಮವಹಿಸಲಾಗುವುದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಾದ ಎಸ್.ಮಧು ಬಂಗಾರಪ್ಪ ಹೇಳಿದರು. ರಾಜ್ಯದಲ್ಲಿ 17 ಸಾವಿರ ಶಿಕ್ಷಕ ನೇಮಕಕ್ಕೆ ಸಂಬಂಧಿಸಿದಂತೆ ಸರ್ಕಾರ ಈಗಾಗಲೇ ಅನುಮೋದನೆ ನೀಡಿದ್ದು, ಈ ಬಾರಿಯ ಶಾಲಾ ಶಿಕ್ಷಕರ ನೇಮಕಾತಿ ಪ್ರಕ್ರಿಯೆಗೆ ಹೆಚ್ಚಿನ ಕಾಲಾವಧಿಯನ್ನು ತೆಗೆದುಕೊಳ್ಳದೇ ಕೇವಲ 3 ರಿಂದ 4 ತಿಂಗಳೊಳಗೆ ನೇಮಕಾತಿ ಪ್ರಕ್ರಿಯೆ ನಡೆಸಿ, ಶಾಲೆಗಳಿಗೆ ಶಿಕ್ಷಕರನ್ನು ನಿಯೋಜನೆ ಮಾಡಲಾಗುವುದು ಎಂದು ಹೇಳಿದರು. ರಾಜ್ಯ ಶಿಕ್ಷಣ ನೀತಿ ಕರಡು ವರದಿ ಸಲ್ಲಿಸಲಾಗಿದ್ದು, ಅದರಲ್ಲಿರುವ ನ್ಯೂನತೆಗಳನ್ನು ಪರಿಶೀಲನೆ ನಡೆಸಲು ಉಪ ಸಮಿತಿ ರಚನೆ ಮಾಡಿ, ನಂತರ ಅಂತಿಮವಾಗಿ ಅನುಷ್ಠಾನ ಮಾಡಲಾಗುವುದು. ರಾಷ್ಟ್ರೀಯ ಶಿಕ್ಷಣ ನೀತಿಯನ್ನು ರಾಜ್ಯದಲ್ಲಿ ಒಪ್ಪುವುದಿಲ್ಲ ಎಂದು ಸಚಿವರು ತಿಳಿಸಿದರು.**

# ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್‌ಗೆ ಮೆಲಾನಿಯಾ ಟ್ರಂಪ್ ಪತ್ರ

## ಪ್ರತಿ ಮಗುವೂ ಜಗತ್ತಿನಿಂದ ಪ್ರೀತಿಯನ್ನು ಬಯಸುತ್ತದೆ ಮತ್ತು ಸುರಕ್ಷತೆಯ ಕನಸು ಕಾಣುತ್ತದೆ



**ಮಕ್ಕಳ ಮುಗ್ಧತೆಯನ್ನು ರಕ್ಷಿಸಿ**

**ವಾಷಿಂಗ್ಟನ್:** ಅಮೆರಿಕದ ಪ್ರಥಮ ಮಹಿಳೆ ಮೆಲಾನಿಯಾ ಟ್ರಂಪ್ ಅವರು ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರಿಗೆ ಉಕ್ರೇನ್ ಯುದ್ಧದಲ್ಲಿ ಮಕ್ಕಳ ದುಃಸ್ಥಿತಿಯ ಕುರಿತು ಶಾಂತಿ ಪತ್ರ ಬರೆದಿದ್ದು, ಮಕ್ಕಳ ಮುಗ್ಧತೆಯನ್ನು ರಕ್ಷಿಸಿ ಎಂದು ಒತ್ತಾಯಿಸಿದಾರೆ. ಮೆಲಾನಿಯಾ ಟ್ರಂಪ್ ಅವರು ಬರೆದಿರುವ ಪತ್ರವನ್ನು ಅಲಾಸ್ಕಾದಲ್ಲಿ ನಡೆದ ಭೇಟಿಯ ಸಂದರ್ಭದಲ್ಲಿ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರಿಗೆ ಪತ್ರವನ್ನು ಹಸ್ತಾಂತರಿಸಿದ್ದಾರೆ. ಟ್ರಂಪ್-ಪುಟಿನ್ ಅಲಾಸ್ಕಾ ಭೇಟಿ ಜಾಗತಿಕ ಮಟ್ಟದಲ್ಲಿ ಗಮನ ಸೆಳೆದಿತ್ತು. ಮೆಲಾನಿಯಾ ಟ್ರಂಪ್ ಅವರು ವ್ಲಾಡಿಮಿರ್ ಪುಟಿನ್ ಅವರಿಗೆ ಬರೆದಿರುವ ಪತ್ರದಲ್ಲಿ ಉಕ್ರೇನ್ ಹೆಸರನ್ನು ಬಳಸಿಲ್ಲವಾದರೂ, ಮಕ್ಕಳ ಮೇಲೆ ಸುದೀರ್ಘ ಸಂಘರ್ಷದ ಪರಿಣಾಮದ ಬಗ್ಗೆ ಬೆಳಕು ಚೆಲ್ಲಿದ್ದಾರೆ. ಪ್ರತಿ ಮಗುವೂ ಜಗತ್ತಿನಿಂದ ಪ್ರೀತಿಯನ್ನು ಬಯಸುತ್ತದೆ ಮತ್ತು ಸುರಕ್ಷತೆಯ ಕನಸು ಕಾಣುತ್ತದೆ ಎಂದು ಮೆಲಾನಿಯಾ ತಮ್ಮ ಪತ್ರದಲ್ಲಿ ಭಾವುಕರಾಗಿ ಉಲ್ಲೇಖಿಸಿದ್ದಾರೆ.

**ಮೆಲಾನಿಯಾ ಪತ್ರದಲ್ಲೇನಿದೆ?:** ಪ್ರತಿಯೊಂದು ಮಗುವೂ ತನ್ನ ಹೃದಯದಲ್ಲಿ ಶಾಂತಿಯ ಕನಸುಗಳನ್ನು ಹಂಚಿಕೊಳ್ಳುತ್ತದೆ. ಅದು ಯಾವುದೇ ದೇಶದ ನಗರಗಳಲ್ಲಾದರೂ ಇರಲಿ, ಹಳ್ಳಿಯಲ್ಲಾದರೂ ಇರಲಿ, ಜಗತ್ತಿನಿಂದ ಅದು ಸುರಕ್ಷತೆಯನ್ನು ಬಯಸುತ್ತದೆ. ಅದರಂತೆ ಮುಂದಿನ ಪೀಳಿಗೆಯ ಭರವಸೆಯನ್ನು ಪೋಷಿಸುವುದು ನಮ್ಮ ಕರ್ತವ್ಯ. ನಾಯಕರಾಗಿ ನಿರ್ವಿವಾದವಾಗಿ ನಾವು ಎಲ್ಲರಿಗೂ ಘನತೆ ತುಂಬಿದ ಜಗತ್ತನ್ನು ಕಟ್ಟಿಕೊಡಲು ಶ್ರಮಿಸಬೇಕು. ಇದರಿಂದ ಪ್ರಭವಿಷ್ಯವು ಸ್ವತಃ ಸಂಪೂರ್ಣವಾಗಿ ರಕ್ಷಿಸಲ್ಪಡುತ್ತದೆ ಎಂದು ಮೆಲಾನಿಯಾ ಟ್ರಂಪ್ ಪತ್ರದಲ್ಲಿ ಹೇಳಿದ್ದಾರೆ.

ಪ್ರತಿಯೊಂದು ಪೀಳಿಗೆಯ ಮಕ್ಕಳು ತಮ್ಮ ಜೀವನವನ್ನು ಶುದ್ಧತೆಯೊಂದಿಗೆ ಪ್ರಾರಂಭಿಸುತ್ತಾರೆ. ಭೌಗೋಳಿಕತೆ, ಸರ್ಕಾರ ಮತ್ತು ಸಿದ್ಧಾಂತ ಮಕ್ಕಳ ಮುಗ್ಧತೆಗಿಂತ ಹೆಚ್ಚಿನದಲ್ಲ. ಸಂಕಷ್ಟದಲ್ಲಿರುವ ಮಕ್ಕಳ ಮುಖದಲ್ಲಿ ನಗುವನ್ನು ಮರಳಿ ತರಲು ನೀವೊಬ್ಬರೇ ಸಾಕು ಎಂದು ಅಮೆರಿಕದ ಪ್ರಥಮ ಮಹಿಳೆ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರನ್ನು ಉಲ್ಲೇಖಿಸಿ ಪತ್ರ ಬರೆದಿದ್ದಾರೆ. ಪುಟಿನ್ ಅವರೇ ನೀವು ಏಕಾಂಗಿಯಾಗಿ ಮಕ್ಕಳ ಮಧುರ ನಗುವನ್ನು ಪುನಃಸ್ಥಾಪಿಸಬಹುದು. ಹಾಗೆ ಮಾಡುವ ಮೂಲಕ ನೀವು ರಷ್ಯಾಗೆ ಸೇವೆ ಸಲ್ಲಿಸುವುದಕ್ಕಿಂತ ಹೆಚ್ಚಿನದನ್ನು ಮಾಡಿದಂತಾಗುತ್ತದೆ. ಮಾನವೀಯತೆಗೆ ನೀವು ಸಲ್ಲಿಸಬಹುದಾದ ಸೇವೆಯನ್ನು ಶ್ಲಾಘಿಸುವುದರಲ್ಲಿ ನಾನು ಮೊದಲಿಗಳಾಗಿರುತ್ತೇನೆ ಎಂದು ಮೆಲಾನಿಯಾ ಟ್ರಂಪ್ ಅವರು ತಮ್ಮ ಪತ್ರದಲ್ಲಿ ಮಾರ್ಮಿಕವಾಗಿ ಹೇಳಿದ್ದಾರೆ. ಆದರೆ ಟ್ರಂಪ್ ಮತ್ತು ಪುಟಿನ್ ನಡುವಿನ ಅಲಾಸ್ಕಾ ಸಭೆ ಯಾವುದೇ ಒಪ್ಪಂದಕ್ಕೆ ಬರುವಲ್ಲಿ ವಿಫಲ ಆಗಿದೆ.

**ಮಕ್ಕಳ ಮುಗ್ಧತೆ ರಕ್ಷಣೆಗೆ ಕರೆ:** ಈ ಮಕ್ಕಳ ಮುಗ್ಧತೆಯನ್ನು ರಕ್ಷಿಸುವ ಮೂಲಕ, ನೀವು ರಷ್ಯಾಕ್ಕೆ ಮಾತ್ರ ಸೇವೆ ಸಲ್ಲಿಸುವುದಕ್ಕಿಂತ ಹೆಚ್ಚಿನದನ್ನು ಮಾಡುತ್ತೀರಿ. ನೀವು ಮಾನವೀಯತೆಗೆ ಸೇವೆ ಸಲ್ಲಿಸುತ್ತೀರಿ.

### ಅಲಾಸ್ಕಾ ಮಾತುಕತೆಗೆ ತೆರೆ

**ಜಾಗತಿಕ ಮಟ್ಟದಲ್ಲಿ ಭಾರೀ ನಿರೀಕ್ಷೆಗಳನ್ನು ಮೂಡಿಸಿದ್ದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ನಡುವಿನ ಅಲಾಸ್ಕಾ ಮಾತುಕತೆಗೆ ತೆರೆ ಬಿದ್ದಿದೆ. ಉಕ್ರೇನ್‌ನಲ್ಲಿ ಯುದ್ಧವನ್ನು ಕೊನೆಗಾಣಿಸುವ ಕುರಿತು ಯಾವುದೇ ಸ್ಪಷ್ಟ ತೀರ್ಮಾನಕ್ಕೆ ಬರುವುದರಲ್ಲಿ ಈ ಸಭೆ ಯಶಸ್ವಿಯಾಗಿಲ್ಲ. ಈ ಮಧ್ಯೆ ವ್ಲಾಡಿಮಿರ್ ಪುಟಿನ್ ಅವರನ್ನು ಉದ್ದೇಶಿಸಿ ಅಮೆರಿಕದ ಪ್ರಥಮ ಮಹಿಳೆ ಮೆಲಾನಿಯಾ ಟ್ರಂಪ್ ಪತ್ರವೊಂದನ್ನು ಬರೆದಿದ್ದು, ಈ ಪತ್ರವನ್ನು ಖುದ್ದು ಡೊನಾಲ್ಡ್ ಟ್ರಂಪ್ ಅವರು ರಷ್ಯಾ ಅಧ್ಯಕ್ಷರಿಗೆ ಹಸ್ತಾಂತರಿಸಿದ್ದಾರೆ.**

ಅಂತಹ ದಿಟ್ಟ ಕಲ್ಪನೆಯು ಎಲ್ಲಾ ಮಾನವ ವಿಭಜನೆಯನ್ನು ಮೀರಿದೆ, ಪುಟಿನ್ ಅವರು ಈ ದೃಷ್ಟಿಕೋನವನ್ನು ಕಾರ್ಯಗತಗೊಳಿಸಲು ಯೋಗ್ಯರಾಗಿದ್ದಾರೆ.

ಟ್ರಂಪ್ ಪತ್ನಿ ಅಭಿಪ್ರಾಯಪಟ್ಟಿದ್ದಾರೆ. ರಷ್ಯಾ ಉಕ್ರೇನಿಯನ್ ಮಕ್ಕಳನ್ನು ಅಪಹರಿಸುತ್ತಿದ್ದು, ಈ ಪೈಕಿ 18 ವರ್ಷ ತುಂಬಿದವರನ್ನು ಬಲವಂತವಾಗಿ ತನ್ನ ಮಿಲಿಟರಿಗೆ ಸೇರಿಸಿಕೊಂಡು, ಉಕ್ರೇನ್ ವಿರುದ್ಧ ಯುದ್ಧರಂಗಕ್ಕೆ ಕಳುಹಿಸುತ್ತಿದೆ ಎಂದು ಉಕ್ರೇನ್ ಗಂಭೀರ ಆರೋಪ ಮಾಡಿದೆ. ಈ ಕುರಿತು ಮಾತನಾಡಿರುವ ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿಯ ಸಲಹೆಗಾರ ಆಂಡ್ರಿ ಯೆರ್ಮಾಕ್, ಉಕ್ರೇನಿಯನ್ ಮಕ್ಕಳನ್ನು ತಮ್ಮದೇ ಜನಗಳ ವಿರುದ್ಧ ಹೋರಾಟ ಮಾಡುವಂತೆ ವ್ಲಾಡಿಮಿರ್ ಪುಟಿನ್ ಒತ್ತಾಯ ಮಾಡುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

> **ಕೈವ್ ಜೊತೆ ಪಾಲುದಾರಿಕೆ ಹೊಂದಿರುವ ಯೇಲ್ ಮಾನವೀಯ ಸಂಶೋಧನಾ ಸಂಸ್ಥೆ, ಕಾಣೆ ಆಗಿರುವ ಉಕ್ರೇನಿಯನ್ ಮಕ್ಕಳ ಪತ್ತೆಕಾರ್ಯದಲ್ಲಿ ನಿರತವಾಗಿದ್ದು, ಈ ಮಕ್ಕಳಿಗೆ ತರಬೇತಿ ನೀಡುತ್ತಿರುವ ಡಜನ್‌ಗಟ್ಟಲೇ ರಷ್ಯನ್ ಶಿಬಿರಗಳ ಬಗ್ಗೆ ಮಾಹಿತಿ ನೀಡಿದೆ. ಶಿಬಿರಗಳಲ್ಲಿ ಈ ಮಕ್ಕಳು ಉಕ್ರೇನಿಯನ್ ಭಾಷೆ ಮಾತನಾಡುವುದನ್ನು ನಿಷೇಧಿಸಲಾಗಿದ್ದು, ರಷ್ಯಾದ ಸಂಸ್ಕೃತಿಯನ್ನು ಅತ್ಯಂತ ಯೋಜಿತವಾಗಿ ಹೇರಲಾಗುತ್ತಿದೆ ಎಣದು ಯೇಲ್ ಆರೋಪಿಸಿದೆ.**

# ವಿವಾದಿತ ಯೂಟ್ಯೂಬರ್ ಎಲ್ವಿಶ್ ಯಾದವ್ ಮನೆ ಮೇಲೆ ಗುಂಡಿನ ಸುರಿಮಳೆ

**ಗುರುಗ್ರಾಮ:** ಯೂಟ್ಯೂಬರ್ ಮತ್ತು ಮಾಜಿ ಬಿಗ್ ಬಾಸ್ ವಿಜೇತ ಎಲ್ವಿಶ್ ಯಾದವ್ ಅವರ ನಿವಾಸದ ಮೇಲೆ ಭಾನುವಾರ ಮುಂಜಾನೆ ಅಪರಿಚಿತ ಬಂದೂಕುಧಾರಿಗಳು ಎರಡು ಡಜನ್‌ಗೂ ಹೆಚ್ಚು ಸುತ್ತು ಗುಂಡು ಹಾರಿಸಿದ್ದಾರೆ. ಬೆಳಿಗ್ಗೆ 5:30ರಿಂದ ಬೆಳಿಗ್ಗೆ 6 ಗಂಟೆಯ ನಡುವೆ ಈ ಘಟನೆ ನಡೆದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಬೈಕ್‌ಗಳಲ್ಲಿ ಬಂದ ಮೂವರು ವ್ಯಕ್ತಿಗಳು ಗುಂಡು ಹಾರಿಸಿ ನಂತರ ಆ ಪ್ರದೇಶದಿಂದ ಪರಾರಿಯಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.



ಎರಡು ಡಜನ್‌ಗೂ ಹೆಚ್ಚು ಗುಂಡು ಹಾರಿಸಲಾಗಿದೆ. ಆದರೆ ಯಾರಿಗೂ ಗಾಯಗಳಾಗಿಲ್ಲ. ಘಟನೆಯ ಸಮಯದಲ್ಲಿ ಯೂಟ್ಯೂಬರ್ ಅವರ ಮನೆಯಲ್ಲಿ ಇರಲಿಲ್ಲ. ಗುಂಡು ಹಾರಿಸಿದಾಗ ಕೇರ್‌ಟೇಕರ್ ಮಾತ್ರ ಆವರಣದೊಳಗೆ ಇದ್ದರು ಎಂದು ಮೂಲಗಳು ತಿಳಿಸಿವೆ. ಫೈರಿಂಗ್ ಎಲ್ವಿಶ್ ಅವರ ಮನೆಯ ನೆಲ, ಮೊದಲ ಮಹಡಿಯನ್ನು ಗುರಿಯಾಸಿಕೊಂಡಿದ್ದು, ಯಾದವ್ ಎರಡನೇ, ಮೂರನೇ ಮಹಡಿಯಲ್ಲಿ ವಾಸಿಸುತ್ತಿದ್ದಾರೆ ಎಂದು ಹೇಳಲಾಗಿದೆ. ಕೂಡಲೇ ಪೊಲೀಸರು ಸ್ಥಳಕ್ಕೆ ತಲುಪಿ ಪರಿಶೀಲಿಸಿ ಅಗತ್ಯ ಮಾದರಿಗಳನ್ನು ಸಂಗ್ರಹಿಸಿ, ಸುತ್ತಮುತ್ತಲಿನ ಸಿಸಿಟಿವಿ ದೃಶ್ಯಗಳನ್ನು ಪರಿಶೀಲಿಸುತ್ತಿದ್ದಾರೆ. ದೂರಿನ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಘಟನೆಯ ಬಗ್ಗೆ ಯಾದವ್ ಇಲ್ಲಿಯವರೆಗೆ ಅಧಿಕೃತ ದೂರು ದಾಖಲಿಸಿಲ್ಲ ಎಂದು ಮೂಲಗಳು ತಿಳಿಸಿವೆ. ಗುರುಗ್ರಾಮದ ಸೆಕ್ಟರ್ 57ರಲ್ಲಿ ಯೂಟ್ಯೂಬರ್ ಮತ್ತು ಬಿಗ್ ಬಾಸ್ ಒಟಿಟಿ ವಿಜೇತ ಎಲ್ವಿಶ್ ಯಾದವ್ ಅವರ ನಿವಾಸದ ಹೊರಗೆ ಮೂವರು ಮುಸುಕುಧಾರಿ ದುಷ್ಕರ್ಮಿಗಳು ಗುಂಡು ಹಾರಿಸಿದ್ದಾರೆ. ಘಟನೆ ಬೆಳಿಗ್ಗೆ 5:30ರ ಸುಮಾರಿಗೆ ನಡೆದಿದೆ. ಒಂದು ಡಜನ್‌ಗೂ ಹೆಚ್ಚು ಸುತ್ತು ಗುಂಡು ಹಾರಿಸಲಾಗಿದೆ. ಗುಂಡು ಹಾರಿಸಿದ ಸಮಯದಲ್ಲಿ ಎಲ್ವಿಶ್ ಯಾದವ್ ಅವರ ನಿವಾಸದಲ್ಲಿ ಇರಲಿಲ್ಲ ಎಂದು ಗುರುಗ್ರಾಮ್ ಪೊಲೀಸ್ ಪಿಆರ್‌ಒ ಸಂದೀಪ್ ಕುಮಾರ್ ಹೇಳಿದ್ದಾರೆ. ಘಟನೆಗೆ ಮೊದಲು ಯಾದವ್ ಅವರಿಗೆ ಯಾವುದೇ ಬೆದರಿಕೆ ಕರೆಗಳು ಬಂದಿಲ್ಲ ಎಂದು ಅವರ ಸಂಬಂಧಿಕರು ಹೇಳಿದ್ದಾರೆ, ಆದರೆ ಯಾದವ್ ಸ್ವತಃ ಪ್ರಸ್ತುತ ಹರಿಯಾಣದ ಹೊರಗಿದ್ದಾರೆ.

### ನಾನು ಅಮೆರಿಕದ ಅಧ್ಯಕ್ಷನಾಗಿರುವವರೆಗೂ ತೈವಾನ್ ಮೇಲೆ ದಾಳಿ ಮಾಡಲ್ಲ ಎಂದು ಚೀನಾ ಭರವಸೆ ನೀಡಿದೆ

# ಚೀನಾ-ತೈವಾನ್ ವಿವಾದದ ಬಗ್ಗೆ ಟ್ರಂಪ್ ಸ್ಪಷ್ಟನುಡಿ

**ವಾಷಿಂಗ್ಟನ್:** ನಾನು ಅಮೆರಿಕದ ಅಧ್ಯಕ್ಷನಾಗಿರುವವರೆಗೂ ತೈವಾನ್ ಮೇಲೆ ಚೀನಾ ದಾಳಿ ಮಾಡುವುದಿಲ್ಲ ಇದು ಡೊನಾಲ್ಡ್ ಟ್ರಂಪ್ ಅವರ ಭರವಸೆಯ ನುಡಿ. ಅಷ್ಟೇ ಅಲ್ಲ ಹೀಗಂತ ಖುದ್ದು ಚೀನಾದ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರೇ ಭರವಸೆ ನೀಡಿದ್ದಾರೆ ಎಂದು ಅಮೆರಿಕ ಅಧ್ಯಕ್ಷರು ಹೇಳಿಕೊಂಡಿದ್ದಾರೆ. ಫಾಕ್ಸ್ ನ್ಯೂಸ್‌ಗೆ ನೀಡಿದ ಸಂದರ್ಶನದಲ್ಲಿ ಮಾತನಾಡಿದ ಡೊನಾಲ್ಡ್ ಟ್ರಂಪ್, ನಾನು ಅಮೆರಿಕ ಅಧ್ಯಕ್ಷನಾಗಿರುವವರೆಗೆ ತೈವಾನ್ ಮೇಲೆ ಚೀನಾ ದಾಳಿ ಮಾಡುವುದಿಲ್ಲ. ಕ್ಸಿ ಜಿನ್‌ಪಿಂಗ್ ಕೂಡ ನನಗೆ ಈ ಬಗ್ಗೆ ಖಚಿತವಾಗಿ ಹೇಳಿದ್ದಾರೆ. ನನಗೆ ಈ ವಿಚಾರದಲ್ಲಿ ಕ್ಸಿ ಮೇಲೆ ಸಂಪೂರ್ಣ ನಂಬಿಕೆ ಇದೆ ಎಂದು ಸ್ಪಷ್ಟಪಡಿಸಿದ್ದಾರೆ. ಚೀನಾ-ತೈವಾನ್ ಸಂಘರ್ಷಕ್ಕೆ ದಶಕಗಳ ಇತಿಹಾಸವಿದೆ. ನೀವು ಅಧ್ಯಕ್ಷರಾಗಿರುವವರೆಗೆ ನಾವು ತೈವಾನ್ ಮರುವಶದ ಯೋಜನೆಯನ್ನು ಜಾರಿ ಮಾಡುವುದಿಲ್ಲ ಎಂದು ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ನನಗೆ ಮಾತು ಕೊಟ್ಟಿದ್ದಾರೆ. ನಾನು ಚೀನೀ ಅಧ್ಯಕ್ಷರ ಈ ನಡೆಯನ್ನು ಪ್ರಶಂಸಿಸುತ್ತೇನೆ. ಮುಂದೇನಾಗುತ್ತೋ ಕಾದು ನೋಡೋಣ ಎಂದು ಡೊನಾಲ್ಡ್ ಟ್ರಂಪ್ ಸಂದರ್ಶನದಲ್ಲಿ ಹೇಳಿದ್ದಾರೆ.

**ನಂಬಿಕೆಗೆ ಕಾರಣ?:** ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ನನ್ನ ಎರಡನೇ ಅಧ್ಯಕ್ಷೀಯ ಅವಧಿಯ ಮೊದಲ ದೃಢೀಕೃತ ಕರೆಯನ್ನು ಕಳೆದ ಏಪ್ರಿಲ್‌ನಲ್ಲಿ ಮಾಡಿದ್ದರು. ಆಗ ತೈವಾನ್ ವಿವಾದದ ಬಗ್ಗೆ ನಾವು ಮಾತನಾಡಿದ್ದೇವು. ನೀವು ಅಧ್ಯಕ್ಷರಾಗಿರುವವರೆಗೆ ನಾವು ತೈವಾನ್ ಮೇಲೆ ದಾಳಿ ಮಾಡುವ ಬಗ್ಗೆ ಯೋಚಿಸುವುದಿಲ್ಲ ಎಂದು ಕ್ಸಿ ಭರವಸೆ ನೀಡಿದ್ದರು ಎಂದು ಡೊನಾಲ್ಡ್ ಟ್ರಂಪ್ ಪ್ರತಿಪಾದಿಸಿದ್ದಾರೆ.



> ● ತೈವಾನ್ ಮೇಲೆ ದಾಳಿ ಮಾಡಲ್ಲ ಅಂತಾ ಕ್ಸಿ ಜಿನ್‌ಪಿಂಗ್ ಭರವಸೆ ನೀಡಿದ್ದಾರೆ ಎಂದ ಡೊನಾಲ್ಡ್ ಟ್ರಂಪ್.
>
> ● ಏಪ್ರಿಲ್‌ನಲ್ಲಿ ಕ್ಸಿ ಜಿನ್‌ಪಿಂಗ್ ದೂರವಾಣಿ ಕರೆಯ ರಹಸ್ಯ ಬಯಲು ಮಾಡಿದ ಅಮೆರಿಕ ಅಧ್ಯಕ್ಷ.

ತೈವಾನ್ ತನ್ನ ಪ್ರದೇಶವೆಂದು ಚೀನಾ ಪರಿಗಣಿಸುತ್ತದೆ ಮತ್ತು ಅಗತ್ಯವಿದ್ದರೆ ಬಲವಂತವಾಗಿ ಅದನ್ನು ಮರುವಶ ಮಾಡಿಕೊಳ್ಳುವುದಾಗಿ ಹೇಳಿದೆ. ಆದಾಗ್ಯೂ, ತೈವಾನ್ ಚೀನಾದ ಸಾರ್ವಭೌಮತ್ವದ ಹಕ್ಕುಗಳನ್ನು ಬಲವಾಗಿ ಆಕ್ಷೇಪಿಸುತ್ತದೆ. ಅಮೆರಿಕವು ತೈವಾನ್‌ಗೆ ಪ್ರಾಥಮಿಕ ಶಸ್ತ್ರಾಸ್ತ್ರ ಪೂರೈಕೆದಾರ ಮತ್ತು ಅಂತರರಾಷ್ಟ್ರೀಯ ಬೆಂಬಲಿಗನಾಗಿದ್ದರೂ, ಅಮೆರಿಕ-ತೈವಾನ್ ಔಪಚಾರಿಕ ರಾಜತಾಂತ್ರಿಕ ಸಂಬಂಧ.

**ಹೊಂದಿಲ್ಲ ಎಂಬುದು ಗಮನಾರ್ಹ:** ವಾಷಿಂಗ್ಟನ್‌ನಲ್ಲಿರುವ ಚೀನಾ ರಾಯಭಾರ ಕಚೇರಿಯು, ತೈವಾನ್ ವಿಷಯವು ಚೀನಾ-ಯುಎಸ್ ಸಂಬಂಧಗಳಲ್ಲಿ ಅತ್ಯಂತ ಪ್ರಮುಖ ಮತ್ತು ಸೂಕ್ಷ್ಮ ವಿಷಯ ಎಂದು ಹೇಳಿದೆ. ಅಮೆರಿಕ ಸರ್ಕಾರವು ಒಂದು-ಚೀನಾ ತತ್ವ ಮತ್ತು ಯುಎಸ್-ಚೀನಾ ಜಂಟಿ ಸಂವಹನಗಳಿಗೆ ಬದ್ಧವಾಗಿರಬೇಕು. ತೈವಾನ್‌ಗೆ ಸಂಬಂಧಿಸಿದ ಸಮಸ್ಯೆಗಳನ್ನು ವಿವೇಕದಿಂದ ನಿರ್ವಹಿಸಬೇಕು ಮತ್ತು ಚೀನಾ-ಯುಎಸ್ ಸಂಬಂಧಗಳು, ತೈವಾನ್ ಜಲಸಂಧಿಯಲ್ಲಿ ಶಾಂತಿ, ಸ್ಥಿರತೆಯನ್ನು ಶ್ರದ್ಧೆಯಿಂದ ಕಾಪಾಡಬೇಕು ಎಂದು ಚೀನಾದ ರಾಯಭಾರ ಕಚೇರಿಯ ವಕ್ತಾರ ಲಿಯು ಪೆಂಗ್ಯು ಅವರು ತಮ್ಮ ಅಧಿಕೃತ ಹೇಳಿಕೆಯಲ್ಲಿ ಉಲ್ಲೇಖಿಸಿದ್ದಾರೆ. ಕಳೆದ ಜುಲೈನಲ್ಲಿ ತೈವಾನ್ ಜಲಸಂಧಿಗೆ ಯುದ್ಧನೌಕೆ ನುಗ್ಗಿಸಿದ್ದ ಚೀನಾ, ಯುದ್ಧದ ಆತಂಕದ ವಾತಾವರಣ ಸೃಷ್ಟಿ ಮಾಡಿತ್ತು. ಇಷ್ಟೇ ಅಲ್ಲದೇ ಪದೇ ಪದೇ ತೈವಾನ್ ವಾಯುಗಡಿಯನ್ನು ಉಲ್ಲಂಘಿಸುವ ಚೀನಾದ ಯುದ್ಧ ವಿಮಾನಗಳು, ಈ ಪ್ರದೇಶದಲ್ಲಿ ಉದ್ವಿಗ್ನತೆಯನ್ನು ಜೀವಂತವಾಗಿಡುತ್ತವೆ. ಕ್ಸಿ ಜಿನ್‌ಪಿಂಗ್ ಅವರ ತೈವಾನ್ ಮರುವಶಕ್ಕಾಗಿ ಬಲಪ್ರಯೋಗಕ್ಕೆ ಸಿದ್ಧ ಎಂಬ ಹೇಳಿಕೆ, ಚೀನಾದ ಉದ್ದೇಶಕ್ಕೆ ಹಿಡಿದ ಕನ್ನಡಿಯಾಗಿದೆ.

### ಮುಂದೇನಾಗುತ್ತೋ ನೋಡೋಣ

**ತೈವಾನ್ ಮರುವಶದ ಯೋಜನೆ ಹಾಕಿಕೊಂಡು ಕುಳಿತಿರುವ ಚೀನಾ, ಇದಕ್ಕಾಗಿ ಇಡೀ ಜಗತ್ತಿನೊಂದಿಗೆ ಹೋರಾಡಲು ಸಿದ್ಧ ಎಂದು ಘೋಷಿಸಿದೆ. ಆದರೆ ಅಮೆರಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ನಾನು ಅಧಿಕಾರದಲ್ಲಿರುವುವರೆಗೆ ತೈವಾನ್ ಮೇಲೆ ದಾಳಿ ಮಾಡುವುದಿಲ್ಲ ಎಂದು ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಭರವಸೆ ನೀಡಿದ್ದಾರೆ ಎಂದು ಹೇಳುತ್ತಿದ್ದಾರೆ. ಕಳೆದ ಏಪ್ರಿಲ್‌ನಲ್ಲಿ ತಮ್ಮ ಮತ್ತು ಕ್ಸಿ ಜಿನ್‌ಪಿಂಗ್ ನಡುವೆ ನಡೆದ ಮಾತುಕತೆಯ ವಿವರ ಬಹಿರಂಗಪಡಿಸಿರುವ ಡೊನಾಲ್ಡ್ ಟ್ರಂಪ್, ಮುಂದೇನಾಗುತ್ತೋ ನೋಡೋಣ ಎಂದು ಹೇಳಿರುವುದು ಗಮನ ಸೆಳದಿದೆ.**

# ಪಾರ್ಸೆಲ್ ಬಾಂಬ್ ಸಂಚು ವಿಫಲ, ಸ್ಫೋಟಕ ಕಳ್ಳಸಾಗಣೆ ದಂಧೆ ಬಯಲು

**ಖೈರಾಗಢ:** ಮ್ಯೂಸಿಕ್ ಸಿಸ್ಟಮ್ ಸ್ಪೀಕರ್‌ನಲ್ಲಿ ಸುಧಾರಿತ ಸ್ಫೋಟಕ ಸಾಧನ ಅಳವಡಿಸಿ ಅದನ್ನು ತಾನು ಪ್ರೀತಿಸುತ್ತಿದ್ದ ಮಹಿಳೆಯ ಪತಿಗೆ ಉಡುಗೊರೆಯಾಗಿ ಕಳುಹಿಸಿದ್ದ ಛತ್ತೀಸ್‌ಗಢದ 20 ವರ್ಷದ ಎಲೆಕ್ಟ್ರಿಷಿಯನ್ ನನ್ನು ಪೊಲೀಸರು ಬಂಧಿಸಿದ್ದಾರೆ.

ಆರೋಪಿ ಆನ್‌ಲೈನ್ ವ್ಯವಸ್ಥೆಗಳನ್ನು ಬಳಸಿಕೊಂಡು ಸ್ಫೋಟಕವನ್ನು ಜೋಡಿಸಿ, ಪ್ಲಗ್ ಇನ್ ಮಾಡಿದಾಗ ಅದು ಸ್ಫೋಟಿಸುವಂತೆ ವಿನ್ಯಾಸಗೊಳಿಸಿದ್ದ. ಇದಲ್ಲದೆ ಪೊಲೀಸರಿಗೆ ಸಿಕ್ಕಿಬೀಳದೆ ಇರಲು ಬಾಂಬ್ ಬಳಸಿ ಹೇಗೆ ಕೊಲ್ಲುವುದು ಎಂದು ಸಾಮಾಜಿಕ ತಾಣದಲ್ಲಿ ನೋಡಿದ್ದ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಖೈರಾಗಢ-ಚುಯಿಖಾದನ್-ಗಂಡೈ ಜಿಲ್ಲೆಯ ಪೊಲೀಸರು ಯೋಜಿತ ಕೊಲೆಯನ್ನು ವಿಫಲಗೊಳಿಸಿದ್ದಲ್ಲದೆ, ಆರೋಪಿಗಳಿಗೆ ಜೆಲಾಟಿನ್ ಸ್ಟಿಕ್‌ಗಳನ್ನು ಪೂರೈಸುವ ಸ್ಫೋಟಕ ಕಳ್ಳಸಾಗಣೆ ದಂಧೆಯನ್ನು ಸಹ ಬಯಲು ಮಾಡಿದ್ದಾರೆ.

ಏ. 2023ರಲ್ಲಿ ಇದೇ ರೀತಿಯ ಪ್ರಕರಣವೊಂದರಲ್ಲಿ, ನೆರೆಯ ಕಬೀರ್ಧಾಮ್ ಜಿಲ್ಲೆಯಲ್ಲಿ, ತನ್ನ ಪತ್ನಿಯ ಮಾಜಿ ಪ್ರೇಮಿಯಿಂದ ಮದುವೆ ಉಡುಗೊರೆಯಾಗಿ ಸ್ವೀಕರಿಸಲಾದ ಹೋಮ್ ಥಿಯೇಟರ್ ಮ್ಯೂಸಿಕ್ ಸಿಸ್ಟಮ್ ಸ್ಫೋಟಗೊಂಡು ನವವಿವಾಹಿತ ಪುರುಷ, ಅವನ ಅಣ್ಣ ಸಾವನ್ನಪ್ಪಿದರು. ಇತ್ತೀಚಿನ ಪ್ರಕರಣದಲ್ಲಿ, ಪ್ರಮುಖ ಆರೋಪಿ ವಿನಯ್ ವರ್ಮಾ ಮತ್ತು ಇತರ ಆರು ಜನರನ್ನು ಬಂಧಿಸಲಾಗಿದೆ ಎಂದು ಖೈರಾಗಢ-ಚುಯಿಖಾದನ್-ಗಂಡೈ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ (ಎಸ್‌ಪಿ) ಲಕ್ಷ್ಯ ಶರ್ಮಾ ತಿಳಿಸಿದ್ದಾರೆ.



ಇತರೆ ಬಂಧಿತ ಆರೋಪಿಗಳನ್ನು ಪರಮೇಶ್ವರ್ ವರ್ಮಾ (25), ಗೋಪಾಲ್ ವರ್ಮಾ (22), ಫಾಸಿರಾಮ್ ವರ್ಮಾ (46), ದಿಲೀಪ್ ಧಿಮಾರ್ (38), ಗೋಪಾಲ್ ಖೇಲ್ವಾರ್ ಮತ್ತು ಖಿಲೇಶ್ ವರ್ಮಾ (19) ಎಂದು ಗುರುತಿಸಲಾಗಿದೆ.

ಅನುಮಾನದ ಮೇರೆಗೆ ಬಾಂಬ್ ನಿಷ್ಕ್ರಿಯ ತಂಡವು ಪ್ಯಾಕೇಜ್ ಅನ್ನು ಪರಿಶೀಲಿಸಿದಾಗ ಹೊಸ ಸ್ಪೀಕರ್ ಒಳಗೆ 2 ಕೆಜಿ ತೂಕದ ಐಇಡಿ ಅಡಗಿಸಿಟ್ಟಿರುವುದು ಕಂಡುಬಂದಿದೆ ಎಂದು ಎಸ್ಪಿ ಹೇಳಿದರು.ತಾಂತ್ರಿಕ ವಿಶ್ಲೇಷಣೆಯು ಐಇಡಿಯನ್ನು ವಿದ್ಯುತ್ ಮೂಲಕ್ಕೆ ಪ್ಲಗ್ ಮಾಡಿದಾಗ ಸ್ಫೋಟಗೊಳ್ಳಲು ವಿನ್ಯಾಸಗೊಳಿಸಲಾಗಿದೆ ಎಂದು ತೋರಿಸಿದೆ.ಆರೋಪಿಯು ತನ್ನ ಕಾಲೇಜು ದಿನಗಳಿಂದಲೂ ಖಾನ್ ಅವರ ಪತ್ನಿಯೊಂದಿಗೆ ಒನ್‌ವೇ ಲವ್‌ನಲ್ಲದ್ದ . ಕೆಲವು ತಿಂಗಳ ಹಿಂದೆ ಅವರು ಖಾನ್ ಅವರನ್ನು ಮದುವೆಯಾದ ನಂತರ, ವರ್ಮಾ ಅವರನ್ನು ಕೊಲ್ಲಲು ಸಂಚು ರೂಪಿಸಿದ್ದರು ಎಂದು ಅವರು ಹೇಳಿದರು. ಹೆಚ್ಚಿನ ತನಿಖೆಯಲ್ಲಿ ಈ ಸಾಧನದಲ್ಲಿ ಬಳಸಲಾದ ಸ್ಫೋಟಕಗಳನ್ನು ಛತ್ತೀಸ್‌ಗಢದ ದುರ್ಗ್ ಜಿಲ್ಲೆಯ ಕಲ್ಲಿನ ಕ್ವಾರಿಯಿಂದ ತರಲಾಗಿದೆ ಎಂದು ತಿಳಿದುಬಂದಿದೆ. ದುರ್ಗ ನಿವಾಸಿ ಪರಮೇಶ್ವರ್ ದುರ್ಗ್ ನಿವಾಸಿಗಳಾದ ಗೋಪಾಲ್, ದಿಲೀಪ್‌ಅವರಿಂದ ಜೆಲಾಟಿನ್ ರಾಡ್‌ಗಳನ್ನು ಖರೀದಿಸಲು 6,000 ರೂ. ಪಾವತಿಸಿದ್ದಾರೆ ಎಂದು ಆರೋಪಿಸಲಾಗಿದೆ. ಫಾಸಿರಾಮ್ ಸ್ಫೋಟಕಗಳನ್ನು ತಲುಪಿಸಿದರೆ, ಖಿಲೇಶ್ ಪಾರ್ಸೆಲ್‌ನಲ್ಲಿ ಬಳಸಲಾದ ನಕಲಿ ಇಂಡಿಯಾ ಪೋಸ್ಟ್ ಲೋಗೋವನ್ನು ಸಿದ್ಧಪಡಿಸಿದ ಆರೋಪ ಹೊಂದಿದ್ದಾರೆ ಎಂದು ಅಧಿಕಾರಿ ಹೇಳಿದರು.

> **ಮೂರು-ನಾಲ್ಕು ದಿನಗಳ ಹಿಂದೆ ಗಂಡೈ ಪೊಲೀಸ್ ಠಾಣೆ ವ್ಯಾಪ್ತಿಯ ಮಾನ್ಪುರ್ ಗ್ರಾಮದ ಅಂಗಡಿಯೊಂದಕ್ಕೆ ನಕಲಿ ಇಂಡಿಯಾ ಪೋಸ್ಟ್ ಲೋಗೋ ಹೊಂದಿರುವ ಅನುಮಾನಾಸ್ಪದ ಪಾರ್ಸೆಲ್ ತಲುಪಿದಾಗ ಈ ಪಿತೂರಿ ಬೆಳಕಿಗೆ ಬಂದಿತು. ಪಾರ್ಸೆಲ್ ಅನ್ನು ಅಫ್ಸರ್ ಖಾನ್ ಅವರಿಗೆ ಕಳುಹಿಸಲಾಗಿತು. ಇದರ ಬಗ್ಗೆಅನುಮಾನಾಸ್ಪವಾಗಿ ಕಂಡುಕೊಂಡುಬಂದ ನಂತರ ಖಾನ್ ತಕ್ಷಣ ಪೊಲೀಸರಿಗೆ ಮಾಹಿತಿ ನೀಡಿದರು ಎಂದು ಅಧಿಕಾರಿ ಹೇಳಿದರು.**

# ಕೃಷ್ಣಜನ್ಮಾಷ್ಟಮಿ ಉತ್ಸವದ ವೇಳೆ 2 ಸಾವು, 117 ಜನರಿಗೆ ಗಾಯ

**ಮುಂಬೈ:** ಮುಂಬೈ ಮತ್ತು ನೆರೆಯ ಥಾಣೆ ನಗರದಲ್ಲಿ ಕೃಷ್ಣ ಜನಾಷ್ಟಮಿ ಮೊಸರಿನ ಮಡಿಕೆ ಒಡೆಯುವ ಉತ್ಸವದ ವೇಳೆ ಜನಸ್ತೋಮದ ಮಧ್ಯ ಉಸಿರುಗಟ್ಟಿ ಇಬ್ಬರು ಸಾವನ್ನಪ್ಪಿದ್ದಾರೆ ಮತ್ತು 117 ಜನರು ಗಾಯಗೊಂಡಿದ್ದಾರೆ. ಥಾಣೆಯಲ್ಲಿ, ಬಾಲಿವುಡ್ ನಟರಾದ ಗೋವಿಂದ, ಚಂಕಿ ಪಾಂಡೆ ಮತ್ತು ಸುನಿಲ್ ಶೆಟ್ಟಿ ನಡೆದ ಉತ್ಸವಗಳಲ್ಲಿ ಭಾಗವಹಿಸಿದ್ದರು. ಮರಾಠಿ ಮತದಾರರನ್ನು ಸೆಳೆಯುವ ಹೋರಾಟದ ನಡುವೆ, ಉಪಮುಖ್ಯಮಂತ್ರಿ ಏಕನಾಥ್ ಶಿಂಧೆ, ಪ್ರತಿಪಕ್ಷದ ರಾಜ್ ಠಾಕ್ರೆ ನೇತೃತ್ವದ ಆಯೋಜಿಸಿದ್ದ ದಹಿ ಹಂಡಿ ಆಚರಣೆಗಳು ರಾಜಕೀಯ ಸಂಕೇತಗಳಲ್ಲಿ ಮುಳುಗಿವೆ. ಗಾಂದೇವಿ ಗೋವಿಂದ ಪಾಠಕ್‌ನ ಭಾಗವಾಗಿರುವ ರೋಹನ್ ಮೋಹನ್ ಮಾಲ್ವಿ ಮುಂಬೈನ ಅಂಧೇರಿ ಪ್ರದೇಶದ ಆದರ್ಶ ನಗರದಲ್ಲಿ ಟೆಂಪೋದಲ್ಲಿ ಕುಳಿತಿದ್ದಾಗ ಪ್ರಜ್ಞೆ ತಪ್ಪಿದರು, ಇತ್ತೀಚೆಗೆ ಕಾಮಾಲೆ ರೋಗದಿಂದ ಬಳಲುತ್ತಿದ್ದ ಕಾರಣ ಅವರು ಪಿರಮಿಡ್ ರಚನೆಯಲ್ಲಿ ಭಾಗವಹಿಸಲಿಲ್ಲ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಅವರನ್ನು ಘಾಟ್ಕೋಪರ್‌ನ ರಾಜವಾಡಿ ಆಸ್ಪತ್ರೆಗೆ ಸಾಗಿಸಲಾಯಿತು, ಅಲ್ಲಿ ವೈದ್ಯರು ಅವರು ಬರುವಾಗಲೇ ಮೃತಪಟ್ಟಿದ್ದಾರೆ ಎಂದು ಘೋಷಿಸಿದರು ಎಂದು ಅಧಿಕಾರಿ ಹೇಳಿದರು. ಇದಕ್ಕೂ ಮೊದಲು, ಮಹಾನಗರದ ಈಶಾನ್ಯ ಭಾಗದ ಮಂಖುರ್ದ್‌ನಲ್ಲಿ ದಹಿ ಹಂಡಿಟಿ ಕಟ್ಟುವಾಗ ಜಗಮೋಹನ್ ಶಿವಕಿರಣ್ ಚೌಧರಿ ಎಂದು ಗುರುತಿಸಲಾದ 32 ವರ್ಷದ ವ್ಯಕ್ತಿ ಬಿದ್ದು ಸಾವನ್ನಪ್ಪಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಮಹಾರಾಷ್ಟ್ರ ನಗರದಲ್ಲಿರುವ ತನ್ನ ಮನೆಯ ಮೊದಲ ಮಹಡಿಯಿಂದ ಬಿದ್ದಿದ್ದ ಆತನನ್ನು ಶತಾಬ್ದಿ



ಗೋವಂಡಿ ಆಸ್ಪತ್ರೆಗೆ ಕರೆದೊಯ್ಯಲಾಯಿತು, ಅಲ್ಲಿ ಆತ ಮೃತಪಟ್ಟಿದ್ದಾನೆ ಮುಂಬೈನಲ್ಲಿ ರಾತ್ರಿ ನಡೆದ ಹಬ್ಬದ ಸಂದರ್ಭದಲ್ಲಿ 95 ಜನರು ಗಾಯಗೊಂಡಿದ್ದಾರೆ ಎಂದು ವರದಿಯಾಗಿದೆ ಅದರಲ್ಲಿ ಇಬ್ಬರ ಸ್ಥಿತಿ ಗಂಭೀರವಾಗಿದೆ ಎಂದು ಅಧಿಕಾರಿ ತಿಳಿಸಿದ್ದಾರೆ.

ಚಿಕಿತ್ಸೆಯ ನಂತರ ಕೆಲವರನ್ನು ಬಿಡುಗಡೆ ಮಾಡಲಾಗಿದೆ, ಆದರೆ 19 ಜನರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಥಾಣೆ ನಗರದಲ್ಲಿ, ಮಾನವ ಪಿರಮಿಡ್‌ಗಳನ್ನು ಹೊಡೆಯಲು ಪ್ರಯತ್ನಿಸುವಾಗ 22 ಭಾಗವಹಿಸುವವರು ಗಾಯಗೊಂಡಿದ್ದಾರೆ ಎಂದು ಸ್ಥಳೀಯ ನಾಗರಿಕ ಸಂಸ್ಥೆಯ ವಿಪತ್ತು ನಿರ್ವಹಣಾ ಕೋಶದ ಮುಖ್ಯಸ್ಥ ಯಾಸಿನ್ ತಡ್ವಿ ತಿಳಿಸಿದ್ದಾರೆ. ತಲೆಗೆ ಪೆಟ್ಟಾಗಿದ್ದ 18 ವರ್ಷದ ಯುವಕನನ್ನು ಮುಂಬೈನ ಸರ್ಕಾರಿ ಜೆಜೆ ಆಸ್ಪತ್ರೆಗೆ ಹೆಚ್ಚಿನ ಚಿಕಿತ್ಸೆಗಾಗಿ ಕಳುಹಿಸಲಾಗಿದೆ. ಗಾಯಗೊಂಡವರಲ್ಲಿ 5 ರಿಂದ 10 ವರ್ಷ ವಯಸ್ಸಿನ ಮಕ್ಕಳು ಸೇರಿದ್ದಾರೆ ಎಂದು ಅಧಿಕಾರಿ ತಿಳಿಸಿದ್ದಾರೆ.

# ಮತವಂಚನೆ ಆರೋಪವಲ್ಲ ಆತ್ಮವಂಚನೆಯ ಪ್ರಲಾಪ

## ರಾಹುಲಾ ಗಾಂಧಿ ವಿರುದ್ಧ ಜ್ಞಾನೇಶ್ ಕುಮಾರ್ ಪ್ರಕೋಪ, ಮತಗಳ್ಳತನ ಆರೋಪಗಳನ್ನು ಸ್ಪಷ್ಟವಾಗಿ ನಿರಾಕರಿಸಿದ ಜ್ಞಾನೇಶ್ ಕುಮಾರ್

**ಹೊಸದಿಲ್ಲಿ:** ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಯವರ ಮತ ವಂಚನೆ ಆರೋಪಗಳನ್ನು ಬಲವಾಗಿ ವಿರೋಧಿಸಿರುವ ಭಾರತೀಯ ಚುನಾವಣಾ ಆಯೋಗದ ಮುಖ್ಯಸ್ಥ ಜ್ಞಾನೇಶ್ ಕುಮಾರ್, ಮತಗಳ್ಳತನದಂತಹ ಅನುಚಿತ ಪದಗಳನ್ನು ಬಳಸುವ ಮೂಲಕ ಸಂವಿಧಾನಕ್ಕೆ ಅಪಮಾನ ಮಾಡಲಾಗುತ್ತಿದೆ ಎಂದು ತೀವ್ರ ವಿಷಾದ ವ್ಯಕ್ತಪಡಿಸಿದ್ದಾರೆ. ರಾಷ್ಟ್ರ ರಾಜಧಾನಿ ಹೊಸದಿಲ್ಲಿಯಲ್ಲಿ ಭಾನುವಾರ ಚುನಾವಣಾ ಆಯೋಗದ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್, ರಾಜಕೀಯ ಉದ್ದೇಶಗಳಿಗಾಗಿ ಭಾರತದ ಮತದಾರರನ್ನು ಗುರಿಯಾಗಿಸಲು ಚುನಾವಣಾ ಆಯೋಗವನ್ನು ಲಾಂಚ್‌ಪ್ಯಾಡ್‌ನಂತೆ ಬಳಸಲಾಗುತ್ತಿದೆ ಎಂದು ಪರೋಕ್ಷವಾಗಿ ರಾಹುಲ್ ಗಾಂಧಿ ವಿರುದ್ಧ ವಾಗ್ದಾಳಿ ನಡೆಸಿದರು. ಚುನಾವಣಾ ಆಯೋಗವು ಮತದಾರರೊಂದಿಗೆ ದೃಢವಾಗಿ ನಿಲ್ಲುತ್ತದೆ ಎಂದು ಹೇಳಿರುವ ಜ್ಞಾನೇಶ್ ಕುಮಾರ್, ಮತಗಳ್ಳತನದ ಆರೋಪಗಳು ಸಂವಿಧಾನಕ್ಕೆ ಮಾಡುತ್ತಿರುವ ಅವಮಾನವಲ್ಲದೇ ಬೇರೇನೂ ಅಲ್ಲ ಎಂದು ಗುಡುಗಿದ್ದಾರೆ. ಹೇಳಿದರು. ಪತ್ರಿಕಾಗೋಷ್ಠಿಯಲ್ಲಿ ಚುನಾವಣಾ ಆಯುಕ್ತರಾಧ ಸುಖ್‌ಬೀರ್ ಸಿಂಗ ಸಂಧು ಮತ್ತು ವಿವೇಕ್ ಜೋಶಿ ಕೂಡ ಉಪಸ್ಥಿತರಿದ್ದರು.



> **ಚುನಾವಣೆ ನಡೆಯಲಿರುವ ಬಿಹಾರ ರಾಜ್ಯದಲ್ಲಿ ವಿಶೇಷ ತೀವ್ರ ಪರಿಷ್ಕರಣೆ ವಿರೋಧಿಸಿ, ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ನೇತೃತ್ವದಲ್ಲಿ ಇಂಡಿಯಾ ಮೈತ್ರಿಕೂಡ ಮತದಾರ ಅಧಿಕಾರ ಯಾತ್ರೆಯನ್ನು ಪ್ರಾರಂಭಿಸಿದ್ದು, ಚುನಾವಣಾ ಆಯೋಗ ಕೂಡ ಇದೇ ದಿನ ತನ್ನ ಪತ್ರಿಕ್ರಿಯೆಯನ್ನು ನೀಡಿದೆ.**

**ಜ್ಞಾನೇಶ್ ಕುಮಾರ್ ಹೇಳಿದ್ದಿಷ್ಟು:** ಪತ್ರಿಕಾಗೋಷ್ಠಿ ಉದ್ದೇಶಿಸಿ ಮತನಾಡಿದ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್, ಚುನಾವಣಾ ಆಯೋಗ ಆಡಳಿತ ಪಕ್ಷ, ವಿರೋಧ ಪಕ್ಷದ ನಡುವೆ ಯಾವುದೇ ವ್ಯತ್ಯಾಸ ಮಾಡುವುದಿಲ್ಲ. ನಮ್ಮ ಕೆಲಸ ಕೇವಲ ನಿಷ್ಪಕ್ಷಪಾತ ಚುನಾವಣೆ ನಡೆಸುವುದು. ಅದನ್ನು ನಾವು ಯಾವುದೇ ಬಾಹ್ಯ ಒತ್ತಡಕ್ಕೆ ಮಣಿಯದೇ ನಡೆಸುತ್ತೇವೆ ಎಂದು ಸ್ಪಷ್ಟಪಡಿಸಿದರು.

ನಮಗೆ ಪ್ರತಿಯೊಂದು ಪಕ್ಷವೂ ಒಂದೇ. ಚುನಾವಣಾ ಆಯೋಗವು ತನ್ನ ಸಾಂವಿಧಾನಿಕ ಜವಾಬ್ದಾರಿಯಿಂದ ಹಿಂದೆ ಸರಿಯುವುದಿಲ್ಲ. ಆಯೋಗದ ವಿರುದ್ಧ ಕೆಲವರು ಮಾಡುತ್ತಿರುವ ಮತಗಳ್ಳತನ ಆರೋಪಗಳು, ಸಂವಿಧಾನಕ್ಕೆ ಮಾಡುತ್ತಿರುವ ಅಪಮಾನ. ಇದನ್ನು ಆಯೋಗ ಸಹಿಸುವುದಿಲ್ಲ ಎಂದು ಜ್ಞಾನೇಶ್ ಕುಮಾರ್ ಗುಡುಗಿದರು.

ಮತದಾರರ ಪಟ್ಟಿಗಳ ವಿಶೇಷ ತೀವ್ರ ಪರಿಷ್ಕರಣೆಯನ್ನು ಪ್ರಾರಂಭಿಸಲಾಗಿದೆ. ಲಭ್ಯ ಡೇಟಾದಲ್ಲಿನ ತಿದ್ದುಪಡಿಗಳಿಗಾಗಿ ರಾಜಕೀಯ ಪಕ್ಷಗಳ ಬೇಡಿಕೆಗಳನ್ನು ಪರಿಹರಿಸಲು ಇದನ್ನು ಪ್ರಾರಂಭಿಸಲಾಗಿದೆ. ಕರಡು ಮತದಾರರ ಪಟ್ಟಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಒಂದು ತಿಂಗಳ ಅವಧಿ ಇದೆ. ಯಾವುದೇ ದೋಷಗಳನ್ನು ಗುರುತಿಸಲು ರಾಜಕೀಯ ಪಕ್ಷಗಳಿಗೆ ನಾವು ಮನವಿ ಮಾಡುತ್ತೇವೆ ಎಂದು ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಹೇಳಿದರು. ಚುನಾವಣಾ ಆಯೋಗವು ಬಿಜೆಪಿಯೊಂದಿಗೆ ಒಪ್ಪಂದ ಮಾಡಿಕೊಂಡಿದೆ ಮತ್ತು ಚುನಾವಣಾ ಅಕ್ರಮಗಳಿಗೆ ಅನುಕೂಲ ಮಾಡಿಕೊಟ್ಟಿದೆ ಎಂದು ಲೋಕಸಬೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ನಿರಂತರವಾಗಿ ಆರೋಪ ಮಾಡುತ್ತಿದ್ದಾರೆ. ಈ ತಿಂಗಳ ಆರಂಭದಲ್ಲಿ ನಡೆಸಿದ ಪತ್ರಿಕಾಗೋಷ್ಠಿಯಲ್ಲಿ ರಾಹುಲ್ ಗಾಂಧಿ, ಕಳೆದ ವರ್ಷ ನಡೆದ ಲೋಕಸಭಾ ಚುನಾವಣೆಯ ಸಂದರ್ಭದಲ್ಲಿ ಕರ್ನಾಟಕದ ಮಹದೇವಪುರ ವಿಧಾನಸಭಾ ಕ್ಷೇತ್ರದಲ್ಲಿ ಮತ ವಂಚನೆ ನಡೆದಿದೆ ಎಂದು ಆರೋಪಿಸಿದ್ದರು.

> **ಚುನಾವಣಾ ಆಯೋಗದ ಬಾಗಿಲುಗಳು ಎಲ್ಲರಿಗೂ ಯಾವಾಗಲೂ ಸಮಾನವಾಗಿ ತೆರೆದಿರುತ್ತವೆ. ನಾವು ಒಂದು ಕಣ್ಣಿಗೆ ಬೆಣ್ಣೆ ಮತ್ತೊಂದು ಕಣ್ಣಿಗೆ ಸುಣ್ಣ ನೀತಿಯನ್ನು ಅನುಸರಿಸುವುದಿಲ್ಲ. ಸುಖಾಸುಮ್ಮನೆ ಆರೋಪಗಳನ್ನು ಮಾಡುವ ಮೂಲಕ ಚುನಾವಣಾ ಆಯೋಗದ ಪಾವಿತ್ರ್ಯತೆಯನ್ನು ಹಾಳು ಮಾಡುವುದು ಬೇಡ. ಸಂವಿಧಾನದ ಮೇಲೆ ನಂಬಿಕೆ ಇರುವವರು ಹೀಗೆ ಮಾಡುವುದಿಲ್ಲ ಎಂದು ಮುಖ್ಯ ಚುನಾವಣಾ ಆಯಕ್ತರು ಪರೋಕ್ಷವಾಗಿ ರಾಹುಲ್ ಗಾಂಧಿ ಅವರನ್ನು ತರಾಟೆಗೆ ತೆಗೆದುಕೊಂಡರು. ರಾಜಕೀಯ ಕಾರಣಗಳಿಗಾಗಿ ಮತದಾರರನ್ನು ಗುರಿಯಾಗಿಸಲು ಚುನಾವಣಾ ಆಯೋಗವನ್ನು ಒಂದು ಲಾಂಚ್‌ಪ್ಯಾಡ್ ಆಗಿ ಬಳಸುತ್ತಿರುವಾಗ, ನಾವು ಯಾವುದೇ ತಾರತಮ್ಯವಿಲ್ಲದೆ ಎಲ್ಲಾ ಮತದಾರರೊಂದಿಗೆ ದೃಢವಾಗಿ ನಿಲ್ಲುತ್ತೇವೆ ಎಂದು ಸ್ಪಷ್ಟಪಡಿಸುತ್ತಿದ್ದೇವೆ. ಮತದಾರರ ಪಟ್ಟಿ ಪರಿಷ್ಕರಣೆ ಕುರಿತು ಯಾವುದೇ ಗೊಂದಲಗಳಿದ್ದರೂ, ಅದರನ್ನು ಆಯೋಗ ಪರಿಹರಿಸಲು ಸಿದ್ಧವಿದೆ.**
>
> -ಜ್ಞಾನೇಶ್ ಕುಮಾರ್, ಮುಖ್ಯ ಚುನಾವಣಾ ಆಯುಕ್ತ

## ಮಿನಿ ನ್ಯೂಸ್

### ಪಾಕ್ ಪ್ರವಾಹದಲ್ಲಿ 220 ಜನ ಬಲಿ

**ಬುನೇರ್:** ವಾಯವ್ಯ ಪಾಕಿಸ್ತಾನದ ಬುನೇರ್ ಜಿಲ್ಲೆಯಲ್ಲಿ ಸಂಭವಿಸಿದ ಪ್ರವಾಹಕ್ಕೆ ಕನಿಷ್ಠಪಕ್ಷ 220 ಜನರು ಬಲಿಯಾಗಿದ್ದಾರೆ. ರಕ್ಷಣಾ ಕಾರ್ಯಕರ್ತರು ತೀವ್ರ ಪ್ರವಾಹ, ಭೂಕುಸಿತದಿಂದ ಉಧ್ವಸ್ತವಾದ ಮನೆಗಳ ಅವಶೇಷಗಳಿಂದ ಕಳೆದ ರಾತ್ರಿ, ಮತ್ತೆ 63 ಶವಗಳನ್ನು ಹೊರ ತೆಗೆದಿದ್ದಾರೆ. ಮುಂದಿನ ದಿನಗಳಲ್ಲಿ ಇನ್ನಷ್ಟು ಮಳೆಯಾಗುವುದಾಗಿ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬುನೇರ್ ಪ್ರವಾಹದಿಂದ ಬದುಕಿ ಬಂದ ಪ್ರತ್ಯಕ್ಷದರ್ಶಿಯ ಪ್ರಕಾರ ಉಕ್ಕೇರಿದ ಪ್ರವಾಹದ ಹರಿವು ನೂರಾರು ಬಂಡೆಗಳನ್ನು, ಟನ್‌ಗಟ್ಟಲೆ ಕೆಸರನ್ನು ಹೊತ್ತು ತಂದಿತು. ಮೇಘಸ್ಫೋಟ, ಪ್ರವಾಹದಿಂದ ಧ್ವಂಸವಾದ ಖೈಬರ್ ಪಖ್ತೂಂಖ್ವಾ ಪ್ರಾಂತ್ಯದ ಭಾಗಗಳಲ್ಲಿ ಒಂದಾದ ಬುನೇರ್‌ನಲ್ಲಿ ನೂರಾರು ರಕ್ಷಣಾ ಕಾರ್ಯಕರ್ತರು ಇನ್ನೂ ಬದುಕುಳಿದಿರುವವರಿಗಾಗಿ ಶೋಧ ನಡೆಸುತ್ತಿದ್ದಾರೆ ಎಂದು ತುರ್ತು ಸೇವೆಗಳ ವಕ್ತಾರ ಮೊಹಮದ್ ಸುಹೈಲ್ ತಿಳಿಸಿದ್ದಾರೆ. ಹತ್ತಾರು ಮನೆಗಳು ಕೊಚ್ಚಿಹೋಗಿವೆ.

### ಇಂಡೋನೇಷ್ಯಾದ ಸುಲಾವೆಸಿ ದ್ವೀಪದಲ್ಲಿ 5.8 ತೀವ್ರತೆಯ ಭೂಕಂಪ

**ಪಲು:** ಇಂಡೋನೇಷ್ಯಾದ ಪೂರ್ವ ಭಾಗದಲ್ಲಿ ಭಾನುವಾರ ಬೆಳಿಗ್ಗೆ 5.8 ತೀವ್ರತೆಯ ಭೂಕಂಪ ಸಂಭವಿಸಿದೆ.ಅಮೆರಿಕ ಭೂವೈಜ್ಞಾನಿಕ ಸಮೀಕ್ಷೆಯ ಪ್ರಕಾರ, ಮಧ್ಯ ಸುಲಾವೆಸಿ ಪ್ರಾಂತ್ಯದ ಪೊಸೊ ಜಿಲ್ಲೆಯಿಂದ 15 ಕಿ.ಮೀ. ಉತ್ತರಕ್ಕೆ ಭೂಕಂಪ ಸಂಭವಿಸಿದೆ. ನಂತವೂ ಕನಿಷ್ಠ 15 ಸರಣಿ ಕಂಪನಗಳು ಸಂಭವಿಸಿವೆ. ಇತ್ತೀಚಿನ ಮಾಹಿತಿ ಪ್ರಕಾರ ಹಲವು ಕಟ್ಟಡಗಳು ಕುಸಿದಿದ್ದು ಕೆಲವರು ಸಾವನ್ನಪ್ಪಿದ್ದಾರೆ ಎಂದು ಮೂಲಗಳು ತಿಳಿಸಿವೆ. ಇಂಡೋನೇಷ್ಯಾದ ರಾಷ್ಟ್ರೀಯ ವಿಪತ್ತು ತಗ್ಗಿಸುವಿಕೆ ಸಂಸ್ಥೆಯ ಪ್ರಕಾರ ಗಾಯಾಳುಗಳಲ್ಲಿ ಹೆಚ್ಚಿನವರನ್ನು ಪ್ರಾದೇಶಿಕ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಅವರಲ್ಲಿ ಹೆಚ್ಚಿನವರು ಬೆಳಿಗ್ಗೆ ಚರ್ಚ್‌ಗೆ ಬಂದಿದ್ದವರು ಎಂದು ಹೇಳಿದೆ. ಚರ್ಚ್ ಸೇರಿದಂತೆ ಹಲವಡೆ ಕಟ್ಟಡಗಳ ಹಾನಿಯನ್ನು ಸಾಮಜಿಕ ಜಾಲತಾಣದಲ್ಲಿ ಹರಿದಾಡಿದೆ. 2 ಕೋಟಿಗೂ ಹೆಚ್ಚು ಹೆಚ್ಚು ಜನರನ್ನು ಹೊಂದಿರುವ ವಿಶಾಲ ದ್ವೀಪಸಮೂಹ ಇಂಡೋನೇಷ್ಯಾ, ಪೆಸಿಫಿಕ್ ಬೇಸಿನ್‌ನಲ್ಲಿರುವ ಜ್ವಾಲಾಮುಖಿಗಳು ಮತ್ತು ದೋಷ ರೇಖೆಗಳ ಕಮಾನಿನ ರಿಂಗ್ ಆಫ್ ಫೈರ್‌ನಲ್ಲಿ ನೆಲೆಗೊಂಡಿರುವುದರಿಂದ ಆಗಾಗ್ಗೆ ಭೂಕಂಪಗಳು, ಜ್ವಾಲಾಮುಖಿ ಸ್ಫೋಟಗಳು ಮತ್ತು ಸುನಾಮಿಗಳಿಗೆ ತುತ್ತಾಗುತ್ತಿದೆ.

### 35 ವರ್ಷದ ಮಹಿಳೆ ಮೇಲೆ ಅತ್ಯಾಚಾರವೆಸಗಿದ ಅರ್ಚಕ ಸೆರೆ

**ಧೆಂಕನಾಲ್:** ಮೂವತ್ತೈದು ವರ್ಷದ ಮಹಿಳಾ ಕೈದಿಯ ಮೇಲೆ ಅತ್ಯಾಚಾರ ಎಸಗಿದ ಆರೋಪದ ಮೇಲೆ ಒಡಿಶಾ ಪೊಲೀಸರು ಧೆಂಕನಾಲ್ ಜಿಲ್ಲೆಯ ಆಶ್ರಮವೊಂದರ ಮುಖ್ಯ ಅರ್ಚಕನನ್ನು ಬಂಧಿಸಿದ್ದಾರೆ. ಕಾಮಕ್ಷ್ಯ ನಗರ ಪೊಲೀಸ್ ಠಾಣೆ ವ್ಯಾಪ್ತಿಯ ಮಠಕರಗೋಳ ಆಶ್ರಮದಲ್ಲಿ ಈ ಘಟನೆ ನಡೆದಿದೆ. ಆ. 4 ರಂದು ಆಶ್ರಮದ ಆವರಣದಲ್ಲಿರುವ ಕೋಣೆಯಲ್ಲಿ ಮಲಗಿದ್ದಾಗ ಮಂಗಳೂರು ಮುಖ್ಯ ಅರ್ಚಕ ತನ್ನ ಮೇಲೆ ಅತ್ಯಾಚಾರವೆಸಗಿದ್ದಾನೆ ಎಂದು ಮಹಿಳೆ ಎಫ್‌ಐಆರ್‌ನಲ್ಲಿ ಆರೋಪಿಸಿದ್ದಾರೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಇದನ್ನು ವಿರೋಧಿಸಿದಾಗ ಆರೋಪಿ ಆಕೆಯನ್ನು ನಿಂದಿಸಿದ್ದಾನೆ ಎಂದು ದೂರಿನಲ್ಲಿ ತಿಳಿಸಲಾಗಿದೆ. ಅತ್ಯಾಚಾರದ ಆರೋಪದ ಮೇಲೆ ಅವರನ್ನು ಬಂಧಿಸಿ ಇಲ್ಲಿನ ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದ್ದು, 14 ದಿನಗಳ ಕಾಲ ಜೈಲಿಗೆ ಕಳುಹಿಸಲಾಗಿದೆ ಎಂದು ಧೆಂಕನಾಲ್ ಜಿಲ್ಲೆಯ ಹೆಚ್ಚುವರಿ ಎಸ್ಪಿ ಸೂರ್ಯಮಣಿ ಪ್ರಧಾನ್ ಹೇಳಿದ್ದಾರೆ. ಮುಖ್ಯ ಅರ್ಚಕರು ನ್ಯಾಯಾಂಗ ಬಂಧನಕ್ಕೆ ಒಳಗಾದಾಗ, ನಿರಪರಾಧಿ ಎಂದು ಮನವಿ ಮಾಡಿದರು ಮತ್ತು ಕೆಲವರು ತನ್ನನ್ನು ಬಂಧಿಸಿದ್ದಾರೆ ಎಂದು ಆರೋಪಿಸಿದರು. ಈ ಕುರಿತು ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದು ಪ್ರಧಾನ್ ಹೇಳಿದರು.

### ಹೆತ್ತ ತಾಯಿಯ ಮೇಲೆ ಅತ್ಯಾಚಾರವೆಸಗಿದ ಕಾಮುಕ ಮಗ

**ನವದೆಹಲಿ:** ತನ್ನ ತಾಯಿಯ ಮೇಲೆ ಅತ್ಯಾಚಾರ ಎಸಗಿದ ಆರೋಪದ ಮೇಲೆ ದೆಹಲಿಯಲ್ಲಿ 39 ವರ್ಷದ ವ್ಯಕ್ತಿಯೊಬ್ಬನನ್ನು ಬಂಧಿಸಿರುವ ಘಟನೆ ನಡೆದಿದೆ. ಸೌದಿ ಅರೇಬಿಯಾದ ತೀರ್ಥಯಾತ್ರೆಯಿಂದ ಹಿಂದಿರುಗಿದ ನಂತರ ತನ್ನ ತಾಯಿಯ ಮೇಲೆ ತನ್ನ ಸಹೋದರ ಹಲವು ಬಾರಿ ಲೈಂಗಿಕ ದೌರ್ಜನ್ಯ ಎಸಗಿದ್ದಾನೆ ಎಂದು ಸಂತ್ರಸ್ಥೆಯ ಮಗಳು ದೂರು ನೀಡಿದ ನಂತರ ಈ ಘಟನೆ ಬೆಳಕಿಗೆ ಬಂದಿದೆ. ಮಹಿಳೆ ಜುಲೈ 25 ರಂದು ತನ್ನ 72 ವರ್ಷದ ಪತಿ ಮತ್ತು ಮಗಳೊಂದಿಗೆ ಸೌದಿ ಅರೇಬಿಯಾಕ್ಕೆ ತೀರ್ಥಯಾತ್ರೆಗೆ ಪ್ರಯಾಣ ಬೆಳೆಸಿದ್ದಾಗಿ ದೂರಿನಲ್ಲಿ ಆರೋಪಿಸಿದ್ದಾರೆ. ಪ್ರವಾಸದ ಸಮಯದಲ್ಲಿ, ಆಕೆಯ ಮಗ ತನ್ನ ಪತಿಯ ಫೋನ್‌ಗೆ ಕರೆ ಮಾಡಿ ಕೆಟ್ಟ ಸ್ವಭಾವ ಹೊಂದಿರುವ ವ್ಯಕ್ತಿ ಎಂದು ಆರೋಪಿಸಿ, ತನ್ನ ತಂದೆ ತಕ್ಷಣ ದೆಹಲಿಗೆ ಹಿಂತಿರುಗಿ ತನಗೆ ವಿಚ್ಛೇದನ ನೀಡಬೇಕೆಂದು ಒತ್ತಾಯಿಸಿದ್ದಾನೆ. ಎಂಡಿ ಫಿರೋಜ್ ಅಲಿಯಾಸ್ ಸುಹೇಲ್ ಎಂದು ಗುರುತಿಸಲ್ಪಟ್ಟ ಆ ವ್ಯಕ್ತಿ ತನ್ನ ತಾಯಿಯ ಮೇಲೆ ಹಲ್ಲೆ ನಡೆಸಿ, ಆ.11 ರಂದು ಆಕೆ ಹಿಂತಿರುಗಿದಾಗ ಹಲ್ಲೆಗೆ ಯತ್ನಿಸಿದ್ದಾನೆ ಎಂದು ಆರೋಪಿಸಲಾಗಿದೆ. ಈ ಘಟನೆಯಿಂದ ಮಹಿಳೆ ಭಯಭೀತಳಾಗಿದ್ದಳು, ಮತ್ತು ಆಕೆ ಸ್ವಲ್ಪ ಸಮಯದವರೆಗೆ ತನ್ನ ಹಿರಿಯ ಮಗಳ ಅತ್ತೆಯ ಮನೆಗೆ ಹೋಗಿದ್ದಳು. ಆದರೆ ಆಕೆ ಹಿಂತಿರುಗಿದಾಗ, ಆರೋಪಿ ಆಕೆಯೊಂದಿಗೆ ಖಾಸಗಿಯಾಗಿ ಮಾತನಾಡಬೇಕೆಂದು ಹೇಳಿದ್ದನು.

ನಂತರ ಅವನು ಅವಳನ್ನು ಒಂದು ಕೋಣೆಯಲ್ಲಿ ಕೂಡಿಹಾಕಿ, ಚಾಕು ಮತ್ತು ಕತ್ತರಿ ತೋರಿಸಿ ಬೆದರಿಸಿ, ಅತ್ಯಾಚಾರ ಮಾಡಿದನು ಎಂದು ಅಧಿಕಾರಿ ಹೇಳಿದ್ದಾರೆ. ಮೊದಲಿಗೆ, ಮಹಿಳೆ ನಾಚಿಕೆಯಿಂದ ಯಾರಿಗೂ ಏನನ್ನೂ ಹೇಳಲಿಲ್ಲ. ತನ್ನ ಮಗಳೊಂದಿಗೆ ಮಲಗಲು ಪ್ರಾರಂಭಿಸಿದಳು. ಆದರೆ, ಆರೋಪಿ ಆ.14 ರಂದು ಮತ್ತೆ ಅದೇ ಕೃತ್ಯವನ್ನು ಪುನರಾವರ್ತಿಸಿದ್ದಾನೆ ಎಂದು ಆರೋಪಿಸಲಾಗಿದೆ. ಅವನು ನನ್ನ ಬುರ್ಖಾ ತೆಗೆಯುವಂತೆ ಒತ್ತಾಯಿಸಿ, ಒಂದು ಕೋಣೆಯಲ್ಲಿ ಕೂಡಿಹಾಕಿ ಥಳಿಸಿದನು. ನನ್ನ ಪತಿಗೆ ನನ್ನನ್ನು ಹಾಳು ಮಾಡಿದ್ದಾನೆಂದು ಆರೋಪಿಸಿದ್ದಾರೆ. ದೆಹಲಿ ಪೊಲೀಸರು ಬಿಎನ್‌ಎಸ್‌ನ ಸಂಬಂಧಿತ ವಿಭಾಗದ ಅಡಿಯಲ್ಲಿ ಅಧಿಕೃತ ದೂರು ದಾಖಲಿಸಿದ್ದಾರೆ ಮತ್ತು ತನಿಖೆ ಕೈಗೊಳ್ಳಲಾಗಿದೆ ಎಂದು ಅಧಿಕಾರಿ ತಿಳಿಸಿದ್ದಾರೆ.

### ಖರ್ಗೆ, ಲಾಲುಗೆ ಕುಡಿಯಲು ನೀರು ಕೊಟ್ಟ ರಾಹುಲ್: ಸಜ್ಜನಿಕೆಯ ವರ್ತನೆ

**ಸಸಾರಾಮ್:** ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಭಾನುವಾರ ಬಿಹಾರದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಆರ್‌ಜೆಡಿ ಮುಖ್ಯಸ್ಥ ಲಾಲು ಪ್ರಸಾದ್ ಅವರಿಗೆ ಕುಡಿಯಲು ನೀರುಕೊಡುವ ಮೂಲಕ ಗಮನ ಸೆಳೆದಿದ್ದಾರೆ. ಬಿಹಾರದಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ, ಮತ ಕಳ್ಳತನ ವಿರೋಧಿಸಿ ಲೋಕಸಭೆ ವಿರೋಧ ಪಕ್ಷದ ನಾಯಕ, ಸಂಸದ ರಾಹುಲ್ ಗಾಂಧಿ ಅವರು ಭಾನುವಾರ ಮತದಾರನ ಅಧಿಕಾರ ಯಾತ್ರೆಯನ್ನು ಆರಂಭಿಸಿದ್ದಾರೆ. ವೇದಿಕೆಯಲ್ಲಿದ್ದ ಖರ್ಗೆ, ಲಾಲು ಪ್ರಸಾದ್ ಅವರಿಗೆ ಸ್ವತಃ ರಾಹುಲ್ ಗಾಂಧಿ ಅವರು ಕುಡಿಯಲು ನೀರು ಕೊಟ್ಟಿದ್ದರು.



## ಮತ್ತೆ ಒಂದಾಗೋಕೆ ಬಯಸಿದ ಸಪ್ನ ಅಜಯ್‌ರಾವ್

ಸ್ಯಾಂಡಲ್‌ವುಡ್‌ನ ನಟ ಅಜಯ್ ರಾವ್ ಅವರ ಪತ್ನಿ ಸಪ್ನ ವಿಚ್ಛೇದನ ಬಯಸಿ ಅರ್ಜಿ ಸಲ್ಲಿಸಿದ್ದರು. ಇದೀಗ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್‌ವೊಂದನ್ನು ಹಂಚಿಕೊಂಡಿದ್ದು, ಮತ್ತೆ ಹೊಂದಾಣಿಕೆ ಜೀವನ ನಡೆಸಲು ನಿರ್ಧರಿಸಿದ್ದಾಗಿ ತಿಳಿಸಿದ್ದಾರೆ.

**ಪೋಸ್ಟ್‌ನಲ್ಲಿ ಏನಿದೆ?:** ತಾಯಿಯಾಗಿ ನನ್ನ ಮೊದಲ ಜವಾಬ್ದಾರಿ ನನ್ನ ಮಗಳ ಸುರಕ್ಷತೆ, ಗೌರವ ಮತ್ತು ಅವಳ ಭವಿಷ್ಯಕ್ಕಾಗಿ ನಾನು ಪ್ರತಿದಿನ ಧೈರ್ಯವನ್ನು ಕೂಡಿಸಿ, ನನಗೆ ತೀವ್ರವಾಗಿ ಪರೀಕ್ಷಿಸುವ ಸವಾಲುಗಳನ್ನು ಎದುರಿಸುತ್ತಿದ್ದೇನೆ. ಪ್ರಿಯ ಸ್ನೇಹಿತರೇ ಮತ್ತು ಸಹೋದರರೇ. ಈ ಹಂತದಲ್ಲಿ ನಾನು ಮತ್ತು ನನ್ನ ಮಗಳು ನಮ್ಮ ಬದುಕನ್ನು ಪುನರ್‌ನಿರ್ಮಿಸಿಕೊಳ್ಳಲು ಮತ್ತು ನಮ್ಮ ದಾಂಪತ್ಯ ಜೀವನವನ್ನು ಪುನಃ ನಿರ್ಮಿಸಿಕೊಳ್ಳಲು ನಿಮ್ಮ ಹಾರೈಕೆಗಳು ಮತ್ತು ಪ್ರಾರ್ಥನೆಗಳನ್ನು ನಿಮ್ಮಲಿ ಕೇಳಿಕೊಳ್ಳುತ್ತಿದೇನೆ ಮತ್ತು ನಾನು ಅತ್ಯಂತ ಗೌರವದಿಂದ ತಿಳಿಸಲು ಬಯಸುವುದೇನೆಂದರೆ, ಈ ವಿಷಯವು ನಮ್ಮ ವೈಯಕ್ತಿಕ, ಆಳವಾದ ಭಾವನಾತ್ಮಕ ಮತ್ತು ದಾಂಪತ್ಯ ಜೀವನಕ್ಕೆ ಮಾತ್ರ ಸಂಬಂಧಿಸಿದ್ದು ಹೊರತು ಬೇರೆ ಯಾವುದೇ ರೀತಿಯಲ್ಲಿ ಸಂಬಂಧಿಸಿಲ್ಲ ಎಂದು ತಿಳಿಸಲು ಬಯಸುತ್ತೇನೆ ಎಂದು ಬರೆದುಕೊಂಡಿದ್ದಾರೆ.

2014ರಲ್ಲಿ ಡಿಸೆಂಬರ್ 18ರಲ್ಲಿ ಪ್ರೀತಿಸಿ ಮದ್ವೆಯಾಗಿದ್ದ ಈ ಜೋಡಿ ಇತ್ತೀಚಿಗೆ ಹೊಸ ಮನೆಯ ಗೃಹ ಪ್ರವೇಶ ಮಾಡಿತ್ತು. ಹೊಸಪೇಟೆಯಲ್ಲಿ ಸರಳವಾಗಿ ದಾಂಪತ್ಯ ಜೀವನಕ್ಕೆ ಕಾಲಿಟ್ಟಿತ್ತು. ಆದರೆ ಅಜಯ್ ರಾವ್ ಪತ್ನಿ ಸಪ್ನ ವಿಚ್ಛೇದನ ಬಯಸಿ ಅರ್ಜಿ ಸಲ್ಲಿಸಿದ್ದರು.



## ಕೂಲಿ ಸಿನಿಮಾ ಮೂಲಕ ರಚಿತಾಗೆ ಈಡೇರಿತು ಹಲವು ವರ್ಷಗಳ ಕನಸು

ರಚಿತಾ ರಾಮ್ ಅವರು 'ಕೂಲಿ' ಚಿತ್ರದಲ್ಲಿ ವಿಲನ್ ಪಾತ್ರ ನಿರ್ವಹಿಸಿ ಅಭಿಮಾನಿಗಳನ್ನು ಆಶ್ಚರ್ಯಚಕಿತಗೊಳಿಸಿದ್ದಾರೆ. ಇದು ಅವರ ಹಲವು ವರ್ಷಗಳ ಕನಸಾಗಿತ್ತು. ಈ ಚಿತ್ರದ ಭಾರೀ ಯಶಸ್ಸಿನೊಂದಿಗೆ, ರಚಿತಾ ಅವರ ನಟನಾ ಪ್ರತಿಭೆಯನ್ನು ಮತ್ತೊಮ್ಮೆ ಸಾಬೀತುಪಡಿಸಿದ್ದಾರೆ. 'ಕೂಲಿ' ಚಿತ್ರದ ಯಶಸ್ಸಿನಿಂದ ಅವರ ವೃತ್ತಿಜೀವನಕ್ಕೆ ಹೊಸ ಆಯಾಮ ಸೇರ್ಪಡೆಯಾಗಿದೆ. ನಟಿ ರಚಿತಾ ರಾಮ್ ಅವರು ನಾಯಕಿಯಾಗಿ ಕನ್ನಡ ಚಿತ್ರರಂಗದಲ್ಲಿ ಹೆಸರು ಮಾಡಿದ್ದು ಗೊತ್ತೇ ಇದೆ. ಅವರು ನಾಯಕಿಯಾಗಿ ಸಾಕಷ್ಟು ಇಷ್ಟ ಆಗುತ್ತಾರೆ. ಕ್ಯೂಟ್ ನಗು, ಡಿಂಪಲ್ ಕೆನ್ನೆ ಅವರ ಹೈಲೈಟ್. ಆದರೆ, ಅವರನ್ನು ವಿಲನ್ ಆಗಿ ನೋಡೋದು ಎಂದರೆ ಹೇಗೆ? ಈ ರೀತಿಯ ಪ್ರಶ್ನೆ ಅನೇಕರಿಗೆ ಮೂಡಬಹುದು. ಅದು 'ಕೂಲಿ' ಸಿನಿಮಾದಲ್ಲಿ ನಿಜವಾಗಿದೆ ಎಂದೇ ಹೇಳಬಹುದು. ಈ ರೀತಿಯ ಪಾತ್ರ ಮಾಡಬೇಕು ಎಂಬುದು ಅವರ ಬಹುವರ್ಷದ ಕನಸಾಗಿತ್ತು. ರಚಿತಾ ರಾಮ್ ಅವರು ಕನ್ನಡ ಚಿತ್ರರಂಗದಲ್ಲಿ ಸಾಕಷ್ಟು ಹೆಸರು ಮಾಡಿದ್ದಾರೆ. ಇದರ ಜೊತೆಗೆ ಪರಭಾಷೆಯಲ್ಲೂ ಅವರಿಗೆ ಬೇಡಿಕೆ ಇದೆ. ಅವರು ಕನ್ನಡದಲ್ಲಿ ದರ್ಶನ್ ಮೊದಲಾದ ಸ್ಟಾರ್ ಹಿರೋಗಳ ಜೊತೆ ಸಿನಿಮಾ ಮಾಡಿದ್ದಾರೆ. ಡಿಂಪಲ್ ಕ್ವೀನ್ ಎಂದೇ ಫೇಮಸ್ ಆದವರು ರಚಿತಾ. ಅವರಿಗೆ 'ಕೂಲಿ' ಸಿನಿಮಾ ಆಫರ್ ಸಿಕ್ಕಾಗ ಖುಷಿಯಿಂದ ನಟಿಸಿ ಒಪ್ಪಿದರು. ಮತ್ತು ಅದನ್ನು ಯಶಸ್ವಿಯಾಗಿ ಮಾಡಿದರು. ಅನೇಕರು ರಚಿತಾ ಪಾತ್ರವನ್ನು ಹೊಗಳಿದ್ದಾರೆ. ಅಷ್ಟು ಒಳ್ಳೆಯ ರೀತಿಯಲ್ಲಿ ಅವರ ಪಾತ್ರ ಮೂಡಿ ಬಂದಿದೆ. ಉಪೇಂದ್ರ ಪಾತ್ರ ಕೂಡ ಹಿಡಿಸಿದೆ. ರಚಿತಾ ಅವರು ಈ ಮೊದಲು ವಿಷಯ ಒಂದನ್ನು ಹೇಳಿದ್ದರು. ಆ ವಿಡಿಯೋ ಈಗ ವೈರಲ್ ಆಗುತ್ತಿದೆ. 'ನನ್ನ ಪಾತ್ರ ನೆಗೆಟಿವ್ ಆಗಿ ಇರಬೇಕು. ಆ ಪಾತ್ರ ಯಾವ ರೀತಿಯಲ್ಲಿ ಇರಬೇಕು ಎಂದರೆ ನೋಡಿದ ಜನರು ತುಪುಕ್ ತುಪುಕ್ ಅಂತಾ ಉಗಿಯಬೇಕು' ಎಂದು ರಚಿತಾ ರಾಮ್ ಅವರು ಆಸೆ ಹೊರಹಾಕಿದ್ದರು. ಆ ಆಸೆಯನ್ನು ಲೋಕೇಶ್ ಕನಗರಾಜ್ ಅವರು ಈಡೇರಿಸಿದ್ದಾರೆ ಎಂದೇ ಹೇಳಬಹುದು. ಕೂಲಿ' ಸಿನಿಮಾ ಎರಡೇ ದಿನಕ್ಕೆ 100 ಕೋಟಿ ರೂ.ಗೂ ಹೆಚ್ಚಿನ ಕಲೆಕ್ಷನ್ ಮಾಡಿದೆ.




## 'ಏಳುಮಲೆ' ಸಿನಿಮಾ ರಿಲೀಸ್ ಡೇಟ್ ಫಿಕ್ಸ್

ತರುಣ್ ಸುಧೀರ್ ನಿರ್ಮಾಣದ 'ಏಳುಮಲೆ' ಸಿನಿಮಾ ತನ್ನ ಕಂಟೆಂಟ್ ಮೂಲಕ ಸುದ್ದಿ ಮಾಡುತ್ತಿದೆ. ಹಾಡುಗಳು ಹಾಗೂ ಟೈಟಲ್ ಟೀಸರ್ ಮೂಲಕ ಪ್ರೇಕ್ಷಕ ವಲಯದಲ್ಲಿ ನಿರೀಕ್ಷೆ ಹೆಚ್ಚಿಸಿದ್ದು, ಇದೀಗ ಈ ಚಿತ್ರದ ಬಿಡುಗಡೆ ದಿನಾಂಕ ನಿಗದಿಯಾಗಿದೆ. ಪುನೀತ್ ರಂಗಸ್ವಾಮಿ ಆಕ್ಷನ್ ಕಟ್ ಹೇಳಿರುವ ಏಳುಮಲೆ ಸಿನಿಮಾ ಸೆಪ್ಟೆಂಬರ್ 5ರಂದು ತೆರೆಗೆ ಬರ್ತಿದೆ. ಕನ್ನಡ, ತಮಿಳು ಹಾಗೂ ತೆಲುಗು ಭಾಷೆಯಲ್ಲಿ ಚಿತ್ರ ಬಿಡುಗಡೆಯಾಗಲಿದೆ.

ಕರ್ನಾಟಕ-ತಮಿಳುನಾಡು ನಡುವಿನ ಗಡಿಭಾಗದ ಪ್ರೇಮಕಥೆಯಾಗಿರುವ 'ಏಳುಮಲೆ' ಸಿನಿಮಾದಲ್ಲಿ ನಟಿ ರಕ್ಷಿತಾ ಸೋದರ ರಾಣಾ ಕನ್ನಡದ ಹುಡ್ಗ ಹರೀಶ್ ಆಗಿ ನಟಿಸುತ್ತಿದ್ದಾರೆ. ರಿಯಾಲಿಟಿ ಶೋ ಮೂಲಕ ಮನೆ ಮಾತಾಗಿರುವ ಮೈಸೂರಿನ ಹುಡುಗಿ ಪ್ರಿಯಾ ಆಚಾರ್ ತಮಿಳು ಹುಡುಗಿಯ ಪಾತ್ರದಲ್ಲಿ ನಟಿಸುತ್ತಿದ್ದಾರೆ. ಈ ಸಿನಿಮಾದಲ್ಲಿ ರಾಣಾ, ಪ್ರಿಯಾಂಕಾ ಆಚಾರ್ ಜೊತೆಗೆ ಜಗಪತಿ ಬಾಬು, ನಾಗಾಭರಣ, ಕಿಶೋರ್ ಕುಮಾರ್, ಸರ್ದಾರ್ ಸತ್ಯ, ಜಗಪ್ಪ ತಾರಾಬಳಗದಲ್ಲಿದ್ದಾರೆ.

ಚೌಕ ಮತ್ತು ಕಾಟೇರ ಚಿತ್ರಗಳ ನಿರ್ದೇಶಕ ತರುಣ್ ಕಿಶೋರ್ ಸುಧೀರ್ ಅವರು ಈ ಸಿನಿಮಾ ನಿರ್ಮಾಣ ಮಾಡುತ್ತಿದ್ದಾರೆ. ಅಟ್ಲಾಂಟಾ ನಾಗೇಂದ್ರ ಅವರು ಚಿತ್ರಕ್ಕೆ ಸಹ ನಿರ್ಮಾಪಕರಾಗಿದ್ದಾರೆ. ಈ ಚಿತ್ರವು ನೈಜ ಘಟನೆಯನ್ನು ಆಧರಿಸಿದೆ. ಭಾವನಾತ್ಮಕವಾದ ಕಥೆಯನ್ನು ಒಳಗೊಂಡಿರಲಿದೆ. ಚಾಮರಾಜನಗರ, ಸೇಲಂ, ಈರೋಡ್ ಸೇರಿದಂತೆ ಕರ್ನಾಟಕ-ತಮಿಳುನಾಡು ಗಡಿ ಭಾಗದ ಸ್ಥಳಗಳಲ್ಲಿ ಚಿತ್ರೀಕರಣ ನಡೆಸಲಾಗಿದೆ.



## ದರ್ಶನ್ ಬಗ್ಗೆ ನನಗೆ ಹೆಮ್ಮೆ ಇದೆ

ನಾನು ದರ್ಶನ್ ಅವರೊಟ್ಟಿಗೆ ಕೆಲಸ ಮಾಡಿದ್ದೇನೆ. ಲೈಟ್ ಬಾಯ್ ಆಗಿ ಇಂಡಸ್ಟ್ರೀಗೆ ಬಂದವರು, ಒಳ್ಳೆಯ ಹಿಟ್ ಸಿನಿಮಾಗಳನ್ನು ಕೊಟ್ಟಿದ್ದಾರೆ. ಅವರ ಬೆಳವಣಿಗೆ ನೋಡಿ ನನಗೆ ಹೆಮ್ಮೆ ಆಯ್ತು. ಯಾಕಂದ್ರೆ ಏನೂ ಇಲ್ಲದೆ ಬಂದು, ಇಂಡಸ್ಟ್ರೀಯಲ್ಲಿ ಒಳ್ಳೆಯ ಹೆಸರು ಮಾಡಿ, ಈ ಮಟ್ಟಕ್ಕೆ ಬೆಳೆದಿದ್ದಾರೆ ಅಂದ್ರೆ ಖುಷಿಯಾಗುತ್ತದೆ. ಆದರೆ ಅವರ ಜೀವನ ಹಾಳು ಮಾಡಿಕೊಂಡರು ಎಂದು ನಟ ದರ್ಶನ್ ಬಗ್ಗೆ ರಮ್ಯಾ ಪ್ರತಿಕ್ರಿಯಿಸಿದ್ದಾರೆ. ನಟಿ ರಮ್ಯಾ ಸೋಶಿಯಲ್ ಮೀಡಿಯಾದಲ್ಲಿ ಪೋಸ್ಟ್ ಮಾಡಿಕೊಂಡಿದ್ದರು. ಅದು ದೊಡ್ಡ ಸಂಚಲವನ್ನೇ ಸೃಷ್ಟಿಸಿಬಿಟ್ಟಿತ್ತು. ಈ ಪ್ರಕರಣದಲ್ಲಿ ನಟ ದರ್ಶನ್ ತೂಗುದೀಪ ಸೇರಿದಂತೆ ಇತರೆ ಆರೋಪಿಗಳು ಇದೀಗ ಮತ್ತೆ ಜೈಲು ಸೇರಿದದ್ದಾರೆ.

**ಸುಪ್ರೀಂ ಕೋರ್ಟ್ ಜಡ್ಜ್‌ಮೆಂಟ್ ಬಗ್ಗೆ ಖುಷಿ ಇದೆ:** ಆದರೆ, ಇವತ್ತು ಹೀಗೆ ಆಗದೇ ಇದ್ದಿದ್ದರೆ, ಇನ್ನೂ ಚೆನ್ನಾಗಿರಬಹುದಾಗಿತ್ತು. ಆದರೆ ಅವರ ಜೀವನ ಹಾಳು ಮಾಡಿಕೊಂಡರು ಅಂತ ನನಗೆ ಬೇಜಾರಾಯ್ತು ಅಷ್ಟೇ. ಆದರೆ, ನಾವು ಒಂದು ಸಮಾಜದಲ್ಲಿದ್ದೇವೆ. ಕಾನೂನು ಅಂದರೆ ನಾವು ರೆಸ್ಪೆಕ್ಟ್ ಕೊಡಬೇಕು, ಮತ್ತು ಕಾನೂನು ಪ್ರಕಾರ ನಡೆದುಕೊಂಡರೆ, ಒಂದು ಒಳ್ಳೆಯ ದಾರಿಯಲ್ಲಿ ನಾವೆಲ್ಲರೂ ಹೋಗಬಹುದು. ಹಾಗಾಗಿ ಜಡ್ಜ್‌ಮೆಂಟ್‌ನಿಂದ ನಂಗೆ ಖುಷಿ ಇದೆ ಈ ಜಡ್ಜ್‌ಮೆಂಟ್ ನೀಡಿದಕ್ಕಾಗಿ ಸುಪ್ರೀಂ ಕೋರ್ಟ್‌ಗೆ ಧನ್ಯವಾದ ಹೇಳುತ್ತೇನೆ'' ಎಂದಿದ್ದಾರೆ ನಟಿ ರಮ್ಯಾ.

**ಯಾರೆಲ್ಲಾ ಅರೆಸ್ಟ್ ಆಗಿದ್ದಾರೆ?:** ನಾನು ಪೊಲೀಸ್ ಕಮಿಷನರ್ ಹತ್ತಿರ ಮಾತನಾಡಿದೆ, ಇನ್ನೂ ಕೂಡ ಅರೆಸ್ಟ್‌ಗಳು ಆಗ್ತಿವೆ. ಎಷ್ಟೋ ಜನ ಫೋನ್ ಸ್ವಿಚ್ ಆಫ್ ಮಾಡಿ, ಮನೆ ಬಿಟ್ಟು ಹೋಗಿಬಿಟ್ಟಿದ್ದಾರೆ. ಇನ್ನೂ ಒಂದಷ್ಟು ಜನ ಅರೆಸ್ಟ್ ಆಗುತ್ತಾರೆ. ಇಲ್ಲಿಯವರೆಗೂ 7 ಜನ ಅರೆಸ್ಟ್ ಆಗಿದ್ದಾರೆ. ಇನ್ಮುಂದೆ ಉಳಿದವರು ಕೂಡ ಅರೆಸ್ಟ್ ಆಗುತ್ತಾರೆ ಅಂತ ಹೇಳಿದ್ದಾರೆ ಎಂದಿದ್ದಾರೆ ರಮ್ಯಾ.



## 100 ಕೋಟಿ ರೂ. ಗಳಿಸಿದ 'ಸು ಫ್ರಮ್ ಸೋ'

ಜನಮೆಚ್ಚಿದ 'ಸು ಫ್ರಮ್ ಸೋ' ಸಿನಿಮಾ ಪ್ರತಿ ವೀಕೆಂಡ್‌ನಲ್ಲೂ ಅತ್ಯುತ್ತಮವಾಗಿ ಕಲೆಕ್ಷನ್ ಮಾಡುತ್ತಿದೆ. ನಿರ್ಮಾಪಕನಾಗಿ ರಾಜ್ ಬಿ. ಶೆಟ್ಟಿ, ನಿರ್ದೇಶಕನಾಗಿ ಜೆ.ಪಿ. ತುಮಿನಾಡು ಅವರಿಗೆ ದೊಡ್ಡ ಗೆಲುವು ತಂದುಕೊಟ್ಟಿದೆ. ವಾರ್ 2, ಕೂಲಿ 2 ಸಿನಿಮಾಗಳ ಪೈಪೋಟಿ ಇದ್ದರೂ 'ಸು ಫ್ರಮ್ ಸೋ' ಸಿನಿಮಾದ ಕಲೆಕ್ಷನ್ 100 ಕೋಟಿ ರೂಪಾಯಿ ಗಡಿ ದಾಟಿದೆ. ಹಾರರ್ ಕಾಮಿಡಿ ಕಥಾಹಂದರದ 'ಸು ಫ್ರಮ್ ಸೋ' ಸಿನಿಮಾ ಈ ಪರಿ ಕಲೆಕ್ಷನ್ ಮಾಡುತ್ತದೆ ಎಂಬುದನ್ನು ಬಿಡುಗಡೆಗೂ ಮುನ್ನ ಯಾರೂ ಊಹಿಸಿರಲಿಲ್ಲ. ಎಷ್ಟೋ ಜನರಿಗೆ ಈ ರೀತಿಯ ಒಂದು ಸಿನಿಮಾ ಬರುತ್ತಿದೆ ಎಂಬುದೇ ತಿಳಿದಿರಲಿಲ್ಲ. ಚಿತ್ರದ ಹೆಸರು ಹೇಳಲು ಕೆಲವರಿಗೆ ನಾಲಿಗೆ ಹೊರಳುತ್ತಿರಲಿಲ್ಲ. ಆದರೆ ಬಿಡುಗಡೆ ಆಗಿ ಉತ್ತಮ ವಿಮರ್ಶೆ ಪಡೆದುಕೊಳ್ಳಲು ಆರಂಭಿಸಿದ ಬಳಿಕ ಎಲ್ಲರ ಬಾಯಲ್ಲೂ ಇದೇ ಸಿನಿಮಾದ ಚರ್ಚೆ ಶುರು ಆಯಿತು. ಅದರ ಪರಿಣಾಮವಾಗಿ 'ಸು ಫ್ರಮ್ ಸೋ' ಸಿನಿಮಾ ಅದ್ಭುತ ಕಲೆಕ್ಷನ್ ಮಾಡಿದೆ. sacnilk ವರದಿ ಪ್ರಕಾರ, ವಿಶ್ವಾದ್ಯಂತ ಈ ಚಿತ್ರಕ್ಕೆ ಬರೋಬ್ಬರಿ 100 ಕೋಟಿ ರೂಪಾಯಿ ಕಲೆಕ್ಷನ್ ಆಗಿದೆ. ರಾಜ್ ಬಿ. ಶೆಟ್ಟಿ ಮತ್ತು ಅವರ ತಂಡಕ್ಕೆ ಈ ಯಶಸ್ಸಿನಿಂದ ಸಖತ್ ಖುಷಿ ಆಗಿದೆ. ಜೆ.ಪಿ. ತುಮಿನಾಡು ಅವರು 'ಸು ಫ್ರಮ್ ಸೋ' ಸಿನಿಮಾಗೆ ನಿರ್ದೇಶನ ಮಾಡಿದ್ದಾರೆ. ನಿರ್ದೇಶಕನಾಗಿ ಇದು ಅವರ ಮೊದಲ ಸಿನಿಮಾ. ಚೊಚ್ಚಲ ಚಿತ್ರದಲ್ಲೇ 100 ಕೋಟಿ ರೂಪಾಯಿ ಯಶಸ್ಸು ಕಾಣುವುದು ಎಂದರೆ ತಮಾಷೆಯೇ ಅಲ್ಲ. ಅಂಥ ಸಾಧನೆಯನ್ನು ಜೆ.ಪಿ. ತುಮಿನಾಡು ಅವರು ಮಾಡಿದ್ದಾರೆ. ಅವರೇ ಈ ಸಿನಿಮಾದಲ್ಲಿ ಪ್ರಮುಖ ಪಾತ್ರ ಕೂಡ ಮಾಡಿರುವುದರಿಂದ ಅವರಿಗೆ ಇದು ಡಬಲ್ ಗೆಲುವು. ಈ ಸಿನಿಮಾದಲ್ಲಿ ಜೆ.ಪಿ. ತುಮಿನಾಡು, ರಾಜ್ ಬಿ. ಶೆಟ್ಟಿ, ದೀಪಕ್ ರೈ ಪಣಾಜೆ, ಪ್ರಕಾಶ್ ತುಮಿನಾಡು, ಸಂಧ್ಯಾ ಅರಕೆರೆ, ಶನೀಲ್ ಗೌತಮ್, ಮೈಮ್ ರಾಮದಾಸ್ ಸೇರಿದಂತೆ ಅನೇಕರು ನಟಿಸಿದ್ದಾರೆ.



## ರಶೀದ್ ಖಾನ್‌ನ ಹಣ್ಣುಗಾಯಿ ನೀರುಗಾಯಿ ಮಾಡಿದ ಲಿವಿಂಗ್‌ಸ್ಟೋನ್

ಟಿ20 ಕ್ರಿಕೆಟ್ ಇತಿಹಾಸದಲ್ಲೇ ಅತ್ಯಧಿಕ ವಿಕೆಟ್ ಪಡೆದ ಬೌಲರ್ ಅಫ್ಘಾನಿಸ್ತಾನದ ಸ್ಪಿನ್ ಮಾಂತ್ರಿಕ ರಶೀದ್ ಖಾನ್ ಅವರ ಮುಂದೆ ಸೆಟೆದು ನಿಂತ ಕೆಲವೇ ಕೆಲವು ಬ್ಯಾಟರ್‌ಗಳಲ್ಲಿ ಇಂಗ್ಲೆಂಡ್‌ನ ಲಿಯಾಮ್ ಲಿವಿಂಗ್‌ಸ್ಟೋನ್ ಕೂಡ ಒಬ್ಬರು. ಅದು ಐಪಿಎಲ್ ಆಗಿರಲಿ, ಇಲ್ಲಾ ದಿ ಹಂಡ್ರೆಡ್ ಲೀಗ್ ಆಗಿರಲಿ. ರಶೀದ್ ಖಾನ್ ಹಾಗೂ ಲಿಯಾಮ್ ಲಿವಿಂಗ್‌ಸ್ಟೋನ್ ನಡುವೆ ಜಿದ್ದಾಜಿದ್ದಿನ ಪೈಪೋಟಿಯಂತು ಕಂಡು ಬರುತ್ತಿರುತ್ತದೆ. ಇದೀಗ ಈ ಪೈಪೋಟಿ ದಿ ಹಂಡ್ರೆಡ್ ಲೀಗ್ ಸೀಸನ್-4 ನಲ್ಲೂ ಮುಂದುವರೆದಿದೆ. ಅದು ಕೂಡ ಒಂದೇ ಓವರ್‌ನಲ್ಲಿ ಬರೋಬ್ಬರಿ 26 ರನ್ ಚಚ್ಚುವ ಮೂಲಕ. ದಿ ಹಂಡ್ರೆಡ್ ಲೀಗ್‌ನ 10ನೇ ಪಂದ್ಯದಲ್ಲಿ ರಶೀದ್ ಖಾನ್ ಎಸೆದ 8 ಎಸೆತಗಳಲ್ಲಿ ಲಿವಿಂಗ್‌ಸ್ಟೋನ್ ಒಟ್ಟು 32 ರನ್ ಕಲೆಹಾಕಿದ್ದಾರೆ.

ಈ 32 ರನ್‌ಗಳೊಂದಿಗೆ ರಶೀದ್ ಖಾನ್ ವಿರುದ್ಧ 200 ರನ್ ಕಲೆಹಾಕಿದ ವಿಶ್ವದ ಏಕೈಕ ಬ್ಯಾಟರ್ ಎಂಬ ದಾಖಲೆಯನ್ನು ಲಿಯಾಮ್ ಲಿವಿಂಗ್‌ಸ್ಟೋನ್ ತಮ್ಮದಾಗಿಸಿಕೊಂಡಿದ್ದಾರೆ. ಇದಕ್ಕೂ ಮುನ್ನ ರಶೀದ್ ಖಾನ್ ವಿರುದ್ಧ ಅತ್ಯಧಿಕ ರನ್ ಕಲೆಹಾಕಿದ ದಾಖಲೆ ಕೀರನ್ ಪೊಲಾರ್ಡ್ ಹೆಸರಿನಲ್ಲಿತ್ತು. ಪೊಲಾರ್ಡ್ 25 ಇನಿಂಗ್ಸ್‌ಗಳಿಂದ 125 ರನ್ ಕಲೆಹಾಕಿದ್ದರು.

ಆದರೆ ಐಪಿಎಲ್ ಹಾಗೂ ದಿ ಹಂಡ್ರೆಡ್ ಲೀಗ್‌ಗಳಲ್ಲಿ ರಶೀದ್ ಖಾನ್ ಅವರನ್ನು ಹಣ್ಣುಗಾಯಿ ನೀರುಗಾಯಿ ಮಾಡಿರುವ ಲಿಯಾಮ್ ಲಿವಿಂಗ್‌ಸ್ಟೋನ್ ಕೇವಲ 16 ಇನಿಂಗ್ಸ್‌ಗಳ ಮೂಲಕ 200 ರನ್ ಕಲೆಹಾಕಿದ್ದಾರೆ. ಈ ಮೂಲಕ ಟಿ20 ಕ್ರಿಕೆಟ್‌ನಲ್ಲಿ ಅತ್ಯಧಿಕ ವಿಕೆಟ್ ಪಡೆದ ಬೌಲರ್ ವಿರುದ್ಧ ಅತೀ ಹೆಚ್ಚು ರನ್ ಗಳಿಸಿದ ಬ್ಯಾಟರ್ ಎನಿಸಿಕೊಂಡಿದ್ದಾರೆ. ಅಷ್ಟೇ ಅಲ್ಲದೆ ರಶೀದ್ ಖಾನ್ ವಿರುದ್ಧ ಅತೀ ಹೆಚ್ಚು ಸಿಕ್ಸ್ ಸಿಡಿಸಿದ ಹೆಗ್ಗಳಿಕೆಯನ್ನು ಸಹ ಲಿಯಾಮ್ ಲಿವಿಂಗ್‌ಸ್ಟೋನ್ ತಮ್ಮದಾಗಿಸಿಕೊಂಡಿದ್ದಾರೆ. ಇದಕ್ಕೂ ಮುನ್ನ ಕ್ರಿಸ್ ಗೇಲ್ 12 ಸಿಕ್ಸ್ ಬಾರಿಸಿ ಅಗ್ರಸ್ಥಾನದಲ್ಲಿದ್ದರು. ಇದೀಗ ರಶೀದ್ ಖಾನ್ ಅವರ ವಿರುದ್ಧ 21 ಸಿಕ್ಸ್ ಸಿಡಿಸುವ ಮೂಲಕ ಲಿವಿಂಗ್‌ಸ್ಟೋನ್ ಮತ್ತೊಂದು ಹೆಜ್ಜೆ ಮುಂದೆ ಹೋಗಿದ್ದಾರೆ.



## ಏಷ್ಯಾಕಪ್‌ಗೆ ಬುಮ್ರಾಗೆ ಗ್ರೀನ್ ಸಿಗ್ನಲ್

ಏಷ್ಯಾಕಪ್ ಟಿ20 ಟೂರ್ನಿಗೆ ದಿನಗಣನೆ ಶುರುವಾಗಿದೆ. ಸೆಪ್ಟೆಂಬರ್ 9 ರಿಂದ ಆರಂಭವಾಗಲಿರುವ ಈ ಟೂರ್ನಿಯಲ್ಲಿ ಕಣಕ್ಕಿಳಿಯುವುದಾಗಿ ಟೀಮ್ ಇಂಡಿಯಾ ವೇಗಿ ಜಸ್ ಪ್ರೀತ್ ಬುಮ್ರಾ ತಿಳಿಸಿದ್ದಾರೆ. ಎಕ್ಸ್‌ಪ್ರೆಸ್ ಸ್ಪೋರ್ಟ್ಸ್ ವರದಿ ಪ್ರಕಾರ, ಏಷ್ಯಾಕಪ್ ತಂಡದ ಆಯ್ಕೆಗೆ ಲಭ್ಯವಿರುವುದಾಗಿ ಆಯ್ಕೆ ಸಮಿತಿಗೆ ಬುಮ್ರಾ ತಿಳಿಸಿದ್ದಾರೆ. ಇದರೊಂದಿಗೆ ಏಷ್ಯಾಕಪ್ ತಂಡದಲ್ಲಿ ಜಸ್ ಪ್ರೀತ್ ಬುಮ್ರಾ ಕಾಣಿಸಿಕೊಳ್ಳುವುದು ಬಹುತೇಕ ಖಚಿತವಾಗಿದೆ. ಇದಕ್ಕೂ ಮುನ್ನ ಇಂಗ್ಲೆಂಡ್ ವಿರುದ್ಧದ 5 ಪಂದ್ಯಗಳ ಟೆಸ್ಟ್ ಸರಣಿಯಲ್ಲಿ ಬುಮ್ರಾ ಕೇವಲ 3 ಪಂದ್ಯಗಳಲ್ಲಿ ಮಾತ್ರ ಕಣಕ್ಕಿಳಿದಿದ್ದರು. ಬೆನ್ನು ನೋವಿನ ಸಮಸ್ಯೆಯ ಕಾರಣ ಬುಮ್ರಾಗೆ 2 ಮ್ಯಾಚ್‌ಗಳಲ್ಲಿ ವಿಶ್ರಾಂತಿ ನೀಡಲಾಗಿತ್ತು. ಇದೀಗ ಸಂಪೂರ್ಣ ಫಿಟ್‌ನೆಸ್ ಸಾಧಿಸಿರುವ ಬುಮ್ರಾ, ಏಷ್ಯಾಕಪ್ ಟೂರ್ನಿಯಲ್ಲಿ ಕಣಕ್ಕಿಳಿಯಲು ನಿರ್ಧರಿಸಿದ್ದಾರೆ.

ಅದರಂತೆ ಏಷ್ಯಾಕಪ್‌ನಲ್ಲಿ ಭಾರತ ತಂಡದ ಆರಂಭಿಕರಾಗಿ ಯಶಸ್ವಿ ಜೈಸ್ವಾಲ್ ಹಾಗೂ ಅಭಿಷೇಕ್ ಶರ್ಮಾ ಆಯ್ಕೆಯಾಗುವುದು ಖಚಿತ. ಇನ್ನು ಮೂರನೇ ಕ್ರಮಾಂಕದ ಬ್ಯಾಟರ್ ಆಗಿ ಶುಭ್ ಮನ್ ಗಿಲ್ ತಂಡದಲ್ಲಿ ಸ್ಥಾನ ಪಡೆಯಲಿದ್ದಾರೆ. ಹಾಗೆಯೇ ನಾಯಕನಾಗಿ ಸೂರ್ಯಕುಮಾರ್ ಯಾದವ್ ಕಾಣಿಸಿಕೊಳ್ಳುವುದು ಖಚಿತ. ಇನ್ನು ವಿಕೆಟ್ ಕೀಪರ್ ಬ್ಯಾಟರ್‌ಗಳಾಗಿ ಸಂಜು ಸ್ಯಾಮ್ಸನ್ ಹಾಗೂ ರಿಷಭ್ ಪಂತ್‌ಗೆ ಅವಕಾಶ ನೀಡುವ ಸಾಧ್ಯತೆಯಿದೆ. ಆದರೆ ಇಂಗ್ಲೆಂಡ್ ವಿರುದ್ಧದ ಟೆಸ್ಟ್ ಸರಣಿ ವೇಳೆ ಗಾಯಗೊಂಡಿರುವ ಪಂತ್ ಸಂಪೂರ್ಣ ಫಿಟ್ ಆಗದಿದ್ದರೆ, ಜಿತೇಶ್ ಶರ್ಮಾಗೆ ಚಾನ್ಸ್ ಸಿಗಬಹುದು. ಹಾಗೆಯೇ ಮಧ್ಯಮ ಕ್ರಮಾಂಕದ ಬ್ಯಾಟರ್‌ಗಳಾಗಿ ತಿಲಕ್ ವರ್ಮಾ ಹಾಗೂ ಶಿವಂ ದುಬೆ ಅವರನ್ನು ಆಯ್ಕೆ ಮಾಡಬಹುದು.

ಆಲ್‌ರೌಂಡರ್‌ಗಳ ಪಟ್ಟಿಯಲ್ಲಿ ಹಾರ್ದಿಕ್ ಪಾಂಡ್ಯ, ವಾಷಿಂಗ್ಟನ್ ಸುಂದರ್ ಹಾಗೂ ಅಕ್ಷರ್ ಪಟೇಲ್ ತಂಡದಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಇವರೊಂದಿಗೆ ಸ್ಪಿನ್ನರ್ ಆಗಿ ವರುಣ್ ಚಕ್ರವರ್ತಿಗೆ ಅವಕಾಶ ನೀಡಲಿದ್ದಾರೆ. ಹಾಗೆಯೇ ವೇಗಿಗಳಾಗಿ ಜಸ್‌ಪ್ರೀತ್ ಬುಮ್ರಾ, ಅರ್ಷದೀಪ್ ಸಿಂಗ್, ಮೊಹಮ್ಮದ್ ಸಿರಾಜ್ ಕಾಣಿಸಿಕೊಳ್ಳುವ ಸಾಧ್ಯತೆ ಹೆಚ್ಚಿದೆ.

## ಡೆವಾಲ್ಡ್ ಬ್ರೆವಿಸ್ ಆರ್ಭಟಕ್ಕೆ ದಾಖಲೆಗಳೆಲ್ಲಾ ಧೂಳೀಪಟ

ಆಸ್ಟ್ರೇಲಿಯಾ ವಿರುದ್ಧದ ಟಿ20 ಸರಣಿಯಲ್ಲಿ ಸೌತ್ ಆಫ್ರಿಕಾದ ಯುವ ದಾಂಡಿಗ ಡೆವಾಲ್ಡ್ ಬ್ರೆವಿಸ್ ಭರ್ಜರಿ ಪ್ರದರ್ಶನ ನೀಡಿದ್ದಾರೆ. ದ್ವಿತೀಯ ಮ್ಯಾಚ್‌ನಲ್ಲಿ ಸ್ಫೋಟಕ ಸೆಂಚುರಿ ಸಿಡಿಸಿದ್ದ ಬ್ರೆವಿಸ್ ಕೊನೆಯ ಟಿ20 ಪಂದ್ಯದಲ್ಲಿ ಅರ್ಧಶತಕ ಬಾರಿಸಿದ್ದಾರೆ. ಈ ಶತಕ ಹಾಗೂ ಅರ್ಧಶತಕಗಳೊಂದಿಗೆ ಬ್ರೆವಿಸ್ ಹಲವು ದಾಖಲೆಗಳನ್ನು ತಮ್ಮದಾಗಿಸಿಕೊಂಡಿದ್ದಾರೆ. ಟಿ20 ಕ್ರಿಕೆಟ್‌ನಲ್ಲಿ ಸೌತ್ ಆಫ್ರಿಕಾ ತಂಡದ ಯುವ ದಾಂಡಿಗ ಡೆವಾಲ್ಡ್ ಬ್ರೆವಿಸ್ ಆರ್ಭಟ ಮುಂದುವರೆದಿದೆ. ಈ ಆರ್ಭಟದೊಂದಿಗೆ ದ್ವಿತೀಯ ಟಿ20 ಪಂದ್ಯದಲ್ಲಿ ಶತಕ ಸಿಡಿಸಿದ್ದ ಬ್ರೆವಿಸ್ ಇದೀಗ ಮೂರನೇ ಪಂದ್ಯದಲ್ಲಿ ಸ್ಫೋಟಕ ಅರ್ಧಶತಕ ಬಾರಿಸಿದ್ದಾರೆ. ಈ ಭರ್ಜರಿ ಪ್ರದರ್ಶನದೊಂದಿಗೆ ಬ್ರೆವಿಸ್ ಆಸ್ಟ್ರೇಲಿಯಾ ವಿರುದ್ಧ ಹಲವು ದಾಖಲೆಗಳನ್ನು ನಿರ್ಮಿಸಿದ್ದಾರೆ.

**ಅತ್ಯಧಿಕ ರನ್:** ಆಸ್ಟ್ರೇಲಿಯಾ ವಿರುದ್ಧ ಟಿ20 ಪಂದ್ಯದಲ್ಲಿ ಗರಿಷ್ಠ ಸ್ಕೋರ್ ಗಳಿಸಿದ ದಾಖಲೆ ಡೆವಾಲ್ಡ್ ಬ್ರೆವಿಸ್ ಪಾಲಾಗಿದೆ. ಇದಕ್ಕೂ ಮುನ್ನ ಈ ದಾಖಲೆ ರುತುರಾಜ್ ಗಾಯಕ್ವಾಡ್ (123) ಹೆಸರಿನಲ್ಲಿತ್ತು. ಆದರೆ ಆಸೀಸ್ ವಿರುದ್ಧದ ಸರಣಿಯ ದ್ವಿತೀಯ ಪಂದ್ಯದಲ್ಲಿ 125 ರನ್ ಸಿಡಿಸುವ ಮೂಲಕ ಬ್ರೆವಿಸ್ ಹೊಸ ಇತಿಹಾಸ ನಿರ್ಮಿಸಿದ್ದಾರೆ.

**ಗರಿಷ್ಠ ಸ್ಕೋರ್:** ಆಸ್ಟ್ರೇಲಿಯಾದಲ್ಲಿ ಆಸೀಸ್ ವಿರುದ್ಧ ಟಿ20 ಪಂದ್ಯದಲ್ಲಿ ಗರಿಷ್ಠ ಸ್ಕೋರ್ ಗಳಿಸಿದ ವಿದೇಶಿ ಬ್ಯಾಟರ್ ಎಂಬ ದಾಖಲೆ ಕೂಡ ಡೆವಾಲ್ಡ್ ಬ್ರೆವಿಸ್ ಹೆಸರಿಗೆ ಸೇರ್ಪಡೆಯಾಗಿದೆ. ಇದಕ್ಕೂ ಮುನ್ನ ಈ ದಾಖಲೆ ನ್ಯೂಝಿಲೆಂಡ್‌ನ ಡೆವೊನ್ ಕಾನ್ವೆ (92) ಹೆಸರಿನಲ್ಲಿತ್ತು. ಇದೀಗ 125 ರನ್‌ಗಳೊಂದಿಗೆ ಬ್ರೆವಿಸ್ ಈ ದಾಖಲೆಯನ್ನು ತಮ್ಮದಾಗಿಸಿಕೊಂಡಿದ್ದಾರೆ.

**ಕಿರಿಯ ಶತಕವೀರ:** ಆಸ್ಟ್ರೇಲಿಯಾ ವಿರುದ್ಧ ಟಿ20 ಶತಕ ಸಿಡಿಸಿದ ಅತ್ಯಂತ ಕಿರಿಯ ಬ್ಯಾಟರ್ ಎಂಬ ಹೆಗ್ಗಳಿಕೆಯನ್ನು ಡೆವಾಲ್ಡ್ ಬ್ರೆವಿಸ್ ತಮ್ಮದಾಗಿಸಿಕೊಂಡಿದ್ದಾರೆ. ಇದಕ್ಕೂ ಮುನ್ನ ಈ ರೆಕಾರ್ಡ್ 26 ವರ್ಷದ ರುತುರಾಜ್ ಗಾಯಕ್ವಾಡ್ ಹೆಸರಿನಲ್ಲಿತ್ತು ಇದೀಗ 22ನೇ ವಯಸ್ಸಿನಲ್ಲಿ ಶತಕ ಸಿಡಿಸಿ ಡೆವಾಲ್ಡ್ ಬ್ರೆವಿಸ್ ಹೊಸ ಇತಿಹಾಸ ನಿರ್ಮಿಸಿದ್ದಾರೆ. **ಅತೀ ವೇಗದ ಅರ್ಧಶತಕ:** ಆಸ್ಟ್ರೇಲಿಯಾ ವಿರುದ್ಧ ಆಸ್ಟ್ರೇಲಿಯಾದಲ್ಲಿ ಅತೀ ವೇಗದ ಅರ್ಧಶತಕ ಬಾರಿಸಿದ ದಾಖಲೆ ಕೂಡ ಡೆವಾಲ್ಡ್ ಬ್ರೆವಿಸ್ ಪಾಲಾಗಿದೆ. ಇದಕ್ಕೂ ಮುನ್ನ ಈ ದಾಖಲೆ ರವಿ ಬೋಪಾರ ಹೆಸರಿನಲ್ಲಿತ್ತು. ಬೋಪಾರ 23 ಎಸೆತಗಳಲ್ಲಿ ಅರ್ಧಶತಕ ಬಾರಿಸಿದ್ದರೆ, ಇದೀಗ ಬ್ರೆವಿಸ್ 22 ಬಾಲ್‌ಗಳಲ್ಲಿ ಹಾಫ್ ಸೆಂಚುರಿ ಸಿಡಿಸಿ ದಾಖಲೆ ನಿರ್ಮಿಸಿದ್ದಾರೆ.



## ನಿಶ್ಚಿತಾರ್ಥದ ಬೆನ್ನಲ್ಲೇ ಅರ್ಜುನ್ ತೆಂಡೂಲ್ಕರ್‌ಗೆ ಬಿಗ್ ಶಾಕ್..!

ಮಾಸ್ಟರ್ ಬ್ಲಾಸ್ಟರ್ ಸಚಿನ್ ತೆಂಡೂಲ್ಕರ್ ಅವರ ಪುತ್ರ ಅರ್ಜುನ್ ತೆಂಡೂಲ್ಕರ್ ಇತ್ತೀಚೆಗೆ ನಿಶ್ಚಿತಾರ್ಥ ಮಾಡಿಕೊಳ್ಳುವ ಮೂಲಕ ತಮ್ಮ ಜೀವನದ ಎರಡನೇ ಇನ್ನಿಂಗ್ಸ್ ಆರಂಭಿಸಿದ್ದಾರೆ. ಆದಾಗ್ಯೂ ವೃತ್ತಿಜೀವನದ ವಿಚಾರದಲ್ಲಿ ಅರ್ಜುನ್‌ಗೆ ದೊಡ್ಡ ಆಘಾತ ಎದುರಾಗಿದೆ. ಆಗಸ್ಟ್ 28 ರಿಂದ ಪ್ರಾರಂಭವಾಗುವ ದುಲೀಪ್ ಟ್ರೋಫಿಯಲ್ಲಿ ಅರ್ಜುನ್‌ಗೆ ಅವಕಾಶ ಸಿಕ್ಕಿಲ್ಲ. ಈ ಪಂದ್ಯಾವಳಿಯಲ್ಲಿ ಅನೇಕ ಸ್ಟಾರ್ ಆಟಗಾರರು ಆಡುತ್ತಿದ್ದಾರೆ, ಆದರೆ ಸಚಿನ್ ಅವರ ಮಗನನ್ನು ಈ ಬಾರಿ ನಿರ್ಲಕ್ಷಿಸಲಾಗಿದೆ. ಗೋವಾ ಪರ ದೇಶೀಯ ಕ್ರಿಕೆಟ್ ಆಡುವ ಅರ್ಜುನ್ ತೆಂಡೂಲ್ಕರ್ ದುಲೀಪ್ ಟ್ರೋಫಿಯಲ್ಲಿ ಆಡುವ ಭರವಸೆಯಲ್ಲಿದ್ದರು, ಆದರೆ ಈಶಾನ್ಯ ವಲಯ ತಂಡ ಅವರ ಭರವಸೆಯನ್ನು ಹುಸಿಗೊಳಿಸಿದೆ.

ದುಲೀಪ್ ಟ್ರೋಫಿಯಿಂದ ಅರ್ಜುನ್ ಔಟ್


ರಣಜಿ ಟ್ರೋಫಿಯ ಪ್ಲೇಟ್ ಗ್ರೂಪ್‌ನಲ್ಲಿ ನಾಲ್ಕು ಪಂದ್ಯಗಳಲ್ಲಿ 16 ವಿಕೆಟ್‌ಗಳನ್ನು ಕಬಳಿಸಿದ್ದ ಅರ್ಜುನ್ ತೆಂಡೂಲ್ಕರ್ ಅವರನ್ನು ದುಲೀಪ್ ಟ್ರೋಫಿಗಾಗಿ ಈಶಾನ್ಯ ವಲಯ ತಂಡದಲ್ಲಿ ಸೇರಿಸಲಾಗಿಲ್ಲ. ರೊಂಗ್ಸೆನ್ ಜೊನಾಥನ್ ನಾಯಕತ್ವದ ಈ ತಂಡವು ಆಗಸ್ಟ್ 28 ರಂದು ಕೇಂದ್ರ ವಲಯವನ್ನು ಎದುರಿಸಲಿದೆ. ರಣಜಿ ಟ್ರೋಫಿಯ ಪ್ಲೇಟ್ ಗ್ರೂಪ್‌ನ ನಾಲ್ಕು ಪಂದ್ಯಗಳಲ್ಲಿ ಅರ್ಜುನ್ ತೆಂಡೂಲ್ಕರ್ 16 ವಿಕೆಟ್‌ಗಳನ್ನು ಕಬಳಿಸಿದ್ದರು. ಈ ಕಾರಣದಿಂದಾಗಿ, ಗೋವಾ ಪ್ಲೇಟ್ ಡಿವಿಷನ್ ಪ್ರಶಸ್ತಿಯನ್ನು ಸಹ ಗೆದ್ದುಕೊಂಡಿತು.

ಅರ್ಜುನ್ 2022-23 ರ ಆವೃತ್ತಿಯಿಂದ ಗೋವಾ ಪರ ಆಡುತ್ತಿದ್ದಾರೆ. ಡಿಸೆಂಬರ್ 2023 ರಲ್ಲಿ ಗೋವಾ ಪರ ತಮ್ಮ ಮೊದಲ ಪ್ರಥಮ ದರ್ಜೆ ಪಂದ್ಯವನ್ನಾಡಿದ್ದ ಅರ್ಜುನ್, ಭರ್ಜರಿ ಶತಕ ಬಾರಿಸಿದ್ದರು. ಪ್ರಥಮ ದರ್ಜೆ ಕ್ರಿಕೆಟ್‌ನಲ್ಲಿ ಇದುವರೆಗೆ 37 ವಿಕೆಟ್‌ಗಳನ್ನು ಕಬಳಿಸಿರುವ ಅರ್ಜುನ್ 532 ರನ್ ಬಾರಿಸಿದ್ದಾರೆ. ನವೆಂಬರ್ 2022 ರಲ್ಲಿ ಗೋವಾ ಪರ ಲಿಸ್ಟ್ ಎ ಪಂದ್ಯಕ್ಕೆ ಪಾದಾರ್ಪಣೆ ಮಾಡಿದ ಅರ್ಜುನ್, 18 ಪಂದ್ಯಗಳಲ್ಲಿ 25 ವಿಕೆಟ್‌ಗಳನ್ನು ಪಡೆದು 102 ರನ್‌ಗಳನ್ನು ಗಳಿಸಿದ್ದಾರೆ. ಗೋವಾಕ್ಕೆ ಹೋಗುವ ಮೊದಲು, ಅವರು ಮುಂಬೈ ಪರ ಟಿ20ಗೆ ಪಾದಾರ್ಪಣೆ ಮಾಡಿದ್ದರು. ಅರ್ಜುನ್ ಐಪಿಎಲ್‌ನಲ್ಲಿ ಮುಂಬೈ ಇಂಡಿಯನ್ಸ್ (ಎಂಐ) ಪರವೂ ಆಡಿದ್ದಾರೆ.

ಗಿಲ್, ಗಾಯಕ್ವಾಡ್ ಆಡಲಿದ್ದಾರೆ

ಟೀಂ ಇಂಡಿಯಾ ಟೆಸ್ಟ್ ತಂಡದ ನಾಯಕ ಶುಭ್‌ಮನ್ ಗಿಲ್ ಮತ್ತು ಅನುಭವಿ ಬ್ಯಾಟ್ಸ್‌ಮನ್ ರುತುರಾಜ್ ಗಾಯಕ್ವಾಡ್ ದುಲೀಪ್ ಟ್ರೋಫಿಯಲ್ಲಿ ಆಡಲಿದ್ದಾರೆ. ಈ ಟೂರ್ನಮೆಂಟ್‌ನಲ್ಲಿ ಶಾರ್ದೂಲ್ ಠಾಕೂರ್ ನಾಯಕತ್ವದಲ್ಲಿ ರುತುರಾಜ್ ಗಾಯಕ್ವಾಡ್ ಪಶ್ಚಿಮ ವಲಯ ತಂಡಕ್ಕಾಗಿ ಆಡಲಿದ್ದಾರೆ. ಇತ್ತ ಶುಭ್‌ಮನ್ ಗಿಲ್, ದುಲೀಪ್ ಟ್ರೋಫಿಯಲ್ಲಿ ಉತ್ತರ ವಲಯ ತಂಡವನ್ನು ಮುನ್ನಡೆಸಲಿದ್ದಾರೆ.

ಆಗಸ್ಟ್ 28 ರಿಂದ 31 ರವರೆಗೆ ನಡೆಯಲಿರುವ ಪಂದ್ಯಾವಳಿಯ ಮೊದಲ ಪಂದ್ಯದಲ್ಲಿ, ಉತ್ತರ ವಲಯವು ಇಶಾನ್ ಕಿಶನ್ ನಾಯಕತ್ವದ ಪೂರ್ವ ವಲಯವನ್ನು ಎದುರಿಸಲಿದೆ. ಈಶಾನ್ಯ ವಲಯವು ಧ್ರುವ್ ಜುರೆಲ್ ನೇತೃತ್ವದ ಮಧ್ಯ ವಲಯವನ್ನು ಎದುರಿಸಲಿದೆ. ದುಲೀಪ್ ಟ್ರೋಫಿಯ ಫೈನಲ್ ಸೆಪ್ಟೆಂಬರ್ 11 ರಿಂದ 15 ರವರೆಗೆ ನಡೆಯಲಿದೆ. ಎಲ್ಲಾ ಪಂದ್ಯಗಳು ಬಿಸಿಸಿಐ ಸೆಂಟರ್ ಆಫ್ ಎಕ್ಸಲೆನ್ಸ್‌ನಲ್ಲಿ ನಡೆಯಲಿವೆ.



Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966